ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 21 ಗುರುವಾರ 2024

ಸಂಪುಟ: 45 | ಸಂಚಿಕೆ: 214 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

ವಕ್ಫ್ ವಿರುದ್ಧ ರಾಜ್ಯಾದ್ಯಂತ ನಾಳೆ ಬಿಜೆಪಿ ಪ್ರತಿಭಟನೆ

ಮೈಸೂರು, ಚಾಮರಾಜನಗರದ 618 ಎಕರೆ ವಕ್ಫ್ ಆಸ್ತಿಯೆಂದು ಘೋಷಣೆ; ಮಾಜಿ ಸಂಸದ ಪ್ರತಾಪ್ ಸಿಂಹ ಆರೋಪ



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಪತ್ರಿಕಾ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೈಸೂರು, ನ.20(ಬಿಎಲ್‌ಯು)– ರೈತರ ಹಾಗೂ ಸರ್ಕಾರಿ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಿರುವುದನ್ನು ವಿರೋಧಿಸಿ ನವೆಂಬರ್ 22ರಂದು ಮೈಸೂರು, ಚಾಮರಾಜನಗರ, ಕೊಡಗು ಸೇರಿದಂತೆ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ತಿಳಿಸಿದರು.

ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಕ್ಫ್ ವಿರುದ್ಧದ ಹೋರಾಟದಲ್ಲಿ ನನಗೆ ಯಾವುದೇ ಬಣವಿಲ್ಲ. ಬಿಜೆಪಿ ಕಾರ್ಯಕರ್ತನಾಗಿ ಹೋರಾಟ ಮಾಡುತ್ತಿದ್ದೇನೆ. ಅಧಿಕಾರ ಇದ್ದಾಗ ಹಲವು ಹೋರಾಟ ಮಾಡಿದ್ದು, ಅದನ್ನು ಈಗಲೂ ಮುಂದುವರೆಸುತ್ತಿದ್ದೇನೆ ಎಂದರು.

ಈ ಮೊದಲು ಮೈಸೂರು ಹಾಗೂ ಚಾಮರಾಜನಗರ ಒಂದೇ ಜಿಲ್ಲೆಯಾಗಿತ್ತು. ಆ ಸಂದರ್ಭದಲ್ಲಿ 1965, ನವೆಂಬರ್ 4ರಂದು ಮೈಸೂರು ಮತ್ತು ಚಾಮರಾಜನಗರದ 618.57 ಎಕರೆ ಭೂಮಿಯನ್ನು ವಕ್ಫ್ ಆಸ್ತಿಯೆಂದು ನೋಟಿಫಿಕೇಷನ್ ಹೊರಡಿಸಲಾಯಿತು. ಹೀಗೆ ನೋಟಿಫಿಕೇಷನ್ ಹೊರಡಿಸಲು ವಕ್ಫ್‌ಗೆ ಸಂವಿಧಾನಾತ್ಮಕ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಕ್ಕೆ ಬರುತ್ತಿದ್ದಂತೆ ಮೈಸೂರಿನ 443.37 ಎಕರೆ ಹಾಗೂ ಚಾಮರಾಜನಗರದ 175.2 ಎಕರೆ ಭೂಮಿಯನ್ನು ವಕ್ಫ್ ಆಸ್ತಿ ಎಂದು ಪಹಣಿಯಲ್ಲಿ ನಮೂದಿಸಲಾಗಿದೆ. ತುಂಡು ಭೂಮಿ ಹಾಗೂ ಸರ್ಕಾರಿ ಭೂಮಿಯನ್ನು ಯಾರಿಗೂ ನೀಡಲು ಸಾಧ್ಯವಿಲ್ಲ. ಹೀಗಿರುವಾಗ ವಕ್ಫ್ ಆಸ್ತಿ ಎಂದು ಹೇಗೆ ಬದಲಾಯಿಸಲಾಗಿದೆ ಎಂದು ಪ್ರತಾಪ್ ಸಿಂಹ ಮರು ಪ್ರಶ್ನಿಸಿದರು.

ವಕ್ಫ್ ತಿದ್ದುಪಡಿಯಾದ ಅರ್ಧ ಶತಮಾನದ ನಂತರ ಈಗ ಏಕೆ ವಕ್ಫ್ ಆಸ್ತಿ ಎಂದು ಬದಲಾಯಿಸಲಾಗಿದೆ ಎಂದು ಪ್ರಶ್ನಿಸಿದ ಪ್ರತಾಪ್ ಸಿಂಹ, ಸಿದ್ದರಾಮಯ್ಯ ನಮ್ಮವರೇ ಎಂದು ಈಗ ಮುಸ್ಲಿಂ ಸಮುದಾಯ ಇಂತಹ ಬೆಳವಣಿಗೆಗೆ ಕೈ ಹಾಕಿದೆ. ಸಿದ್ದರಾಮಯ್ಯ ಆಡಳಿತಕ್ಕೆ ಬಂದಾಗಲೆಲ್ಲಾ ಇಂತಹ ಬದಲಾವಣೆ ಆಗುವುದು ಆಶ್ಚರ್ಯ ಎನಿಸುತ್ತಿಲ್ಲ ಎಂದರು.

ಮುಸ್ಲಿಂರ ವಿರುದ್ಧ ಹಲವೆಡೆ ದಾಖಲಾಗಿದ್ದ ಪ್ರಕರಣವನ್ನು ಸಿದ್ದರಾಮಯ್ಯ ಸರ್ಕಾರ ವಾಪಾಸು ಪಡೆದಿದೆ. ಹುಬ್ಬಳ್ಳಿಯಲ್ಲಿ ಪೊಲೀಸರ ಮೇಲೆ ಮುಸ್ಲಿಂರು ಹಲ್ಲೆ ನಡೆಸಿದಾಗ ಕ್ರಮ ಕೈಗೊಳ್ಳುವ ಬದಲು ಅವರ ಮೇಲಿದ್ದ ಕೇಸ್ ಹಿಂತೆಗೆದುಕೊಳ್ಳಲಾಗಿದೆ. ಟಿಪ್ಪು ಜಯಂತಿಗೆ ಅವಕಾಶ ನೀಡಿ ಅಶಾಂತಿ ಮೂಡಿಸಿದ್ದಾರೆ. ಇಂತಹ ಬೆಳವಣಿಗೆಗಳಿಂದ ಹಿಂದೂಗಳು ಪ್ರಾಣ ಕಳೆದುಕೊಂಡಿದ್ದಾರೆ ಎಂದು ಪ್ರತಾಪ್ ಸಿಂಹ ಆರೋಪಿಸಿದರು.

ಮೈಸೂರಿನ ಹರವೆ ಗ್ರಾಮದಲ್ಲಿ ಕೇವಲ 3 ಮುಸ್ಲಿಂ ಕುಟುಂಬಗಳಿದ್ದು, ಇವರಿಗೆ ಮೀಸಲಾಗಿ ಮೂರು ಎಕರೆ ಸರ್ಕಾರಿ ಭೂಮಿಯನ್ನು ಖಬರ್‌ಸ್ಥಾನ್ ಎಂದು ಪಹಣಿಯಲ್ಲಿ ನಮೂದಿಸಿದ್ದಾರೆ. ಹುಣಸೂರಿನ ಕಟ್ಟೆ ಮಳಲವಾಡಿಯಲ್ಲಿದ್ದ ಗಣೇಶ ದೇವಸ್ಥಾನವನ್ನು ವಕ್ಫ್ ಆಸ್ತಿ ಎಂದು ಘೋಷಿಸಿದ್ದಾರೆ. ಹೀಗೆ ಎಲ್ಲೆಲ್ಲಿ ಸರ್ಕಾರಿ ಭೂಮಿ ಇದೆಯೊ ಅಲ್ಲೆಲ್ಲ ವಕ್ಫ್ ಆಸ್ತಿ ಎಂದು ನಮೂದಿಸಿದ್ದಾರೆ ಎಂದು ಆಪಾದಿಸಿದರು.

ಇದರಿಂದ ಯಾವಾಗ ನಮ್ಮ ಭೂಮಿಯಲ್ಲಿ ವಕ್ಫ್ ಆಸ್ತಿಯಾಗಿ ನಮೂದಾಗುತ್ತದೆಯೊ ಎಂಬ ಆತಂಕದಲ್ಲಿ ರೈತರಿದ್ದಾರೆ. ಆದರೆ ಈಗ ಜನರು ರೋಸಿ ಹೋಗಿದ್ದಾರೆ. ಇವರಿಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಎಚ್ಚರಿಕೆ ನೀಡಿದರು.

ಈಗ ವಕ್ಫ್ ತಿದ್ದುಪಡಿ ಮಾಡಿ ರೈತರ ಹಾಗೂ ಸರ್ಕಾರಿ ಭೂಮಿ ಕಬಳಿಸಲು ಹುನ್ನಾರ ನಡೆಸಿದ್ದಾರೆ. ಆದರೆ ಇದಕ್ಕೆ ನಾವು ಅವಕಾಶ ನೀಡುವುದಿಲ್ಲ. ಯಾವುದೇ ಕಾರಣಕ್ಕೂ ರೈತರು ಹಾಗೂ ಸರ್ಕಾರಿ ಭೂಮಿ ವಕ್ಫ್ ಪಾಲಾಗುವುದಕ್ಕೆ ಬಿಡುವುದಿಲ್ಲ. ಈ ಹಿನ್ನೆಲೆಯಲ್ಲಿ ನ.22ರಂದು ಮೈಸೂರು, ಚಾಮರಾಜನಗರ, ಕೊಡಗು ಸೇರಿದಂತೆ ರಾಜ್ಯಾದ್ಯಂತ ಬಿಜೆಪಿ ಹೋರಾಟ ನಡೆಸಲಿದೆ ಎಂದು ಎಚ್ಚರಿಸಿದರು. ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ವೈ.ವಿ.ರವಿಶಂಕರ್ ಹಾಗೂ ಯೋಗಾನಂದ ಉಪಸ್ಥಿತರಿದ್ದರು.

ದೆಹಲಿ ರೈತರ ಹೋರಾಟ ಬೆಂಬಲಿಸಿ ನ.26ಕ್ಕೆ ರಾಜ್ಯಾದ್ಯಂತ ಡಿಸಿ ಕಚೇರಿ ಮುಂದೆ ಪ್ರತಿಭಟನೆ



ಮೈಸೂರಿನ ಲೋಕೋಪಯೋಗಿ ಇಲಾಖೆಯ ಅತಿಥಿ ಗೃಹದಲ್ಲಿ ನಡೆದ ರೈತ ಮುಖಂಡರ ಸಭೆಯಲ್ಲಿ ಸಂಯುಕ್ತ ಕಿಸಾನ್ ಮೋರ್ಚಾ ದಕ್ಷಿಣ ಭಾರತ ಸಂಚಾಲಕ ಕುರುಬೂರು ಶಾಂತಕುಮಾರ್ ಮಾತನಾಡಿದರು.

ಮೈಸೂರು,ನ.20(ಎಂಟಿವೈ)– ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಗೊಳಿಸುವಲ್ಲಿ ಹಿಂದೇಟು ಹಾಕುತ್ತಿರುವುದರೊಂದಿಗೆ ರೈತರ ಸಮಸ್ಯೆ ಪರಿಹರಿಸಲು ಕೇಂದ್ರ ಸರ್ಕಾರ ನಿರ್ಲಕ್ಷಿಸುತ್ತಿರುವುದನ್ನು ಖಂಡಿಸಿ ದೆಹಲಿಯಲ್ಲಿ ರೈತ ಸಂಘಟನೆಗಳು ನಡೆಸುತ್ತಿರುವ ಹೋರಾಟ ಬೆಂಬಲಿಸಿ ನ.26ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಧರಣಿ ನಡೆಸಲು ಉದ್ದೇಶಿಸಲಾಗಿದೆ ಎಂದು ಸಂಯುಕ್ತ ಕಿಸಾನ್ ಮೋರ್ಚಾ ದಕ್ಷಿಣ ಭಾರತ ಸಂಚಾಲಕ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.

ಮೈಸೂರಿನ ಲೋಕೋಪಯೋಗಿ ಇಲಾಖೆಯ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯೇತರ ಸಂಘಟನೆಯಾದ ಸಂಯುಕ್ತ ಕಿಸಾನ್ ಮೋರ್ಚಾ ಸಂಘಟನೆಯು, ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಗೊಳಿಸುವಂತೆ ಒತ್ತಾಯಿಸಿ ಫೆ.13 ರಿಂದ ದೆಹಲಿಯ ಗಡಿಭಾಗದಲ್ಲಿ ಪ್ರತಿಭಟನೆ ನಡೆಸುತ್ತಾ ಬಂದಿದೆ. ಆದರೂ ಕೇಂದ್ರ ಸರ್ಕಾರ ರೈತರನ್ನು ಹಾಗೂ ರೈತರ ಹೋರಾಟವನ್ನು ನಿರ್ಲಕ್ಷಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ರೈತ ವಿರೋಧಿ ನೀತಿ ಖಂಡಿಸಿ ರಾಷ್ಟ್ರೀಯ ರೈತ ಮುಖಂಡ ಜಗಜಿತ್ ಸಿಂಗ್ ಧಲೆವಾಲಾ ಅವರು ರೈತರಿಗಾಗಿ ನನ್ನ ಜೀವ ಕೊಡಲು ಸಿದ್ಧ ಎಂಬ ಘೋಷಣೆಯೊಂದಿಗೆ ನ.26ರಿಂದ ದೆಹಲಿಯಲ್ಲಿ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸಲು ನಿರ್ಧರಿಸಿದ್ದಾರೆ. ಈ ಹೋರಾಟಕ್ಕೆ ದೇಶದಾದ್ಯಂತ ರೈತ ಸಂಘಟನೆಗಳು ಬೆಂಬಲ ಘೋಷಿಸಿವೆ. ಕರ್ನಾಟಕದಲ್ಲಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿ ಕಚೇರಿ ಮುಂದೆ ನ.26ರಂದು ಧರಣಿ ನಡೆಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ರೈತರು ಎದುರಿಸುತ್ತಿರುವ ಸಮಸ್ಯೆಗಳ ಈಡೇರಿಕೆಗಾಗಿ ಒತ್ತಾಯಿಸಿ ಅಂತಿಮ ಹಂತದಲ್ಲಿ 'ಮಾಡು ಇಲ್ಲವೇ ಮಡಿ' ಹೋರಾಟ ನಡೆಸಲು ರೈತರು ನಿರ್ಧರಿಸಿದ್ದಾರೆ. ಕೇಂದ್ರ ಸರ್ಕಾರ ಎಚ್ಚೆತ್ತುಕೊಳ್ಳದಿದ್ದರೆ ರಾಜ್ಯದಲ್ಲಿಯೂ ದೆಹಲಿ ಹೋರಾಟ ಬೆಂಬಲಿಸಿ ಸಹಸ್ರಾರು ಸಂಖ್ಯೆಯ ರೈತರು ಉಪವಾಸ ಸತ್ಯಾಗ್ರಹ ನಡೆಸಬೇಕಾಗುತ್ತದೆ. ದೆಹಲಿ ರೈತ ಮುಖಂಡರ ಪ್ರಾಣಕ್ಕೆ ಅಪಾಯ ಆದರೆ ಕೇಂದ್ರ ಸರ್ಕಾರವೇ ಹೊಣೆ ಹೊರಬೇಕಾಗುತ್ತದೆ ಎಂದು ಎಚ್ಚರಿಸಿದರು.

ಬಾಗಲಕೋಟೆ, ಬೆಳಗಾವಿ, ಗುಲ್ಬರ್ಗ ಇನ್ನಿತರ ಜಿಲ್ಲೆಗಳಲ್ಲಿ ಕಬ್ಬಿಗೆ ಎಫ್‌ಆರ್‌ಪಿ ಮೇಲೆ ಹೆಚ್ಚುವರಿ ದರ ನಿಗದಿ ಮಾಡಬೇಕೆಂದು ರೈತರು ಹೋರಾಟ ನಡೆಸುತ್ತಿದ್ದಾರೆ. ಬೆಳಗಾವಿ ಅಧಿವೇಶನಕ್ಕೂ ಮೊದಲೇ ಮುಖ್ಯಮಂತ್ರಿಗಳು ರೈತ ಮುಖಂಡರ ಸಭೆ ಕರೆದು ರಾಜ್ಯಾದ್ಯಂತ ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಕಬ್ಬು ಬೆಳೆಗಾರರ ಸಂಘದ ಮುಖಂಡರಾದ ಅತ್ತಳ್ಳಿ ದೇವರಾಜ್, ಎಂ.ಬಿ.ಚೇತನ್, ವಿಶ್ರಾಂತ ಕುಲಪತಿ ಎಂ.ಬಿ.ದಂಡಿನ್, ನಿವೃತ್ತ ಪ್ರಾಂಶುಪಾಲ ಮಹಾದೇವಯ್ಯ, ಡಾ.ವಸಂತ್‌ಕುಮಾರ್, ಸಾಹಿತಿ ಬಿಸ್ಲಳ್ಳಿ ವೀರಭದ್ರಪ್ಪ, ಬರಡನಪುರ ನಾಗರಾಜ್, ಕಿರಗಸೂರ ಶಂಕರ, ಮೂಕಹಳ್ಳಿ ಮಹದೇವಸ್ವಾಮಿ, ನೀಲಕಂಠಪ್ಪ, ವಿಜಯೇಂದ್ರ, ಪೈಲ್ವಾನ್ ವೆಂಕಟೇಶ್ ಉಪಸ್ಥಿತರಿದ್ದರು.

ವೃತ್ತಿ ತೆರಿಗೆಯಲ್ಲಿ ವಿನಾಯಿತಿ ನೀಡಲು ಆಗ್ರಹಿಸಿ ಗಾಂಧಿ ಪುತ್ಥಳಿ ಮುಂದೆ ವಕೀಲರ ಪ್ರತಿಭಟನೆ



ಮೈಸೂರಿನ ನ್ಯಾಯಾಲಯದ ಮುಂಭಾಗ ವಕೀಲರಿಗೆ ವೃತ್ತಿ ತೆರಿಗೆಯಲ್ಲಿ ವಿನಾಯಿತಿ ನೀಡಬೇಕೆಂದು ಒತ್ತಾಯಿಸಿ ವಕೀಲರ ಸಂಘದಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ನ.20(ಜಿಎ)–ವಕೀಲರಿಗೆ ವೃತ್ತಿ ತೆರಿಗೆಯಲ್ಲಿ ವಿನಾಯಿತಿ ನೀಡಬೇಕೆಂದು ಒತ್ತಾಯಿಸಿ ವಕೀಲರ ಸಂಘದಿಂದ ನ್ಯಾಯಾಲಯ ಮುಂಭಾಗದ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆ ನಡೆಸಲಾಯಿತು. ನ್ಯಾಯಾಲಯದ ಕಲಾಪ ಬಹಿಷ್ಕರಿಸಿ ಗಾಂಧಿ ಪುತ್ಥಳಿ ಬಳಿ ಸಮಾವೇಶಗೊಂಡ ವಕೀಲರು ಘೋಷಣೆಗಳನ್ನು ಕೂಗಿ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿದರು. 10 ವರ್ಷ ಪ್ರಾಕ್ಟೀಸ್ ಮಾಡಿದ ವಕೀಲರಿಗೆ ಮಾತ್ರ ವರ್ಷಕ್ಕೆ 2500 ರೂ. ವೃತ್ತಿ ತೆರಿಗೆ ಕಟ್ಟಲು ನೋಟಿಸ್ ಬರುತ್ತಿತ್ತು. ಆದರೆ ಈಗ 2 ವರ್ಷ ಪ್ರಾಕ್ಟೀಸ್ ಮಾಡಿದ ವಕೀಲರಿಗೂ ನೋಟಿಸ್ ಬರುತ್ತಿದೆ. ಸಾರ್ವಜನಿಕರಿಗೆ ನ್ಯಾಯ ಕೊಡಿಸಲು ವಕೀಲರು ಶ್ರಮಿಸುತ್ತಾರೆ. ಆದರೆ, ಅವರಿಗೇ ಅನ್ಯಾಯವಾಗುವುದು ಸರಿಯಲ್ಲ. ಹೀಗಾಗಿ ವಕೀಲರಿಗೆ ವೃತ್ತಿ ತೆರಿಗೆಯಲ್ಲಿ ವಿನಾಯಿತಿ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಅಧ್ಯಕ್ಷ ಲೋಕೇಶ್ ಎಸ್, ಕಾರ್ಯದರ್ಶಿ ಎ.ಜಿ.ಸುಧೀರ್ ಸೇರಿದಂತೆ ನೂರಾರು ವಕೀಲರು ಪಾಲ್ಗೊಂಡಿದ್ದರು.

ಇಂದು ಮೈಸೂರಿಗೆ ಸಿಎಂ ಸಿದ್ದರಾಮಯ್ಯ



ಮೈಸೂರು, ನ.20 (ಆರ್‌ಕೆ)– ಮುಖ್ಯಮಂತ್ರಿ ಸಿದ್ದರಾಮಯ್ಯ, ಎರಡು ದಿನಗಳ ಪ್ರವಾಸಕ್ಕಾಗಿ ನಾಳೆ (ನ.21) ಮೈಸೂರಿಗೆ ಆಗಮಿಸುವರು.

ಗುರುವಾರ ಸಂಜೆ 4 ಗಂಟೆಗೆ ನವದೆಹಲಿಯ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದಲ್ಲಿ ಪ್ರಯಾಣ ಬೆಳೆಸುವ ಅವರು, ಸಂಜೆ 6.30 ಗಂಟೆ ವೇಳೆಗೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣ ತಲುಪಲಿದ್ದು, ಅಂದು ರಾತ್ರಿ ಇಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ. ನಂತರ ಮರುದಿನ (ನ.22) ಬೆಳಗ್ಗೆ 11 ಗಂಟೆಗೆ ಬೆಂಗಳೂರು–ಮೈಸೂರು ರಸ್ತೆಯಲ್ಲಿ, ಸುಭಾಷ್‌ನಗರದಲ್ಲಿನ ಸಿದ್ಧಾರ್ಥ ಶಿಕ್ಷಣ ಸಂಸ್ಥೆ ವತಿಯಿಂದ ನಿರ್ಮಿಸಿರುವ ಕ್ರೆಸ್ಟ್ ಅಕಾಡೆಮಿ ನೂತನ ಶಾಲಾ ಕಟ್ಟಡವನ್ನು ಉದ್ಘಾಟಿಸುವರು. ಈ ಸಂದರ್ಭ ಸಂಸ್ಥೆಯ ಮುಖ್ಯಸ್ಥರಾದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಹ ಉಪಸ್ಥಿತರಿರುವರು. ಮಧ್ಯಾಹ್ನ 12.15 ಗಂಟೆಗೆ ಟಿ.ನರಸೀಪುರ ರಸ್ತೆಯಲ್ಲಿರುವ ವರುಣ ಕೆರೆಗೆ ಭೇಟಿ ನೀಡಲಿರುವ ಸಿದ್ದರಾಮಯ್ಯನವರು, ನಂತರ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರಕ್ಕೆ ಭೇಟಿ ನೀಡಲಿದ್ದಾರೆ. ಸಂಜೆ 6 ಗಂಟೆಗೆ ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಕನಕ ಭವನದಲ್ಲಿ ಕಾಗಿನೆಲೆ ಗುರುಪೀಠದ ವತಿಯಿಂದ ಆಯೋಜಿಸಿರುವ ಸಂತ ಕನಕದಾಸರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರತಿಭಾ ಪುರಸ್ಕಾರ ಪ್ರದಾನ ಮಾಡುವರು. ಅದೇ ದಿನ ರಾತ್ರಿ 8 ಗಂಟೆಗೆ ರಸ್ತೆ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಮುಖ್ಯಮಂತ್ರಿ ಅವರ ವಿಶೇಷ ಕರ್ತವ್ಯಾಧಿಕಾರಿ ರಂಜಿತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ.27ರಿಂದ ದೆಹಲಿಯಲ್ಲಿ ಎಐಡಿಎಸ್‌ಒ 10ನೇ ಅಖಿಲ ಭಾರತ ಸಮ್ಮೇಳನ

ಮೈಸೂರು, ನ.20(ಜಿಎ)–ವಿದ್ಯಾರ್ಥಿ ಹೋರಾಟಗಳನ್ನು ಮತ್ತಷ್ಟು ಬಲಗೊಳಿಸುವ ಉದ್ದೇಶದಿಂದ ಎಐಡಿಎಸ್‌ಒ 10ನೇ ಅಖಿಲ ಭಾರತ ಸಮ್ಮೇಳನ ದೇಶದ ರಾಜಧಾನಿ ದೆಹಲಿಯಲ್ಲಿ ನ.27, 28, 29 ರಂದು ನಡೆಯಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಎಐಡಿಎಸ್‌ಒನ ರಾಜ್ಯ ಖಜಾಂಚಿ ಬಿ.ಜಿ. ಸುಭಾಷ್ ಈ ವಿಷಯ ತಿಳಿಸಿ, ಶಾಲಾ ಕಾಲೇಜುಗಳಲ್ಲಿ ಎಲ್ಲಾ ಹಂತದ ಶುಲ್ಕ ಏರಿಕೆ ತಡೆಗಟ್ಟಬೇಕು. ಸಾರ್ವಜನಿಕ ಶಿಕ್ಷಣವನ್ನು ಬಲಪಡಿಸಿ, ಮುಚ್ಚಿದ ಶಾಲೆಗಳನ್ನು ಪುನರಾರಂಭಿಸಬೇಕು. ಖಾಲಿ ಇರುವ ಎಲ್ಲಾ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಕೂಡಲೇ ಖಾಯಂ ಆಧಾರದ ಮೇಲೆ ಭರ್ತಿ ಮಾಡಬೇಕು. ಎನ್‌ಟಿಎ ರದ್ದುಗೊಳಿಸಿ ಮತ್ತು ಎಲ್ಲಾ ಪರೀಕ್ಷಾ ಅಕ್ರಮಗಳ ಕುರಿತು ಪರಿಣಾಮಕಾರಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗುವುದು ಎಂದರು.

ನಾಲ್ಕು ವರ್ಷದ ಪದವಿಯನ್ನು ತಿರಸ್ಕರಿಸಿ, ಶಿಕ್ಷಣದ ವ್ಯಾಪಾರೀಕರಣ, ಖಾಸಗೀಕರಣ, ಕೇಂದ್ರೀಕರಣ, ವೃತ್ತಿಪರೀಕರಣದ ನೀಲಿನಕ್ಷೆಯಾಗಿರುವ ಎನ್‌ಇಪಿ–2020ನ್ನು ರದ್ದುಗೊಳಿಸಿ ಮತ್ತು ಶಿಕ್ಷಣದಲ್ಲಿ ಕೋಮುವಾದೀಕರಣವನ್ನು ತಡೆಗಟ್ಟಬೇಕು. ಎಲ್ಲಾ ಸಂಶೋಧನಾ ವಿದ್ಯಾರ್ಥಿಗಳಿಗೆ ತಾರತಮ್ಯವಿಲ್ಲದೆ ಗೌರವಾನ್ವಿತ ಮತ್ತು ನಿಯಮಿತ ಫೆಲೋಶಿಪ್ ಅನ್ನು ನೀಡಲು ಕ್ರಮ ಕೈಗೊಳ್ಳಬೇಕು ಎಂಬಿವೇ ಮೊದಲಾದ ಬೇಡಿಕೆ ಈಡೇರಿಕೆಗಾಗಿ ಸಮ್ಮೇಳನದಲ್ಲಿ ಆಗ್ರಹಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾರ್ಯದರ್ಶಿ ನಿತಿನ್, ಸ್ವಾತಿ, ಹೇಮಲತಾ ಉಪಸ್ಥಿತರಿದ್ದರು.

ನಾಳೆ ಕನಕ ಭವನದಲ್ಲಿ ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ

ಮೈಸೂರು, ನ.20(ಜಿಎ)–ಮೈಸೂರು ಜಿಲ್ಲಾ ಕನಕ ಜಯಂತ್ಯುತ್ಸವ ಆಚರಣಾ ಸಮಿತಿ ವತಿಯಿಂದ ನ.22ರಂದು ಸಂಜೆ 6 ಗಂಟೆಗೆ ನಗರದ ಸಿದ್ಧಾರ್ಥ ಬಡಾವಣೆಯಲ್ಲಿನ ಕನಕ ಭವನದಲ್ಲಿ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಮಾಜಿ ಶಾಸಕ, ಸಮಿತಿ ಅಧ್ಯಕ್ಷರೂ ಆದ ಎಂ.ಕೆ.ಸೋಮಶೇಖರ್ ತಿಳಿಸಿದರು.



ಸೋಮಶೇಖರ್

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪುರಸ್ಕಾರ ಹಾಗೂ ಸನ್ಮಾನ ನೆರವೇರಿಸಿಕೊಡಲಿದ್ದಾರೆ. ಶಿವಾನಂದಪುರಿ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸುವರು. ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕರಾದ ಡಾ.ಯತೀಂದ್ರ, ಜಿ.ಟಿ.ದೇವೇಗೌಡ, ಸಂಸದ ಸುನಿಲ್ ಬೋಸ್ ಇನ್ನಿತರರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಕಳೆದ ವರ್ಷ ಪ್ರತಿಭಾ ಪುರಸ್ಕಾರ ನೀಡಲು ಸಾಧ್ಯವಾಗಿರಲಿಲ್ಲ. ಹೀಗಾಗಿ ಆ ವರ್ಷದ ವಿದ್ಯಾರ್ಥಿಗಳು ಹಾಗೂ ಕಳೆದ ಸಾಲಿನ ವಿದ್ಯಾರ್ಥಿಗಳನ್ನು ಈ ಬಾರಿ ಪುರಸ್ಕರಿಸಲಾಗುತ್ತಿದೆ. ಹೀಗಾಗಿ ಅರ್ಜಿ ಸಲ್ಲಿಸಿರುವವರೆಲ್ಲರೂ ಸಂಜೆ 5 ಗಂಟೆಗೆ ಆಗಮಿಸುವರು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಮಿತಿಯ ಮಾದೇಗೌಡ, ಶಿವಣ್ಣ, ಶಂಕರ್ ಮತ್ತಿತರರು ಉಪಸ್ಥಿತರಿದ್ದರು.

ಶೈಕ್ಷಣಿಕ ಸಂಸ್ಥೆಗಳಲ್ಲಿ ಕನ್ನಡ ಕ್ಷೀಣಿಸುತ್ತಿರುವುದು ಆತಂಕಕಾರಿ

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕವಿ ಡಾ.ಸಂತೋಷ್ ಚೊಕ್ಕಾಡಿ ವಿಷಾದ



ಮರಿಮಲ್ಲಪ್ಪ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಕವಿ ಡಾ.ಸಂತೋಷ ಚೊಕ್ಕಾಡಿ ಉದ್ಘಾಟಿಸಿದರು.

ಮೈಸೂರು,ನ.20(ಎಂಟಿವೈ)– ಇತ್ತೀಚಿನ ದಿನಗಳಲ್ಲಿ ಮಕ್ಕಳಿಗೆ ಯಾವ ಮಾಧ್ಯಮದಲ್ಲಿ ಶಿಕ್ಷಣ ಕೊಡಿಸಬೇಕು ಎನ್ನುವುದು ದೊಡ್ಡ ಮಟ್ಟದ ಚರ್ಚೆಗೆ ಗ್ರಾಸವಾಗಿದ್ದು, ಕನ್ನಡ ಭಾಷೆಯನ್ನು ಹೇಗೆ ಗ್ರಹಿಸಬೇಕು ಎಂಬ ಸವಾಲು ನಮ್ಮ ಮುಂದೆ ಇದೆ ಎಂದು ಕವಿ, ಹೆಚ್.ಡಿ.ಕೋಟೆ ತಾಲೂಕಿನ ಬಿ.ಮಟಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಾ.ಸಂತೋಷ ಚೊಕ್ಕಾಡಿ ವಿಷಾದಿಸಿದರು

ಮೈಸೂರಿನ ಮರಿಮಲ್ಲಪ್ಪ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಕನ್ನಡ ಭಾಷೆ ಕ್ಷೀಣಿಸುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಭಾಷೆ ಎಲ್ಲರಿಗೂ ಸಂಬಂಧಿಸಿದ್ದು, ಭಾಷೆ ಎಂದರೆ ಬದುಕು ಮತ್ತು ವ್ಯಕ್ತಿತ್ವ. ಯಾವುದೇ ಭಾಷೆ ಸತ್ತರೆ ಆ ಮೂಲಕ ಜನಾಂಗವೂ ಸಾಯುತ್ತದೆ. ಸಂಸ್ಕೃತಿಯೂ ಅಳಿಯುತ್ತದೆ. ಕನ್ನಡಿಗರು ಯಾವುದೇ ಜಾತಿ, ಧರ್ಮದವರಾದರೂ ಬೆಸೆಯೋದು ಭಾಷೆಯೇ ಆಗಿದೆ ಅದು ಕನ್ನಡಿಗರ ಪ್ರಜ್ಞೆಹೌದು ಎಂದರು.

ಜನಸಾಮಾನ್ಯರು ಕನ್ನಡವನ್ನು ಉಸಿರಾಡುತ್ತಿದ್ದಾರೆ. ಅವರ ಒಟ್ಟು ನಡವಳಿಕೆ ಮತ್ತು ದಿನಚರಿಯಲ್ಲಿ ಭಾಷೆ ಇದೆ. ಬಸ್ ಕಂಡಕ್ಟರ್, ಆಟೋ ಚಾಲಕರು ರಾಜ್ಯೋತ್ಸವವನ್ನು ಎಷ್ಟು ಸಂಭ್ರಮದಿಂದ ಆಚರಿಸುತ್ತಾರೆ. ಇದು ಕಲಿತವರಿಗೂ ಮಾದರಿಯಾಗಬೇಕು. ಭಾಷಾ ಪ್ರೇಮದಲ್ಲಿ ನೆರೆಯ ರಾಜ್ಯಗಳಾದ ತಮಿಳುನಾಡು, ಆಂಧ್ರ, ಕೇರಳ ರಾಜ್ಯಗಳು ನಮಗೆ ಮಾದರಿಯಾಗಬೇಕು. ತಮಿಳುನಾಡು ಮನರಂಜನೆ, ಮುದ್ರಣ, ಉದ್ಯೋಗ ಮತ್ತು ರಾಜಕೀಯ ಕ್ಷೇತ್ರದಲ್ಲಿ ಪರಿಣಾಮಕಾರಿಯಾಗಿ ಭಾಷೆಯನ್ನು ಅನುಷ್ಠಾನಗೊಳಿಸುತ್ತಿದೆ. ವಿಜ್ಞಾನ, ತಂತ್ರಜ್ಞಾನವನ್ನು ತಮಿಳಿನಲ್ಲಿ ಕಲಿಸಲಾಗುತ್ತಿದೆ ಎಂದು ಹೇಳಿದರು.

ಜಗತ್ತಿನಲ್ಲಿರುವ 6 ಸಾವಿರ ಭಾಷೆಗಳಲ್ಲಿ 3 ಸಾವಿರ ಭಾಷೆಗಳು ಅಳಿವಿನಂಚಿನಲ್ಲಿವೆ. ಶೇ. 50 ಭಾಷೆಗಳನ್ನು ಮಾತಾಡುವ ಜನರು 10 ಸಾವಿರ ಜನಸಂಖ್ಯೆಗಿಂತ ಕಡಿಮೆ ಇದ್ದಾರೆ. ಕನ್ನಡದ ಉಳಿವಿಗೆ ನಾವೇನು ಮಾಡಬೇಕಾಗಿದೆ ಎಂದು ಪ್ರಶ್ನಿಸಿಕೊಳ್ಳಬೇಕು. ವಾಸ್ತವಿಕ ನೆಲೆಯಲ್ಲಿ ಕನ್ನಡ ಪರಿಸ್ಥಿತಿಯನ್ನು ಅರಿಯಬೇಕು. ಮತ್ತೆ ಭಾಷೆಯನ್ನು ಕಟ್ಟುವ ಪ್ರಯತ್ನವನ್ನು ಆರಂಭಿಸಬೇಕು ಎಂದರು.

ಬರಹಗಾರ್ತಿ, ಎಚ್‌ಎಎಲ್ ಹಿರಿಯ ತಾಂತ್ರಿಕಾಧಿಕಾರಿ ನೇಮಿಚಂದ್ರ ಅವರು ಪಠ್ಯಾಧಾರಿತ ಸ್ಫೂರ್ತಿ ನುಡಿಗಳನ್ನಾಡಿದರು. ದ್ವಿತೀಯ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದ ವಿದ್ಯಾರ್ಥಿ ಸರಸ್ವತಿಯನ್ನು ಅಭಿನಂದಿಸಲಾಯಿತು. ವಿದ್ಯಾಸಂಸ್ಥೆ ಗೌರವ ಕಾರ್ಯದರ್ಶಿ ಕೆ.ಎನ್.ಪಂಚಾಕ್ಷರಸ್ವಾಮಿ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಡಾ.ಅನಿಲ ಎಸ್.ಕೆ, ಶೈಕ್ಷಣಾಧಿಕಾರಿ ಮಂಗಳ ಮುದ್ದುಮಾದಪ್ಪ ಇದ್ದರು. ಕನ್ನಡ ಉಪನ್ಯಾಸಕ ಬಿ.ಪಿ.ಕಿರಣ್‌ಕುಮಾರ್ ಸ್ವಾಗತಿಸಿದರು. ವೀಣಾ ನಿರೂಪಿಸಿದರು. ವಿದ್ಯಾರ್ಥಿ ಅನಘಾ ಮತ್ತು ತಂಡದವರು ಪ್ರಾರ್ಥಿಸಿದರು.


ನಿಧನ

ಮಂಜುನಾಥ್



ಮೈಸೂರು, ನ.20–ಮೈಸೂರಿನ ಹೆಬ್ಬಾಳು ಬಸವೇಶ್ವರನಗರದ ನಿವಾಸಿ ಮಂಜುನಾಥ್ (56)ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಕುಂಬಾರಕೊಪ್ಪಲು ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

21.11.2024 ಗುರುವಾರ, ಮಳೆ ನಕ್ಷತ್ರ: ಅನೂರಾಧ, 19.11.2024 ರಿಂದ 01.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ,
ತಿಥಿ: ಷಷ್ಠಿ, ನಕ್ಷತ್ರ: ಪುಷ್ಯ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ಗಂಟೆಗೆ.
- **ನವ ಕರ್ನಾಟಕ ಪಬ್ಲಿಕೇಷನ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಪುಸ್ತಕ ಮಾರಾಟ, ಸ್ಥಳ: ಚಾಮರಾಜ ಜೋಡಿ ರಸ್ತೆ ರಾಮಸ್ವಾಮಿ ಸರ್ಕಲ್ ಬೆಳಗ್ಗೆ 9.30 ರಿಂದ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆಯ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ಗಂಟೆಯಿಂದ.
- **ಪ್ರೀತಿ ಕ್ಯಾನ್ಸರ್ ಸೆಂಟರ್:** ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ
- **ನವದೆಹಲಿಯ ಅಭಿವೃದ್ಧಿ ಆಯುಕ್ತರು (ಕೈಮಗ್ಗ) ಜವಳಿ ಸಚಿವಾಲಯದ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಬೆಂಗಳೂರು ಮತ್ತು ಕರ್ನಾಟಕ ರಾಜ್ಯ ಸಹಕಾರಿ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತ ಮತ್ತು ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್ :** ರಾಜ್ಯ ಕೈಮಗ್ಗ ವಸ್ತು ಪ್ರದರ್ಶನ ಮತ್ತು ಮಾರಾಟ – ಹಾತ್ ಕರ್ಗ್, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ರಿಂಗ್ ರಸ್ತೆ, ಬೆಳಗ್ಗೆ 10ರಿಂದ.
- **ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ :** ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರೊಂದಿಗೆ ಸಮಾಲೋಚನಾ ಸಭೆ, ಉಪಸ್ಥಿತರು : ಗ್ರಾಮಾಂತರ ಅಧ್ಯಕ್ಷ ಡಾ. ಬಿ.ಜೆ. ವಿಜಯಕುಮಾರ್, ನಗರಾಧ್ಯಕ್ಷ ಆರ್. ಮೂರ್ತಿ, ಸ್ಥಳ: ಕಾಂಗ್ರೆಸ್ ಭವನ, ಮಧ್ಯಾಹ್ನ 3ಕ್ಕೆ.
- **ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ) :** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಸಂಜೆ.
- **ಶ್ರೀ ರಾಮಕೃಷ್ಣ ಆಶ್ರಮ:** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.
- **ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರ, ಮೈಸೂರು :** ವಸುಂಧರೋತ್ಸವ–2024, ನೃತ್ಯ ಕಾರ್ಯಕ್ರಮ, ಸಂಜೆ 6 ರಿಂದ ಶ್ರೀ ಕೃಷ್ಣ ಮಾಧುರ್ಯಂ, ಡಾ. ವಸುಂಧರ ದೊರೆಸ್ವಾಮಿಯವರ ನೃತ್ಯ ಸಂಯೋಜನೆಯಲ್ಲಿ 40 ಶಿಷ್ಯರಿಂದ ನೃತ್ಯ ಪ್ರದರ್ಶನ, ಗೌರವ ಅತಿಥಿಗಳು : ಮುಕ್ತಕ ಸಾಹಿತ್ಯ ಅಕಾಡೆಮಿ ಟ್ರಸ್ಟ್ ಅಧ್ಯಕ್ಷ ಪೊ. ಎಸ್. ರಾಮಪ್ರಸಾದ್, ಸ್ಥಳ: ಗಾನಭಾರತೀ ರಮಾಗೋವಿಂದ ಕಲಾ ವೇದಿಕೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.
- **ಸದ್ವಿದ್ಯಾ ಸಂಯುಕ್ತ ಪದವಿಪೂರ್ವ ಕಾಲೇಜು :** ಬೆಳಗ್ಗೆ 8.30ಕ್ಕೆ ಸಮರ್ಥ ಸದ್ವಿದ್ಯಾ–2024, ಅಂತರ ಕಾಲೇಜು ಸಂಗೀತ, ಸಾಹಿತ್ಯ ಸ್ಪರ್ಧೆಗಳು, ಉದ್ಘಾಟನೆ : ಸದ್ವಿದ್ಯಾ ಶಿಕ್ಷಣ ಸಂಸ್ಥೆ ಗೌರವ ಕಾರ್ಯದರ್ಶಿ ಎಂ.ಡಿ. ಗೋಪಿನಾಥ್, ಅಧ್ಯಕ್ಷತೆ : ಸದ್ವಿದ್ಯಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಪ್ರೊ. ಎಂ.ಎಸ್.ಕೆ. ನರಹರಿಬಾಬು; ಮಧ್ಯಾಹ್ನ 3.30ಕ್ಕೆ ಅಂತರ ಕಾಲೇಜು ಸಂಗೀತ, ಸಾಹಿತ್ಯ ಸ್ಪರ್ಧೆಗಳ ಸಮಾರೋಪ ಮತ್ತು ಬಹುಮಾನ ವಿತರಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಕರ್ನಾಟಕ ಕಲಾಶ್ರೀ ಡಾ. ಶೀಲ ಶ್ರೀಧರ್, ಅಧ್ಯಕ್ಷತೆ : ಸದ್ವಿದ್ಯಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಪ್ರೊ. ಎಂ.ಎಸ್.ಕೆ. ನರಹರಿಬಾಬು; ಉಪಸ್ಥಿತರು : ಕಾರ್ಯದರ್ಶಿ ಎಂ.ಡಿ. ಗೋಪಿನಾಥ್, ಉಪಾಧ್ಯಕ್ಷ ಎಸ್. ಬಾಲಾಜಿ, ಸಹ ಕಾರ್ಯದರ್ಶಿ ಕೆ.ಎನ್. ಫಣೀಶ, ಸ್ಥಳ: ವಿವೇಕಾನಂದ ಸಭಾಂಗಣ, ಕಾಲೇಜು ಆವರಣ.
- **ರಂಗಯಾನ ಟ್ರಸ್ಟ್ ಮೈಸೂರು :** ಡಾ. ಸುಜಾತ ಅಕ್ಕಿ ಅವರ ಚಾಮಚೆಲುವೆ ನಾಟಕ ಪ್ರದರ್ಶನ, ನಿರ್ದೇಶನ : ವಿಕಾಸ್ ಚಂದ್ರ, ಸ್ಥಳ: ಕಿರುರಂಗ ಮಂದಿರ, ಕಲಾಮಂದಿರ ಆವರಣ, ಸಂಜೆ 6.30ಕ್ಕೆ.
- **ರಂಗಾಯಣ :** ರಂಗಾಯಣದ ಭಾರತೀಯ ರಂಗ ಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ 'ಅಗ್ನಿ ಮತ್ತು ಮಳೆ' ನಾಟಕ ಪ್ರದರ್ಶನ, ರಚನೆ : ಗಿರೀಶ್ ಕಾರ್ನಾಡ್, ನಿರ್ದೇಶನ : ಸಾಲಿಯಾನ ಉಮೇಶ್ ನಾರಾಯಣ, ಸಂಗೀತ : ದಿಗ್ವಿಜಯ ಹೆಗ್ಗೋಡು, ಸ್ಥಳ: ವನರಂಗ, ರಂಗಾಯಣ, ಸಂಜೆ 7ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸೀರೆಯ ಸೊಬಗು–ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ: ಜಯಶ್ರೀ ಹೆಗಡೆ, 6.40 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 6.50 ರೈತರಿಗೆ ಸಲಹೆ, 7.15 ಹಸಿರುಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಪದ್ಮಾಶಂಕರ್–ವಯೋಲಿನ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಭಾಗವಹಿಸುವವರು: ವನ್ಯಜೀವಿ ಬರಹಗಾರ ಹಾಗೂ ಛಾಯಾಗ್ರಾಹಕ ದಿನೇಶ್ ಬಸವಾಪಟ್ಟಣ, ಪ್ರಸ್ತುತಿ : ಜಿ.ಶಾಂತಕುಮಾರ್

ಮಧ್ಯಾಹ್ನ: 12.35 ದೇವರನಾಮ, 12.45 ಚಿತ್ರಗೀತೆಗಳು, 1.20 ಕೋಮು ಏಕತಾ ಸಪ್ತಾಹ, 2.40 ಚಿತ್ರಗೀತೆಗಳು, 4.00 ಜನಪದ ಸಂಗೀತ, 4.30 ವಿಜ್ಞಾನ ಭಾರತಿ : ವರ್ಣತಂತು ವ್ಯತ್ಯಯದ ಖಾಯಿಲೆಗಳು–ಈ ಬಗ್ಗೆ ಮಾತನಾಡುತ್ತಾರೆ : ಮೈಸೂರು ವಿಶ್ವವಿದ್ಯಾಲಯದ ಜೆನೆಟಿಕ್ಸ್ ಹಾಗೂ ಜಿನೋಮಿಕ್ಸ್ ವಿಭಾಗದ ಮುಖ್ಯಸ್ಥರು ಹಾಗೂ ಪ್ರೊಫೆಸರ್ ಸುತ್ತೂರು. ಎಸ್. ಮಾಲಿನಿ; ಜೀವಿಗಳಲ್ಲಿ ರಕ್ಷಣಾ ತಂತ್ರಗಳು ಈ ಕುರಿತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ನಂದಿನಿ. ಜಿ., 6.10 ಸೀರೆಯ ಸೊಬಗು–ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ : ಜಯಶ್ರೀ ಹೆಗಡೆ, 6.50 ಕೃಷಿರಂಗ–ಕಿಸಾನ್ ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ಸಾಂಪ್ರದಾಯಿಕ ಆಹಾರ ಹಾಗೂ ಮೌಲ್ಯವರ್ಧನ ತಾಂತ್ರಿಕತೆಗಳು. ಈ ಕುರಿತು ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾಲಯದ ವಿಜ್ಞಾನಿ ಡಾ. ಆರ್. ಚೇತನಾ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್.ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ 'ಹಲೋ ಯುವವಾಣಿ'–ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಕುರಿತ ಸಾಮಾನ್ಯ ಜ್ಞಾನ ರಸಪ್ರಶ್ನೆ ಕಾರ್ಯಕ್ರಮ. ನಡೆಸಿಕೊಡುತ್ತಾರೆ–ನಿವೇದಿತಾ. ಹೆಚ್, 9.30 ಕನ್ನಡ ಭಾರತಿ, 10.00 ನಾಟಕ 'ಭೀಮ ವಿಜಯ', ರಚನೆ–ಡಾ. ಡಿ. ಶೀಲಾಕುಮಾರಿ, ನಿರ್ದೇಶನ ಹಾಗೂ ನಿರ್ವಾಣ–ಪ್ರಭುಸ್ವಾಮಿ ಮಳಿಮಠ್, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ನವೆಂಬರ್ 21 ಗುರುವಾರ 2024

45

ಸಂಪುಟ: 45 | ಸಂಚಿಕೆ: 214 | ಪುಟಗಳು: 12

₹4


ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23 ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮಂಡ್ಯದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಹಬ್ಬ

ಸಮ್ಮೇಳನಾಧ್ಯಕ್ಷರಾಗಿ ಗೊ.ರು.ಚನ್ನಬಸಪ್ಪ ಅವಿರೋಧ ಆಯ್ಕೆ


● 94 ವರ್ಷದ ಮುತ್ಸದ್ದಿ ಸಾಹಿತಿಗೆ ಒಲಿದ ಸರ್ವಾಧ್ಯಕ್ಷರ ಪಟ್ಟ ● ಸಾಹಿತ್ಯೇತರರರನ್ನು ಸಮ್ಮೇಳನಾಧ್ಯಕ್ಷರನ್ನಾಗಿ ಮಾಡುವ ಚರ್ಚೆಗೆ ತೆರೆ



ಮಂಡ್ಯ, ನ.20(ಮೋಹನ್‌ರಾಜ್)– ಮುಂದಿನ ತಿಂಗಳು ಜಿಲ್ಲೆಯಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಹಿರಿಯ ಸಾಹಿತಿ ಗೊ.ರು.ಚನ್ನಬಸಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬುಧವಾರ ಬೆಂಗಳೂರಿನ ಪರಿಷತ್ತಿನ ಭವನದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಷಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಮ್ಮೇಳನಾಧ್ಯಕ್ಷರ ಆಯ್ಕೆ ಸಭೆಯಲ್ಲಿ ಜನಪದ ತಜ್ಞರು, ವಿದ್ವಾಂಸರು ಮತ್ತು ಸಾಹಿತಿಗಳಾದ ಗೊ.ರು.ಚ. ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ. ವಿಶೇಷ ಎಂದರೆ ಅವರು ಈ ಹಿಂದೆ 1992ರಿಂದ 1995ರವರೆಗೆ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಕೊಪ್ಪಳ (1993), ಮಂಡ್ಯ (1994) ಮತ್ತು ಮುಧೋಳ (1995)ದಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ಯಶಸ್ವಿಯಾಗಿ ನಡೆಸಿದ ಕೀರ್ತಿ ಅವರಿಗಿದೆ. ಈ ಹಿಂದೆ ಅವರೇ ಅಧ್ಯಕ್ಷರಾಗಿ 1994ರಲ್ಲಿ ಮಂಡ್ಯದಲ್ಲಿಯೂ ಯಶಸ್ವಿಯಾಗಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಿ ಕೊಟ್ಟಿದ್ದರು. ಇದೀಗ ಅವರೇ ಮಂಡ್ಯದಲ್ಲಿ ನಡೆಯುತ್ತಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ವಿಶೇಷ ಸಂಗತಿಯಾಗಿದೆ.

ಗೊ.ರು.ಚ ರಚಿಸಿರುವ ಕೆಲವು ಕೃತಿಗಳು: ಮಹಾದೇವಿ, ಸದಾಶಿವ ಶಿವಾಚಾರ್ಯ, ಕರ್ನಾಟಕ ಪ್ರಗತಿಪಥ, ಚೆಲುವಾಂಬಿಕೆ, ಕುನಾಲ, ಸಾಕ್ಷಿ ಕಲ್ಲು, ಬೆಳ್ಳಕ್ಕಿ ಹಿಂಡು ಬೆದರ್ಯಾವೊ, ಬಾಗೂರು ನಾಗಮ್ಮ, ಗ್ರಾಮ ಗೀತೆಗಳು, ವಿಭೂತಿ, ಕರ್ನಾಟಕ ಜನಪದ ಕಲೆಗಳು, ಬಾಗೂರು ನಾಗಮ್ಮ, ● 6ನೇ ಪುಟಕ್ಕೆ



ಹಿರಿಯ ಸಾಹಿತಿ ಗೊ.ರು.ಚನ್ನಬಸಪ್ಪ

ಕೊನೆಗೂ ಮಂಡ್ಯ ಜಿಲ್ಲಾ ಸಾಹಿತಿಗಳು, ಸಂಘಟಕರ ಒತ್ತಡಕ್ಕೆ ಮಣಿದ ಜೋಷಿ; ಸಾಹಿತ್ಯೇತರರ ಬದಲು ಸಾಹಿತಿಗಳಿಗೆ ಮಣೆ

ಮಂಡ್ಯ: ಈ ಬಾರಿ ಮಂಡ್ಯ ಜಿಲ್ಲೆಯಲ್ಲಿ ನಡೆಯುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯೇತರ ವ್ಯಕ್ತಿಯನ್ನು ಸಾಹಿತ್ಯ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಲು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಮಹೇಶ್ ಜೋಷಿ ಆಸಕ್ತಿ ಹೊಂದಿದ್ದರು. ಆದರೆ ಸಾಹಿತ್ಯೇತರರ ಸರ್ವಾಧ್ಯಕ್ಷರನ್ನಾಗಿ ಮಾಡಲು ಭಾರಿ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಸಾಹಿತಿಗಳನ್ನೇ ಸಮ್ಮೇ ಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಸಮ್ಮೇಳನದ ಪೂರ್ವಭಾವಿಯಾಗಿ ಆರು ತಿಂಗಳಿನಿಂದ ಸಮ್ಮೇಳನಕ್ಕೆ ಸಂಬಂಧಿಸಿದ ಸಭೆಗಳು ಆರಂಭವಾದಾಗ ಸಾಹಿತ್ಯೇತರ ವ್ಯಕ್ತಿಗಳನ್ನು ಸಮ್ಮೇಳನಾಧ್ಯಕ್ಷರನ್ನಾಗಿ ಮಾಡಲು ಒತ್ತಡ ಕೇಳಿ ಬರುತ್ತಿದೆ ಎಂದು ಸ್ವತಃ ಮಹೇಶ್ ಜೋಷಿ ಹೇಳಿದ್ದರು. ಜೋಷಿ ಪರವಿದ್ದ ಸಾಹಿತಿ, ಸಂಘಟಕರು ಸೇರಿದಂತೆ ಮಂಡ್ಯ ಜಿಲ್ಲೆಯ ಎಲ್ಲರೂ ಈ ನಿರ್ಧಾರವನ್ನು ಖಂಡಿಸಿದ್ದರು.

ಸಾಹಿತ್ಯಕ್ಕೆ ಮತ್ತು ಕನ್ನಡಕ್ಕೆ ವಿಶೇಷ ಸ್ಥಾನಮಾನ ಹೊಂದಿರುವ ಮಂಡ್ಯ ಜಿಲ್ಲೆಯಲ್ಲಿ ಸಾಹಿತಿಗಳನ್ನು ಬಿಟ್ಟು ಬೇರೆಯವರನ್ನು ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡುವುದು ಬೇಡ ● 6ನೇ ಪುಟಕ್ಕೆ



ಮಹೇಶ್ ಜೋಷಿ

ಎಚ್‌ಎಸ್‌ಆರ್‌ಪಿಗೆ ಡಿ.4ರವರೆಗೆ ಅವಕಾಶ

ಬೆಂಗಳೂರು, ನ.20– ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ಪ್ಲೇಟ್–ಎಚ್‌ಎಸ್‌ಆರ್‌ಪಿ) ಅಳವಡಿಸದೇ ಇರುವ ವಾಹನ ಸವಾರರ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದು ಎಂಬ ಮಧ್ಯಂತರ ಆದೇಶವನ್ನು ಹೈಕೋರ್ಟ್ ಡಿಸೆಂಬರ್ 4ರವರೆಗೆ ವಿಸ್ತರಿಸಿದೆ. ಈ ಸಂಬಂಧದ ಮೇಲ್ಮನವಿಗಳನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ನೇತೃತ್ವದ ವಿಭಾಗೀಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು. ● 6ನೇ ಪುಟಕ್ಕೆ

ಬಿಜೆಪಿಯಲ್ಲಿ ಬಣ ಬಡಿದಾಟ!

ಭಿನ್ನರ ಬಗ್ಗು ಬಡಿಯಲು ವರಿಷ್ಠರಿಗೆ ಪಕ್ಷನಿಷ್ಠರ ಆಗ್ರಹ

● ಕಟ್ಟಾ ನಿವಾಸದಲ್ಲಿ ನಡೆದ 20ಕ್ಕೂ ಅಧಿಕ ಮುಖಂಡರ ಸಭೆಯಲ್ಲಿ ಭಿನ್ನಮತೀಯರ ವಿರುದ್ಧ ಕ್ರಮಕ್ಕೆ ಆಗ್ರಹ ● ಲಕ್ಷಾಂತರ ಕಾರ್ಯಕರ್ತರ ಶ್ರಮದಿಂದ ಬಲಗೊಂಡ ಪಕ್ಷ ದುರ್ಬಲಗೊಳಿಸುವ ಯತ್ನಕ್ಕೆ ಖಂಡನೆ

ಬೆಂಗಳೂರು, ನ.20(ಕೆಎಂಶಿ)– ರಾಜ್ಯ ಬಿಜೆಪಿ ನಾಯಕರ ನಡುವಿನ ಒಳಜಗಳ ಬೀದಿಗೆ ಬಂದಿದೆ. ಪಕ್ಷದ ರಾಜ್ಯ ನಾಯಕತ್ವದ ವಿರುದ್ಧ ಸಮರ ಸಾರಿರುವ ಭಿನ್ನಮತಿಯರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಪಕ್ಷದ ನಿಷ್ಠಾವಂತ ನಾಯಕರು ಆಗ್ರಹಿಸಿದ್ದಾರೆ.



ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ಅವರ ನಿವಾಸದಲ್ಲಿ ಬಿಎಸ್‌ವೈ ಬಣದ 20ಕ್ಕೂ ಹೆಚ್ಚು ಮುಖಂಡರು ಸಭೆ ನಡೆಸಿದರು.

ವಕ್ಫ್ ವಿವಾದ ಕುರಿತ ಹೋರಾಟ ವಿಚಾರದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನಿಲುವಿನ ಪರ ಮತ್ತು ವಿರೋಧಿ ಬಣದ ರಾಜಕೀಯ ಜೋರಾಗಿದೆ. ವಿಜಯೇಂದ್ರ ಬಣ ರಾಜ್ಯಾದ್ಯಂತ ನಾಳೆಯಿಂದ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟಕ್ಕೆ ಬೀದಿಗಿಳಿದರೆ, ವಿಜಯೇಂದ್ರ ಬಣದ ವಿರುದ್ಧ ಇರುವ ಬಸನಗೌಡ ಪಾಟೀಲ್ ಯತ್ನಾಳ್ ಗುಂಪು ಪ್ರತ್ಯೇಕವಾಗಿ ಹೋರಾಟಕ್ಕೆ ಮುಂದಾಗಿದೆ. ಯತ್ನಾಳ್ ಹೋರಾಟ ಖಂಡಿಸಿರುವ ಯಡಿಯೂರಪ್ಪ ಬಣಕ್ಕೆ ಸೇರಿದ ಹಿರಿಯ ನಾಯಕರು, ರಾಜ್ಯಾಧ್ಯಕ್ಷರು ತೆಗೆದುಕೊಂಡಿರುವ ನಿರ್ಧಾರದ ವಿರುದ್ಧ ಹೋಗುವುದು ಸರಿಯಲ್ಲ ಎಂದಿದ್ದಾರೆ. ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ಅವರ ನಿವಾಸದಲ್ಲಿ ● 6ನೇ ಪುಟಕ್ಕೆ

ಸಮೀಕ್ಷೆ ಭವಿಷ್ಯ: ಮಹಾರಾಷ್ಟ್ರ, ಜಾರ್ಖಂಡ್‌ನಲ್ಲಿ ಎನ್‌ಡಿಎ ಅಧಿಕಾರಕ್ಕೆ!

ಇಂಡಿಯಾ ಮೈತ್ರಿಕೂಟಕ್ಕೂ ಅವಕಾಶದ ವರದಿ

ನವದೆಹಲಿ, ನ.20–ಮಹಾರಾಷ್ಟ್ರ ಮತ್ತು ಜಾರ್ಖಂಡ್‌ನಲ್ಲಿ ವಿಧಾನಸಭಾ ಚುನಾವಣೆ ಮತದಾನ ಮುಕ್ತಾಯವಾದ ಬೆನ್ನಲ್ಲೇ ಚುನಾವಣೋತ್ತರ ಸಮೀಕ್ಷೆಗಳು ಹೊರಬಿದ್ದಿದ್ದು, ಬಹುತೇಕ ಎಲ್ಲಾ ಸಮೀಕ್ಷೆಗಳು ಮಹಾರಾಷ್ಟ್ರ ಮತ್ತು ಜಾರ್ಖಂಡ್ ಎರಡೂ ರಾಜ್ಯದಲ್ಲೂ ಎನ್‌ಡಿಎ ಮೈತ್ರಿಕೂಟ ಅಧಿಕಾರದ ಚುಕ್ಕಾಣಿ ಹಿಡಿಯಲಿದೆ ಎಂದು ತಿಳಿಸಿವೆ.

ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ನೇತೃತ್ವದ ಎಂವಿಎ ಮೈತ್ರಿಕೂಟ ತೀವ್ರ ಪೈಪೋಟಿ ನೀಡಿದ್ದರೂ ಅಧಿಕಾರದ ಚುಕ್ಕಾಣಿ ಹಿಡಿಯುವಲ್ಲಿ ವಿಫಲವಾಗಲಿದ್ದು, ಆಡಳಿತಾರೂಢ ಎನ್‌ಡಿಎ ಮತ್ತೇ ಅಧಿಕಾರಕ್ಕೇರಲಿದೆ. ಜಾರ್ಖಂಡ್‌ನಲ್ಲಿ ಆಡಳಿತಾರೂಢ ಪಕ್ಷವನ್ನು ಮಣಿಸಿ ಎನ್‌ಡಿಎ ಅಧಿಕಾರ ಹಿಡಿಯಲಿದೆ ಎಂದು ಸಮೀಕ್ಷೆಗಳು ಹೇಳಿವೆ. ಮಹಾರಾಷ್ಟ್ರದ 288 ವಿಧಾನಸಭಾ ಕ್ಷೇತ್ರಗಳಿಗೂ ಒಂದೇ ಹಂತದಲ್ಲಿ ಇಂದು ಮತದಾನ ನಡೆಯಿತು. 81 ವಿಧಾನಸಭಾ ಕ್ಷೇತ್ರಗಳನ್ನೊಳಗೊಂಡ ಜಾರ್ಖಂಡ್‌ನಲ್ಲಿ ಈಗಾಗಲೇ ಒಂದು ಹಂತದ ಮತದಾನ ನಡೆದಿದ್ದು, 2ನೇ ಹಾಗೂ ಅಂತಿಮ ಹಂತದ ಮತದಾನವು ಮುಕ್ತಾಯವಾಗಿದೆ. ಈ ರಾಜ್ಯದಲ್ಲಿ ನ.13ರಂದು 1ನೇ ಹಂತದ ಚುನಾವಣೆ ನಡೆದಿತ್ತು.

ಮಹಾರಾಷ್ಟ್ರದಲ್ಲಿ ಅಧಿಕಾರ ಹಿಡಿಯಲು 145 ಮ್ಯಾಜಿಕ್ ನಂಬರ್ ಆಗಿದೆ. ಮಾರ್ಟಿಜ್ ಸಮೀಕ್ಷೆಯಂತೆ ಎನ್‌ಡಿಎ 150–170, ಎಂವಿಎ 110–130, ಇತರೆ 2–10, ಪಿ–ಮಾರ್ಕ್: ಎನ್‌ಡಿಎ 137–157, ಎಂವಿಎ 126–146, ಇತರೆ 2–8, ಪೀಪಲ್ಸ್ ಪಲ್ಸ್: ಎನ್‌ಡಿಎ 175–195, ಎಂವಿಎ 85–112, ಇತರೆ 7–12, ಲೋಕಶಾಹಿ ಮರಾಠಿ–ರುದ್ರ ಎನ್‌ಡಿಎ 128–142, ಎಂವಿಎ 125–140, ಇತರೆ 18–23, ಚಾಣಕ್ಯ: ಎನ್‌ಡಿಎ 152–160, ಎಂವಿಎ 130–138, ಇತರೆ 6–8, ಪೋಲ್ ಆಫ್ ಪೋಲ್ಸ್: ಎನ್‌ಡಿಎ 153, ಎಂವಿಎ 126, ಇತರೆ 9.

81 ಸ್ಥಾನವಿರುವ ಜಾರ್ಖಂಡ್‌ನಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯಲು ಮ್ಯಾಜಿಕ್ ನಂಬರ್ 41 ಆಗಿದ್ದು, ಪಿ–ಮಾರ್ಕ್ ಮತ್ತು ಆಕ್ಸಿಸ್ ಮೈ ಇಂಡಿಯಾ ● 6ನೇ ಪುಟಕ್ಕೆ

ಚುನಾವಣೋತ್ತರ ಸಮೀಕ್ಷೆ ಪ್ರಕಾರ ಚನ್ನಪಟ್ಟಣ, ಶಿಗ್ಗಾವಿ ಎನ್‌ಡಿಎ; ಸಂಡೂರಲ್ಲಿ ಕಾಂಗ್ರೆಸ್ ಗೆಲುವು

ಬೆಂಗಳೂರು, ನ.20– ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭೆ ಕ್ಷೇತ್ರಗಳಲ್ಲಿ ಯಾರು ಗೆಲ್ಲುತ್ತಾರೆ ಎಂಬುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಈ ಕ್ಷೇತ್ರಗಳ ಚುನಾವಣೋತ್ತರ ಸಮೀಕ್ಷೆಯಲ್ಲಿ ಎರಡು ಕ್ಷೇತ್ರಗಳಲ್ಲಿ ಎನ್‌ಡಿಎ ಹಾಗೂ ಒಂದರಲ್ಲಿ ಕಾಂಗ್ರೆಸ್ ಗೆಲ್ಲುವ ಸಾಧ್ಯತೆ ಇದೆ ಎಂದು ಹೇಳಿವೆ.

ಪಿ ಮಾರ್ಕ್ ಸಂಸ್ಥೆ ನಡೆಸಿದ ಸಮೀಕ್ಷೆಯಲ್ಲಿ ಎರಡು ಕ್ಷೇತ್ರದಲ್ಲಿ ಎನ್‌ಡಿಎ ಗೆದ್ದರೆ ಒಂದು ಕ್ಷೇತ್ರ ಕಾಂಗ್ರೆಸ್‌ಗೆ ದಕ್ಕುವ ಸಾಧ್ಯತೆ ಇದೆ ಎಂದು ತಿಳಿಸಿದೆ. ಆದರೆ ಅವು ಯಾವುದು ಎಂಬುದೇ ಭಾರಿ ಕುತೂಹಲಕ್ಕೆ ಕಾರಣವಾಗಿದೆ. ರಾಜ್ಯದಲ್ಲಿ ನಡೆದ ಮೂರು ಕ್ಷೇತ್ರಗಳ ಉಪ ಚುನಾವಣೆಯ ಪೈಕಿ ಚನ್ನಪಟ್ಟಣ ಕ್ಷೇತ್ರ ಸಾಕಷ್ಟು ಜಿದ್ದಾಜಿದ್ದಿಯ ಕಣವಾಗಿತ್ತು. ಈ ಕ್ಷೇತ್ರದಲ್ಲಿ ಯಾರು ಗೆಲ್ಲುವ ಸಾಧ್ಯತೆ ಇದೆ ಎಂಬುದು ಕುತೂಹಲಕ್ಕೆ ಕಾರಣವಾಗಿದೆ.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ: ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಯವರ ರಾಜೀನಾಮೆಯಿಂದ ತೆರವಾಗಿದ್ದ ಈ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮಾಜಿ ಸಚಿವ ಸಿಪಿ ಯೋಗೇಶ್ವರ್ ಮತ್ತು ಎನ್‌ಡಿಎ ಅಭ್ಯರ್ಥಿಯಾಗಿ ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸಿದ್ದರು.



ನಿಖಿಲ್ ಕುಮಾರಸ್ವಾಮಿ ಎನ್‌ಡಿಎ



ಭರತ್ ಬೊಮ್ಮಾಯಿ ಎನ್‌ಡಿಎ



ಇ.ಅನ್ನಪೂರ್ಣ ಕಾಂಗ್ರೆಸ್

ಈ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಗೆಲ್ಲುವ ಸಾಧ್ಯತೆ ಇದೆ ಎಂದು ಸಮೀಕ್ಷೆಗಳು ತಿಳಿಸಿವೆ. ಚನ್ನಪಟ್ಟಣದಲ್ಲಿ ಈ ಬಾರಿ ದಾಖಲೆಯ ● 6ನೇ ಪುಟಕ್ಕೆ

ಮುಂಬೈ, ಕೊಲ್ಕತ್ತಾ, ಚೆನ್ನೈ ಸಟ್ಟಾ ಬಜಾರ್‌ನಲ್ಲಿ ಚನ್ನಪಟ್ಟಣ ಚುನಾವಣೆ ಸದ್ದು; ನಿಖಿಲ್ ಪರ ಭಾರಿ ಬೆಟ್ಟಿಂಗ್

ಬೆಂಗಳೂರು, ನ.20(ಕೆಎಂಶಿ)–ಚನ್ನಪಟ್ಟಣ ವಿಧಾನಸಭಾ ಉಪ ಚುನಾವಣೆ ಮುಂಬೈ–ಕೊಲ್ಕತ್ತಾ–ಚೆನ್ನೈ ಸಟ್ಟಾ ಬಜಾರ್‌ನಲ್ಲಿ ಭಾರಿ ಸದ್ದು ಮಾಡಿದೆ. ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಬೆಟ್ಟಿಂಗ್ ಮಾರುಕಟ್ಟೆಯಲ್ಲಿ ಬಾಜಿ ಜೋರಾಗಿದೆ. ನಿಖಿಲ್ ಗೆಲುವು–ಸೋಲಿನ ಮೇಲೆ ಅನುಪಾತ 60:100 ರಂತೆ ಬೆಟ್ಟಿಂಗ್ ಇದೆ. ಅಂದರೆ, ನಿಖಿಲ್ ಗೆಲುವು ಸಾಧಿಸಿದರೆ, ಅವರ ಪರವಾಗಿ ಬೆಟ್ಟಿಂಗ್‌ನಲ್ಲಿ 60,000 ರೂ. ಬಾಜಿ ಕಟ್ಟಿದ್ದರೆ, ಅಂತಹವರಿಗೆ ಒಂದು ಲಕ್ಷ ರೂ. ನೀಡಲಾಗುತ್ತದೆ. ಇದೇ ರೀತಿ 60 ಲಕ್ಷ ರೂ. ಬಾಜಿ ಇದ್ದರೆ, ಗೆದ್ದವರಿಗೆ ಒಂದು ಕೋಟಿ ರೂ. ಸಿಗಲಿದೆ. ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ನಡೆದಿದ್ದರೂ ಸಟ್ಟಾ ಮಾರುಕಟ್ಟೆಯಲ್ಲಿ ಚನ್ನಪಟ್ಟಣ ಫಲಿತಾಂಶ ಮಾತ್ರ ಸದ್ದು ಮಾಡುತ್ತಿದೆ. ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಸೇರಿದಂತೆ ರಾಷ್ಟ್ರದ ವಿವಿಧೆಡೆಯ ಕೆಲವು ವಿಧಾನಸಭಾ ಉಪ ಚುನಾವಣೆಯ ಮತದಾನ ಮುಗಿದಿದೆ. ಅದರಲ್ಲಿ ಆಯ್ದ ಕೆಲವು ಕ್ಷೇತ್ರಗಳಿಗೆ ಪರ–ವಿರೋಧ ಬೆಟ್ಟಿಂಗ್ ಸಹ ಜೋರಾಗಿದ್ದು, ಅದರಲ್ಲಿ ಚನ್ನಪಟ್ಟಣವೂ ಸೇರಿದೆ. ಈ ಕ್ಷೇತ್ರವನ್ನು ಆಡಳಿತಾರೂಢ ಕಾಂಗ್ರೆಸ್ ಹಾಗೂ ವಿರೋಧಿ ● 6ನೇ ಪುಟಕ್ಕೆ

ಮುಡಾ ನಿವೇಶನ ಹಂಚಿಕೆ ಹಗರಣ: ಲೋಕಾಯುಕ್ತ ಮೈಸೂರು ಎಸ್ಪಿಯಿಂದ ಎರಡನೇ ಹಂತದ ವಿಚಾರಣೆ

ಮುಡಾ ಆಯುಕ್ತರಾಗಿದ್ದ ಪಾಲಯ್ಯ ಮತ್ತೆ ವಿಚಾರಣೆ



ಮೈಸೂರು ಲೋಕಾಯುಕ್ತ ಕಚೇರಿಗೆ ವಿಚಾರಣೆಗೆ ಆಗಮಿಸಿದ ಮೈಸೂರಿನ ಅಪರ ಜಿಲ್ಲಾಧಿಕಾರಿ, ಮುಡಾ ಆಯುಕ್ತರೂ ಆಗಿದ್ದ ಪಾಲಯ್ಯ


ಮೈಸೂರು, ನ.20(ಬಿಎಲ್‌ಯು)– ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ಲೋಕಾಯುಕ್ತ ಮೈಸೂರು ಎಸ್ಪಿ, ನಿವೃತ್ತ ಅಧಿಕಾರಿಗಳು ಸೇರಿದಂತೆ ಹಗರಣದ ಆರೋಪಿಗಳಿಗೆ ಎರಡನೇ ಹಂತದಲ್ಲಿ ವಿಚಾರಣೆ ಆರಂಭಿಸಿದ್ದಾರೆ.

ಮೈಸೂರಿನ ಅಪರ ಜಿಲ್ಲಾಧಿಕಾರಿ, ಮುಡಾ ಆಯುಕ್ತರೂ ಆಗಿದ್ದ ಪಾಲಯ್ಯ ಅವರನ್ನು ಇಂದು ಲೋಕಾಯುಕ್ತ ಎಸ್ಪಿ ಎರಡನೇ ಬಾರಿಗೆ ಸುದೀರ್ಘ ವಿಚಾರಣೆ ನಡೆಸಿದರು. ಮೈಸೂರಿನ ಕೆಸರೆಯ ಸರ್ವೆ ನಂಬರ್ 464ರ 3.16 ಎಕರೆ ಭೂಮಿಯನ್ನು ಮತ್ತೆ ಕೃಷಿ ಭೂಮಿಯಾಗಿ ಪರಿವರ್ತನೆ ಮಾಡಿದ ಆದೇಶಕ್ಕೆ ಸಹಿ ಮಾಡಿದ ಹಿನ್ನೆಲೆಯಲ್ಲಿ ಪಾಲಯ್ಯ ಅವರನ್ನು ಇಂದು ವಿಚಾರಣೆ ಮಾಡಲಾಯಿತು. ಈ ಹಿಂದೆಯೇ ಪಾಲಯ್ಯ ಅವರನ್ನು ಒಂದು ಬಾರಿ ವಿಚಾರಣೆ ಮಾಡಲಾಗಿದ್ದು, ಇದು ಎರಡನೇ ಹಂತದ ವಿಚಾರಣೆಯಾಗಿದೆ.

ಪಾರ್ವತಿ ಅವರಿಗೆ ದಾನವಾಗಿ ಬಂದಿದ್ದ ಭೂಮಿಯನ್ನು ಅದಾಗಲೇ ಮುಡಾ ಸ್ವಾಧೀನ ಮಾಡಿಕೊಂಡು ಬಡಾವಣೆ ನಿರ್ಮಾಣ ಮಾಡಿದ್ದು, ಅಲ್ಲಿ ರಸ್ತೆ, ಒಳಚರಂಡಿ ಸೇರಿದಂತೆ ಇತರೆ ಮೂಲಸೌಕರ್ಯ ಕಲ್ಪಿಸಲಾಗಿತ್ತು. ಹೀಗಿರುವಾಗ ಆ ಭೂಮಿಯ ಕೃಷಿ ಭೂಮಿಯಾಗಿ ಹೇಗೆ ಪರಿವರ್ತಿಸಲಾಗಿದೆ ಎಂದು ದೂರುದಾರ ಸ್ನೇಹಮಯಿ ಕೃಷ್ಣ ದಾಖಲಾತಿ ಮೂಲಕ ಪ್ರಶ್ನೆ ಮಾಡಿದ್ದರು. ಬಡಾವಣೆಯಾಗಿದ್ದ ಜಾಗವನ್ನು ಕೃಷಿ ಭೂಮಿಯಾಗಿ ಪರಿವರ್ತಿಸಿದ ದಾಖಲಾತಿಗೆ ಸಹಿ ಮಾಡಿದ ಹಿನ್ನೆಲೆಯಲ್ಲಿ ಪಾಲಯ್ಯ ● 6ನೇ ಪುಟಕ್ಕೆ

ಸಿಎಂ ಸಿದ್ದರಾಮಯ್ಯ ಮೇಲ್ಮನವಿ ನ.23ಕ್ಕೆ ವಿಚಾರಣೆ

ಬೆಂಗಳೂರು, ನ.20– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ನಿವೇಶನ ಹಂಚಿಕೆ ಪ್ರಕರಣದಲ್ಲಿ ತಮ್ಮ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲರು ನೀಡಿರುವ ಅನುಮತಿಗೆ ಅಸ್ತು ಎಂದ ಏಕಸದಸ್ಯ ನ್ಯಾಯಪೀಠದ ತೀರ್ಪು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಬಾಮೈದ ಮಲ್ಲಿಕಾರ್ಜುನಸ್ವಾಮಿಗೆ ಜಮೀನು ಮಾರಾಟ ಮಾಡಿದ್ದ ಜೆ.ದೇವರಾಜು ಸಲ್ಲಿಸಿರುವ ಮೇಲ್ಮನವಿಗಳ ವಿಚಾರಣೆಯನ್ನು ಹೈಕೋರ್ಟ್ ಇದೇ 23ಕ್ಕೆ ನಿಗದಿಪಡಿಸಿದೆ. ಮೇಲ್ಮನವಿ ಗಳ ಅರ್ಜಿದಾರರ ಪರ ಸುಪ್ರೀಂಕೋರ್ಟ್‌ನ ಹಿರಿಯ ವಕೀಲ ದುಷ್ಯಂತ ದವೆ ಅವರು ಬುಧವಾರ ಈ ಕುರಿತಂತೆ ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ನೇತೃತ್ವದ ವಿಭಾಗೀಯ ನ್ಯಾಯಪೀಠಕ್ಕೆ ಮನವಿ ಸಲ್ಲಿಸಿ, ವಾದ ಮಂಡಿಸಿದರು. ಜೆ.ದೇವರಾಜು ಪರ ಮೇಲ್ಮನವಿಯನ್ನು ಉಲ್ಲೇಖಿಸಿದ ದುಷ್ಯಂತ ದವೆ ಅವರು, ಈಗ್ಗೆ 25 ವರ್ಷಗಳ ಹಿಂದೆ ನಡೆದಿರುವ ಈ ಪ್ರಕರಣದಲ್ಲಿ ಅರ್ಜಿದಾರರನ್ನು ಪಕ್ಷಕಾರರನ್ನಾಗಿ ಮಾಡದೇ ● 6ನೇ ಪುಟಕ್ಕೆ



ನಕ್ಕರೆ ಅದೇ ಸ್ವರ್ಗ

ಹುಚ್ಚ 1 : ಸೂರ್ಯ ಯಾಕೆ ರಾತ್ರಿ ಹುಟ್ಟಲ್ಲ...?
ಹುಚ್ಚ 2 : ಗೊತ್ತಿಲ್ಲ, ಯಾಕೆ ಹುಟ್ಟಿಲ್ಲ ಅಂತ.
ಹುಟ್ಟಿದರೂ ಹುಟ್ಟಬಹುದು.
ಇಷ್ಟು ಕತ್ತಲಲ್ಲಿ ಯಾರಿಗೆ ಕಾಣಿಸುತ್ತೆ!!

ಮೈಸೂರು ಮಿತ್ರ

ಗುರುವಾರ, 21 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಸ್ನೇಹ, ಸೌಜನ್ಯದಿಂದ ಮನುಷ್ಯನನ್ನು ಗೆಲ್ಲಬಹುದೇ ಹೊರತು ಬರಿಯ ಶಕ್ತಿಯಿಂದಲ್ಲ. – ಅರಿಸ್ಟಾಟಲ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಸೀರಿಗೇಡಿಗೆ ಸೀರೆ ಉಡಿಸಿದರೆ ಕೇರಿ ದಂಡಿ ಮ್ಯಾಗ ನಿಂತು ಕೇಕೆ ಹಾಕಿದಳು.

ನಿಮ್ಮ ಪತ್ರಗಳು

ಬಿಪಿಎಲ್ ಕಾರ್ಡ್ ಗೊಂದಲ ನಿವಾರಿಸಿ

ಮಾನ್ಯರೆ,

ಇತ್ತೀಚೆಗೆ ರಾಜ್ಯಾದ್ಯಂತ ಲಕ್ಷಾಂತರ ಬಿಪಿಎಲ್ ಆಹಾರ ಪಡಿತರ ಚೀಟಿಗಳನ್ನು ರದ್ದು ಪಡಿಸಿರುವ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ವಿರೋಧ ಕೇಳಿ ಬರುತ್ತಿದೆ.

ಪ್ರಮುಖ ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸಹ ಈ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ಮುಗಿಬಿದ್ದಿವೆ. ಈ ಬಗ್ಗೆ ಸ್ವತಃ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನರ್ಹ ಬಿಪಿಎಲ್ ಕಾರ್ಡು ದಾರರುಗಳನ್ನು ರದ್ದುಪಡಿಸಿ, ಅವುಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಬದಲಾವಣೆ ಮಾಡಲಾಗುತ್ತಿದೆ ಎಂದು ತಿಳಿಸಿ, ಬಿಪಿಎಲ್ ಕಾರ್ಡ್ ಬೇಕಿರುವ ಬಡವರು ಮತ್ತೆ ಅರ್ಜಿ ಸಲ್ಲಿಸುವಂತೆ ಸೂಚಿಸಿದ್ದಾರೆ. ಆದರೆ ಬಡ ಜನರಿಗೆ ಎಪಿಎಲ್ ಕಾರ್ಡುಗಳಿಂದ ಆಗುವ ಪ್ರಯೋಜನಗಳಾದರೂ ಏನು? ಬಿಪಿಎಲ್ ಕಾರ್ಡುಗಳ ವಿತರಣೆಯಲ್ಲಿ ಬಹಳ ವರ್ಷಗಳಿಂದಲೂ ಗೊಂದಲಗಳು ಉಂಟಾಗುತ್ತಿವೆ. ಈಗ ಮತ್ತೆ ಅರ್ಜಿ ಸಲ್ಲಿಸಿ ಬಿಪಿಎಲ್ ಕಾರ್ಡುಗಳನ್ನು ಪಡೆದುಕೊಳ್ಳುವುದು ಹರಸಾಹಸವೇ ಸರಿ.

ಲಕ್ಷಾಂತರ ಮಂದಿ ಅನರ್ಹರು ಸುಳ್ಳು ಬಿಪಿಎಲ್ ಕಾರ್ಡುಗಳನ್ನು ಪಡೆದು ಸರ್ಕಾರದ ವಿವಿಧ ಸವಲತ್ತುಗಳನ್ನು ಪಡೆದುಕೊಂಡಿರುವುದು ಸತ್ಯವಾದ ಮಾತು. ಅದೇ ಸಮಯದಲ್ಲಿ ಅರ್ಹ ಬಡ ಜನರು ತುಂಬಾ ಕಷ್ಟಪಟ್ಟು ಬಿಪಿಎಲ್ ಕಾರ್ಡ್ ಮಾಡಿಸಿಕೊಂಡಿರುವುದು ಅಷ್ಟೇ ಸತ್ಯ. ಇಷ್ಟೊಂದು ಮಂದಿ ಅನರ್ಹರಿಗೆ ಬಿಪಿಲ್ ಕಾರ್ಡುಗಳನ್ನು ನೀಡಿರುವುದು ಸರ್ಕಾರದ ಒಂದು ದೊಡ್ಡ ವೈಫಲ್ಯವೇ ಸರಿ. ಆಗಿರುವ ಅನ್ಯಾಯವನ್ನು ಸರಿಪಡಿಸಿ, ಅರ್ಹ ಬಡ ಜನರಿಗೆ ಸಮರೋಪಾದಿಯಲ್ಲಿ ಬಿಪಿಎಲ್ ಕಾರ್ಡುಗಳನ್ನು ನೀಡಿ, ಬಡ ಜನರಿಗೆ ನೆರವಾಗಬೇಕಾದ್ದು ರಾಜ್ಯ ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಏಕೆಂದರೆ, ಲಕ್ಷಾಂತರ ಕುಟುಂಬಗಳು ಬಿಪಿಎಲ್ ಕಾರ್ಡುಗಳ ಮೇಲೆಯೇ ಅವಲಂಬಿತವಾಗಿವೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು, ಮೊ. 9341731661

ಪೊಲೀಸ್ ಆಯುಕ್ತರ ಗಮನಕ್ಕೆ

ಮಾನ್ಯರೆ,

ಪೊಲೀಸ್ ಆಯುಕ್ತರ ಗಮನಕ್ಕೆ... ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ಕಾನೂನು ಕಾಯ್ದೆ ಆರ್‌ಟಿಐ ಕಾರ್ಯಕರ್ತರ ಕರ್ತವ್ಯಕ್ಕೆ ಅಡ್ಡಿಪಡಿಸುತ್ತಿರುವ ಪಟ್ಟಭದ್ರ ಹಿತಾಸಕ್ತಿಯ ವ್ಯಕ್ತಿಗಳು ಪೊಲೀಸ್ ಠಾಣೆಗಳಲ್ಲಿ ಸುಳ್ಳು ಮೊಕದ್ದಮೆಗಳನ್ನು ದಾಖಲಿಸಿ ತೊಂದರೆ ನೀಡುತ್ತಿರುವುದಲ್ಲದೆ ಅವರ ಕರ್ತವ್ಯವನ್ನು ನಿರ್ಭೀತಿಯಿಂದ ನಡೆಸಲು ಅಡ್ಡಿಪಡಿಸಿ ಕಿರುಕುಳ ನೀಡುತ್ತಿರುವ ಬಗ್ಗೆ ಪತ್ರಿಕೆಗಳಲ್ಲಿ ನೋಡುತ್ತಿದ್ದೇನೆ. ತಮ್ಮ ಜೀವನೋಪಾಯಕ್ಕೋಸ್ಕರ ನೀಚ ಕೆಲಸವನ್ನು ಮಾಡುತ್ತಿರುವ ದುಷ್ಟ ವ್ಯಕ್ತಿಗಳನ್ನು ಬಂಧಿಸುವುದಲ್ಲದೆ ಸುಳ್ಳು ಪ್ರಕರಣ ದಾಖಲಿಸಲು ಪ್ರಚೋದನೆ ನೀಡುತ್ತಿರುವ ಭ್ರಷ್ಟ ಅಧಿಕಾರಿಗಳನ್ನು ಹಾಗೂ ಭ್ರಷ್ಟ ರಾಜಕಾರಣಿಗಳನ್ನು ಬಂಧಿಸುವ ಮೂಲಕ ಮಾಹಿತಿ ಹಕ್ಕು ಕಾರ್ಯಕರ್ತರಿಗೆ ರಕ್ಷಣೆ ನೀಡಬೇಕಾಗಿರುವುದು ತಮ್ಮ ಆದ್ಯ ಕರ್ತವ್ಯವಾಗಿದೆ. ರಾಜ್ಯದಲ್ಲಿ ಹಲವಾರು ಭ್ರಷ್ಟ ಅಧಿಕಾರಿಗಳು ಹಾಗೂ ಭ್ರಷ್ಟ ರಾಜಕಾರಣಿಗಳು ನಡೆಸಿದಂತಹ ಸಾವಿರಾರು ಕೋಟಿ ರೂ. ಲೂಟಿ, ವಂಚನೆ, ಮೋಸ, ಪಕ್ಷಪಾತ ಮಾಡುವ ವ್ಯಕ್ತಿಗಳನ್ನು ಸಾರ್ವಜನಿಕವಾಗಿ ಬಯಲಿಗೆಳೆದು ಅವರಿಗೆ ಶಿಕ್ಷೆಯನ್ನು ಕೊಡಿಸುವ ಕೆಲಸವು ಮಾಹಿತಿ ಹಕ್ಕು ಕಾರ್ಯಕರ್ತರ ಕರ್ತವ್ಯವಾಗಿರುತ್ತದೆ. ಮಾಹಿತಿ ಹಕ್ಕು ಕಾರ್ಯಕರ್ತರಿಗೆ ರಕ್ಷಣೆ ಕೊಡಿ.

–ಎನ್.ಆರ್. ವಿಜಯಕುಮಾರ್, ಮೈಸೂರು.

ಮಹೇಶ್ ಜೋಶಿಗೆ ಕಡಿವಾಣ ಅಗತ್ಯ

ಮಾನ್ಯರೆ,

ನ. 18 ರಂದು ಕನ್ನಡ ಸಾಹಿತ್ಯ ಸಮ್ಮೇಳನದ ನಿಮಿತ್ತ ಮಂಡ್ಯದಲ್ಲಿ ಸಚಿವರು, ಸಾಹಿತಿಗಳ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿಯವರು, ನಾನು, ಮುಖ್ಯಮಂತ್ರಿ, ಸಚಿವರ ಮನೆಗೆ ಹೋಗುವುದಿಲ್ಲ. ಅವರೇ ಬಂದು ನನ್ನನ್ನು ಆಹ್ವಾನಿಸಬೇಕು ಎಂದು ಹೇಳಿರುವುದು ಅವರ ದಾರ್ಷ್ಟ್ಯಕ್ಕೆ ಒಂದು ಉತ್ತಮ ನಿದರ್ಶನ. ಈ ಕೂಡಲೇ ಅವರ ಅಧಿಕಾರಕ್ಕೆ ಕಡಿವಾಣ ಹಾಕಲಿ. ಹಾಗೆಯೇ 87ನೇ ಸಾಹಿತ್ಯ ಸಮ್ಮೇಳನಕ್ಕೆ ಸರ್ಕಾರ 25 ಕೋಟಿ ಹಣ ಬಿಡುಗಡೆ ಮಾಡಿರುವುದಾಗಿ ವರದಿಯಾಗಿದೆ. ಐಎಎಸ್ ಅಧಿಕಾರಿ ನೇತೃತ್ವದ ಸಮಿತಿ ರಚಿಸಿ ಖರ್ಚು ವೆಚ್ಚ ನಿರ್ವಹಿಸಲಿ. ಹಾಗೂ ದುಂದು ವೆಚ್ಚ ಮಾಡದೆ ಹಣ ಪೋಲಾಗದಂತೆ ಎಚ್ಚರ ವಹಿಸಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ನಿಷ್ಪ್ರಯೋಜಕ ಬಸ್ ತಂಗುದಾಣಗಳು

ಮಾನ್ಯರೆ,

ಇತ್ತೀಚೆಗೆ ದಸರಾ ಹಬ್ಬದ ಸಮಯದಲ್ಲಿ ಮೈಸೂರಿನ ಆಕಾಶವಾಣಿ ವೃತ್ತ, ದಾಸಪ್ಪ ವೃತ್ತ, ರೈಲು ನಿಲ್ದಾಣ, ರಾಮಸ್ವಾಮಿ ವೃತ್ತ, ಕೆ.ಆರ್. ಆಸ್ಪತ್ರೆ ಮುಂಭಾಗದಲ್ಲಿ ನೂತನ ಬಸ್ ತಂಗುದಾಣಗಳನ್ನು ನಿರ್ಮಿಸಲಾಗಿದೆ. ಆದರೆ ಏನು ಪ್ರಯೋಜನ? ಚಾವಣಿಯೇ ಇಲ್ಲ. ಮಳೆ ಬಂದಾಗ ಸೋರುತ್ತದೆ. ಅತೀ ಬಿಸಿಲು ಇದ್ದಾಗ ಬಿಸಿಲು ಪ್ರಯಾಣಿಕರ ತಲೆ ಮೇಲೆ ಬೀಳುತ್ತದೆ. ಸಂಬಂಧಪಟ್ಟ ಅಧಿಕಾರಿಗಳು ಸಂಘ ಸಂಸ್ಥೆಗಳು ಇದರ ಬಗ್ಗೆ ಗಮನಹರಿಸಲಿ.

–ಜಿ.ಪಿ. ರಾಜೇಶ್, ವಿ.ವಿ. ಪುರಂ, ಮೈಸೂರು.

ತಂಗುದಾಣಗಳಿಗೆ ಬೆಳಕಿನ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಮೈಸೂರು ನಗರದ ಯಾದವಗಿರಿಯ ಮೈಸೂರು ಆಕಾಶವಾಣಿ ಕೇಂದ್ರದ ಪಕ್ಕದಲ್ಲಿರುವ ಅಂಚೆ ಕಚೇರಿಯ ಎಡಭಾಗ ಮತ್ತು ಎದುರುಗಡೆ ಇರುವ ಎರಡೂ ತಂಗುದಾಣಗಳಿಗೆ ಬೆಳಕಿನ ಸೌಲಭ್ಯವಿರುವುದಿಲ್ಲ. ಈ ಪ್ರದೇಶದ ಸುತ್ತಮುತ್ತ ಅನೇಕ ಕಚೇರಿಗಳು, ಸಂಸ್ಥೆಗಳು ಮತ್ತು ಕಾರ್ಖಾನೆಗಳಿದ್ದು ಬಹಳಷ್ಟು ಸಂಖ್ಯೆಯ ಪ್ರಯಾಣಿಕರು ಈ ತಂಗುದಾಣದಲ್ಲಿ ತಮ್ಮ ದೈನಂದಿನ ಕಾರ್ಯಗಳನ್ನು ಮುಗಿಸಿಕೊಂಡು ಕತ್ತಲಿನಲ್ಲಿಯೇ ಬಸ್ಸಿಗಾಗಿ ಕಾಯುತ್ತಾರೆ. ಸಂಬಂಧಪಟ್ಟವರು ತುರ್ತಾಗಿ ಈ ಎರಡೂ ತಂಗುದಾಣಗಳಿಗೆ ಬೆಳಕಿನ ಸೌಲಭ್ಯ ಕಲ್ಪಿಸಿಕೊಡಬೇಕಾಗಿದೆ.

ಸಂಜೆಯ ವೇಳೆ ಈ ಎರಡೂ ತಂಗುದಾಣಗಳಲ್ಲಿ ನಗರ ಸಾರಿಗೆ ಬಸ್‌ಗಳನ್ನು ನಿಲುಗಡೆ ಮಾಡುತ್ತಿಲ್ಲ. ನಿಲ್ದಾಣದಿಂದ ದೂರದಲ್ಲಿ ತ.ರಾ.ಸು. ವೃತ್ತದ ಬಳಿ ಅಥವಾ ಆಕಾಶವಾಣಿ ಕೇಂದ್ರದ ಮುಂಭಾಗ ಬಸ್ಸುಗಳನ್ನು ನಿಲುಗಡೆ ಮಾಡುತ್ತಿದ್ದು, ಪ್ರಯಾಣಿಕರು ಬಸ್ಸು ಹತ್ತಲು ಬಸ್ಸಿನ ಹಿಂದೆ ಓಡಬೇಕಾಗಿದೆ. ಇದರಿಂದ ಸಾರ್ವಜನಿಕರಿಗೆ ಸಕಾಲದಲ್ಲಿ ಮನೆಗೆ ತಲುಪಲು ತೊಂದರೆಯಾಗುತ್ತಿದೆ. ಸಂಬಂಧಪಟ್ಟ ಸಾರಿಗೆ ಅಧಿಕಾರಿಗಳು ಇತ್ತ ಗಮನಹರಿಸಿ ಈ ಎರಡೂ ತಂಗುದಾಣಗಳಲ್ಲಿ ಸಂಜೆ ವೇಳೆ ಕಡ್ಡಾಯವಾಗಿ ಬಸ್ಸುಗಳನ್ನು ನಿಲುಗಡೆ ಮಾಡಬೇಕೆಂದು ಸಿಬ್ಬಂದಿಗಳಿಗೆ ಸೂಚಿಸಬೇಕಾಗಿ ಮನವಿ. ಕ್ಷೇತ್ರದ ಶಾಸಕರು ಇತ್ತ ಗಮನಹರಿಸಿ ಈ ಸಮಸ್ಯೆಗಳನ್ನು ನಿವಾರಿಸಬೇಕೆಂದು ಕಳಕಳಿಯಿಂದ ಕೋರುತ್ತೇನೆ.

–ಸಾವಿತ್ರಮ್ಮ, ಮೈಸೂರು.



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ಅಗತ್ಯಕ್ಕಾಗಿ ಅಲ್ಲ... ಅನಿವಾರ್ಯಕ್ಕಾಗಿ ಸಾಲ...!

ಅಗತ್ಯವಾದ ಬೇಡಿಕೆಗಳನ್ನು ಪೂರೈಸಿಕೊಳ್ಳಲು ಆದಾಯದ ಕೊರತೆಯಿಂದ ಉಳ್ಳವರಿಂದ ಪಡೆಯುವ ಹಣ ಇಲ್ಲವೇ ವಸ್ತುಗಳ ರೂಪದ ಕಡವನ್ನು ಸಾಲ ಎನ್ನುತ್ತೇವೆ. ನಮ್ಮ ವರಮಾನಕ್ಕಿಂತ ಖರ್ಚು ಹೆಚ್ಚಾದರೆ ಸಾಲ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಸಾಲ ಎಂಬುದು ಅಮಲಿದ್ದ ಹಾಗೆ. ಒಮ್ಮೆ ಇದಕ್ಕೆ ಶರಣಾದರೆ ಸಾಕು, ಮತ್ತೆ ಮತ್ತೆ ತನ್ನ ತೆಕ್ಕೆಯಲ್ಲಿ ಎಲ್ಲರನ್ನು ವಶಪಡಿಸಿಕೊಂಡು ಕೈವಶ ಮಾಡಿಕೊಳ್ಳುತ್ತದೆ.

ಸಾಲವನು ತರುವಾಗ ಹಾಲು ಹಣ್ಣುಂಬಂತೆ
ಸಾಲಿಗನು ಬಂದು ಎಳೆದಾಗ ಕಿಬ್ಬದಿಯ
ಕೀಲು ಮುರಿದಂತೆ ಸರ್ವಜ್ಞ

ಸರ್ವಜ್ಞನ ತ್ರಿಪದಿಯಲ್ಲಿ ಸಾಲದ ಬಗ್ಗೆ ತುಂಬಾ ಸೊಗಸಾಗಿ ತಿಳಿಸಲಾಗಿದೆ. ಸಾಲವನ್ನು ತೆಗೆದುಕೊಳ್ಳುವಾಗ ಇರುವ ಸಂಭ್ರಮ–ಸಡಗರ ಅದನ್ನು ತೀರಿಸುವಾಗ ಇರುವುದಿಲ್ಲ ಎಂಬುದನ್ನು ತಿಳಿಸುವ ಸರ್ವಜ್ಞನ ಕಾಲಕಷ್ಟೇ ಅಲ್ಲ, ಎಲ್ಲ ಕಾಲಕ್ಕೂ ಅನ್ವಯವಾಗುವಂಥದ್ದು.

ಉತ್ತಮ ಜೀವನ ನಡೆಸಬೇಕೆಂಬ ಆಸೆ ಪ್ರತಿಯೊಬ್ಬರಲ್ಲೂ ಇದ್ದೇ ಇರುತ್ತದೆ. ಆದರೆ ಅಂತಹ ಬದುಕು ನಡೆಸಲು ಹಣ ಅನಿವಾರ್ಯ ಹಾಗೂ ಅಗತ್ಯ. ನಮ್ಮ ಇತಿಮಿತಿಗಳನ್ನು ಅರಿತುಕೊಂಡು ಹಣವನ್ನು ಬಳಸುವುದು ಉತ್ತಮ. ಸಾಲ ದೊರೆಯುತ್ತದೆ ಎಂದು ನಮ್ಮ ಸಾಮರ್ಥ್ಯವನ್ನು ಮೀರಿ ಮಾಡಿದರೆ ಖಂಡಿತವಾಗಿಯು ನೋವನ್ನು ಅನುಭವಿಸಬೇಕಾಗುತ್ತದೆ. ಈ ಮಾತು ಯಥಾವತ್ತಾಗಿ ವಸ್ತುಗಳನ್ನು ಸಾಲವಾಗಿ ಪಡೆದುಕೊಳ್ಳುವ ವಿಚಾರಕ್ಕೂ ಅನ್ವಯವಾಗುತ್ತದೆ.

ಸಾಲ ಮೊದ ಮೊದಲು ಸಣ್ಣದಾಗಿಯೇ ಆರಂಭವಾಗುತ್ತದೆ. ಅದನ್ನು ಸರಿಯಾಗಿ ಬಳಸದಿದ್ದಲ್ಲಿ ಮುಂದೆ ವಾಮನಂತೆ ಬೃಹದಾಕಾರವಾಗಿ ಬೆಳೆಯುತ್ತ ಸಾಗಬಲ್ಲದು. ಅತಿಯಾದರೆ ಅಮೃತವು ವಿಷ ಎಂಬ ಗಾದೆಯಂತೆ ಎಲ್ಲವೂ ಮಿತವಾಗಿದ್ದರೆ ಉತ್ತಮ. ಸಾಲವೆಂಬ ಕೂಪದಲ್ಲಿ ಮಾನವರು ಬೀಳಲು ಕಾರಣವೇನು? ಎಂದು ಆಲೋಚಿಸಿದಾಗ ತಕ್ಷಣ ಕಂಡುಬಂದ ಕಾರಣಗಳಿವು.

ಅಂಧಾನುಕರಣೆ: ಅಂಧಾನುಕರಣೆ ಎಂಬುದು ಸಾಲ ಹೆಚ್ಚಾಗಲು ಪ್ರಮುಖವಾದ, ಪ್ರಧಾನವಾದ ಕಾರಣವಾಗಿದೆ. ಮತ್ತೊಬ್ಬರನ್ನು ನೋಡಿ ಅವರಂತೆ ನಾವಾಗಬೇಕು. ಅವರ ಮನೆಯಲ್ಲಿ ಇರುವುದು ನಮ್ಮ ಮನೆಯಲ್ಲೂ ಇರಬೇಕು ಎಂಬ ಅಂಧಾನುಕರಣೆ ಸಾಲ ಹೆಚ್ಚಾಗುವುದಕ್ಕೆ ಪ್ರಮುಖವಾದ ಕಾರಣವಾಗಿದೆ. ನಮ್ಮ ಜೀವನವನ್ನು ಬೇರೆಯೊಬ್ಬರ ಜೀವನದೊಂದಿಗೆ ಹೋಲಿಕೆ ಮಾಡಿಕೊಂಡಾಗ ಈ ಅನುಕರಣೆ ಎಂಬುದು ಹುಟ್ಟುತ್ತದೆ. ಕೆಲವು ಪರಿಸ್ಥಿತಿಯಲ್ಲಿ ಅನುಕರಣೆ ಇದ್ದರೆ ಪರವಾಗಿಲ್ಲ. ಆದರೆ ಅಂಧಾನುಕರಣೆ ಎಂಬುದು ದೊಡ್ಡ ಸಮಸ್ಯೆಯಾಗಿ ಗೋಚರಿಸುತ್ತದೆ. ಏಕೆಂದರೆ ಅವರ ಜೀವನ, ನಮ್ಮ ಜೀವನ ಬೇರೆಯೇ ಆಗಿರುತ್ತದೆ. ಅದನ್ನು ಅರಿಯದೆ ಕೇವಲ ಅಂಧಾನುಕರಣೆಯಿಂದ ಅವರನ್ನೇ ಅನುಸರಿಸಲು ಹೊರಟಾಗ ಈ ಸಾಲ ಹೆಚ್ಚಾಗುತ್ತದೆ.

ಉದಾಹರಣೆಗೆ ಹೇಳುವುದಾದರೆ ಪಕ್ಕದ ಮನೆಯವರು ಅಥವಾ ಸಂಬಂಧಿಕರು ಅವರ ಮನೆಗೆ ತುಂಬಾ ಬೆಲೆಬಾಳುವ ವಸ್ತುವನ್ನು ತೆಗೆದುಕೊಂಡು ಬಂದಿದ್ದರೆ ಅದನ್ನು ನೋಡಿ, ಆ ವಸ್ತುಗಳು ನಮ್ಮ ಮನೆಯಲ್ಲಿದ್ದರೆ ಚಂದ ಅನಿಸುವುದು ಸಹಜ. ಮುಖ್ಯವಾಗಿ ಅವರ ಸ್ಥಿತಿ ನಮ್ಮ ಪರಿಸ್ಥಿತಿ ಎರಡು ವಿಭಿನ್ನವಾಗಿರುತ್ತದೆ. ನಮ್ಮ ಸ್ಥಿತಿಯನ್ನು ಪರಿಗಣಿಸದೆ ಅಂಧಾನುಕರಣೆಯಿಂದ ಆ ವಸ್ತುಗಳು ನಮಗೂ ಬೇಕು ಎಂದು ನಮ್ಮ ಇತಿಮಿತಿಯನ್ನು ಅರಿಯದೆ ಸಾಲ ಮಾಡಿದರೆ ಮುಂದೆ ಅದರಿಂದ ಪಶ್ಚಾತ್ತಾಪ ಪಡಬೇಕಾದವರು ನಾವೇ ಆಗಿರುತ್ತೇವೆ.

ಪ್ರತಿಯೊಬ್ಬರ ಬದುಕು ವಿಭಿನ್ನ. ಬೆಳೆದು ಬಂದ ದಾರಿಯು ವಿಭಿನ್ನವಾಗಿರುತ್ತದೆ. ಆದ್ದರಿಂದ ಹೋಲಿಕೆ ಮಾಡುವುದನ್ನು ಬಿಟ್ಟು ಸಾಧ್ಯವಾದಷ್ಟು ಹಾಸಿಗೆ ಇರುವಷ್ಟು ಕಾಲು ಚಾಚು ಎಂಬ ಗಾದೆಯನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಜೀವನ ಉತ್ತಮವಾಗಿರುತ್ತದೆ. ಇಲ್ಲದಿದ್ದರೆ ಸಾಲದ ಕೂಪದಲ್ಲಿ ಬಿದ್ದು ನರಳಬೇಕಾಗುತ್ತದೆ.

ಮಕ್ಕಳ ವಿದ್ಯಾಭ್ಯಾಸ: ಇತ್ತೀಚೆಗೆ ಸಾಲ ಮಾಡಲು, ಅದು ಹೆಚ್ಚಾಗಲು ಕಾರಣ ಮಕ್ಕಳ ವಿದ್ಯಾಭ್ಯಾಸ. ಆಶ್ಚರ್ಯವನ್ನುಂಟು ಮಾಡುವಂತಿದ್ದರೂ ಒಪ್ಪಲೇಬೇಕಾದ ಸತ್ಯವಿದು. ಪ್ರಸ್ತುತ ದಿನಗಳಲ್ಲಿ ಉತ್ತಮ ಶಾಲೆಯಲ್ಲಿ ಇಲ್ಲವೇ ಕಾಲೇಜಿನಲ್ಲಿ ನನ್ನ ಮಗ ಅಥವಾ ಮಗಳು ಓದಿದರೆ ಒಳ್ಳೆ ಅಂಕಗಳನ್ನು ತೆಗೆಯಬಹುದು ಎಂಬ ಆಸೆಯಿಂದ ತಮ್ಮ ಹತ್ತಿರ ಹಣವಿಲ್ಲದಿದ್ದರೂ ಸಾಲ ಮಾಡಿ ಲಕ್ಷಾಂತರ ರೂಪಾಯಿ ಶುಲ್ಕ ಭರಿಸಿ, ಖಾಸಗಿ ಶಾಲೆಗಳಿಗೆ ಅಥವಾ ಕಾಲೇಜುಗಳಿಗೆ ಸೇರಿಸುವ ಪೋಷಕರ ಸಂಖ್ಯೆ ದಿನೇ ದಿನೆ ಹೆಚ್ಚಾಗುತ್ತಿದೆ. ಇತ್ತ ಖಾಸಗಿ ಶಿಕ್ಷಣ ಸಂಸ್ಥೆಗಳು ಕೂಡ ಪ್ರವೇಶಾತಿ ಶುಲ್ಕವನ್ನು ವರ್ಷದಿಂದ ವರ್ಷಕ್ಕೆ ಹೆಚ್ಚಿಸುತ್ತಿವೆ. ಜನ ಮರಳೋ, ಜಾತ್ರೆ ಮರಳೋ! ಎಂಬ ಗಾದೆಯಂತೆ ಅಕ್ಕ–ಪಕ್ಕದವರು, ಸಂಬಂಧಿಕರು ತಮ್ಮ ಮಕ್ಕಳನ್ನು ಪ್ರತಿಷ್ಠಿತ ಶಾಲಾ–ಕಾಲೇಜಿಗೆ ಸೇರಿಸಿದರೆ ನಮ್ಮ ಮಕ್ಕಳನ್ನು ಅದೇ ಶಾಲೆಗೆ ಸೇರಿಸಲು ಹಾತೊರೆಯುತ್ತೇವೆ. ಸಿರಿವಂತರು ಅಥವಾ ಹಣಕಾಸು ಉಳ್ಳವರು ಲಕ್ಷಗಟ್ಟಲೇ ಶುಲ್ಕ ಭರಿಸಿದರೆ ಅವರಿಗೇನು ನಷ್ಟವಿಲ್ಲ. ಆದರೆ ಮಧ್ಯಮವರ್ಗದವರು ತಿಂಗಳಿಗೆ ಇಪ್ಪತ್ತರಿಂದ ಮೂವತ್ತು ಸಾವಿರ ಸಂಪಾದನೆ ಮಾಡುವವರು ಲಕ್ಷಗಟ್ಟಲೇ ಹಣಕೊಟ್ಟು ಶಾಲೆಗೆ ಸೇರಿಸಬೇಕೆಂದುಕೊಂಡರೆ ಅದಕ್ಕೆ ಒಂದಕ್ಕೆ ಎರಡರಷ್ಟು ಬಡ್ಡಿ ತೆರಬೇಕಾಗುತ್ತದೆ.

ಮುಖ್ಯವಾಗಿ ಗಮನಿಸಬೇಕಾದ ಅಂಶವೊಂದಿದೆ. ಓದುವ ಮಕ್ಕಳು ಯಾವ ಶಾಲೆ, ಕಾಲೇಜಿನಲ್ಲಿದ್ದರೂ ಓದುತ್ತಾರೆ. ಇದಕ್ಕೆ ತಾಜಾ ಉದಾಹರಣೆ ಎಂದರೆ ಇತ್ತೀಚೆಗೆ 2023– 24 ನೇ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಇಡೀ ರಾಜ್ಯಕ್ಕೆ 625 ಅಂಕಗಳಿಗೆ 625 ಅಂಕಗಳನ್ನು ಪಡೆದ ಏಕೈಕ ವಿದ್ಯಾರ್ಥಿನಿ ಓದಿದ್ದು ಸರ್ಕಾರಿ ಶಾಲೆಯಲ್ಲಿಯೇ ಎಂಬುದನ್ನು ಗಮನಿಸಬೇಕು. ಮಗುವಿನ ಸಾಮರ್ಥ್ಯವನ್ನು ತಿಳಿಯದೆ ಸುಮ್ಮನೆ ಲಕ್ಷಗಟ್ಟಲೇ ಹಣವನ್ನು ಸಾಲ ಮಾಡಿ ವ್ಯಥಾ ಖರ್ಚು ಮಾಡುವ ಮಧ್ಯಮ ವರ್ಗದ ಪೋಷಕರು ಇದನ್ನ ತಿಳಿದರೆ ಉತ್ತಮ.

ಆರಂಭದಿಂದಲೇ ಲಕ್ಷ ಲಕ್ಷ ಹಣವನ್ನು ಕೊಟ್ಟು ವಿದ್ಯಾಭ್ಯಾಸವನ್ನು ಮಾಡಿಸುತ್ತ ಹೋದರೆ ಕಥೆ ಏನಾಗಬಹುದು ಎಂಬುದನ್ನು ಯೋಚಿಸಬೇಕು. ಶ್ರೀಮಂತರಾದರೆ ಅವರಿಗೇನು ನಷ್ಟವಿಲ್ಲ. ಆದರೆ ಬಡವರಾಗಲಿ, ಮಧ್ಯಮ ವರ್ಗದವರಾಗಲಿ ಈ ಬಗ್ಗೆ ಗಮನ ಕೊಡದಿದ್ದರೆ ಖಂಡಿತವಾಗಿಯೂ ಸಾಲದ ಹೊರೆ ಬೆನ್ನತ್ತುವುದು ಖಚಿತ.

ಆಡಂಬರದ ಜೀವನ: ಬದುಕಿನ ಆರಂಭದಿಂದಲೂ ಬಡತನ ಅಥವಾ ಮಧ್ಯಮ ವರ್ಗದಲ್ಲಿ ಬಂದಂತಹ ಜನರಿಗೆ ಬದುಕನ್ನು ಮತ್ತೊಂದು ಹಂತಕ್ಕೆ ತೆಗೆದುಕೊಂಡು ಹೋಗಬೇಕೆಂಬ ಆಸೆ ಇರುವುದು ಸಹಜ. ಆ ನಿಟ್ಟಿನಲ್ಲಿ ಒಮ್ಮೊಮ್ಮೆ ತಮ್ಮ ಮಿತಿಯನ್ನು ಅರಿಯದೆ ಆಡಂಬರದ ಜೀವನಕ್ಕೆ ಅಪೇಕ್ಷೆ ಪಟ್ಟು ಸಾಲ ಮಾಡುವ ಸಾಧ್ಯತೆ ಇರುತ್ತದೆ. ನಿಜ, ಬದುಕು ಇದ್ದಂತೆ ಇರುವುದು ಯಾರಿಗೂ ಇಷ್ಟ ಇಲ್ಲ; ಸ್ವಲ್ಪವಾದರೂ ಬದಲಾವಣೆ ಆಗಬೇಕೆಂದೇ ಎಲ್ಲರೂ ಬಯಸುತ್ತಾರೆ. ಆದರೆ ಆ ಬದಲಾವಣೆಗೆ ಸಾಲ ಮಾಡಿ ಆಡಂಬರದ ಜೀವನ ನಡೆಸುವ ಅಗತ್ಯವಿಲ್ಲ.

ಉದಾಹರಣೆಗೆ ಯಾರೋ ಹಣವಂತರು ಕಾರು ಖರೀದಿ ಮಾಡಿದರು ಎಂದು ನಾವು ಅದನ್ನು ನಮಗೆ ಅದರಿಂದ ಅವಶ್ಯಕತೆ ಇದೆಯೋ ಇಲ್ಲವೋ ಎಂಬುದನ್ನು ಆಲೋಚಿಸದೆ, ಅದರಿಂದ ಬರುವ ಖರ್ಚನ್ನು ಅವಲೋಕಿಸದೆ ಕಾರು ಖರೀದಿ ಮಾಡಿದ್ದಲ್ಲಿ ಸಾಲ ಖಂಡಿತವಾಗಿಯೂ ಹೆಚ್ಚಾಗುತ್ತದೆ. ದುಡ್ಡು ಇದ್ದಾಗ ಆಡಂಬರದ ಜೀವನ ಮಾಡಬಹುದು. ಹಣವೇ ಇಲ್ಲದಿದ್ದಾಗ ಸಾಲ ಮಾಡಿ ಮತ್ತೊಬ್ಬರನ್ನು ಮೆಚ್ಚಿಸುವ ಅಗತ್ಯವಾಗಲೀ ಅನಿವಾರ್ಯತೆಯಾಗಲೀ ಇರುವುದಿಲ್ಲ. ಸದ್ಯದ ಸಮಾಜದಲ್ಲಿನ ಪರಿಸ್ಥಿತಿಯನ್ನು ಗಮನಿಸಿದರೆ ಶ್ರೀಮಂತರೆನಿಸಿಕೊಂಡವರೇ ಸರಳವಾದ ಜೀವನವನ್ನು ಸಾಗಿಸುತ್ತಾ ಇರುತ್ತಾರೆ.

ಲಕ್ಷಗಟ್ಟಲೆ ಹಣವನ್ನು ಸಾಲ ಮಾಡಿ ಮದುವೆ ಮಾಡುವ ಬದಲು ಅದೇ ಹಣವನ್ನು ಹುಡುಗ ಅಥವಾ ಹುಡುಗಿಯ ಹೆಸರಲ್ಲಿ ಬ್ಯಾಂಕಿನಲ್ಲಿ ಠೇವಣಿ ಮಾಡಿದರೆ ಮುಂದೆ ಅವರ ಬದುಕಿಗೆ ಅನಿವಾರ್ಯವಾದಾಗ ಅವರಿಗೆ ಉಪಯೋಗಕ್ಕೆ ಬರುತ್ತದೆ. ಸರಳತನ ಯಾವಾಗಲೂ ನಮ್ಮ ಕೈ ಹಿಡಿಯುತ್ತದೆ. ಆದರೆ ಎಲ್ಲರಿಗೂ ಮತ್ತೊಬ್ಬರನ್ನು ಮೆಚ್ಚಿಸಬೇಕೆಂಬ ಗುಣವೇ ಹೆಚ್ಚಾಗಿರುವಾಗ ಆಡಂಬರದ ಜೀವನಕ್ಕೆ ಅಪೇಕ್ಷೆಪಡುತ್ತಾರೆ. ಇದರಿಂದ ಸಾಲ ಹೆಚ್ಚಾಗುತ್ತದೆ.



> “ ಪ್ರತಿಯೊಬ್ಬರ ಬದುಕು ವಿಭಿನ್ನ. ಬೆಳೆದು ಬಂದ ದಾರಿಯೂ ವಿಭಿನ್ನವಾಗಿರುತ್ತದೆ ಆದ್ದರಿಂದ ಹೋಲಿಕೆ ಮಾಡುವುದನ್ನು ಬಿಟ್ಟು ಸಾಧ್ಯವಾದಷ್ಟು ಹಾಸಿಗೆ ಇರುವಷ್ಟು ಕಾಲು ಚಾಚು ಎಂಬ ಗಾದೆಯನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಜೀವನ ಉತ್ತಮವಾಗಿರುತ್ತದೆ. ಇಲ್ಲದಿದ್ದರೆ ಸಾಲದ ಕೂಪದಲ್ಲಿ ಬಿದ್ದು ನರಳಬೇಕಾಗುತ್ತದೆ.

ಹಣವನ್ನು ದುಪ್ಪಟ್ಟು ಮಾಡುವ ಕಾಯಕ: ಹಣ ಎಂದರೆ ಹೆಣವು ಬಾಯಿ ಬಿಡುತ್ತದೆ ಎಂಬ ನಾಣ್ಣುಡಿಯಂತೆ ಕೆಲವು ಬಡವರಾಗಲೀ, ಮಧ್ಯಮ ವರ್ಗದವರಾಗಲೀ, ಯಾರಾದರೂ ಸರಿ ಹಣವನ್ನು ದುಪ್ಪಟ್ಟು ಮಾಡುವ ಕಾಯಕದಲ್ಲಿ ತೊಡಗಿಕೊಳ್ಳುತ್ತಾರೆ. ಕಡಿಮೆ ಹಣವನ್ನು ಹೂಡಿಕೆ ಮಾಡಿ ಹೆಚ್ಚು ಹಣವನ್ನು ಗಳಿಸುವ ಆಮಿಷಕ್ಕೆ ಒಳಗಾಗಿ ಸಾಲವಂತರಾಗುವ ಜನರಿಗೇನು ಕಡಿಮೆ ಇಲ್ಲ.

ಕುಳಿತಲ್ಲಿಯೇ ಹಣವನ್ನು ಎರಡರಷ್ಟು ಹೆಚ್ಚು ಮಾಡಿಕೊಳ್ಳಬಹುದು ಎಂಬ ಆಸೆಯಿಂದ ರೇಸು, ಜೂಜು, ಇಸ್ಪೀಟ್ ಆಟ, ಲಾಟರಿ, ಐಪಿಎಲ್ ಎಂಬ ದುಶ್ಚಟಗಳಿಗೆ ಒಳಗಾಗಿ ಸಾಲ ಮಾಡಿಕೊಂಡು ಇರಲಾಗದೇ ಆತ್ಮಹತ್ಯೆಗೆ ಶರಣಾದ, ಮನೆ ಮಠ ಕಳೆದುಕೊಂಡವರ ಕಥೆಗಳು ದಿನೇ ದಿನೇ ಹೆಚ್ಚಾಗುತ್ತಿವೆ. ನೇರವಾದ ಮಾರ್ಗದಲ್ಲಿ ಗಳಿಸಿದ ಹಣವೇ ಉಳಿಯುವುದಿಲ್ಲ ಎಂದ ಮೇಲೆ ಅಡ್ಡ ದಾರಿಯಲ್ಲಿ ಗಳಿಸಿದ ಹಣ ಎಂದಿಗೂ ಉಳಿಯಲಾರದು ಈ ಸತ್ಯ ಗೋಚರವಾದ ದಿನ ಸಾಲ ಮಾಡುವ ಸಂಖ್ಯೆ ಕಡಿಮೆಯಾಗಬಹುದು.

ಸಾಲದ ಕಂತು ಎಂಬ ಮಾಯೆ (ಇಎಂಐ): ಮಧ್ಯಮ ವರ್ಗದವರೇ ಹೆಚ್ಚಿನ ಸಂಖ್ಯೆಯಲ್ಲಿ ಇರುವ ಭಾರತ ದೇಶದಲ್ಲಿ ಸಾಲದ ಕಂತು ಎಂಬುದು ಸರ್ವೇಸಾಮಾನ್ಯ. ಮೊಬೈಲ್‌ನಿಂದ ಹಿಡಿದು ಎಲ್ಲಾ ವಸ್ತುಗಳ ಮೇಲೂ ಯಾವುದೇ ಬಡ್ಡಿ ಇಲ್ಲದೆ ಸಾಲ ದೊರೆಯುವುದರಿಂದ ನೋಡಿದ್ದನ್ನೆಲ್ಲ ಖರೀದಿಸಬೇಕೆಂಬ ಆಸೆ ಹುಟ್ಟಿ ಸಾಲ ಹೆಚ್ಚುತ್ತಿರುವುದು ಶೋಚನೀಯ ವಿಚಾರ.

ಹೀಗೆಂದ ಮಾತ್ರಕ್ಕೆ ಏನು ನಾವು ಬಡವರು ಬಡವರಾಗಿ ಉಳಿಯಬೇಕಾ. ಮಧ್ಯಮ ವರ್ಗದವರು ಮಧ್ಯಮ ವರ್ಗದವರಾಗಿಯೇ ಉಳಿಯಬೇಕು ಎಂದಾಗಲೀ ಅಥವಾ ಬಡವರಿಗೆ, ಮಧ್ಯಮ ವರ್ಗದವರಿಗೆ ಯಾವುದೇ ಆಸೆ ಇರಬಾರದು ಎಂಬುದು ನಿಮ್ಮ ವಾದನಾ? ಎಂದು ಯಾರಾದರೂ ಪ್ರಶ್ನಿಸಿದರೆ ಖಂಡಿತವಾಗಿಯೂ ಇಲ್ಲ. ಪ್ರಸ್ತುತ ಬಹುತೇಕರ ಮನೆಗಳಲ್ಲಿ ದಂಪತಿಗಳಿಬ್ಬರು ದುಡಿಯುತ್ತಾರೆ. ದುಡಿದ ಹಣವೆಲ್ಲ ಸಾಲದ ಕಂತುಗಳಿಗೆ ಮೀಸಲಾದರೆ ದುಡಿದು ಪ್ರಯೋಜನವಾದರೂ ಏನು? ಸಾಲ ಮಾಡಿ ವಸ್ತು, ಸೈಟ್, ಆಸ್ತಿ ಮಾಡುವುದಾದರೆ ಜೀವನಪೂರ್ತಿ ಅವುಗಳನ್ನು ತೀರಿಸಲು ದುಡಿಯಲೇಬೇಕು. ಜೀವನವನ್ನು ಆನಂದದಿಂದ ಕಳೆಯುವುದು ಯಾವಾಗ? ಸಾಲವನ್ನು ತೀರಿಸಬೇಕೆಂದು ಹಗಲು ರಾತ್ರಿ ಎನ್ನದೆ ದುಡಿದು ಆರೋಗ್ಯವನ್ನು ಕೆಡಿಸಿಕೊಂಡರೆ ಆಗುವ ಪ್ರಯೋಜನವಾದರೂ ಏನು? ಈ ಪ್ರಶ್ನೆಗಳಿಗೆ ಸಮರ್ಪಕವಾದ ಉತ್ತರ ನಿಮ್ಮಲ್ಲಿದ್ದರೆ ಖಂಡಿತವಾಗಿಯೂ ಸಾಲ ಬ್ರೇಕ್‌ಹಾಕಬಹುದು. ಒಂದು ವೇಳೆ ಉತ್ತರ ಇಲ್ಲ ಎಂಬ ಪಕ್ಷದಲ್ಲಿ ಇರುವುದರಲ್ಲಿಯೇ ಉತ್ತಮ ರೀತಿಯಲ್ಲಿ ಜೀವನವನ್ನು ನಿರ್ವಹಣೆ ಮಾಡಬಹುದು.

ಈ ಮೇಲೆ ತಿಳಿಸಿದ ಕಾರಣಗಳಲ್ಲದೆ ಸರಿಯಾದ ಮುಂದಾಲೋಚನೆ ಇಲ್ಲದೆ ಸಾಲ ಮಾಡುವುದು, ಕಡಿಮೆ ವೇತನದಿಂದ ಜೀವನ ನಿರ್ವಹಿಸಲು ಸಾಲ ಮಾಡುವುದು ಹೀಗೆ ಇತರೆ ಕಾರಣಗಳಿಂದ ಸಾಲ ಹೆಚ್ಚಾಗುತ್ತದೆ. ನಾಲ್ಕು ವರ್ಷದ ಹಿಂದೆ ಕೊರೊನಾ ಎಂಬ ವೈರಸ್ ಬಂದಾಗ ಅದು ತೊಂದರೆಯ ಜೊತೆಗೆ ಸರಳವಾದ ರೀತಿಯಲ್ಲೂ ಜೀವನ ನಡೆಸಬಹುದು ಎಂಬುದನ್ನು ತೋರಿಸಿಕೊಟ್ಟಿದೆ. ಸಾಲ ಮಾಡಿ ನೆಮ್ಮದಿಯನ್ನು ಕೆಡಿಸಿಕೊಂಡು ಬದುಕುವುದಕ್ಕಿಂತ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು, ನಮ್ಮ ಸಾಮರ್ಥ್ಯವನ್ನು ತಿಳಿದುಕೊಂಡು ಉತ್ತಮ ರೀತಿಯಲ್ಲಿ ಬದುಕನ್ನು ನಡೆಸಲು ಸಾಧ್ಯವಿದೆ, ಮನಸ್ಸು ಮಾಡಬೇಕಷ್ಟೇ.

ಸಾಲದ ಗತ್ತೇ ಗಮ್ಮತ್ತು ಅಳತೆ ಮೀರಿ ಕೈಯೊಡ್ಡಿದರೆ ಆವರಿಸುವುದು ಆಪತ್ತು. ಈ ಮೇಲೆ ಕಾಣಿಸಿರುವ ವಿಚಾರಗಳು ಸಾಲಕ್ಕೆ ಕೈಯೊಡ್ಡಬಾರದು, ಹಾಸಿಗೆ ಇದ್ದಷ್ಟು ಕಾಲುಚಾಚಿ, ಇದ್ದುದರಲ್ಲಿಯೇ ನೆಮ್ಮದಿಯ ಬದುಕನ್ನು ನಮ್ಮದಾಗಿಸಿಕೊಳ್ಳಬೇಕು ಎಂದು ಸಲಹೆ. ಸಾಲವಿಲ್ಲದೆ ಬದುಕಲು ಸಾಧ್ಯವೇ ಇಲ್ಲ, ಸಾಲ ತ್ರಿಶೂಲಕ್ಕಿಂತ ಶೂಲಕ್ಕಿಂತ ಹೆಚ್ಚಿನ ನೋವನ್ನು ದಯಪಾಲಿಸುತ್ತದೆ ಎಂದು ತಿಳಿದಿದ್ದರೂ ಕೆಲವೊಮ್ಮೆ ಸಾಲ ಅನಿವಾರ್ಯವಾಗುತ್ತದೆ ಅಂತಹ ಸಂದರ್ಭದಲ್ಲಿ ನನ್ನದೊಂದು ಸಲಹೆ ಎಂದರೆ ಮರಳಿ ವಾಪಸು ಕೊಡುವಷ್ಟು, ತೀರಿಸಲು ಸಾಧ್ಯವಾಗುವಷ್ಟು ಸಾಲ ಮಾಡಿ ಸಾಲದ ಹೊರೆಯಿಂದ ಮುಕ್ತನಾದರೆ ನೆಮ್ಮದಿಯ ಬದುಕು ನಮ್ಮದಾಗುವುದರಲ್ಲಿ ಅನುಮಾನವಿಲ್ಲ.

ವಿದ್ಯಾರ್ಥಿಗಳು ಕಾಲಕ್ಕನುಗುಣವಾಗಿ ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು

ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಸಲಹೆ

ಮೈಸೂರು, ನ.20(ಎಂಟಿವೈ)–ಕಾಲಕ್ಕೆ ಅನುಗುಣವಾಗಿ ಉನ್ನತೀಕರಣಗೊಂಡ ಜ್ಞಾನ ಮತ್ತು ತಂತ್ರಜ್ಞಾನವನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳುವ ಮೂಲಕ ಸಾಧನೆ ಮಾಡುವತ್ತ ಗಮನಹರಿಸಬೇಕು ಎಂದು ಮೈಸೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಸಲಹೆ ನೀಡಿದ್ದಾರೆ.

ಮೈಸೂರು ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ವತಿಯಿಂದ ಆಯೋಜಿಸಿದ್ದ ಮೆಟಿರಿಯಲ್ 'ಸೈನ್ಸ್ ಮತ್ತು ಟೆಕ್ನಾಲಜಿ' ಕುರಿತು ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಇಂದಿನ ತಂತ್ರಜ್ಞಾನದ ಜಗತ್ತಿನಲ್ಲಿ ಮಾಹಿತಿ ಮತ್ತು ತಂತ್ರಜ್ಞಾನ ಬಳಕೆ ಹೆಚ್ಚಾಗಿದೆ. ಈ ಹಿಂದೆ ಜ್ಞಾನ ಇದ್ದರೆ ಸಾಕು ಎನ್ನುತ್ತಿದ್ದರು. ಆ ನಂತರ ಭಾವನಾತ್ಮಕ ಜ್ಞಾನಕ್ಕೆ ಬೇಡಿಕೆ ವ್ಯಕ್ತವಾಯಿತು. ಇದೀಗ ಕೃತಕಬುದ್ಧಿಮತ್ತೆಯ ಜ್ಞಾನ ಬಳಕೆಯಾಗುತ್ತಿದೆ. ಇದನ್ನು ಆಧರಿಸಿ ಜ್ಞಾನ, ಚಿಂತನೆ ಬೆಳೆಯುತ್ತಿದೆ. ವಿವಿಧ ಕೆಲಸಗಳಿಗೆ ಎಐ ತಾಂತ್ರಿಕತೆಯನ್ನು ಹೆಚ್ಚಿನ ಪ್ರಮಾಣದಲ್ಲಿ ಬಳಸಿಕೊಳ್ಳಲಾಗುತ್ತಿದೆ. ಇದಕ್ಕೆ ಯುವ ಜನರು ಸಜ್ಜಾಗಬೇಕು. ಸಾಂಪ್ರದಾಯಿಕ ಕೆಲಸಗಳು ಪ್ರಮಾಣ ಕ್ರಮೇಣ ಕಡಿಮೆಯಾಗಿ ಕೌಶಲಾಧರಿತ ಉದ್ಯೋಗಗಳು ಹೆಚ್ಚಾಗಲಿದ್ದು, ಭವಿಷ್ಯದ ತಂತ್ರಜ್ಞಾನವಾದ ಕೃತಕ ಬುದ್ಧಿಮತ್ತೆ(ಎಐ) ಬಳಕೆಯ ಕುಶಲತೆಯನ್ನು ಯುವ ಜನರು ಕರಗತ ಮಾಡಿಕೊಳ್ಳಬೇಕು ಎಂದರು.



ಮೈಸೂರು ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ವತಿಯಿಂದ ಆಯೋಜಿಸಿದ್ದ ಮೆಟಿರಿಯಲ್ 'ಸೈನ್ಸ್ ಮತ್ತು ಟೆಕ್ನಾಲಜಿ' ಕುರಿತ ರಾಷ್ಟ್ರೀಯ ವಿಚಾರ ಸಂಕಿರಣವನ್ನು ವಿಧಾನಪರಿಷತ್ ಸದಸ್ಯ ವಿವೇಕಾನಂದ ಉದ್ಘಾಟಿಸಿದರು. ಮೈಸೂರು ವಿವಿ ಕುಲಪತಿ ಪ್ರೊ.ಲೋಕನಾಥ್ ಇನ್ನಿತರರಿದ್ದಾರೆ.

ಎಐಯಿಂದ ಉದ್ಯೋಗ ಕಡಿತವಾಗಲ್ಲ. ಬದಲಿಗೆ ಇನ್ನಷ್ಟು ಉದ್ಯೋಗ ಸೃಷ್ಟಿಯಾಗಲಿದೆ. ಈ ಹಿಂದೆ ಬಳಕೆಗೆ ಬಂದ ಕಂಪ್ಯೂಟರ್ ವಿರುದ್ಧ ಆತಂಕ ಸೃಷ್ಟಿಯಾಗಿ ಉದ್ಯೋಗ ಕಳೆದುಕೊಳ್ಳುವ ಭೀತಿಯಿಂದ ಪ್ರತಿಭಟನೆ ಮಾಡಲಾಗಿತ್ತು. ಆದರೆ, ಹಾಗೆ ಆಗಲಿಲ್ಲ. ಬದಲಿಗೆ ಹೊಸ ಉದ್ಯೋಗಗಳು ಸೃಷ್ಟಿಯಾದವು. ಈಗಲೂ ಹಾಗೇ ಎಐ ತಂತ್ರಜ್ಞಾನದಿಂದ ಹೊಸ ಉದ್ಯೋಗಾವಕಾಶಗಳು ತೆರೆದುಕೊಳ್ಳಲಿವೆ ಎಂದು ಹೇಳಿದರು.

ಜಪಾನ್, ಅಮೆರಿಕಾದಲ್ಲಿ ಕೌಶಲಾಭಿವೃದ್ಧಿ ಪ್ರಮಾಣ ಶೇ.92ರಷ್ಟಿದೆ. ಹೀಗಾಗಿ, ಅಲ್ಲಿ ಉನ್ನತ ಶಿಕ್ಷಣ ಪಡೆದ ಬಹುತೇಕರಿಗೆ ಉದ್ಯೋಗ ದೊರೆಯುತ್ತಿದೆ. ಆದರೆ, ಭಾರತದಲ್ಲಿ ಇದಕ್ಕೆ ವಿರುದ್ಧವಾದ ಪರಿಸ್ಥಿತಿ ಇದೆ. ದೇಶದಲ್ಲಿ ಕೌಶಲವುಳ್ಳವರ ಸಂಖ್ಯೆ ಕೇವಲ ಶೇ.12ರಷ್ಟಿದೆ. ಇದರಿಂದಾಗಿ ಉನ್ನತ ಶಿಕ್ಷಣ ಪಡೆದ ಎಲ್ಲರಿಗೂ ನಮ್ಮಲ್ಲಿ ಉದ್ಯೋಗ ಸಿಗುತ್ತಿಲ್ಲ. ಇದು ನಿರುದ್ಯೋಗ ಸಮಸ್ಯೆಗೆ ಕಾರಣವಾಗುತ್ತಿದೆ. ಕೌಶಲಾಧಾರಿತ ಶಿಕ್ಷಣ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡುವುದು ಈ ಸಮಸ್ಯೆಗೆ ಪರಿಹಾರವಾಗಿದೆ ಎಂದು ಹೇಳಿದರು.

ಭಾರತದಲ್ಲಿ ವರ್ಷಕ್ಕೆ 3 ಕೋಟಿಯಷ್ಟು ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ಪದವೀಧರರಾಗಿ ಹೊರಬರುತ್ತಿದ್ದಾರೆ. ಅದರಲ್ಲಿ ಶೇ.20ರಷ್ಟು ಜನರಿಗೆ ಮಾತ್ರ ಕೆಲಸ ದೊರೆಯುತ್ತಿದೆ. ದೇಶಕ್ಕೆ ಮಾನವ ಸಂಪನ್ಮೂಲವೇ ದೊಡ್ಡ ಶಕ್ತಿ. ಹೀಗಾಗಿ, ಯುವ ಜನರು ಜವಾಬ್ದಾರಿಯನ್ನೂ ತೆಗೆದುಕೊಳ್ಳಬೇಕು. ಅವಕಾಶಗಳು ಹುಡುಕಿಕೊಂಡು ಬರುವುದಿಲ್ಲ. ಅದನ್ನು ಹುಡುಕಿಕೊಂಡು ನಾವುಗಳು ಹೋಗಬೇಕು. ಕೌಶಲ ಕಲಿಕೆಗೆ ಒತ್ತು ನೀಡಿ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಲು ಮುಂದಾಗಬೇಕು. ಶಿಕ್ಷಣ ಉದ್ಯೋಗಕ್ಕಾಗಿ ಅಲ್ಲ. ಅದು ಜ್ಞಾನ ಸಂಪಾದನೆ. ಜ್ಞಾನವಿಲ್ಲದೆ ಉದ್ಯೋಗ ದೊರೆಯಲ್ಲ. ಪದವಿ ಪ್ರಮಾಣಪತ್ರವಿದ್ದರೂ ಕೌಶಲ್ಯವಿಲ್ಲದಿದ್ದರೆ ಅಪ್ರಸ್ತುತವಾಗಬೇಕಾಗುತ್ತದೆ. ಆದ್ದರಿಂದ ಶಿಕ್ಷಣದೊಂದಿಗೆ ತಂತ್ರಜ್ಞಾನ ಕಲಿಕೆ, ಕೌಶಲವನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಕೆ.ಹರೀಶ್ ಗೌಡ, ವಿಧಾನಪರಿಷತ್ ಸದಸ್ಯ ವಿವೇಕಾನಂದ, ಥೈವಾನ್ ರಾಷ್ಟ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ವೀ ಸಾಂಗ್ ಹುಂಗ್, ಪ್ರಾಂಶುಪಾಲ ಪ್ರೊ.ಅಬ್ದುಲ್ ರಹೆಮಾನ್, ಪ್ರಾಧ್ಯಾಪಕರಾದ ಡಾ.ವಿ. ನಂದಕುಮಾರ್, ಡಾ.ಡಿ.ಕೆ.ರವಿಶಂಕರ್ ಇನ್ನಿತರರು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ ಗುರುವಾರ 21 ನವೆಂಬರ್ 2024

ಅಲ್ಪಸಂಖ್ಯಾತ ಸಮುದಾಯದ ಮಕ್ಕಳ ಏಳ್ಗೆಗೆ ವಿಶೇಷ ಕಾರ್ಯಕ್ರಮ ರೂಪಿಸಿ

● ಹಿರಿಯ ಶಾಸಕ ತನ್ವೀರ್ ಸೇಠ್ ಒತ್ತಾಯ ● ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯಕ್ರಮದಲ್ಲಿ ಮುಸ್ಲಿಂ ಸಮುದಾಯವನ್ನ ಕೇಂದ್ರ ಕಡೆಗಣಿಸುತ್ತಿರುವುದಕ್ಕೆ ವಿಷಾದ ● ನಮ್ಮ ಸಮುದಾಯದ ಮಕ್ಕಳು ಐಎಎಸ್, ಕೆಎಎಸ್ ಮಾಡಲು ಅವಕಾಶ ಮಾಡಿಕೊಡುವಂತೆ ಆಗ್ರಹ

ಮೈಸೂರು,ನ.20(ಎಂಟಿವೈ)– ಕೇಂದ್ರ ಸರ್ಕಾರ ಅಲ್ಪಸಂಖ್ಯಾತ ಸಮುದಾಯವನ್ನು ಕಡೆಗಣಿಸುತ್ತಿರುವುದರಿಂದ ರಾಜ್ಯ ಸರ್ಕಾರ ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮುಸ್ಲಿಂ ಸಮುದಾಯಕ್ಕೆ ವಿಶೇಷ ಯೋಜನೆಗಳನ್ನು ಜಾರಿಗೊಳಿಸಬೇಕು ಎಂದು ಶಾಸಕ ತನ್ವೀರ್ ಸೇಠ್ ಒತ್ತಾಯಿಸಿದ್ದಾರೆ.

ಮೈಸೂರಿನ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ 'ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ'ದ ಮೈಸೂರು ಜಿಲ್ಲಾ ಘಟಕದ ವತಿಯಿಂದ ಭಾರತ ರತ್ನ ಮೌಲಾನಾ ಅಬ್ದುಲ್ ಕಲಾಂ ಆಜಾದ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಹಾಗೂ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಹಿಂದೆ ಅಲ್ಪಸಂಖ್ಯಾತ ಸಮುದಾಯದ 15 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿತ್ತು. ಆದರೆ, ಕೆಲ ವರ್ಷಗಳಿಂದ ಕೇಂದ್ರ ಸರ್ಕಾರ ಅಲ್ಪಸಂಖ್ಯಾತ ಸಮುದಾಯವನ್ನು ಗುರಿಯಾಗಿಸಿಕೊಂಡು ಸೌಲಭ್ಯ ನೀಡದೇ ನಿರ್ಲಕ್ಷಿಸುತ್ತಿದೆ. ಈ ಕಾರಣದಿಂದ ಸಮುದಾಯದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತ ಸಮುದಾಯಕ್ಕೆ ವಿಶೇಷ ಕಾರ್ಯಕ್ರಮ ರೂಪಿಸಿದರೆ, ನಮ್ಮ ಸಮುದಾಯದ ವಿದ್ಯಾರ್ಥಿಗಳು ಐಎಎಸ್, ಕೆಎಎಸ್‌ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ತೇರ್ಗಡೆಯಾಗಲು ಸಹಕಾರಿಯಾಗುತ್ತದೆ. ಕೇಂದ್ರ ಸರ್ಕಾರ ತನ್ನ ಜವಾಬ್ದಾರಿ ಮರೆತು ಅಲ್ಪಸಂಖ್ಯಾತರಿಗೆ, ದಲಿತರಿಗೆ, ಹಿಂದುಳಿದ ವರ್ಗಗಳಿಗೆ ನೀಡುತ್ತಿದ್ದ ಮೀಸಲಾತಿಯನ್ನು ಸ್ಥಗಿತಗೊಳಿಸಿದೆ. ರಾಜ್ಯ ಸರ್ಕಾರ ವಿದ್ಯಾರ್ಥಿವೇತನವನ್ನು ಕಲ್ಪಿಸಬೇಕು ಎಂದು ಮನವಿ ಮಾಡಿದರು.



ರಾಜ್ಯದಲ್ಲಿರುವ ಮುಸ್ಲಿಂರು ಕನ್ನಡ ಭಾಷೆ ಕಲಿಯಬೇಕು. ಕನ್ನಡ ಕಲಿಯುವುದರಿಂದ ಮುಸ್ಲಿಂ ಸಮುದಾಯಕ್ಕೆ ಯಾವುದೇ ಅಪಾಯವಿಲ್ಲ. ಇದು ನಮ್ಮ ನಾಡಿನ ಭಾಷೆ. ಈ ಭಾಷೆಗೆ ಹೆಚ್ಚಿನ ಮಹತ್ವ ಕೊಟ್ಟು ಓದಲು, ಬರೆಯಲು, ವ್ಯವಹರಿಸಲು ಕಲಿತರೆ ಮಾತ್ರ ಆಡಳಿತ ನಡೆಸಲು ಸಾಧ್ಯ. ಉರ್ದು ಭಾಷೆ ಸಮುದಾಯದ ಜೀವನದ ಅಂಗ ಆಗಬಾರದು. ಉರ್ದು ಅನ್ನು ಭಾಷೆಯಾಗಿ ಕಲಿಯಬೇಕು ಎಂಬುದನ್ನು ಸಮುದಾಯ ಅರ್ಥ ಮಾಡಿಕೊಳ್ಳಬೇಕು. ಶಾಲೆ ಮತ್ತು ಮಾಧ್ಯಮ ಆಯ್ಕೆ ಮಾಡುವ ಜವಾಬ್ದಾರಿ ಪಾಲಕರಿಗೆ ಬಿಟ್ಟಿದ್ದು. ಇದನ್ನು ಸರ್ವೋಚ್ಛ ನ್ಯಾಯಾಲಯ ಎತ್ತಿ ಹಿಡಿದಿದೆ ಎಂದರು.

ಮುಸ್ಲಿಂ ಸಮುದಾಯವೂ ಆರ್ಥಿಕವಾಗಿ ಹಿಂದುಳಿಯಲು ಚಿಕ್ಕ ವಯಸ್ಸಿನಲ್ಲೇ ಮಕ್ಕಳು ದುಡಿಮೆ ಮಾಡುವ ದುಸ್ಥಿತಿ ಎದುರಾಗಿದೆ. ಮಕ್ಕಳನ್ನು ಕೆಲಸಕ್ಕೆ ಹೋಗದಂತೆ ತಡೆಗಟ್ಟಲು ಹೋದರೆ, ಅವರ ಮನೆ ಪರಿಸ್ಥಿತಿ ನೋಡಿದರೆ ನೋವಾಗುತ್ತದೆ. ಸಮುದಾಯದ ಸಾಮಾಜಿಕ ಬದುಕಿನ ಅಧ್ಯಯನ ವರದಿಗಳು ಈಗಾಗಲೇ ಸರ್ಕಾರದ ವಶದಲ್ಲಿವೆ. ಇದನ್ನು ಆಧರಿಸಿ ಯೋಜನೆಯನ್ನು ರೂಪಿಸಬೇಕು. ಸಮುದಾಯದ ಶೇ.50ರಷ್ಟು ಭಾಗ ಗ್ರಾಮೀಣ ಪ್ರದೇಶದಲ್ಲಿ ವಾಸವಿದೆ. ಇದರಲ್ಲಿ ಶೇ.3ಕ್ಕಿಂತಲೂ ಕಡಿಮೆ ಪ್ರಮಾಣದಲ್ಲಿ ಕೃಷಿ ಭೂಮಿ ಹೊಂದಿದೆ. ಕೃಷಿ ಕ್ಷೇತ್ರದಲ್ಲಿ ಸರ್ಕಾರ ನೀಡುತ್ತಿರುವ ಸೌಲಭ್ಯದಿಂದ ಮುಸ್ಲಿಂ ಸಮುದಾಯ ವಂಚಿತವಾಗಿದೆ. ಹೀಗಾಗಿ ಸಮುದಾಯದ ಕೃಷಿಕರಿಗೆ ಟ್ರ್ಯಾಕ್ಟರ್, ಟಿಲ್ಲರ್ ಇತರೆ ಕೃಷಿ ಯಂತ್ರಗಳನ್ನು ಒದಗಿಸುವ ಮೂಲಕ ಕೃಷಿ ಕ್ಷೇತ್ರದಲ್ಲಿ ದುಡಿಯುವ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಹಿಂದುಳಿದ ಮುಸ್ಲಿಂ ಸಮುದಾಯಕ್ಕೆ ಮೀಸಲಾತಿ ಕಲ್ಪಿಸಲು ಕಾಂಗ್ರೆಸ್ ಸರ್ಕಾರ ಬದ್ಧ

● ಮೈಸೂರು ಉಸ್ತುವಾರಿ ಹಾಗೂ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ
● ಸಂವಿಧಾನದಲ್ಲಿ ಅವಕಾಶ ಇಲ್ಲದಿದ್ದರೂ ಅನ್ಯ ಮಾರ್ಗದಲ್ಲಿ ಅವಕಾಶ ಕಲ್ಪಿಸುವ ಅನಿವಾರ್ಯತೆ
● ಡಾ.ಅಂಬೇಡ್ಕರ್ ದೇಶ ಹಿಂದೂ ರಾಷ್ಟ್ರವಾಗುವುದು ಅಪಾಯ ಎಂದಿದ್ದರು: ಡಾ.ಯತೀಂದ್ರ



ಮೈಸೂರಿನ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ 'ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ'ದ ಮೈಸೂರು ಜಿಲ್ಲಾ ಘಟಕದ ವತಿಯಿಂದ ಭಾರತ ರತ್ನ ಮೌಲಾನಾ ಅಬ್ದುಲ್ ಕಲಾಂ ಆಜಾದ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಹಾಗೂ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮವನ್ನು ಶಾಸಕ ತನ್ವೀರ್ ಸೇಠ್ ಉದ್ಘಾಟಿಸಿದರು. ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ಕೆ.ಹರೀಶ್‌ಗೌಡ, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು,ನ.20(ಎಂಟಿವೈ)– ಶೈಕ್ಷಣಿಕ ಸೇರಿದಂತೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಹಿಂದುಳಿದಿರುವ ಮುಸ್ಲಿಂ ಸಮುದಾಯದ ಏಳಿಗೆಗೆ ಅಗತ್ಯವಿರುವ ಮೀಸಲಾತಿ ಸೌಲಭ್ಯ ಕಲ್ಪಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಭರವಸೆ ನೀಡಿದ್ದಾರೆ.

ಮೈಸೂರಿನ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದಲಿತ ಸಮುದಾಯಕ್ಕಿಂತಲೂ ಮುಸ್ಲಿಂ ಸಮುದಾಯ ಹಿಂದುಳಿದಿದೆ. ಈ ಹಿನ್ನೆಲೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ಅಗತ್ಯವಾಗಿದ್ದು, ಇದಕ್ಕೆ ಸಂವಿಧಾನದಲ್ಲಿ ಅವಕಾಶ ಕಲ್ಪಿಸಲಾಗಿದೆ. ಮುಸ್ಲಿಮರಿಗೆ ಮೀಸಲಾತಿ ನೀಡಲು ನಮ್ಮ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಲಿದೆ ಎಂದು ತಿಳಿಸಿದರು.

ಧರ್ಮದ ಹೆಸರಿನಲ್ಲಿ ಮೀಸಲಾತಿಗೆ ಅವಕಾಶ ಇಲ್ಲ. ಆದರೂ ಇಡಬ್ಲ್ಯೂಎಸ್‌ಗೆ ಶೇ.10ರಷ್ಟು ಮೀಸಲಾತಿ ನೀಡಲಾಗಿದೆ. ಇದಕ್ಕೆ ಸಂವಿಧಾನದಲ್ಲಿ ಅವಕಾಶ ಇಲ್ಲ. ಹಿಂದುಳಿದ ಸಮುದಾಯವಾದ ಮುಸ್ಲಿಮರಿಗೆ ಏಕೆ ಮೀಸಲಾತಿ ನೀಡಬಾರದು ಎಂದು ಪ್ರಶ್ನಿಸಿದರಲ್ಲದೆ, ಭಾರತದಲ್ಲಿ ಎಲ್ಲರೂ ಸಮಾನರು, ಸಂವಿಧಾನದ ಪೀಠಿಕೆಯಲ್ಲೇ ಇದು ಅಡಕವಾಗಿದೆ. ಆದರೆ ಕೆಲವರು ಮುಸ್ಲಿಂ ಸಮುದಾಯವನ್ನು ಬೇರ್ಪಡಿಸಲು ಧರ್ಮವನ್ನು ಮುಂದೆ ತರುತ್ತಿದ್ದಾರೆ ಎಂದು ವಿಷಾದಿಸಿದರು.

ಯಾವ ಧರ್ಮವೂ ಅಧರ್ಮ ಬೋಧಿಸುವುದಿಲ್ಲ, ಆದರೆ ಕೆಲವರು ಧರ್ಮದ ಹೆಸರಿನಲ್ಲಿ ಸವಾರಿ ಮಾಡಲು ಹೊರಟಿದ್ದಾರೆ. ಇದಕ್ಕೆ ಸಂವಿಧಾನ ಅವಕಾಶ ನೀಡುವುದಿಲ್ಲ. ಹಿಂದಿನ ಯುಪಿಎ ಸರ್ಕಾರ ಮುಸ್ಲಿಮರ ಸ್ಥಿತಿಗತಿ ತಿಳಿಯಲು ಸಾಚಾರ್ ಕಮಿಟಿ ರಚಿಸಿ ವರದಿ ತರಿಸಿಕೊಂಡಿದೆ. ಆ ವರದಿಯಲ್ಲಿ ಶೇ.75ರಷ್ಟು ಮುಸ್ಲಿಂ ಸಮುದಾಯ ಎಸ್‌ಎಸ್‌ಎಲ್‌ಸಿವರೆಗೂ ಓದಿಲ್ಲ ಎಂದು ಹೇಳಿದೆ. ಯಾವುದೇ ಸಮುದಾಯ ಮುಂದೆ ಬರಬೇಕು ಎಂದರೆ ರಾಜಕೀಯ ಶಕ್ತಿಯಷ್ಟೇ ಸಾಲದು, ಆರ್ಥಿಕ ಶಕ್ತಿಯೂ ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ಧರಾಮಯ್ಯ ಮಾತನಾಡಿ, ಈ ಹಿಂದೆಯೇ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ದೇಶ ಹಿಂದೂ ರಾಷ್ಟ್ರವಾಗುವುದು ಅಪಾಯಕಾರಿ ಎಂದಿದ್ದರು. ಈ ಹಿನ್ನೆಲೆಯಲ್ಲಿ ಭಾರತ ಸರ್ವಧರ್ಮಗಳನ್ನು ಒಳಗೊಂಡಿರುವ ಸೌಹಾರ್ದ ರಾಷ್ಟ್ರವಾಗಬೇಕು. ಕೋಮು ಸೌಹಾರ್ದತೆ ನೆಲೆಸಬೇಕು. ಎಲ್ಲರನ್ನೂ ಸಮಾನತೆಯಿಂದ ಕಾಣುವ ರಾಷ್ಟ್ರವಾಗಿ ಕಾಪಾಡಿಕೊಳ್ಳುವ ಜವಾಬ್ದಾರಿ ಎಲ್ಲರದ್ದಾಗಿದೆ. ಅಲ್ಪಸಂಖ್ಯಾತರ ಅಭಿವೃದ್ಧಿಗೆ ನಮ್ಮ ಧ್ಯೇಯ ಸಂವಿಧಾನಾತ್ಮಕವಾಗಿ ನಿಮಗೆ ಏನು ದೊರಕಬೇಕೋ ಅದನ್ನು ಈಡೇರಿಸುತ್ತೇವೆ. ನಿಮ್ಮ 6 ಬೇಡಿಕೆಗಳನ್ನು ಸರ್ಕಾರದ ಮುಂದೆ ಇಟ್ಟಿದ್ದೀರಿ. ಅದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಹಂತ ಹಂತವಾಗಿ ಬಗೆಹರಿಸುವ ಕೆಲಸ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕ ಕೆ.ಹರೀಶ್‌ಗೌಡ, ಸಂಘದ ಅಧ್ಯಕ್ಷ ಮೊಹಮ್ಮದ್ ಸಲೀಂ ಹಂಚಿನಮನಿ, ವಾಣಿಜ್ಯ ತೆರಿಗೆ ಇಲಾಖೆ ಹೆಚ್ಚುವರಿ ಆಯುಕ್ತ ಮಿರ್ಜಾ ಅಜ್ಮತುಲ್ಲಾಹ್, ಲೇಖಕ ಪ್ರೊ.ಎಸ್.ಮಸೂದ್ ಸಿರಾಜ್, ಸಹಾಯಕ ಪ್ರಾಧ್ಯಾಪಕ ಹಕೀಮ್ ತೀರ್ಥಹಳ್ಳಿ, ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಶರೀಫ್, ಸಾಮಾಜಿಕ ಕಾರ್ಯಕರ್ತೆ ನಜ್ಮಾ ನಜೀರ್ ಚಿಕ್ಕನೇರಳೆ, ಸಂಘದ ಅಫ್ಸರ್ ಪಾಶಾ, ಸೈಯದ್ ಮುದಾಸ್ಸಿರ್, ರೆಹಮಾನ್ ಷರೀಫ್, ಸೈಯದ್ ನಾಸೀರ್ ಅಹಮದ್, ಅಜೀಜ್ ಖಾನ್ ಹಾಜರಿದ್ದರು.

ತೆರಿಗೆ ಕಟ್ಟುವವರಿಗೆ ಗೃಹಲಕ್ಷ್ಮಿ ಹಣ ಸಿಗಲ್ಲ



ಲಕ್ಷ್ಮಿ ಹೆಬ್ಬಾಳ್ಕರ್

ಬೆಳಗಾವಿ, ನ.20–ಎಪಿಎಲ್ ಮತ್ತು ಬಿಪಿಎಲ್ ಪಡಿತರ ಚೀಟಿ ಹೊಂದಿದವರಲ್ಲಿ ಯಾರು ಆದಾಯ ತೆರಿಗೆ ಕಟ್ಟುವುದಿಲ್ಲವೋ, ಅಂಥವರಿಗೆ ಗೃಹಲಕ್ಷ್ಮಿ ಯೋಜನೆ ಹಣ ಬರುತ್ತದೆ. ತೆರಿಗೆ ಕಟ್ಟುವವರಿಗೆ ಮಾತ್ರ ಬರುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ಬಿಪಿಎಲ್ ಕಾರ್ಡ್ ರದ್ದುಗೊಳಿಸುತ್ತಿರುವ ವಿಚಾರವಾಗಿ, ಇಲ್ಲಿ ಬುಧವಾರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ 80 ಸಾವಿರ ಬಿಪಿಎಲ್ ಪಡಿತರ ಚೀಟಿ ರದ್ದುಪಡಿಸುವ ಬದಲಿಗೆ, ಎಪಿಎಲ್ ಚೀಟಿಗಳೆಂದು ವರ್ಗಾಯಿಸಲಾಗಿದೆ. ಈ ವರ್ಗಾವಣೆಯಿಂದ ಯಾವುದೇ ಗೊಂದಲ ಇಲ್ಲ. ಎಪಿಎಲ್, ಬಿಪಿಎಲ್ ಪಡಿತರ ಚೀಟಿ ಹೊಂದಿದ ಇಬ್ಬರಿಗೂ ಗೃಹಲಕ್ಷ್ಮಿ ಹಣ ಬರುತ್ತದೆ ಎಂದು ಸ್ಪಷ್ಟಪಡಿಸಿದರು. ಕಾಂಗ್ರೆಸ್ ಶಾಸಕರನ್ನು ಖರೀದಿಸಲು ಬಿಜೆಪಿ ಯತ್ನಿಸುತ್ತಿದೆ ಎಂಬ ಕಾಂಗ್ರೆಸ್ ಶಾಸಕ ರವಿಕುಮಾರ್ ಗಣಿಗ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಇಡೀ ದೇಶದಲ್ಲಿ ಇಂಥ ವ್ಯವಹಾರ ನಡೆಯುತ್ತಿದೆ. ಬಿಜೆಪಿಯವರು ನಿರಂತರವಾಗಿ ಹೀಗೆ ಪ್ರಯತ್ನಿಸುತ್ತಿದ್ದಾರೆ. ಆದರೆ, ನಾವು ಗಟ್ಟಿಯಾಗಿದ್ದೇವೆ. ಸುಭದ್ರವಾಗಿರುವ ಸರ್ಕಾರವನ್ನು ಏನೂ ಮಾಡಲಾಗದು ಎಂದು ತಿರುಗೇಟು ಕೊಟ್ಟರು. ಸಚಿವ ಸಂಪುಟದಲ್ಲಿ ಖಾತೆ ಬದಲಾವಣೆ ವಿಷಯ ನನ್ನ ಗಮನಕ್ಕೆ ಬಂದಿಲ್ಲ. ಖಾತೆ ಬದಲಾವಣೆ ಬಗ್ಗೆ ಚರ್ಚೆಯೂ ಆಗಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಮಹಾರಾಜ ಕಾಲೇಜಿನ ಸೆಮಿಸ್ಟರ್ ಪರೀಕ್ಷೆ ಮುಂದೂಡಿಕೆಗೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ



ಮೈಸೂರು ವಿವಿಯ ಕ್ರಾಫರ್ಡ್ ಭವನದ ಮುಂಭಾಗ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ನೇತೃತ್ವದಲ್ಲಿ ಸೆಮಿಸ್ಟರ್ ಪರೀಕ್ಷೆಗಳನ್ನು ಮುಂದೂಡಬೇಕೆಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ನ.20(ಜಿಎ)–ಮಹಾರಾಜ ಕಾಲೇಜಿನ ಸೆಮಿಸ್ಟರ್ ಪರೀಕ್ಷೆಗಳನ್ನು ಮುಂದೂಡಬೇಕೆಂದು ಆಗ್ರಹಿಸಿ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ನೇತೃತ್ವದಲ್ಲಿ ವಿದ್ಯಾರ್ಥಿಗಳು ಕ್ರಾಫರ್ಡ್ ಭವನದ ಮುಂಭಾಗ ಪ್ರತಿಭಟನೆ ನಡೆಸಿದರು.

ಮೈಸೂರು ವಿಶ್ವವಿದ್ಯಾನಿಲಯದ ಯುಜಿ ವಿದ್ಯಾರ್ಥಿಗಳ ಪರೀಕ್ಷಾ ನೋಟಿಫಿಕೇಶನ್ ಪ್ರಕಾರ ಡಿ.28ರಿಂದ ಪರೀಕ್ಷೆಗಳು ಪ್ರಾರಂಭವಾಗಲಿವೆ. ಆದರೆ, ತರಗತಿಗಳು ಆಗಸ್ಟ್‌ನಲ್ಲಿ ಆರಂಭವಾದರೂ ಅತಿಥಿ ಉಪನ್ಯಾಸಕರ ಕೊರತೆಯಿಂದಾಗಿ, ಉಪನ್ಯಾಸಕರ ನೇಮಕವಾಗಿಲ್ಲದ ಕಾರಣ ತರಗತಿಗಳು ನಡೆದಿಲ್ಲ. ಒಂದೂವರೆ ತಿಂಗಳಿನ ನಂತರ ತರಗತಿಗಳು ಪ್ರಾರಂಭವಾಗಿವೆ. ಇದರಿಂದ ಪಠ್ಯಕ್ರಮಗಳ ಬೋಧನೆ ಸಂಪೂರ್ಣವಾಗಿ ಮುಗಿದಿಲ್ಲ. ಶೇ.75ರಷ್ಟು ಮಾತ್ರ ಪಾಠ ಪ್ರವಚನ ಆಗಿದೆ. ಹೀಗಾಗಿ ಪಠ್ಯಕ್ರಮ ಪೂರ್ಣಗೊಳ್ಳದೆ ಪರೀಕ್ಷೆ ನಡೆಸುವುದು ಅವೈಜ್ಞಾನಿಕ. ಅಲ್ಲದೆ ಇದು ವಿದ್ಯಾರ್ಥಿಗಳ ಮೇಲೆ ಒತ್ತಡ ಉಂಟು ಮಾಡುವುದರಿಂದ ಪರೀಕ್ಷೆಗಳನ್ನು ಮುಂದೂಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ರಾಜ್ಯ ಖಜಾಂಚಿ ಸುಭಾಷ್ ಬೆಟ್ಟದಕೊಪ್ಪ, ಜಿಲ್ಲಾ ಕಾರ್ಯದರ್ಶಿ ನಿತಿನ್, ಮಹಾರಾಜ ಕಾಲೇಜಿನ ವಿದ್ಯಾರ್ಥಿಗಳಾದ ಉಮೇಶ್, ಮನೋಜ್, ಕಿರಣ್ ಕುಮಾರ್, ಮಹದೇವ್, ಸಂತೋಷ್, ಪೂಜಾ, ಕುಸು, ರಾಧಿಕಾ ಪಾಲ್ಗೊಂಡಿದ್ದರು.

55 ನಿವೇಶನ ಪಡೆದುಕೊಂಡಿರುವ ಕೆಥಡ್ರಲ್ ಸೊಸೈಟಿ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡಲು ಕ್ಯಾಥೋಲಿಕ್ ಕ್ರೈಸ್ತರ ಸಂಸ್ಥೆ ನಿರ್ಧಾರ

ಮೈಸೂರು,ನ.20(ಜಿಎ)–ನಕಲಿ ದಾಖಲೆ ಸೃಷ್ಟಿಸಿ, ಮುಡಾದಿಂದ 50:50 ಅನುಪಾತದಡಿ ಕೋಟ್ಯಾಂತರ ರೂ. ಬೆಲೆಬಾಳುವ 55 ನಿವೇಶನ ಪಡೆದುಕೊಂಡಿರುವ ಕೆಥಡ್ರಲ್ ಪ್ಯಾರಿಸ್ ಸೊಸೈಟಿ ವಿರುದ್ಧ ಕ್ಯಾಥೋಲಿಕ್ ಕ್ರೈಸ್ತರ ಸಂಸ್ಥೆ ಲೋಕಾಯುಕ್ತಕ್ಕೆ ದೂರು ಸಲ್ಲಿಸಲು ನಿರ್ಧರಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಸ್ಥಾಪಕ ಅಧ್ಯಕ್ಷ ಜೆ. ಸ್ಟಿಫನ್ ಸುಜಿತ್ ಮಾತನಾಡಿ, ಕೆಥಡ್ರಲ್ ಪ್ಯಾರಿಸ್ ಸೊಸೈಟಿ ತನ್ನ ಯಾವುದೇ ಭೂಮಿ ಕಳೆದುಕೊಳ್ಳದಿದ್ದರೂ 50:50ರ ಅನುಪಾತದ ವ್ಯವಸ್ಥೆ ಅಡಿಯಲ್ಲಿ ಕೆಸರೆ ಮೂರನೇ ಹಂತ ಹಾಗೂ ಆರ್.ಟಿ.ನಗರದಲ್ಲಿ ಫಾದರ್ ಸ್ಟ್ಯಾನಿ ಅಲ್ಮೆಡಾ ಅವರಿಗೆ ಕೋಟ್ಯಂತರ ಬೆಲೆ ಬಾಳುವ 55 ನಿವೇಶನಗಳನ್ನು ಮುಡಾ ನೀಡಿದೆ. ಹೀಗಾಗಿ ಕೂಡಲೇ ಈ ನಿವೇಶನಗಳನ್ನು ಹಿಂಪಡೆದು ನಿಜವಾದ ಫಲಾನುಭವಿಗಳಿಗೆ ನೀಡಬೇಕು ಎಂದರು.

ಕೆಥಡ್ರಲ್ ಪ್ಯಾರಿಸ್ ಸೊಸೈಟಿಯವರು ಅಕ್ರಮವಾಗಿ ಮುಡಾ ಅಧಿಕಾರಿಗಳೊಂದಿಗೆ ಶಾಮೀಲಾಗಿ ಈ ನಿವೇಶನ ಪಡೆದಿದ್ದಾರೆ. ಹೀಗಾಗಿ ತಮ್ಮ ಸಂಸ್ಥೆ ವತಿಯಿಂದ ಇದೇ ಶನಿವಾರ ಲೋಕಾಯುಕ್ತರಿಗೆ ದೂರು ಸಲ್ಲಿಸುತ್ತೇವೆ ಎಂದರು.

1992ರಲ್ಲಿ ಮೈಸೂರಿನ ಕ್ರೈಸ್ತ ಸಮುದಾಯದ ಪ್ರಧಾನ ದೇವಾಲಯವಾದ ಸಂತ ಫಿಲೋಮಿನಾ ಚರ್ಚ್‌ನ ಅಂದಿನ ಫಾದರ್ ಡೆನ್ನಿಸ್ ನರೋನ್ಹಾ ಅವರ ನೇತೃತ್ವದಲ್ಲಿ 108 ಎಕರೆ ಜಾಗದಲ್ಲಿ 1462 ನಿವೇಶನ ರಚಿಸಲಾಗಿತ್ತು. ಇವುಗಳನ್ನು ಜಿಪಿಎ ಹೋಲ್ಡರ್ ಆಗಿದ್ದ ಜೇಮ್ಸ್ ಮಾರ್ಟಿನ್ ಅವರ ಹೆಸರಿನಿಂದ 1462 ಮಂದಿಗೆ ಕ್ರಯಪತ್ರ ಮಾಡಿಸಿಕೊಡಲಾಗಿತ್ತು. ಆದರೆ ಬಳಿಕ ಮುಡಾ ಮರುಸ್ವಾಧೀನಪಡಿಸಿಕೊಂಡಿತು. ಈ ನಡುವೇ ಈ ನಿವೇಶನ ಕಬಳಿಸುವ ಉದ್ದೇಶಕ್ಕೆ ಕೆಥಡ್ರಲ್ ಪ್ಯಾರಿಸ್ ಸೊಸೈಟಿಯನ್ನು ರಚಿಸಿಕೊಂಡು 55 ನಿವೇಶನ ಪಡೆದುಕೊಂಡಿದೆ. ಹೀಗಾಗಿ ಈ ನಿವೇಶನವನ್ನು ಮುಡಾ ಮರು ಸ್ವಾಧೀನ ಪಡೆದುಕೊಂಡು ನಿಜವಾದ ಫಲಾನುಭವಿಗಳಾದ 1462 ಮಂದಿಗೆ ವಿತರಿಸುವ ಕೆಲಸ ಮಾಡಬೇಕು. ಇಲ್ಲದಿದ್ದರೆ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಜಾನ್ ಫರ್ನಾಂಡಿಸ್, ಎಲ್ವಿನ್, ಎಂ.ಸೈಮನ್ ಉಪಸ್ಥಿತರಿದ್ದರು.

ಟಾಂಗಾ ಸ್ಟ್ಯಾಂಡ್‌ಗಳು ಕುದುರೆ ಲಾಯವಾಗುವುದ ತಡೆಯಿರಿ

ಮಾಜಿ ಮೇಯರ್ ಸಂದೇಶ್ ಸ್ವಾಮಿ ಆಗ್ರಹ



ಮೈಸೂರಿನ ಕೆಎಸ್‌ಆರ್‌ಟಿಸಿ ಬಸ್ ಮುಂಭಾಗದಲ್ಲಿರುವ ಕುದುರೆ ಟಾಂಗಾ ಸ್ಟ್ಯಾಂಡ್



ಸಂದೇಶ್ ಸ್ವಾಮಿ

ಮೈಸೂರು, ನ.20–ಪಾರಂಪರಿಕ ನಗರವಾಗಿರುವ ಮೈಸೂರಿನ ವಿವಿಧೆಡೆ ಪ್ರವಾಸಿಗರ ನಗರ ವೀಕ್ಷಣೆಗಾಗಿ ನಗರ ಪಾಲಿಕೆ ವತಿಯಿಂದ ಸ್ಥಾಪಿಸಿರುವ ಕುದುರೆ ಟಾಂಗಾ ಸ್ಟ್ಯಾಂಡ್‌ಗಳು ಇದೀಗ ಕುದುರೆ ಲಾಯಗಳಾಗಿ ಮಾರ್ಪಟ್ಟಿವೆ ಎಂದಿರುವ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಇವುಗಳನ್ನು ಕುದುರೆ ಟಾಂಗಾ ಸ್ಟ್ಯಾಂಡ್‌ಗಳಾಗಿ ಮಾತ್ರವೇ ಇರುವಂತೆ ಕ್ರಮ ಕೈಗೊಳ್ಳಬೇಕೆಂದು ನಗರ ಪಾಲಿಕೆ ಆಯುಕ್ತರನ್ನು ಆಗ್ರಹಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಎದುರಿಗೆ ಪೀಪಲ್ಸ್ ಪಾರ್ಕ್‌ಗೆ ಹೊಂದಿಕೊಂಡಂತೆ ಸ್ಥಾಪಿಸಿರುವ ಕುದುರೆ ಟಾಂಗಾ ಸ್ಟ್ಯಾಂಡ್ ಹೋಗಿ ಕುದುರೆ ಲಾಯವಾಗಿದೆ. ಪಾರ್ಕ್‌ನಲ್ಲಿ ಬೆಳೆದಿರುವ ಹುಲ್ಲನ್ನೇ ಕುದುರೆಗಳಿಗೆ ಮೇವು ಮಾಡಿಕೊಂಡಿದ್ದಾರೆ. ಕುದುರೆ ಲದ್ದಿಯಿಂದ ಅಲ್ಲಿನ ಸುತ್ತಮುತ್ತಲಿನ ಪರಿಸರವು ದುರ್ವಾಸನೆಯಿಂದ ಕೂಡಿದೆ. ಈಗ ಪೀಪಲ್ಸ್ ಪಾರ್ಕ್ ಟಾಂಗಾ ಕುದುರೆಗಳ ಹುಲ್ಲುಗಾವಲಾಗಿದೆ ಎಂದು ತಿಳಿಸಿದ್ದಾರೆ. ಪಾರ್ಕ್ ಪಕ್ಕದಲ್ಲೇ ಹಲವಾರು ವರ್ಷಗಳಿಂದ ನಡೆಯುತ್ತಿರುವ ಹೆಣ್ಣು ಮಕ್ಕಳ ಸರ್ಕಾರಿ ಪದವಿಪೂರ್ವ ಕಾಲೇಜು ಮತ್ತು ಪ್ರೌಢಶಾಲೆ ಇದ್ದು ಇಲ್ಲಿ 1000 ದಿಂದ 1500 ಹೆಣ್ಣು ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ. ಈ ವಿದ್ಯಾರ್ಥಿನಿಯರು ಕುದುರೆ ಟಾಂಗಾದ ದುರ್ವಾಸನೆಯಲ್ಲೇ ಕಲಿಯಬೇಕಾದ ದುಸ್ಥಿತಿ ನಿರ್ಮಾಣವಾಗಿದೆ. ಅಲ್ಲೇ ನಗರ ಪಾಲಿಕೆಯ ಕಂದಾಯ ವಸೂಲಿ ಕಚೇರಿಯೂ ಇದ್ದು, ಕಂದಾಯ ಪಾವತಿಸಲು ಬರುವ ನಿವಾಸಿಗಳೂ ಕೂಡ ತೊಂದರೆ ಅನುಭವಿಸುತ್ತಿದ್ದಾರೆ. ಈ ಕುದುರೆ ಲಾಯಗಳು ಪಾರಂಪರಿಕ ನಗರ ಎಂಬ ಖ್ಯಾತಿಗೆ ಕಳಂಕ ತರುವ ಸ್ಥಿತಿಯಲ್ಲಿವೆ. ಹೀಗಾಗಿ ಪಾಲಿಕೆಯ ಆರೋಗ್ಯಾಧಿಕಾರಿಗಳು ಮತ್ತು ಆಯುಕ್ತರು ಇತ್ತ ಗಮನ ಹರಿಸಿ ಕುದುರೆ ಟಾಂಗಾ ಸ್ಟ್ಯಾಂಡ್ ಅನ್ನು ಅದಕ್ಕಾಗಿ ಮಾತ್ರ ಬಳಸುವಂತೆಯೂ ಕುದುರೆ ಲಾಯವಾಗಿ ಬಳಸದಿರುವಂತೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

ಇಂದು ಜೆಎಸ್‌ಎಸ್ ಶಿಶು ದಂತ ಆರೋಗ್ಯ ಸಂರಕ್ಷಣಾ ಚಿಕಿತ್ಸಾಲಯದ ದಶಮಾನೋತ್ಸವ

ಮೈಸೂರು, ನ.20(ಜಿಎ)–ಜೆಎಸ್‌ಎಸ್ ಶಿಶು ದಂತ ಆರೋಗ್ಯ ಸಂರಕ್ಷಣಾ ಚಿಕಿತ್ಸಾಲಯದ ದಶಮಾನೋತ್ಸವ ನ.21 ರಂದು ಬೆಳಗ್ಗೆ 11ಗಂಟೆಗೆ ಆಸ್ಪತ್ರೆ ಆವರಣದಲ್ಲಿ ನಡೆಯಲಿದೆ.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ದಂತ ವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ.ಎಸ್.ಎನ್. ಪ್ರಶಾಂತ್ ಈ ವಿಷಯ ತಿಳಿಸಿ, ಕಾರ್ಯಕ್ರಮದ ಅಧ್ಯಕ್ಷತೆ ಡಾ.ಮಲ್ಲಿಕಾ ವಹಿಸುವರು, ಡಾ.ಎಸ್.ಎನ್. ಮೋತಿ, ಡಾ.ಹೆಚ್.ಬಸವನಗೌಡಪ್ಪ, ಡಾ.ಸಿ.ಪಿ.ಮಧು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ಮಕ್ಕಳ ಬಾಯಿಯ ಆರೋಗ್ಯ ಚೆನ್ನಾಗಿದ್ದರೆ, ದೇಹದ ಆರೋಗ್ಯವೂ ಉತ್ತಮವಾಗಿರುತ್ತದೆ. ಹೀಗಾಗಿ ಈ ನಿಟ್ಟಿನಲ್ಲಿ ಪೋಷಕರಲ್ಲಿ ಅರಿವು ಮೂಡಿಸಿ ಮಕ್ಕಳ ದಂತ, ಬಾಯಿ ಆರೋಗ್ಯಕ್ಕೆ ಉತ್ತೇಜನ ನೀಡುವ ಕೆಲಸ ಈ ವಿಭಾಗ ಮಾಡುತ್ತಿದ್ದು, ಉಚಿತ ಚಿಕಿತ್ಸೆ ಹಾಗೂ ಸಮಾಲೋಚನೆ ಇದೆ ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ಶಾನಭಾಗ್, ಡಾ.ನಂದಲಾಲ್, ಪ್ರೊ.ನಾರಾಯಣಪ್ಪ, ಡಾ.ಇಂದಿರಾ ಉಪಸ್ಥಿತರಿದ್ದರು.

ಇಂದು ಹಣಕಾಸು ವಲಯದ ಜಾಗೃತಿ ಕಾರ್ಯಕ್ರಮ

ಮೈಸೂರು, ನ.20–ಮೈಸೂರಿನ ಎನ್‌ಐಇ ಕಾಲೇಜಿನ ಸಭಾಂಗಣದಲ್ಲಿ ವಿಎಸ್ ಪ್ರೋ ಟ್ರೇಡಿಂಗ್ ಅಕಾಡೆಮಿ ವತಿಯಿಂದ ನ.21ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಹಣಕಾಸು ವಲಯದಲ್ಲಿ ಎಐ, ಬಿಗ್ ಡಾಟಾದ ಪ್ರಾಮುಖ್ಯತೆ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಮುಖ್ಯ ಅತಿಥಿಗಳಾಗಿ ಎನ್‌ಐಇ ಕಾಲೇಜಿನ ಪ್ರಾಂಶುಪಾಲೆ ರೋಹಿಣಿ, ಶ್ಯಾಂ ಸುಂದರ್, ಅಂಜದ್ ಹುಸೇನ್ ಮತ್ತು ಹರ್ಷಿತ್ ದಿವಾಕರ್ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಇಂದು, ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ




ಮೈಸೂರು,ನ.20– ನಿರ್ವಹಣಾ ಕಾರ್ಯ ನಿಮಿತ್ತ ನ.21 ಮತ್ತು 22 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕ್ಯಾತನಹಳ್ಳಿ, ಆಲನಹಳ್ಳಿ ಮತ್ತು ಜಿ.ಬಿ ಸರಗೂರು ಪಂಚಾಯಿತಿ ವ್ಯಾಪ್ತಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿದ್ಯುತ್ ನಿಲುಗಡೆ: ನ.22 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಇಲವಾಲ, ಹಳೆ–ಕಾಮನ ಕೊಪ್ಪಲು, ಮೈದನಹಳ್ಳಿ, ಮೇಗಳಾಪುರ, ಭದ್ರೇಗೌಡನ ಕೊಪ್ಪಲು, ಚಿಕ್ಕೆಗೌಡನ ಕೊಪ್ಪಲು, ಹೊಸಕೋಟೆ, ಸರಕಟ್ಟೆ, ಯಾಚೇಗೌಡನಹಳ್ಳಿ, ದಡಕನಹಳ್ಳಿ, ರಾಮೇನಹಳ್ಳಿ, ಯಡಹಳ್ಳಿ, ಕಲ್ಲೂರು, ನಾಗನಹಳ್ಳಿ, ಗುಂಗ್ರಾಲ್‌ಛತ್ರ, ಛತದಕೊಪ್ಪಲು, ರಟ್ನಳ್ಳಿ, ವೀರಪ್ಪನಕೊಪ್ಪಲು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲೂ ನಿಲುಗಡೆ ಆಗಲಿದೆ.

ನಿಧನ

ಗುರುಪಾದಸ್ವಾಮಿ



ಮೈಸೂರು, ನ.20– ಕೆಎಸ್‌ಆರ್‌ಟಿಸಿ ನಿವೃತ್ತ ಚಾಲಕರು ಮತ್ತು ಮೈಸೂರಿನ ರಾಮಕೃಷ್ಣ ನಗರ ನಿವಾಸಿಯಾದ ಹೆಚ್.ಸಿ. ಗುರುಪಾದಸ್ವಾಮಿ(65) ಅವರು ಮಂಗಳವಾರ ರಾತ್ರಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಹೃದಯಾಘಾತದಿಂದ ನಿಧನರಾದರು. ದಿವಂಗತರು ಪತ್ನಿ ಜಯಮ್ಮ, ಪುತ್ರಿ ನಾಗವೇಣಿ, ಪುತ್ರ ಗುರುಪ್ರಸಾದ್, ಮೊಮ್ಮಗ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಬುಧವಾರ ಸಂಜೆ ಸುತ್ತೂರಿನ ಹೊಸಕೋಟೆಯಲ್ಲಿರುವ ಮೃತರ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ಕ್ವೆಸ್ಟ್ ಅಕಾಡೆಮಿ ಶಾಲೆ ಆರಂಭ

● ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಉದ್ಘಾಟನೆ ● ಶ್ರೀ ಸಿದ್ದಾರ್ಥ ಎಜುಕೇಶನ್ ಸೊಸೈಟಿಯಿಂದ ಮತ್ತೊಂದು ಮೈಲಿಗಲ್ಲು

ಮೈಸೂರು, ನ.20(ಜಿಎ)–ಶ್ರೀ ಸಿದ್ದಾರ್ಥ ಎಜುಕೇಶನ್ ಸೊಸೈಟಿ ವತಿಯಿಂದ ಮೈಸೂರಿನ ಸುಭಾಷ್ ನಗರದಲ್ಲಿ ನಿರ್ಮಾಣಗೊಂಡಿರುವ 88ನೇ ಕ್ವೆಸ್ಟ್ ಅಕಾಡೆಮಿ ಶಾಲೆಯನ್ನು ನ.22ರುದು ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ.

ಸಂಸ್ಥೆಯ ಸಲಹೆಗಾರ ಡಾ.ವಿವೇಕ್ ವೀರಯ್ಯ ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಪಶುಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್, ಶಾಸಕ ತನ್ವೀರ್ ಸೇಠ್, ಖ್ಯಾತ ಶಿಕ್ಷಣ ತಜ್ಞ ಡಾ.ಅಬ್ರಾಹಂ ಎಬನೇಜರ್, ಸಿದ್ದಾರ್ಥ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ಗೃಹ ಸಚಿವ ಡಾ.ಜಿ. ಪರಮೇಶ್ವರ್, ನಿರ್ದೇಶಕಿ ಕನ್ನಿಕಾ ಪರಮೇಶ್ವರಿ ಅವರು ಪಾಲ್ಗೊಳ್ಳಲಿದ್ದಾರೆ ಎಂದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಶ್ರೀ ಸಿದ್ದಾರ್ಥ ಎಜುಕೇಶನ್ ಸೊಸೈಟಿಯ ಸಲಹೆಗಾರ ಡಾ.ವಿವೇಕ್ ವೀರಯ್ಯ ಮಾತನಾಡಿದರು.

ಗುಣಮಟ್ಟದ ಶಿಕ್ಷಣ ನೀಡುವಲ್ಲಿ ತನ್ನದೇ ಆದ ಹೆಜ್ಜೆ ಗುರುತು ಮೂಡಿಸಿರುವ ಶ್ರೀ ಸಿದ್ದಾರ್ಥ ಎಜುಕೇಶನ್ ಸೊಸೈಟಿ ಇದೀಗ ಮೈಸೂರಿನಲ್ಲಿ 88ನೇ ಶಾಲೆಯಾಗಿ ಕ್ವೆಸ್ಟ್ ಅಕಾಡೆಮಿ ನಿರ್ಮಿಸಿದೆ. ಇಲ್ಲಿ ಪ್ರೀ ಯುಕೆಜಿಯಿಂದ 7ನೇ ತರಗತಿಯವರೆಗೆ ಸಿಬಿಎಸ್‌ಇ ಪಠ್ಯಕ್ರಮದ ತರಗತಿಗಳನ್ನು ಅಳವಡಿಸಲಾಗಿದೆ. ಮುಂದಿನ ವರ್ಷ ಪ್ರೌಢಶಾಲೆ ನಂತರ ಪಿಯುಸಿಯೂ ಆರಂಭವಾಗಲಿದ್ದು, ಈಗಾಗಲೇ ಉತ್ತಮ ಶಿಕ್ಷಣಕ್ಕೆ ಬೇಕಿರುವ ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಗುಣಮಟ್ಟದ ಪೀಠೋಪಕರಣ ಸಹ ಅಳವಡಿಸಲಾಗಿದೆ ಎಂದರು.

1959ರಲ್ಲಿ ಉಚಿತ ವಿದ್ಯಾರ್ಥಿನಿಲಯಗಳೊಂದಿಗೆ ಶ್ರೀ ಸಿದ್ದಾರ್ಥ ಎಜುಕೇಶನ್ ಸೊಸೈಟಿ ಆರಂಭಗೊಂಡಿತು. ಗೊಲ್ಲಹಳ್ಳಿಯಲ್ಲಿ ಅದೇ ವರ್ಷ ಜೂನ್ ತಿಂಗಳಲ್ಲಿ ಡಾ.ಶಿವಕುಮಾರ ಸ್ವಾಮಿಗಳಿಂದ ಶ್ರೀ ಸಿದ್ದಾರ್ಥ ಪ್ರೌಢಶಾಲೆಗೆ ಚಾಲನೆ ದೊರೆಯಿತು. 35 ವಿದ್ಯಾರ್ಥಿಗಳಿಂದ ಪ್ರಾರಂಭವಾದ ಈ ಪ್ರೌಢಶಾಲೆ ಇಂದಿಗೂ ಗೊಲ್ಲಹಳ್ಳಿಯ ಸುತ್ತಮುತ್ತಲಿನ ವಿದ್ಯಾರ್ಥಿಗಳಿಗೆ ಅಷ್ಟೇ ಅಲ್ಲದೆ ದೇಶದ ವಿವಿಧೆಡೆಯಿಂದ ಆಗಮಿಸುವ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿದೆ. ಅಷ್ಟೇ ಅಲ್ಲ ಶ್ರೀ ಸಿದ್ದಾರ್ಥ ಸಂಸ್ಥೆಯ ಶಾಲಾ–ಕಾಲೇಜುಗಳು ಬೆಂಗಳೂರು, ಮಂಡ್ಯ, ಹಾಸನ, ಕಲಬುರಗಿ, ಶಿವಮೊಗ್ಗ, ಕೋಲಾರ ಅಲ್ಲದೆ ರಾಜ್ಯದ 10 ಜಿಲ್ಲೆಗಳ ಮೂಲೆ ಮೂಲೆಗಳಲ್ಲಿ ಶಿಕ್ಷಣದ ಕಂಪು ಪಸರಿಸುತ್ತಿದೆ ಎಂದು ಅವರು ವಿವರಿಸಿದರು.


ಸಂಸ್ಥೆಯ ರೂವಾರಿಯಾಗಿರುವ ಡಾ.ಜಿ.ಪರಮೇಶ್ವರ್ ಅವರ ಕಠಿಣ ಪರಿಶ್ರಮದ ಫಲದಿಂದ ಇದು ಸಾಧ್ಯವಾಗಿದೆ. ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದವರೆಗೂ ತನ್ನ ರೆಕ್ಕೆಗಳನ್ನು ಚಾಚಿ ಬೃಹತ್ ಆಲದಮರದಂತೆ ರಾಜ್ಯದೆಲ್ಲೆಡೆ ತನ್ನ ಬೇರುಗಳನ್ನು ಬಿಟ್ಟುಕೊಂಡಿದೆ. ಆ ಎಲ್ಲಾ ಸಂಸ್ಥೆಗಳನ್ನು ಉಳಿಸಿ–ಬೆಳೆಸಿ. ಅಲ್ಲಿ ಆಧುನಿಕ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಜನಸಾಮಾನ್ಯ ಮಕ್ಕಳು ಶಿಕ್ಷಣ ಪಡೆಯಬೇಕು ಎನ್ನುವ ಹೆಬ್ಬಯಕೆ–ತವಕ ಅವರಲ್ಲಿದೆ. ಹಾಗಾಗಿ ಡಾ.ಜಿ. ಪರಮೇಶ್ವರ್ ಅವರು ಸದಾ ಓರ್ವ ವಿಜ್ಞಾನಿಯಂತೆ–ಸಂಶೋಧಕರಂತೆ ಹೊಸ–ಹೊಸ ಸವಾಲುಗಳಿಗೆ ತಮ್ಮನ್ನು ಒಡ್ಡಿಕೊಳ್ಳುತ್ತಾ ಶೈಕ್ಷಣಿಕ ಸುಧಾರಣೆಗಳ ಜಾರಿಗೆ ಒತ್ತು ನೀಡುತ್ತಿದ್ದಾರೆ ಎಂದು ಡಾ.ವಿವೇಕ್ ವೀರಯ್ಯ ವಿವರಿಸಿದರು.

ಶ್ರೀ ಸಿದ್ದಾರ್ಥ ಸಮೂಹ ಶಿಕ್ಷಣ ಸಂಸ್ಥೆಯ 60 ವರ್ಷಗಳ ಸುದೀರ್ಘ ಶೈಕ್ಷಣಿಕ ಕ್ರಾಂತಿಯಲ್ಲಿ ಈಗಾಗಲೇ 1.5 ಲಕ್ಷ ವಿದ್ಯಾರ್ಥಿಗಳು ಶಿಕ್ಷಣ ಪಡೆದಿದ್ದಾರೆ. ಅವರಲ್ಲಿ 35 ಸಾವಿರ ಇಂಜಿನಿಯರ್‌ಗಳು, 6 ಸಾವಿರ ವೈದ್ಯರು, 2 ಸಾವಿರ ದಂತ ವೈದ್ಯರು, 15 ಸಾವಿರ ಪದವೀಧರರು ಇದ್ದಾರೆ. 100ಕ್ಕೂ ಹೆಚ್ಚು ದೇಶಗಳಲ್ಲಿ ತನ್ನ ಹಳೆ ವಿದ್ಯಾರ್ಥಿಗಳ ಸಮೂಹವನ್ನು ಸಂಸ್ಥೆ ಕಂಡಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕೇಶವಮೂರ್ತಿ, ಮೈಸೂರು ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಈಶ್ವರ್ ಚಕ್ಕಡಿ, ಡಾ.ಜಿ. ಪರಮೇಶ್ವರ್ ಅಭಿಮಾನಿ ಬಳಗ ಯುವ ಸೇನೆ ಜಿಲ್ಲಾಧ್ಯಕ್ಷ ಸಿ. ಮಂಜುನಾಥ್, ಮಹೇಶ್ ಉಪಸ್ಥಿತರಿದ್ದರು.

ಮೈಸೂರು ಮಿತ್ರ ಗುರುವಾರ 21 ನವೆಂಬರ್ 2024

ಬಿಪಿಎಲ್ ಕಾರ್ಡ್‌ನಿಂದ ಕೈಬಿಟ್ಟ ಅರ್ಹ ಫಲಾನುಭವಿಗಳ ಹೆಸರು ಪುನರ್ ಸೇರ್ಪಡೆ



ಡಾ.ಕೃಷ್ಣ

ಮಂಡ್ಯ,ನ.20– ಬಿಪಿಎಲ್ ಕಾರ್ಡ್‌ದಾರರ ಪರಿಷ್ಕರಣೆ ಸಂದರ್ಭದಲ್ಲಿ ಅರ್ಹ ಫಲಾನುಭವಿಗಳ ಹೆಸರು ಕೈ ಬಿಟ್ಟು ಹೋಗಿದ್ದು ಇನ್ನೊಂದು ವಾರದ ಒಳಗೆ ಅವರ ಹೆಸರುಗಳನ್ನು ಪುನರ್ ಸೇರ್ಪಡೆ ಮಾಡುವುದಾಗಿ ಕರ್ನಾಟಕ ಆಹಾರ ಆಯೋಗದ ಅಧ್ಯಕ್ಷ ಡಾ.ಕೃಷ್ಣ ತಿಳಿಸಿದರು.

ಬುಧವಾರ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮನೆಯುಳ್ಳವರು, ಕಾರನ್ನು ಹೊಂದಿರುವವರು, ಐಟಿ ಕಟ್ಟುವ ಲಕ್ಷಾಂತರ ಜನರು ಬಿಪಿಎಲ್ ಕಾರ್ಡ್ ಬಳಕೆ ಮಾಡುತ್ತಿದ್ದು, ಇವರನ್ನು ಅನರ್ಹಗೊಳಿಸುವ ಸಂದರ್ಭದಲ್ಲಿ ಕೆಲ ಅರ್ಹ ಫಲಾನುಭವಿಗಳ ಹೆಸರುಗಳು ಸಹ ಬಿಪಿಎಲ್ ಕಾರ್ಡ್ ಪಟ್ಟಿಯಿಂದ ಕೈಬಿಟ್ಟು ಹೋಗಿದ್ದು, ಇದನ್ನು ಸರಿಪಡಿಸಲು ಆಹಾರ ಇಲಾಖೆ ಹಾಗೂ ಆಯೋಗ ಮುಂದಾಗಿದೆ ಎಂದು ಸ್ಪಷ್ಟಪಡಿಸಿದರು.

ಈ ಬಗ್ಗೆ ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಅವರೊಂದಿಗೆ ಚರ್ಚೆ ನಡೆಸಿದ್ದು, ಅಧಿಕಾರಿಗಳು ಸರಿಪಡಿಸಲು ಎರಡು ದಿನ ಸಮಯಾವಕಾಶ ಕೇಳಿದ್ದಾರೆ. ಆದರೆ ನಾವು ಒಂದು ವಾರವೇ ಸಮಯ ನೀಡಿದ್ದು, ಒಟ್ಟಿನಲ್ಲಿ ಈ ಸಮಸ್ಯೆಗೆ ಶೀಘ್ರ ಪರಿಹಾರ ದೊರೆಯಬೇಕೆಂದು ಹೇಳಿದರು.

ಹಾಸ್ಟೆಲ್, ಹೋಟೆಲ್‌ಗಳಲ್ಲಿ ವಿದ್ಯಾರ್ಥಿಗಳು ಮತ್ತು ಗ್ರಾಹಕರಿಗೆ ಉತ್ಕೃಷ್ಟವಾದ ಆಹಾರ ಸಿಗಬೇಕೆಂಬುದು ಆಹಾರ ಆಯೋಗದ ಧ್ಯೇಯವಾಗಿದೆ. ಆ ನಿಟ್ಟಿನಲ್ಲಿ ನನ್ನ ನೇತೃತ್ವದಲ್ಲಿ ಆಯೋಗದ ಸದಸ್ಯರು ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದು, ಎಲ್ಲೆಲ್ಲಿ ನ್ಯೂನತೆ ಕಂಡು ಬಂದಿದೆ. ಅಲ್ಲಿ ಕೆಲವರನ್ನು ಈಗಾಗಲೇ ಅಮಾನತು ಮಾಡಲಾಗಿದೆ. ಕೆಲವರಿಗೆ ಎಚ್ಚರಿಕೆಯನ್ನು ನೀಡಲಾಗಿದೆ. ನಾನು ಅಧಿಕಾರ ವಹಿಸಿಕೊಂಡ ಬಳಿಕ ರಾಜ್ಯಾದ್ಯಂತ ಈವರೆಗೆ ನಾಲ್ಕು ಜಿಲ್ಲೆಗಳಲ್ಲಿ ಪ್ರವಾಸ ಮುಗಿಸಿದ್ದು, ಇನ್ನುಳಿದ ಜಿಲ್ಲೆಗಳಲ್ಲಿ ನ್ಯೂನತೆ ಕಂಡು ಬಂದಿರುವ ಹಾಸ್ಟೆಲ್, ಹೋಟೆಲ್, ಅಂಗನವಾಡಿ, ಪಡಿತರ ಅಂಗಡಿ, ಗೋದಾಮುಗಳಿಗೆ ಭೇಟಿ ಕೊಟ್ಟು ಆಹಾರದ ಗುಣಮಟ್ಟ ಪರಿಶೀಲನೆ ನಡೆಸುವುದಾಗಿ ತಿಳಿಸಿದರು.

ಮಂಡ್ಯದ ಬೂದನೂರಿನಲ್ಲಿರುವ ಪೌಷ್ಟಿಕ ಆಹಾರ ತಯಾರಿಕಾ ಘಟಕದಲ್ಲಿ ಅಧಿಕಾರಿಗಳು ಆಹಾರ ಗುಣಮಟ್ಟದಲ್ಲಿ ಲೋಪ ಎಸಗಿದ್ದರಿಂದ ಕಳೆದ ಬಾರಿ ಭೇಟಿ ನೀಡಿದ್ದಾಗ ಐದು ಮಂದಿಯನ್ನು ಅಮಾನತು ಮಾಡಲಾಗಿತ್ತು. ಆದರೆ ಮತ್ತೆ ಅಲ್ಲಿಗೆ ತೆರಳಿ ಮರುಪರಿಶೀಲಿಸುವ ಸಂದರ್ಭದಲ್ಲಿ ಅಧಿಕಾರಿಗಳು ತಪ್ಪೊಪ್ಪಿಗೆ ಪತ್ರ ನೀಡಿರುವುದರಿಂದ ಅವರಿಗೆ ಮತ್ತೊಂದು ಅವಕಾಶ ನೀಡಿ, ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ಆಹಾರ ಗುಣಮಟ್ಟದಲ್ಲಿ ಮತ್ತೆ ಲೋಪ ಎಸಗಿದರೆ ನಿಮ್ಮ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿ ಬಂದಿದ್ದೇನೆ ಎಂದು ಹೇಳಿದರು.

ನಾಳೆ ಬಿಜೆಪಿಯಿಂದ ಜನಜಾಗೃತಿ ಆಂದೋಲನ

ಮಂಡ್ಯ: ರಾಜ್ಯ ಸರ್ಕಾರ ವಕ್ಫ್ ಸಮಸ್ಯೆ ಪರಿಹರಿಸುವಂತೆ ಆಗ್ರಹಿಸಿ ನ.22ರಂದು ನಗರದ ಸರ್‌ಎಂವಿ ಪ್ರತಿಮೆಯ ಎದುರು ನಮ್ಮಭೂಮಿ, ನಮ್ಮ ಹಕ್ಕು ಶೀರ್ಷಿಕೆಯಡಿ ಜನಜಾಗೃತಿ ಆಂದೋಲನ ಹೋರಾಟ ನಡಸಲಾಗುವುದು ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಇಂದ್ರೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಕ್ಫ್‌ನ ಭೂಮಿ ಕಾಯ್ದೆಯ ನೋಟಿಸ್‌ನಿಂದಾಗಿ ಸಹಸ್ರಾರು ಸಂಖ್ಯೆಯ ಸಾರ್ವಜನಿಕರು, ರೈತರು, ಮಠ ಮಂದಿರಗಳು, ಶಾಲೆಗಳು ಸೇರಿದಂತೆ ಸಾರ್ವಜನಿಕ ಆಸ್ತಿ ಮಾಲೀಕರು ಶೋಷಣೆಗೆ ಒಳಗಾಗಿದ್ದು, ಅವುಗಳನ್ನು ಆಲಿಸಲು ವೇದಿಕೆ ಸೃಷ್ಟಿಸಿ ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದರು. ವಕ್ಫ್‌ನ ಭೂಮಿ ಕಾಯ್ದೆಯಿಂದ ಆಗಿರುವ ಅನಾಹುತಗಳನ್ನು ಅರಿಯಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು 3 ತಂಡಗಳನ್ನು ರಚನೆ ಮಾಡಿದ್ದು, ಸ್ವಯಂ ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್, ವಿ.ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗುವುದು.

ಶ್ರೀರಂಗಪಟ್ಟಣದ ಕೋಟೆ, ಕಂದಕಗಳು ವಕ್ಫ್ ಆಸ್ತಿ

ನಾಗರಿಕ ಹಿತಾಸಕ್ತಿ ವೇದಿಕೆಯಿಂದ ಆಕ್ರೋಶ, ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಕೆ



ನಾಗರೀಕ ಹಿತಾಸಕ್ತಿ ವೇದಿಕೆ ಕಾರ್ಯಕರ್ತರು ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಸಿದರು.

ಶ್ರೀರಂಗಪಟ್ಟಣ, ನ20– ಪಟ್ಟಣದ ಟೌನ್ ವ್ಯಾಪ್ತಿಯ ವಿಜಯನಗರದ ಅರಸರ ಕಾಲದ ಕೋಟೆ, ಕಂದಕ ಜಮೀನು ಇತ್ತೀಚೆಗೆ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದ್ದು, ಅದನ್ನು ತೆಗೆದುಹಾಕುವಂತೆ ನಾಗರಿಕ ಹಿತಾಸಕ್ತಿ ವೇದಿಕೆ ಕಾರ್ಯಕರ್ತರು ಒತ್ತಾಯಿಸಿ ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಸಿದರು.

ಪಟ್ಟಣ ತಾಲೂಕು ಕಚೇರಿಗೆ ಭೇಟಿ ನೀಡಿದ ಸದಸ್ಯರು, ಶ್ರೀರಂಗಪಟ್ಟಣ ಟೌನ್ ವ್ಯಾಪ್ತಿಯ ಸರ್ವೆ ನಂ.950 ರಲ್ಲಿ 5ಎಕರೆ 7 ಗುಂಟೆ ಹಾಗೂ ಸರ್ವೆ ನಂ.952ರಲ್ಲಿ 3ಎಕರೆ 22 ಜಮೀನು ವಿಜಯನಗರದ ಅರಸರ ಕಾಲದಿಂದಲೂ ಕೋಟೆ, ಕಂದಕ ಹಾಗೂ ಪ್ರಸ್ತುತ ಸಾರ್ವಜನಿಕರ ಸಂತೆ ನಡೆಯುತ್ತಿರುವ ಜಮೀನಾಗಿದೆ ಈ ಜಮೀನು ಕಳೆದ 2023–24ನೇ ಸಾಲಿನಿಂದ ಆರ್‌ಟಿಸಿ ಕಾಲಂ 9ರಲ್ಲಿ ಟಿಪ್ಪು ಸುಲ್ತಾನ್ ವಕ್ಫ್ ಆಸ್ತಿ–ಎಸ್ಟೇಟ್ ಆಗಿ ಬದಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ವೆ ನಂ.950ರ ಜಮೀನು ವಿಜಯನಗರದ ಅರಸರ ಕಾಲದಲ್ಲಿ ಗ್ರಾಮ ರಕ್ಷಣೆಗಾಗಿ ಕೋಟೆ, ಕಂದಕವಾಗಿ ಮಾಡಿಕೊಂಡಿದ್ದು, ಜೊತೆಗೆ ಪ್ರಸ್ತುತ ಸರ್ವೆ ನಂ. 952ರ ಜಾಗದಲ್ಲಿ ಸಾರ್ವಜನಿಕರ ಸಂತೆ ನಡೆಯುತ್ತಿದೆ. ಇಂತಹ ಐತಿಹಾಸವುಳ್ಳ ಜಮೀನು ಏಕಾಏಕಿ ವಕ್ಫ್ ಹೆಸರಿನಲ್ಲಿ ಆರ್‌ಟಿಸಿಯಲ್ಲಿ ನಮೂದಾಗಿದೆ. ಹಾಗಾಗಿ ತಾವುಗಳು ಆರ್‌ಟಿಸಿಯಲ್ಲಿರುವ ಟಿಪ್ಪುಸುಲ್ತಾನ್ ವಕ್ಫ್ ಆಸ್ತಿ–ಎಸ್ಟೇಟ್ ಎಂಬುದನ್ನು ತೆಗೆದು ಹಾಕಿ ಸ್ಥಳೀಯ ಪುರಸಭೆ ಅಥವಾ ಭಾರತೀಯ ಪುರಾತತ್ವ ಇಲಾಖೆ ಸುಪ ರ್ದಿಗೆ ವಹಿಸಿಕೊಡುವಂತೆ ವೇದಿಕೆ ಕಾರ್ಯಕರ್ತರು ಒತ್ತಾಯಿಸಿದರು.

ಒಂದು ವೇಳೆ ಪಹಣಿಯಲ್ಲಿರುವ ವಕ್ಫ್ ಹೆಸರನ್ನು ತೆಗೆದು ಹಾಕಲು ವಿಳಂಬವಾದಲ್ಲಿ ತಾಲೂಕು ಹಾಗೂ ಜಿಲ್ಲಾಡಳಿತದ ವಿರುದ್ಧ ಜಿಲ್ಲೆಯಾದ್ಯಂತ ಕಾನೂನು ಅಥವಾ ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿ, ತಾಲೂಕು ಆಡಳಿತದ ಮೂಲಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ವೇದಿಕೆ ಅಧ್ಯಕ್ಷ ಮದನ್ ರಾವ್, ಕಾರ್ಯದರ್ಶಿ ಅಭಿಷೇಕ್, ಸದಸ್ಯರಾದ ಗಂಜಾಂ ಪ್ರಸನ್ನ, ಹೇಮಂತ್, ಪ್ರತಾಪ್, ವಿಶ್ವಾಥ್, ಚಂದ್ರು ಕರವೇ ಅಧ್ಯಕ್ಷ ಚುಂದಾಲು ಶಂಕರ್ ಸೇರಿದಂತೆ ಇತರರು ಇದ್ದರು.

ನಾಲ್ವರು ಅಂತರ್ ಜಿಲ್ಲಾ ದರೋಡೆಕೋರರು, ಇಬ್ಬರು ಮನೆಗಳ್ಳರ ಬಂಧನ



ಮಂಡ್ಯ,ನ.20–ವಿವಿಧ ಪ್ರಕರಣಗಳಲ್ಲಿ ಭಾಗಿಯಾಗಿದ್ದ ನಾಲ್ವರು ಅಂತರ್ ಜಿಲ್ಲಾ ದರೋಡೆಕೋರರು ಹಾಗೂ ಇಬ್ಬರು ಮನೆಗಳ್ಳರನ್ನು ಬಂಧಿಸಿರುವ ಮದ್ದೂರು ಮತ್ತು ಕೆಸ್ತೂರು ಪೊಲೀಸರು 14.69 ಲಕ್ಷ ರೂ ಮೌಲ್ಯದ ಚಿನ್ನಾಭರಣ, ಒಂದು ಮಾರುತಿ ಸ್ವಿಫ್ಟ್ ಕಾರನ್ನು ವಶಪಡಿಸಿಕೊಂಡಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ನಾಲ್ವರು ದರೋಡೆಕೋರರ ಬಂಧನ: ಮದ್ದೂರು ತಾಲೂಕು ಗೆಜ್ಜಲಗೆರೆ ಕಾಲೋನಿ ಇಂಡಸ್ಟ್ರಿಯಲ್ ಏರಿಯಾದ ಶ್ರೀ ನಿಮಿಷಾಂಬ ಪೆಟ್ರೋಲ್ ಬಂಕ್‌ಗೆ ಕಳೆದ ಅ.15ರ ಮಧ್ಯರಾತ್ರಿ 12.07ರ ಸಮಯದಲ್ಲಿ ಸ್ವಿಫ್ಟ್ ಕಾರಿನಲ್ಲಿ ಬಂದ ನಾಲ್ವರು ಪೆಟ್ರೋಲ್ ಹಾಕಿಸಿಕೊಂಡಿದ್ದಲ್ಲದೆ, ಪೆಟ್ರೋಲ್ ಹಾಕುವ ಯುವಕನಿಗೆ ಕತ್ತಿ ತೋರಿಸಿ, ಆತನ ಬಳಿಯಿದ್ದ 25 ಸಾವಿರ ರೂಗಳನ್ನು ದರೋಡೆ ಮಾಡಿ ಪರಾರಿಯಾಗಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೆಟ್ರೋಲ್ ಬಂಕ್‌ನವರು ನೀಡಿದ ದೂರಿನ ಮೇರೆಗೆ ಅಪರ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಿ.ಈ. ತಿಮ್ಮಯ್ಯ, ಎಸ್.ಇ. ಗಂಗಾಧರ ಸ್ವಾಮಿ, ಮಳವಳ್ಳಿ ಡಿವೈಎಸ್ಪಿ ವಿ.ಕೃಷ್ಣಪ್ಪ ಅವರ ಮಾರ್ಗದರ್ಶನದಲ್ಲಿ ಮದ್ದೂರು ಠಾಣೆಯ ಪಿ.ಐ.ಎಂ. ಶಿವಕುಮಾರ್ ಹಾಗೂ ಗ್ರಾಮಾಂತರ ಠಾಣೆಯ ಸಿಪಿಐ ವೆಂಕಟೇಗೌಡ, ಪಿಎಸ್‌ಐಗಳಾದ ಕೆ.ಮಂಜುನಾಥ, ಪಿ. ರವಿ ನೇತೃತ್ವದಲ್ಲಿ ತಂಡ ರಚನೆ ಮಾಡಲಾಗಿತ್ತು ಎಂದು ವಿವರಿಸಿದರು.

ಸದರಿ ತಂಡವು ಕಾರ್ಯಾಚರಣೆ ನಡೆಸಿ ಮದ್ದೂರು ತಾಲೂಕು ವಡ್ಡರದೊಡ್ಡಿ ಗ್ರಾಮದ ಪ್ರಮೋದ್ ಉ. ಕರಿಯ, ಚನ್ನಪಟ್ಟಣ ತಾಲೂಕು ಲಾಳಘಟ್ಟ ಗ್ರಾಮದ ಅಭಿ ಉ. ಚೊಚೊ, ದಾವಣಗೆರೆ ಜಿಲ್ಲೆ ಮಲೆಬೆನ್ನೂರು ತಾಲೂಕು ಎಲವಟ್ಟಿ ಗ್ರಾಮ (ಹಾಲಿ ವಾಸ ಬೆಂಗಳೂರು ಹೊಸಕೆರೆಹಳ್ಳಿ ನಿವಾಸಿ)ದ ಆರ್.ರಕ್ಷಿತ್ ಕುಮಾರ್, ಚನ್ನಪಟ್ಟಣ ತಾಲೂಕು ಸುಣ್ಣದ ಘಟ್ಟ ಗ್ರಾಮದ ವಿಜಯ್ ಉ.ವಿಜಿ ಎಂಬವರನ್ನು ಬಂಧಿಸಲಾಗಿದೆ ಎಂದರು.

ಆರೋಪಿಗಳಾದ ಪ್ರಮೋದ್ ಹಾಗೂ ರಕ್ಷಿತ್ ಕುಮಾರ್ ಅವರನ್ನು ವಿಚಾರಣೆ ಮಾಡಲಾಗಿ, ಆರೋಪಿಗಳು ಪ್ರಕರಣದಲ್ಲಿ ಭಾಗಿಯಾಗಿರುವುದಾಗಿ ಒಪ್ಪಿಕೊಂಡಿರುತ್ತಾರೆ. ಆರೋಪಿತರಿಂದ ಕೃತ್ಯಕ್ಕೆ ಬಳಸಿದ ಮಾರುತಿ ಸ್ವಿಫ್ಟ್ ಕಾರು ಮತ್ತು ದರೋಡೆ ಮಾಡಿದ್ದ ಹಣದಲ್ಲಿ ಉಳಿಕೆ 2600 ರೂ.ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ವಿವರಿಸಿದರು.

ಈ ನಾಲ್ವರು ಆರೋಪಿಗಳು ಹಿಂದೆ ಹೆದ್ದಾರಿ ದರೋಡೆ, ಸರಗಳ್ಳತನದಲ್ಲಿ ಭಾಗಿಯಾಗಿದ್ದರು. ಪ್ರಮೋದ್ ಮತ್ತು ಅಭಿ ಈ ಹಿಂದೆ ಮದ್ದೂರು, ಚನ್ನಪಟ್ಟಣ, ರಾಮನಗರ, ಬೆಂಗಳೂರು, ಅಕ್ಕೂರು ಹಾಗೂ ಇತರೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದು ಎಂದು ತಿಳಿಸಿದರು.

ಚಿನ್ನಾಭರಣ ಕಳ್ಳಿಯ ಬಂಧನ: ಮದ್ದೂರು ತಾಲೂಕು ಕೆಸ್ತೂರು ಪೊಲೀಸ್ ಠಾಣಾ ವ್ಯಾಪ್ತಿಯ ವಡ್ಡರದೊಡ್ಡಿ ಗ್ರಾಮದ ಮನೆಯೊಂದರಲ್ಲಿ ಚಿನ್ನದ ಒಡವೆಗಳನ್ನು ಕಳ್ಳತನ ಮಾಡಿದ್ದ ವಡ್ಡರದೊಡ್ಡಿ ಗ್ರಾಮದ ಲಕ್ಷ್ಮಮ್ಮ ಎಂಬವರನ್ನು ಕೆಸ್ತೂರು ಪೊಲೀಸರು ಬಂಧಿಸಿದ್ದಾರೆ ಎಂದರು.

ಕಳೆದ ಅ.22ರಂದು ವಡ್ಡರದೊಡ್ಡಿ ಗ್ರಾಮದ ಎಸ್.ಅಭಿಷೇಕ್ ಎಂಬವರು ತಮ್ಮ ಮನೆಯಲ್ಲಿ ಚಿನ್ನದ ಒಡವೆಗಳನ್ನು ಕಳ್ಳತನ ಮಾಡಲಾಗಿದೆ ಎಂದು ದೂರು ನೀಡಿದ್ದರು. ಸದರಿ ದೂರಿನ ಮೇರೆಗೆ ಕೆಸ್ತೂರು ಪೊಲೀಸ್ ಠಾಣೆಯ ಪಿಎಸ್‌ಐ ನರೇಶ್ ಕುಮಾರ್ ಅವರು ಸಿಬ್ಬಂದಿಗಳೊಂದಿಗೆ ಕಾರ್ಯಾಚರಣೆ ನಡೆಸಿ ನ.12ರಂದು ಆರೋಪಿ ಲಕ್ಷ್ಮಮ್ಮ ಎಂಬವರನ್ನು ಬಂಧಿಸಿ, ಚಿನ್ನದ ಚೈನು, ಉಂಗುರಗಳು, ಓಲೆ–ಜುಮುಕಿ ಸೇರಿದಂತೆ ಒಟ್ಟು 73 ಗ್ರಾಂ ತೂಕದ 3.65 ಲಕ್ಷ ಮೌಲ್ಯದ ಚಿನ್ನಾಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್ಪಿ ತಿಳಿಸಿದರು.

ಮನೆಗಳ್ಳನ ಬಂಧನ: ಮದ್ದೂರು ಪಟ್ಟಣದ ಹೊಳೆ ಬೀದಿಯಲ್ಲಿರುವ ಎಂ.ಆರ್. ಕೆಂಪಶೆಟ್ಟಿ ಹಾಗೂ ಇವರ ಅಣ್ಣ ರಂಗಸ್ವಾಮಿ ಅವರು ಕಳೆದ 2023ರ ಡಿ.19ರಂದು ಮೈಸೂರಿಗೆ ತೆರಳಿದ್ದಾಗ ಡಿ.22 ರಂದು ಮನೆಯ ಬೀಗ ಮುರಿದು ಚಿನ್ನದ ಒಡವೆ ಮತ್ತು ಬೆಳ್ಳಿಯ ಸಾಮಾನುಗಳನ್ನು ಕಳ್ಳತನ ಮಾಡಲಾಗಿತ್ತು ಈ ಸಂಬಂಧ 2023ರ ಡಿ.22ರಂದು ಎಂ.ಆರ್.ಕೆಂಪಶೆಟ್ಟಿ ಮತ್ತು ರಂಗಸ್ವಾಮಿ ಅವರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು ಎಂದು ಹೇಳಿದರು.

ಮದ್ದೂರು ಠಾಣೆಯ ಪಿಐ ಎಂ.ಶಿವಕುಮಾರ್ ಹಾಗೂ ಗ್ರಾಮಾಂತರ ವೃತ್ತದ ಸಿಪಿಐ ವೆಂಕಟೇಗೌಡ, ಪಿಎಸ್‌ಐ ಕೆ. ಮಂಜುನಾಥ ಅವರ ನೇತೃತ್ವದಲ್ಲಿ ತಂಡ ರಚನೆ ಮಾಡಲಾಗಿತ್ತು.

ಸದರಿ ಪತ್ತೆ ಕಾರ್ಯ ತಂಡವು ಕಳೆದ ಅ.12ರಂದು ರಾಮನಗರ ಜಿಲ್ಲೆ, ಕನಕಪುರ ತಾಲೂಕು ಮೇಳೆಕೋಟೆ ಗ್ರಾಮದ ಎಚ್. ಹನುಮಂತರಾಜು ಉ.ಹನುಮಂತ ಎಂಬ ಆರೋಪಿಯನ್ನು ಬಂಧಿಸಿ, 142 ಗ್ರಾಂ ತೂಕದ 10 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ 1,300 ಗ್ರಾಂ ತೂಕದ 1.04 ಲಕ್ಷ ಮೌಲ್ಯದ ಬೆಳ್ಳಿ ಸಾಮಾನುಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಆರೋಪಿ ಹಾರೋಹಳ್ಳಿ, ಕನಕಪುರ, ಮಾದನಾಯ ಕನಹಳ್ಳಿ, ತಾವರೆಕೆರೆ, ಮಳವಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿರುವುದಾಗಿ ವಿಚಾರಣೆ ವೇಳೆ ತಿಳಿದು ಬಂದಿದೆ ಎಂದು ಹೇಳಿದರು. ಈ ವೇಳೆ ಎಎಸ್ಪಿಗಳಾದ ತಿಮ್ಮಯ್ಯ, ಗಂಗಾಧರ ಸ್ವಾಮಿ ಉಪಸ್ಥಿತರಿದ್ದರು.

ಗೊ.ರು.ಚನ್ನಬಸಪ್ಪ ಅವರಿಗೆ ಅಭಿನಂದನೆ



ಗೊ.ರು.ಚನ್ನಬಸಪ್ಪ

ಮಂಡ್ಯ: ಮಂಡ್ಯದಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ, ಸಾಹಿತಿ ಗೊ.ರು. ಚನ್ನಬಸಪ್ಪ ಅವರನ್ನು ಆಯ್ಕೆ ಮಾಡಿರುವುದನ್ನು ಸ್ವಾಗತಿಸಿರುವ ವಿಧಾನಪರಿಷತ್ ಶಾಸಕ ದಿನೇಶ ಗೂಳಿಗೌಡ ಅಭಿನಂದನೆ ಸಲ್ಲಿಸಿದ್ದಾರೆ.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸಾಂಸ್ಕೃತಿಕ ಹಾಗೂ ಮಾಧ್ಯಮ ಸಮಿತಿಗಳ ಅಧ್ಯಕ್ಷರೂ ಆಗಿರುವ ದಿನೇಶ ಗೂಳಿಗೌಡ, ಈ ಕುರಿತು ಪತ್ರಿಕಾ ಹೇಳಿಕೆ ನೀಡಿ ಡಿ.20ರಿಂದ ಮಂಡ್ಯದಲ್ಲಿ ಅದ್ದೂರಿಯಾಗಿ ಸಮ್ಮೇಳನ ನಡೆಸಲು ಎಲ್ಲ ಸಿದ್ಧತೆ ನಡೆಸಲಾಗಿದೆ. ಕಸಾಪ ಕಾರ್ಯಕಾರಿ ಸಮಿತಿಯಲ್ಲಿ ಇಂದು ಸರ್ವಾಧ್ಯಕ್ಷರ ಆಯ್ಕೆ ನಡೆದು, ಗೊ.ರು.ಚನ್ನಬಸಪ್ಪ ಅವರ ಹೆಸರನ್ನು ಘೋಷಿಸಿರುವುದು ಅತ್ಯಂತ ಸಂತಸ ತಂದಿದೆ. ಕನ್ನಡ ನಾಡಿನ ಗಂಡುಮೆಟ್ಟಿನ ನೆಲ ಮಂಡ್ಯ, ಇಲ್ಲಿ 1974 ರಲ್ಲಿ ಮೊದಲ ಬಾರಿಗೆ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜನೆಯಾಗಿತ್ತು. ನಂತರ 1994ರಲ್ಲಿ ಎರಡನೇ ಬಾರಿಗೆ ಸಮ್ಮೇಳನ ನಡೆಯಿತು. ಈಗ ಮೂರನೇ ಬಾರಿಗೆ ಸಾಹಿತ್ಯ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಲು ಎಲ್ಲ ತಯಾರಿಗಳು ನಡೆದಿವೆ. ಗೊ.ರು.ಚೆನ್ನಬಸಪ್ಪ ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರ ತಾಲೂಕಿನ ಗೊಂಡೇದಹಳ್ಳಿಯವರು. ಅವರು ಈ ಹಿಂದೆ ಕಸಾಪ ಅಧ್ಯಕ್ಷರಾಗಿ, ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸಿದ್ದರು. ಅವರು ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಪರಿಷತ್ತನ್ನು ಆರ್ಥಿಕವಾಗಿ ಸದೃಢರನ್ನಾಗಿಸುವಲ್ಲಿ ಶ್ರಮಿಸಿದ್ದರು. ಜಾನಪದ ತಜ್ಞರೂ ಆಗಿರುವ ಚನ್ನಬಸಪ್ಪ ಅವರು ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷರಾಗಿಯೂ ಕಾರ್ಯ ನಿರ್ವಹಿಸಿದ್ದರು ಎಂದಿದ್ದಾರೆ.



ದಿನೇಶ ಗೂಳಿಗೌಡ

ಗೊಜ್ಜೇಗೌಡ ನಿಧನ



ಭಾರತೀನಗರ,ನ.20– ಮಳವಳ್ಳಿ ತಾಲೂಕಿನ ಹಲ್ಲಹಳ್ಳಿ ಗ್ರಾಮದ ಮಾದೇಗೌಡ ಗೊಜ್ಜೇಗೌಡ(81) ಅನಾರೋಗ್ಯದಿಂದ ನಿಧನ ಹೊಂದಿದ್ದಾರೆ.

ಮೃತರು ನಾಲ್ವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸ್ವಗ್ರಾಮವಾದ ಹಲ್ಲಹಳ್ಳಿಯ ರುದ್ರಭೂಮಿಯಲ್ಲಿ ನೆರವೇರಿತು.

ಮೂರನೇ ಪುಟದಿಂದ

ಗೊ.ರು.ಚನ್ನಬಸಪ್ಪ ಅವಿರೋಧ ಆಯ್ಕೆ

ಗ್ರಾಮಗೀತೆಗಳು, ಕರ್ನಾಟಕ ಜನಪದ ಕಲೆಗಳು, ಹೊನ್ನ ಬಿತ್ತೇವು ನೆಲಕೆಲ್ಲ ಅವರ ಮೌಲ್ಯಯುತ ಕೃತಿಗಳು. ದೇಶದಲ್ಲಿ ಮೊದಲ ಬಾರಿಗೆ ಕರ್ನಾಟಕದಲ್ಲಿ ಜಾನಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವಲ್ಲಿ ಇವರ ಪಾತ್ರ ಹಿರಿದು. ಗೊ.ರು.ಚ. ಅವರು ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಮಹತ್ವದ ಸಾಧನೆಗಳನ್ನು ಮಾಡಿದ್ದಾರೆ.

ಕಸಾಪ ಅಧ್ಯಕ್ಷರಾಗಿ ಗೊರುಚ ಸಾಧನೆಗಳು: ಕಸಾಪ ತನ್ನ ಕಾಲ ಮೇಲೆ ತಾನು ನಿಲ್ಲುವಂತೆ ಮಾಡುವಲ್ಲಿ ಇವರ ಶ್ರಮ ಅಪಾರವಾದುದು. ಇದರ ಮೊದಲ ಭಾಗವಾಗಿ ಅಮೃತನಿಧಿ ಯೋಜನೆ ರೂಪಿಸಿದರು. ಡಾ.ಹಾಮಾನಾ ಅವರು ಬೀದರ್ (1985) ಸಮ್ಮೇಳನಾಧ್ಯಕ್ಷ ಸ್ಥಾನದಿಂದ ಪರಿಷತ್ತಿನ ಆರ್ಥಿಕ ಸ್ವಾವಲಂಬನೆಗಾಗಿ, 'ಒಬ್ಬ ಕನ್ನಡಿಗ– ಒಂದು ರೂಪಾಯಿ' ಘೋಷಣೆ ಮೊಳಗಿಸಿದ್ದರು. ಈ ನಿಟ್ಟಿನಲ್ಲಿ ಗೊರುಚ ಅವರು ಅಮೃತನಿಧಿ ಚೀಟಿಗಳನ್ನು ಮುದ್ರಿಸಿ ಮಾರಾಟ ಮಾಡಿ 25 ಲಕ್ಷ ರೂ. ಗಳಷ್ಟು ಅಮೃತನಿಧಿಯನ್ನು ಸಂಗ್ರಹಿಸಿದ್ದರು.

ಗೊರುಚ ಅವರದ್ದು ಮೆಲುದನಿ. ಕೇಳಲು ಇಂಪು ಎನ್ನುವುದು ಕೇಳಿದವರಿಗೆ ಮಾತ್ರ ಗೊತ್ತು. ಅದರಲ್ಲೂ ಇವರ ಇನಿ ಧ್ವನಿಯಲ್ಲಿ ಜನಪದ ಸಾಹಿತ್ಯವನ್ನು ಕೇಳುವುದೇ ಚೆನ್ನ. ದೇಶದಲ್ಲಿ ಮೊದಲ ಬಾರಿಗೆ ಕರ್ನಾಟಕದಲ್ಲಿ ಜಾನಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವಲ್ಲಿ ಇವರ ಪಾತ್ರ ಹಿರಿದು.

ಗೊರುಚ ಹಿನ್ನಲೆ: ಗೊ.ರು. ಚನ್ನಬಸಪ್ಪ ಅವರು 18 ಮೇ 1930ರಲ್ಲಿ ಚಿಕ್ಕಮಗಳೂರು ಜಿಲ್ಲೆ, ತರೀಕೆರೆ ತಾಲೂಕಿನ ಗೊಂಡೇದಹಳ್ಳಿಯಲ್ಲಿ ರುದ್ರಪ್ಪಗೌಡ–ಅಕ್ಕಮ್ಮ ಪುತ್ರರಾಗಿ ಜನಿಸಿದರು. ಇವರಿಗೆ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ, ಕರ್ನಾಟಕದ ರಾಜ್ಯೋತ್ಸವ ಪ್ರಶಸ್ತಿ ಮುಂತಾದವು ಸಂದಿವೆ. ಹಲವು ಕ್ಷೇತ್ರಗಳಲ್ಲಿ ಪರಿಣಿತಿ ಸಾಧಿಸಿದ್ದರೂ ಜನಪದ ಇವರ ಮೆಚ್ಚಿನ ಕ್ಷೇತ್ರ. ಗ್ರಾಮೀಣ ಪ್ರದೇಶದಲ್ಲಿ ಹುಟ್ಟಿ ಬೆಳೆದಿದ್ದು ಕಾರಣವಿರಬಹುದು.

1967ರಲ್ಲಿ ತರೀಕೆರೆಯಲ್ಲಿ ನಡೆದ ಜಾನಪದ ಸಮ್ಮೇಳನದ ಸಂದರ್ಭದಲ್ಲಿ ಕೃತಿ ಹೊನ್ನ ಬಿತ್ತೇವು ಹೊಲಕೆಲ್ಲ ಅಭಿನಂದನಾ ಗ್ರಂಥವನ್ನು ಹೊರತರಲಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು, ವಜ್ರ ಮಹೋತ್ಸವ, ಕರ್ನಾಟಕ ಜಾನಪದ ಕಲೆ, ಕನ್ನಡ ಪತ್ರಿಕೋದ್ಯಮ, ಸುತ್ತೂರ ಸಿರಿ ಮೊದಲಾದ 40ಕ್ಕೂ ಹೆಚ್ಚು ಸಾಕ್ಷ್ಯ ಚಿತ್ರಗಳನ್ನು ನಿರ್ಮಿಸಿದ್ದಾರೆ. ಇವರು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿಯೂ ದೀರ್ಘಕಾಲ ಸೇವೆ ಸಲ್ಲಿಸಿದ್ದಾರೆ.

ಸಾಹಿತ್ಯೇತರರ ಬದಲು ಸಾಹಿತಿಗಳಿಗೆ ಮಣೆ

ಎಂದು ಒತ್ತಡ ಏರಿದ್ದರು. ಮೊದಮೊದಲು ಜೋಷಿ ಅವರು ಇದಕ್ಕೆ ವಿರೋಧ ವ್ಯಕ್ತಪಡಿಸಿದರಾದರೂ ಮಂಡ್ಯ ಜಿಲ್ಲೆಯ ಸಾಹಿತಿ, ಸಂಘಟಕರ ಒತ್ತಡಕ್ಕೆ ಕೊನೆಗೆ ಮಣಿಯಲೇಬೇಕಾಯಿತು.

ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷ ಸ್ಥಾನಕ್ಕಾಗಿ 20ಕ್ಕೂ ಹೆಚ್ಚು ಸಾಧಕರ ಹೆಸರು ಪ್ರಸ್ತಾಪವಾಗಿತ್ತು. ಸಾಹಿತ್ಯ ಕ್ಷೇತ್ರದಿಂದ ಡಾ.ಸುಧಾಮೂರ್ತಿ, ಮೈಸೂರಿನ ಡಾ. ಲತಾ ರಾಜಶೇಖರ್, ಧಾರವಾಡದ ಡಾ. ಮಾಲತಿ ಪಟ್ಟಣಶೆಟ್ಟಿ, ಡಾ.ವೀಣಾ ಶಾಂತೇಶ್ವರ, ಹಾಸನದ ಡಾ.ಭಾನುಮುಸ್ತಾಕ್, ಕರಾವಳಿ ಕರ್ನಾಟಕದ ವೈದೇಹಿ, ಕೃಷ್ಣಪ್ಪ, ದೇವನೂರು ಮಹಾದೇವ, ಹಂಪನಾ, ಡಾ. ರಾಮೇಗೌಡ (ರಾಗೌ), ಕುಂ. ವೀರಭದ್ರಪ್ಪ, ಡಾ. ನಾಗತಿಹಳ್ಳಿ ಚಂದ್ರಶೇಖರ, ಗೊ.ರು. ಚನ್ನಬಸಪ್ಪ (ಗೊರುಚ), ಗಿರೀಶ್ ಕಾಸರವಳ್ಳಿ, ಡಾ.ಟಿ.ವಿ. ವೆಂಕಟಾಚಲಶಾಸ್ತ್ರಿ, ವಿಚಾರವಾದಿ ಪ್ರೊ.ಕೆ.ಎಸ್. ಭಗವಾನ್, ಡಾ.ಕೆ. ಷರೀಫ ಅವರ ಹೆಸರು ಪ್ರಸ್ತಾಪವಾಗಿತ್ತು. ಸಾಹಿತ್ಯೇತರ ಕ್ಷೇತ್ರಗಳಿಂದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ವಿಜ್ಞಾನಿ ಸಿ.ಎನ್.ಆರ್. ರಾವ್, ಮಾಜಿ ಶಾಸಕ ಮತ್ತು ಹೋರಾಟಗಾರ ವಾಟಾಳ್ ನಾಗರಾಜ್, ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಹೆಸರು ಶಿಫಾರಸ್ಸುಗೊಂಡಿತ್ತು.

ನಿಖಿಲ್ ಪರ ಭಾರಿ ಬೆಟ್ಟಿಂಗ್

ಎನ್‌ಡಿಎ ಮೈತ್ರಿಕೂಟದ ಮುಖಂಡರು ಭಾರಿ ಪ್ರತಿಷ್ಠೆಯಾಗಿ ತೆಗೆದುಕೊಂಡು ತಮ್ಮ ಅಭ್ಯರ್ಥಿಗಳ ಪರ ಹೋರಾಟ ನಡೆಸಿದ್ದರು.

ಸ್ವತಃ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ ನಡೆಸಿದ್ದರು. ಸ್ಥಳೀಯವಾಗಿ ಕ್ಷೇತ್ರದ ಚುನಾವಣೆ ಸಮಯದಲ್ಲಿ ಭಾರಿ ಬೆಟ್ಟಿಂಗ್ ನಡೆಯುತ್ತದೆ, ಈ ಬಾರಿಯೂ ಅದು ಮುಂದುವರೆದಿದೆ. ಕಣದಲ್ಲಿರುವ ಅಭ್ಯರ್ಥಿಯೊಬ್ಬರು ಬೆಟ್ಟಿಂಗ್‌ಗೆ ಪರೋಕ್ಷ ಪ್ರೋತ್ಸಾಹ ನೀಡುತ್ತಾರೆ, ಕಳೆದ ಲೋಕಸಭಾ ಚುನಾವಣೆ ವೇಳೆ ಬೆಂಗಳೂರು ಗ್ರಾಮಾಂತರ ಹಾಗೂ ಮಂಡ್ಯ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಬೆಟ್ಟಿಂಗ್ ನಡೆದಿತ್ತು.

ವರಿಷ್ಠರಿಗೆ ಪಕ್ಷನಿಷ್ಠರ ಆಗ್ರಹ

ಯಡಿಯೂರಪ್ಪ ಬಣದ 20ಕ್ಕೂ ಹೆಚ್ಚು ಹಿರಿಯ ಮುಖಂಡರ ಸಭೆಯಲ್ಲಿ, ರಾಜ್ಯಾಧ್ಯಕ್ಷರು ತೆಗೆದುಕೊಂಡಿರುವ ನಿರ್ಧಾರದ ವಿರುದ್ಧವಾಗಿ ನಡೆದುಕೊಂಡರೆ, ವರಿಷ್ಠರ ನಿಲುವಿಗೆ ವಿರುದ್ಧವಾಗಿ ಹೋದಂತಾಗುತ್ತದೆ ಎಂದಿದ್ದಾರೆ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನಡೆಸಿರುವ ಭ್ರಷ್ಟಾಚಾರ ಮತ್ತು ಜನವಿರೋಧಿ ನೀತಿಗಳನ್ನು ಖಂಡಿಸಿ ಪಕ್ಷ ಸರಿಯಾದ ಸಮಯದಲ್ಲಿ ಹೋರಾಟಕ್ಕೆ ಇಳಿದಿದೆ. ಇಂತಹ ಸಂದರ್ಭದಲ್ಲಿ ನಮ್ಮಲ್ಲೇ ಒಡಕು ಮೂಡುವುದು ಸರಿಯಲ್ಲ, ಲಕ್ಷಾಂತರ ಕಾರ್ಯಕರ್ತರ ಶ್ರಮದಿಂದ ಕರ್ನಾಟಕದಲ್ಲಿ ಪಕ್ಷ ಬಲವಾಗಿ ಬೆಳೆದಿದೆ. ನಾವು ಇಲ್ಲಿ ಯಾವುದೇ ವ್ಯಕ್ತಿ ಪೂಜೆ ಮಾಡುತ್ತಿಲ್ಲ, ಪಕ್ಷದ ನಿರ್ಧಾರದಂತೆ ಕೆಲಸ ಮಾಡಬೇಕೇ ಹೊರತು, ಅದಕ್ಕೆ ವಿರುದ್ಧ ಧ್ವನಿ ಎತ್ತುವುದು ಸರಿಯಲ್ಲ.

ನಾವು ಯಾರ ಪರವೂ ಇಲ್ಲ, ಪಕ್ಷದ ತೀರ್ಮಾನಕ್ಕೆ ತಲೆಬಾಗುತ್ತೇವೆ. ಇದನ್ನು ಎಲ್ಲರೂ ರೂಢಿಸಿಕೊಳ್ಳಬೇಕು. ನಾವು ಒಗ್ಗಟ್ಟಿನಿಂದ ಹೋರಾಟ ಮಾಡಿದರೆ, ಜನರಿಗೆ ನ್ಯಾಯ ದೊರಕಿಸಲು ಸಾಧ್ಯವಾಗುತ್ತದೆ. ವ್ಯಕ್ತಿ ಪ್ರತಿಷ್ಠೆ ಬಿಡೋಣ, ಕಾಂಗ್ರೆಸ್ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಟ ನಡೆಸೋಣ. ಅಧ್ಯಕ್ಷರ ಎಲ್ಲ ತೀರ್ಮಾನಗಳ ವಿರುದ್ಧ ಭಿನ್ನ ಹೇಳಿಕೆ ನೀಡುವವರ ವಿರುದ್ಧ ಪಕ್ಷದ ದೆಹಲಿ ವರಿಷ್ಠರನ್ನು ಭೇಟಿ ಮಾಡಿ ದೂರು ನೀಡಲು ಸಭೆ ನಿರ್ಧರಿಸಿದೆ. ವಕ್ಫ್ ಒತ್ತುವರಿ ತೆರವು ವಿರೋಧಿ ಹೋರಾಟದ ಹೆಸರಿನಲ್ಲಿ ಪಕ್ಷದ ಕೆಲವು ನಾಯಕರು ಅನಗತ್ಯವಾಗಿ ಗೊಂದಲ ಸೃಷ್ಟಿಸುತ್ತಿದ್ದು, ಇದು ಪಕ್ಷ ಸಂಘಟನೆ ಮತ್ತು ಕಾರ್ಯಕರ್ತರ ಮೇಲೆ ಗಂಭೀರ ಪರಿಣಾಮ ಬೀರುತ್ತದೆ, ಈ ಹಿನ್ನೆಲೆಯಲ್ಲಿ ಪಕ್ಷದ ವರಿಷ್ಠರು ತಕ್ಷಣವೇ ಮಧ್ಯ ಪ್ರವೇಶಿಸಿ ಎಲ್ಲ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು ಎಂದು ಸಭೆ ಆಗ್ರಹಿಸಿದೆ. ಪಕ್ಷದ ರಾಜ್ಯ ಘಟಕದ ಅಧ್ಯಕ್ಷರು ಮತ್ತು ವಿಧಾನಸಭೆಯ ಪ್ರತಿಪಕ್ಷದ ನಾಯಕರನ್ನು ಹೈಕಮಾಂಡ್ ನೇಮಕ ಮಾಡಿದ್ದು, ಈ ತೀರ್ಮಾನಕ್ಕೆ ಎಲ್ಲರೂ ತಲೆಬಾಗಬೇಕು. ಆದರೆ, ಕೆಲವರು ಈ ನಾಯಕತ್ವ ಒಪ್ಪುವುದಿಲ್ಲ ಎಂದು ಹೈಕಮಾಂಡ್‌ಗೇ ಸೆಡ್ಡು ಹೊಡೆಯಲು ಮುಂದಾಗಿದ್ದು, ಇಂಥವರನ್ನು ಯಾವುದೇ ಕಾರಣಕ್ಕೂ ಸಹಿಸಬಾರದು ಎಂದು ವರಿಷ್ಠರಿಗೆ ಮನವರಿಕೆ ಮಾಡಿಕೊಡಲು ಸಭೆ ತೀರ್ಮಾನಿಸಿದೆ.

ಬಿಪಿಎಲ್ ಕಾರ್ಡು ರದ್ದು, ವಕ್ಫ್ ಆಸ್ತಿ ತೆರವು, ಮುಡಾ ಹಗರಣ ಸೇರಿದಂತೆ ರಾಜ್ಯ ಸರ್ಕಾರದ ಹಲವು ಅಕ್ರಮಗಳ ವಿರುದ್ಧ ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ಯಶಸ್ವಿ ಹೋರಾಟ ನಡೆಸಲಾಗುತ್ತಿದೆ. ಇದಕ್ಕೆ ದೊಡ್ಡ ಪ್ರಮಾಣದಲ್ಲಿ ಜನಬೆಂಬಲವೂ ದೊರೆಯುತ್ತಿದೆ. ಇದನ್ನು ಸಹಿಸಲಾರದ ಕೆಲವರು ಆಡಳಿತ ಪಕ್ಷದ ಜೊತೆ ಸೇರಿ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಸಭೆಯಲ್ಲಿದ್ದ ಹಲವು ನಾಯಕರು ಆರೋಪಿಸಿದರು.

ಕೆಲವೇ ಕೆಲವು ಮಂದಿ ನಡೆಸುತ್ತಿರುವ ಚಟುವಟಿಕೆಗಳಿಂದ ಪಕ್ಷದಲ್ಲಿ ದೊಡ್ಡ ಗೊಂದಲ ಸೃಷ್ಟಿಯಾಗುವುದನ್ನು ತಪ್ಪಿಸಿ ಭಿನ್ನಮತೀಯರಿಗೆ ಎಚ್ಚರಿಕೆ ಸಂದೇಶ ರವಾನಿಸುವ ಅಗತ್ಯವಿದೆ.

ಬಿಪಿಎಲ್ ಪಡಿತರ ಚೀಟಿ ರದ್ದು, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ನಿಗದಿಪಡಿಸಿದ್ದ ಅನುದಾನ ವರ್ಗಾವಣೆ ಮತ್ತು ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಗೆ ಆಗ್ರಹಿಸಿ ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ನೇತೃತ್ವದಲ್ಲಿ ಹಿಂದುಳಿದ ಮತ್ತು ದಲಿತ ಸಮುದಾಯಗಳ ಸಮಾವೇಶ ನಡೆಸಲು ಸಭೆಯಲ್ಲಿ ನಿರ್ಧರಿಸಲಾಯಿತು. ರಾಜ್ಯದಲ್ಲಿ ನಡೆದ ವಿಧಾನಸಭೆ ಉಪ ಚುನಾವಣೆ ಮತ್ತು ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಫಲಿತಾಂಶ ನಂತರ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ಮತ್ತು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದ ನಿಯೋಗ ದೆಹಲಿಗೆ ತೆರಳಿ, ಪಕ್ಷದ ಅಧ್ಯಕ್ಷ ಜೆ.ಪಿ.ನಡ್ಡ ಅವರನ್ನು ಭೇಟಿ ಮಾಡಲು ನಿರ್ಧರಿಸಿದೆ. ವಿಧಾನಮಂಡಲದ ಅಧಿವೇಶನಕ್ಕೂ ಮುನ್ನ ಬಿಜೆಪಿ ದೆಹಲಿ ವರಿಷ್ಠರು ರಾಜ್ಯ ಬಿಜೆಪಿಯಲ್ಲಿನ ಎಲ್ಲಾ ಗೊಂದಲಗಳಿಗೆ ತೆರೆ ಎಳೆಯಬೇಕು. ಹಿಂದುಳಿದ ಮತ್ತು ದಲಿತ ಸಮುದಾಯಗಳ ಬೃಹತ್ ಸಮಾವೇಶ ನಡೆಸಲು ಅನುಮತಿ ನೀಡುವಂತೆ ಕೋರಲು ಸಭೆ ನಿರ್ಧರಿಸಿತು ಎಂದು ಮೂಲಗಳು ತಿಳಿಸಿವೆ.

ಸಂಡೂರಲ್ಲಿ ಕಾಂಗ್ರೆಸ್ ಗೆಲುವು

ಮತದಾನ (ಶೇ. 89) ನಡೆದಿದೆ. ಒಂದು ವೇಳೆ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಸೋಲಾದರೆ ಅದು ವಿರೋಧ ಪಕ್ಷಗಳಿಗೆ ಬಲ ನೀಡಲಿದೆ. ಈ ಕ್ಷೇತ್ರವನ್ನು ಡಿಕೆ ಶಿವಕುಮಾರ್ ಪ್ರತಿಷ್ಠೆಯ ಕಣವಾಗಿ ತೆಗೆದುಕೊಂಡಿದ್ದರು. ಚುನಾವಣೆಯಲ್ಲಿ ಗೆಲುವು ಸಾಧಿಸಲು ಎಲ್ಲಾ ರೀತಿಯ ಪ್ರಯತ್ನ ನಡೆಸಿದ್ದರು. ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದರೆ ರಾಮನಗರ ಜಿಲ್ಲೆಯಲ್ಲಿ ಜೆಡಿಎಸ್ ಬಲವನ್ನು ಕಳೆದುಕೊಂಡಂತಾಗುತ್ತದೆ.

ಶಿಗ್ಗಾವಿ ವಿಧಾನಸಭಾ ಕ್ಷೇತ್ರ: ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ರಾಜೀನಾಮೆ ನೀಡಿದ್ದರಿಂದ ತೆರವಾದ ಈ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಯಾಸೀರ್ ಖಾನ್ ಪಠಾಣ್, ಬಿಜೆಪಿಯಿಂದ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಬೊಮ್ಮಾಯಿ ಸ್ಪರ್ಧಿಸಿದ್ದು, ಇಲ್ಲಿ ಶೇ.80.72 ರಷ್ಟು ಮತದಾನವಾಗಿದ್ದು, ಒಟ್ಟು 1.91 ಲಕ್ಷ ಜನರು ಮತ ಚಲಾಯಿಸಿದ್ದಾರೆ. ಈ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ಭರತ್ ಬೊಮ್ಮಾಯಿ ಗೆಲ್ಲುವ ಸಾಧ್ಯತೆ ಇದೆ ಎಂದು ಸಮೀಕ್ಷೆಗಳು ಹೇಳಿವೆ.

ಸಂಡೂರು ವಿಧಾನಸಭಾ ಕ್ಷೇತ್ರ: ತುಕಾರಾಂ ಅವರ ರಾಜೀನಾಮೆಯಿಂದ ತೆರವಾಗಿದ್ದ ಈ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ತುಕಾರಾಂ ಅವರ ಪತ್ನಿ ಇ.ಅನ್ನಪೂರ್ಣ ಮತ್ತು ಎನ್‌ಡಿಎ ಯಿಂದ ಬಂಗಾರು ಹನುಮಂತ ಸ್ಪರ್ಧಿಸಿದ್ದರು. ಸಂಡೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2.34 ಲಕ್ಷ ಮತದಾರರಿದ್ದು, ಈ ಬಾರಿ 1.80 ಲಕ್ಷ ಮತದಾರರು ಮತ ಚಲಾವಣೆ ಮಾಡಿದ್ದಾರೆ. ಒಟ್ಟು ಶೇ. 76.24 ಮತದಾನ ನಡೆದಿದೆ. ಸಮೀಕ್ಷೆಯಂತೆ ಮೂರೂ ಪಕ್ಷಗಳೂ ತಮ್ಮ ತಮ್ಮ ಕ್ಷೇತ್ರವನ್ನು ಉಳಿಸಿಕೊಳ್ಳಲಿವೆ ಎಂದು ಹೇಳಲಾಗಿದ್ದು, ವಿಶೇಷವೆಂದರೆ ಮೂರೂ ಕ್ಷೇತ್ರಗಳಲ್ಲೂ ಸಂಸತ್‌ಗೆ ಆಯ್ಕೆಯಾದ ಕಾರಣ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ನಾಯಕರ ಕುಟುಂಬದವರಿಗೇ ಆಯಾ ಆಯಾ ಪಕ್ಷಗಳು ಸ್ಪರ್ಧಿಸಲು ಅವಕಾಶ ನೀಡಿದ್ದವು.

ನ.23ಕ್ಕೆ ವಿಚಾರಣೆ

ಏಕಸದಸ್ಯ ನ್ಯಾಯಪೀಠ ಕಟು ಅಭಿಪ್ರಾಯ ವ್ಯಕ್ತಪಡಿಸಿದೆ. ಅರ್ಜಿದಾರರು ಸಣ್ಣ ಭೂಮಾಲೀಕರು. ಆದರೆ, ಶಕ್ತಿಯುತ ರಾಜಕಾರಣಿಗಳ ರಾಜಕೀಯ ಕೆಸರೆರಚಾಟದಲ್ಲಿ ಅವರನ್ನು ಸಿಲುಕಿಸಲಾಗಿದೆ ಎಂದು ಆಕ್ಷೇಪಿಸಿದರು. ಅರ್ಜಿದಾರರು ಸಕಾರಣವಿಲ್ಲದೇ ಯಾತನೆ ಅನುಭವಿಸುವಂತಾಗಿದ್ದು, ಕ್ರಿಮಿನಲ್ ವಿಚಾರಣೆಗೆ ಗುರಿಯಾಗಬೇಕಿದೆ. ಆದ್ದರಿಂದ, ಈ ಮೇಲ್ಮನವಿಗಳನ್ನು ಇದೇ 22ಕ್ಕೆ ವಿಚಾರಣೆಗೆ ನಿಗದಿಪಡಿಸಬೇಕು ಎಂದರು. ಇದನ್ನು ಆಲಿಸಿದ ನ್ಯಾಯಪೀಠ ಇದೇ 23ಕ್ಕೆ ವಿಚಾರಣೆ ನಡೆಸುವುದಾಗಿ ತಿಳಿಸಿತು.

ಮೇಲ್ಮನವಿಗಳಲ್ಲಿ ಒಂದರಲ್ಲಿ ಫಿರ್ಯಾದುದಾರ ಸ್ನೇಹಮಯಿ ಕೃಷ್ಣ, ಕೇಂದ್ರ ಗೃಹ ಸಚಿವಾಲಯ, ಸಿಬಿಐ, ರಾಜ್ಯ ಸರ್ಕಾರ, ರಾಜ್ಯ ಪೊಲೀಸ್ ಮಹಾನಿರ್ದೇಶಕರು ಮತ್ತಿತರರನ್ನು ಪ್ರತಿವಾದಿಗಳನ್ನಾಗಿ ಕಾಣಿಸಲಾಗಿದೆ. ಮತ್ತೊಂದು ಮೇಲ್ಮನವಿಯಲ್ಲಿ ದೂರುದಾರರಾದ ಟಿ.ಜೆ.ಅಬ್ರಹಾಂ, ಸ್ನೇಹಮಯಿ ಕೃಷ್ಣ, ಎಸ್.ಪಿ.ಪ್ರದೀಪ್ ಕುಮಾರ್, ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಮತ್ತಿತರರನ್ನು ಪ್ರತಿವಾದಿಗಳನ್ನಾಗಿ ಕಾಣಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ಒಡೆತನದ್ದು ಎನ್ನಲಾದ ಕೃಷಿ ಭೂಮಿಯನ್ನು ಮುಡಾ ವಶಪಡಿಸಿಕೊಂಡು ಅದಕ್ಕೆ ಪರ್ಯಾಯವಾಗಿ 14 ನಿವೇಶನಗಳನ್ನು ಪ್ರಮುಖ ಜಾಗದಲ್ಲಿ ಹಂಚಿಕೆ ಮಾಡಲಾಗಿದೆ ಎನ್ನುವುದು ವಿವಾದದ ಕೇಂದ್ರ ಬಿಂದು. ಪರಿಹಾರ ರೂಪದಲ್ಲಿ ನೀಡಲಾದ ನಿವೇಶನಗಳ ಹಂಚಿಕೆ ಪ್ರಕ್ರಿಯೆಯೇ ಅಕ್ರಮದಿಂದ ಕೂಡಿದೆ. ಇಡೀ ಪ್ರಕ್ರಿಯೆಯಲ್ಲಿ ಸಿದ್ದರಾಮಯ್ಯನವರು ಪ್ರಭಾವ ಬೀರಿರುವುದು ಕಂಡು ಬಂದಿದೆ ಎಂದು ಆರೋಪಿಸಲಾದ ಮೂರು ಖಾಸಗಿ ದೂರುಗಳನ್ನು ರಾಜ್ಯಪಾಲರಿಗೆ ಸಲ್ಲಿಸಲಾಗಿತ್ತು. ಇವುಗಳನ್ನು ಆಧರಿಸಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರು ಸಿದ್ದರಾಮಯ್ಯ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ–1988ರ ಕಲಂ (ಪಿಸಿ ಕಾಯ್ದೆ) 17ಎ ಅಡಿ ತನಿಖೆ ನಡೆಸಲು 2024ರ ಆಗಸ್ಟ್ 17ರಂದು ಮಂಜೂರಾತಿ ನೀಡಿದ್ದರು.

ಪಾಲಯ್ಯ ಮತ್ತೆ ವಿಚಾರಣೆ

ಅವರನ್ನು ಲೋಕಾಯುಕ್ತರು ವಿಚಾರಣೆ ಮಾಡಿದರು. ಮೈಸೂರಿನ ದಿವಾನ್ಸ್ ರಸ್ತೆಯ ಲೋಕಾಯುಕ್ತ ಕಚೇರಿಯಲ್ಲಿ ಇಂದು ಬೆಳಿಗ್ಗೆ 10.45ರಿಂದ 1 ಗಂಟೆವರೆಗೆ ಪಾಲಯ್ಯ ಅವರನ್ನು ವಿಚಾರಣೆ ನಡೆಸಿ, ಹಲವು ಮಾಹಿತಿಗಳನ್ನು ಕಲೆ ಹಾಕಿದರು.

ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣವನ್ನು ಸಿಬಿಐಗೆ ವಹಿಸುವ ಸಂಬಂಧ ನ.26ರಂದು ಹೈಕೋರ್ಟ್‌ನಲ್ಲಿ ವಿಚಾರಣೆ ನಡೆಯಲಿದ್ದು, ನ.24 ರೊಳಗೆ ಆಗಿರುವ ತನಿಖಾ ಪ್ರಕ್ರಿಯೆಗಳ ಮಧ್ಯಂತರ ವರದಿಯನ್ನು ನವೆಂಬರ್ 25ರೊಳಗೆ ಸಲ್ಲಿಸಬೇಕಿರುವ ಹಿನ್ನೆಲೆಯಲ್ಲಿ ಲೋಕಾಯುಕ್ತರು ಎರಡನೇ ಹಂತದಲ್ಲಿ ನಡೆಸುತ್ತಿರುವ ವಿಚಾರಣೆ ಮಹತ್ವ ಪಡೆದಿದೆ.

ಮುಡಾ, ಶೇಕಡ 50:50 ಅನುಪಾತದಡಿ 14 ನಿವೇಶನಗಳ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರಿಗೆ ಅಕ್ರಮವಾಗಿ ಮಂಜೂರು ಮಾಡಲಾಗಿದೆ ಎಂಬ ಆರೋಪದ ಬಗ್ಗೆ ತನಿಖೆ ನಡೆಸಿ ಡಿ.24ರೊಳಗೆ ವರದಿ ನೀಡುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿರುವ ಹಿನ್ನೆಲೆ ಲೋಕಾಯುಕ್ತರು ವಿಚಾರಣೆ ತ್ವರಿತಗೊಳಿಸಿದ್ದಾರೆ.

ಈಗಾಗಲೇ ಹಗರಣದ ಆರೋಪಿಗಳಾದ ಎ1 ಸಿದ್ದರಾಮಯ್ಯ, ಎ2 ಸಿದ್ದರಾಮಯ್ಯನವರ ಪತ್ನಿ ಪಾರ್ವತಿ, ಎ3 ಸಿದ್ದರಾಮಯ್ಯನವರ ಭಾವಮೈದ ಮಲ್ಲಿಕಾರ್ಜುನಸ್ವಾಮಿ ಹಾಗೂ ಎ4 ಆರೋಪಿ ಜಮೀನು ಮಾಲೀಕ ದೇವರಾಜು ಅವರನ್ನು ವಿಚಾರಣೆ ಮಾಡಿದ್ದಾರೆ. ಈಗ ಎರಡನೇ ಹಂತದಲ್ಲಿ ಲೋಕಾಯುಕ್ತರು ವಿಚಾರಣೆ ಗೊಳಪಡಿಸಿದ್ದಾರೆ. ಎರಡನೇ ಬಾರಿ ದೇವರಾಜು ಇಂದು ಲೋಕಾಯುಕ್ತ ಎಸ್ಪಿ ಮುಂದೆ ವಿಚಾರಣೆಗೆ ಹಾಜರಾಗುತ್ತಾರೆ ಎನ್ನಲಾಗಿತ್ತು. ಆದರೆ ಅವರು ಹಾಜರಾಗಲಿಲ್ಲ.

ಅಗತ್ಯವಿದ್ದರೆ ಮತ್ತೆ ವಿಚಾರಣೆಗೆ ಹಾಜರಾಗುತ್ತೇನೆ...

ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರಿಗೆ ನಿವೇಶನಗಳು ಮಂಜೂರಾದ ಪ್ರಕರಣ ಸಂಬಂಧ ಲೋಕಾಯುಕ್ತ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು, ಅಗತ್ಯವಿದ್ದರೆ ಮತ್ತೆ ವಿಚಾರಣೆಗೆ ಹಾಜರಾಗ್ತೇನೆ ಎಂದು ಮುಡಾ ಮಾಜಿ ಆಯುಕ್ತ ಪಾಲಯ್ಯ ತಿಳಿಸಿದರು. ಲೋಕಾಯುಕ್ತ ವಿಚಾರಣೆ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ನವರ ಪತ್ನಿ ಪಾರ್ವತಿ ಅವರು ಪತ್ರ ಮುಖೇನಾ ನಿವೇಶನಕ್ಕೆ ಮನವಿ ಮಾಡಿದ್ದರು. ಆಗ ನಾನು ಮುಡಾ ಆಯುಕ್ತನಾಗಿದ್ದೆ. ಈ ಹಿನ್ನೆಲೆಯಲ್ಲಿ ಲೋಕಾಯುಕ್ತರು ಕೇಳಿದ ಪ್ರಶ್ನೆಗಳಿಗೆ ಉತ್ತರ ನೀಡಿದ್ದೇನೆ ಎಂದರು. ಮೊದಲ ಬಾರಿ ಜಮೀನಿಗೆ ಸಂಬಂಧಿಸಿದಂತೆ ಮಾಹಿತಿ ಕೇಳಿದ್ದರು. ಆ ಸಂದರ್ಭದಲ್ಲಿ ನಾನು ಅಪರ ಜಿಲ್ಲಾಧಿಕಾರಿಯಾಗಿದ್ದು, ಅಂದಿನ ನಿರ್ಧಾರಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡಿದ್ದೇನೆ. ಅಗತ್ಯವಿದ್ದರೆ ಮತ್ತೆ ವಿಚಾರಣೆಗೆ ಹಾಜರಾಗ್ತೇನೆ. ಒಬ್ಬ ಅಧಿಕಾರಿಯಾಗಿದ್ದು, ತನಿಖಾ ಸಂಸ್ಥೆಗೆ ಸಹಕರಿಸುವುದು ನನ್ನ ಜವಾಬ್ದಾರಿ ಎಂದು ಪಾಲಯ್ಯ ಸ್ಪಷ್ಟಪಡಿಸಿದರು.

ಎಚ್‌ಎಸ್‌ಆರ್‌ಪಿಗೆ ಡಿ.4ರವರೆಗೆ ಅವಕಾಶ

ವಿಚಾರಣೆ ವೇಳೆ ಮೇಲ್ಮನವಿದಾರರ ಪರ ಹಿರಿಯ ವಕೀಲ ಆದಿತ್ಯ ಸೋಂಧಿ, ರಾಜ್ಯ ಸರ್ಕಾರ ಮಧ್ಯಂತರ ಆದೇಶವನ್ನು ಚಾಲ್ತಿಯಲ್ಲಿ ಇರಿಸಿ, ಏಕಸದಸ್ಯ ನ್ಯಾಯಪೀಠವೇ ಪ್ರಕರಣ ನಿರ್ಧರಿಸಬಹುದು ಎಂಬ ಅಡ್ವೊಕೇಟ್ ಜನರಲ್ ಸಲಹೆಯ ಬಗ್ಗೆ ಪರಿಶೀಲಿಸಬೇಕಿದೆ ಎಂದರು. ಇದಕ್ಕೆ ಪ್ರತಿಯಾಗಿ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ, ಏಕಸದಸ್ಯ ಪೀಠದ ಮಧ್ಯಂತರ ಆದೇಶವನ್ನು ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಲಾಗಿದೆ. ಈಗಾಗಲೇ ಚಾಲ್ತಿಯಲ್ಲಿರುವ ಮಧ್ಯಂತರ ಆದೇಶ ಮುಂದುವರಿಯಲಿ. ಜೊತೆಗೆ, ಏಕಸದಸ್ಯ ಪೀಠವೇ ಪ್ರಕರಣದ ಕುರಿತಂತೆ ನಿರ್ಧರಿಸಲು ಆದೇಶಿಸಬಹುದು ಎಂದು ಸಲಹೆ ನೀಡಿದರು. ಇದಕ್ಕೆ ಸಮ್ಮತಿಸಿದ ನ್ಯಾಯಪೀಠವು ಮಧ್ಯಂತರ ಆದೇಶವನ್ನು ವಿಸ್ತರಿಸಿ, ವಿಚಾರಣೆಯನ್ನು ಡಿ.4ಕ್ಕೆ ಮುಂದೂಡಿತು.

ಜಾರ್ಖಂಡ್‌ನಲ್ಲಿ ಎನ್‌ಡಿಎ ಅಧಿಕಾರಕ್ಕೆ!

ಸಮೀಕ್ಷೆಗಳು ಕಾಂಗ್ರೆಸ್ ನೇತೃತ್ವದ ಐಎನ್‌ಡಿಐಎ ಮೈತ್ರಿಕೂಟ ಅಧಿಕಾರ ಹಿಡಿಯಲಿದೆ ಎಂದು ಹೇಳಿದ್ದರೇ, ಉಳಿದಂತೆ ಬಹುತೇಕ ಎಲ್ಲಾ ಸಮೀಕ್ಷೆಗಳು ಎನ್‌ಡಿಎ ಸರ್ಕಾರ ರಚಿಸಲಿದೆ ಎಂದು ಹೇಳಿವೆ. ಮಾರ್ಟಿಜ್: ಎನ್‌ಡಿಎ 41–47, ಐಎನ್‌ಡಿಐಎ 25–30, ಇತರೆ 1–4, ಪೀಪಲ್ಸ್ ಪಲ್ಸ್: ಎನ್‌ಡಿಎ 44–53, ಐಎನ್‌ಡಿಐಎ 25–37, ಇತರೆ 5–9, ಪಿ–ಮಾರ್ಕ್: ಎನ್‌ಡಿಎ 31–40 ಐಎನ್‌ಡಿಐಎ 37–47, ಇತರೆ 1–6, ಆಕ್ಸಿಸ್ ಮೈ ಇಂಡಿಯಾ: ಎನ್‌ಡಿಎ 25, ಐಎನ್‌ಡಿಐಎ 53, ಇತರೆ 3, ಟೈಮ್ಸ್ ನೌ–ಜೆವಿಸಿ: ಎನ್‌ಡಿಎ: 40–44, ಐಎನ್‌ಡಿಐಎ 30–40, ಇತರೆ 1, ದೈನಿಕ್ ಭಾಸ್ಕರ್: ಎನ್‌ಡಿಎ 37–40 ಐಎನ್‌ಡಿಐಎ 36–39, ಇತರೆ 0–2, ಪೋಲ್ ಆಫ್ ಪೋಲ್ಸ್: ಎನ್‌ಡಿಎ 39, ಎಐಎನ್‌ಡಿಐಎ 38, ಇತರೆ 4 ಸ್ಥಾನ ಪಡೆಯಲಿವೆ ಎಂದು ಹೇಳಿದೆ.

ಮೈಸೂರು ಪೊಲೀಸ್ ಆಯುಕ್ತರಿಂದ ವಿವಿಧ ಠಾಣೆಗಳ ಅಪರಾಧ ತನಿಖಾ ಪ್ರಗತಿ ಪರಿಶೀಲನೆ





ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಮಂಗಳವಾರ ನಜರ್‌ಬಾದ್‌ನ ತಮ್ಮ ಕಚೇರಿ ಸಭಾಂಗಣದಲ್ಲಿ ನಗರದ ವಿವಿಧ ಠಾಣೆಗಳಲ್ಲಿನ ಅಪರಾಧ ಪ್ರಕರಣಗಳ ತನಿಖಾ ಪ್ರಗತಿ ಪರಿಶೀಲಿಸಿದರು. ಬಲಚಿತ್ರದಲ್ಲಿ ದಸರಾ ಮಹೋತ್ಸವದಲ್ಲಿ ಕರ್ತವ್ಯ ನಿರ್ವಹಿಸಿದ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗೆ ಸೀಮಾ ಲಾಟ್ಕರ್ ಪ್ರಶಂಸಾ ಪತ್ರ ವಿತರಿಸಿದರು.

ಮೈಸೂರು, ನ.20 (ಆರ್‌ಕೆ)– ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಮಂಗಳವಾರ ಬೆಳಗ್ಗೆಯಿಂದ ಸಂಜೆವರೆಗೂ ನಜರ್ ಬಾದ್‌ನ ತಮ್ಮ ಕಚೇರಿ ಸಭಾಂಗಣದಲ್ಲಿ ನಗರದ ವಿವಿಧ ಠಾಣೆಗಳಲ್ಲಿನ ಅಪರಾಧ ಪ್ರಕರಣಗಳ ತನಿಖಾ ಪ್ರಗತಿಗೆ ಸಂಬಂಧಿಸಿದಂತೆ ಪರಿಶೀಲಿಸಿದರು.

ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ.ಮುತ್ತುರಾಜ್, ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಎಸ್.ಜಾಹ್ನವಿ, ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ, ಎನ್.ಆರ್. ಉಪ ವಿಭಾಗದ ಅಶ್ವಥ ನಾರಾಯಣ, ವಿಜಯನಗರ ಉಪ ವಿಭಾಗದ ಎಸ್.ಜಿ.ಗಜೇಂದ್ರಪ್ರಸಾದ್, ಸಿಸಿಬಿ ಎಸಿಪಿ ಸಂದೇಶ್‌ಕುಮಾರ್, ಸಂಚಾರ ಉಪವಿಭಾಗದ ಪರಶುರಾಮಪ್ಪ, ಎಲ್ಲಾ ಸಿವಿಲ್, ಸಂಚಾರ ಠಾಣೆಗಳ ಇನ್‌ಸ್ಪೆಕ್ಟರ್‌ಗಳು, ಶ್ವಾನದಳ, ಬಾಂಬ್ ಪತ್ತೆದಳ, ನಿಷ್ಕ್ರಿಯ ದಳ ಹಾಗೂ ಬೆರಳಚ್ಚು ಮುದ್ರೆ ಘಟಕದ ಅಧಿಕಾರಿಗಳು ಸಭೆಯಲ್ಲಿ ಅಪರಾಧ ನಿಯಂತ್ರಣದಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ನಗರ ಪೊಲೀಸ್ ಆಯುಕ್ತರಿಗೆ ವಿವರಿಸಿದರು.

ಮೈಸೂರು ಸಾಂಸ್ಕೃತಿಕ ನಗರಿ. ಇಲ್ಲಿ ಪಾರಂಪರಿಕ ಕಟ್ಟಡಗಳು, ಪ್ರವಾಸಿ ತಾಣಗಳು ಇರುವುದರಿಂದ ದೇಶ–ವಿದೇಶಗಳಿಂದ ಲಕ್ಷಾಂತರ ಮಂದಿ ಪ್ರವಾಸಿಗರು ಆಗಮಿಸುತ್ತಾರೆ. ಅವರ ಸುರಕ್ಷತೆಗೆ ಹೆಚ್ಚು ಗಮನ ಹರಿಸಬೇಕು. ಪ್ರತಿಯೊಬ್ಬ ಪೊಲೀಸ್ ಅಧಿಕಾರಿ, ಹಾಗೂ ಸಿಬ್ಬಂದಿ ಜನಸ್ನೇಹಿಯಾಗಿ ಕೆಲಸ ಮಾಡುವ ಮೂಲಕ ಮೈಸೂರು ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಅತೀ ಮುಖ್ಯವಾಗಿದೆ. ಜನಸಾಮಾನ್ಯರ ಸುರಕ್ಷತೆಯಿಂದ ಜೀವನ ನಡೆಸುವಂತಾಗಬೇಕು. ಅದಕ್ಕಾಗಿ ಪ್ರತಿಯೊಬ್ಬ ಪೊಲೀಸ್ ಅಧಿಕಾರಿಯು ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸುವುದು ಅತ್ಯವಶ್ಯ ಎಂದು ಕಿವಿಮಾತು ಹೇಳಿದರು.

> ಪ್ರತಿ ಅಪರಾಧ ಪ್ರಕರಣದ ಅಪರಾಧಿಗಳು ಶಿಕ್ಷೆಯಿಂದ ನುಣುಚಿಕೊಳ್ಳದಂತೆ ದಕ್ಷ ರೀತಿ ತನಿಖೆ ನಡೆಸಬೇಕು. ಯಾವುದೇ ಅಪರಾಧ ಪ್ರಕರಣ ನಡೆದಾಗ ಕಡ್ಡಾಯವಾಗಿ ಸ್ಥಳಕ್ಕೆ ಧಾವಿಸಿದಲ್ಲಿ ಘಟನೆಯ ನೈಜ ಸ್ಥಿತಿ ಅರ್ಥವಾಗುವುದಲ್ಲದೆ, ಅದಕ್ಕೆ ಪೂರಕ ಸಾಕ್ಷ್ಯಾಧಾರಗಳು ದೊರೆಯುತ್ತವೆ. ಸರಿಯಾಗಿ ತನಿಖೆ ನಡೆಸಿ ಅಗತ್ಯ ದಾಖಲೆ ಹಾಗೂ ಸಾಕ್ಷ್ಯಾಧಾರಗಳೊಂದಿಗೆ ನ್ಯಾಯಾಲಯಕ್ಕೆ ಆರೋಪಿಗಳ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿ, ವಿಚಾರಣೆ ವೇಳೆ ಸಮಂಜಸ ಮಾಹಿತಿ ಒದಗಿಸಿದಲ್ಲಿ ಆರೋಪಿಗಳಿಗೆ ಶಿಕ್ಷೆಯಾಗುವುದರಲ್ಲಿ ಸಂಶಯವಿಲ್ಲ. ಒಂದು ವೇಳೆ ಕಾಟಾಚಾರದ ತನಿಖೆ ನಡೆಸಿದಲ್ಲಿ ಆರೋಪಿಗಳು ಖುಲಾಸೆಯಾಗುವ ಸಾಧ್ಯತೆ ಇರುತ್ತದೆ.
> –ಸೀಮಾ ಲಾಟ್ಕರ್, ಮೈಸೂರು ನಗರ ಪೊಲೀಸ್ ಆಯುಕ್ತರು.

ಕೇವಲ ದಸರಾದಂತಹ ಮಹಾ ಉತ್ಸವ ವೇಳೆ ಮಾತ್ರವಲ್ಲದೆ ವರ್ಷದ 365 ದಿನವೂ ಜವಾಬ್ದಾರಿಯಿಂದ ಕೆಲಸ ಮಾಡುವ ಮೂಲಕ ಯಾವುದೇ ರೀತಿಯ ಅಹಿತಕರ ಘಟನೆಗಳು, ಅಪರಾಧ ಕೃತ್ಯಗಳು ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಇನ್ನಿತರೆ ಬೆಳವಣಿಗೆಗಳಾಗದಂತೆ ಕರ್ತವ್ಯ ನಿರ್ವಹಿಸುವ ಮೂಲಕ ಇಲಾಖೆ ಹಾಗೂ ಸರ್ಕಾರಕ್ಕೆ ಒಳ್ಳೆಯ ಹೆಸರು ತರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಅಪರಾಧ ಕೃತ್ಯಗಳನ್ನು ನಿಗ್ರಹಿಸುವುದು ಹಾಗೂ ಪತ್ತೆ ಮಾಡುವುದು ಸಹ ಒಂದು ಸವಾಲು. ಹಗಲು–ರಾತ್ರಿ ಗಸ್ತು ತೀವ್ರಗೊಳಿಸಿ ಆಯಾಯ ವ್ಯಾಪ್ತಿಯ ಅಧಿಕಾರಿಗಳು, ಸಿಬ್ಬಂದಿ ಕರ್ತವ್ಯ ನಿರ್ವಹಿಸಬೇಕು. ಸಾರ್ವಜನಿಕರೊಂದಿಗೆ ಉತ್ತಮ ಬಾಂಧವ್ಯ ಇರಿಸಿಕೊಂಡು ಕಾಲಕಾಲಕ್ಕೆ ಮಾಹಿತಿ ಸಂಗ್ರಹಿಸಿದರೆ ಅಪರಾಧ ಕೃತ್ಯಗಳ ನಿಯಂತ್ರಿಸಬಹುದು. ತ್ವರಿತವಾಗಿ ಪ್ರಕರಣಗಳ ಇತ್ಯರ್ಥಕ್ಕೆ ಸಹಕಾರಿಯಾಗಲಿದೆ ಎಂದು ಸೀಮಾ ಲಾಟ್ಕರ್ ಅಭಿಪ್ರಾಯಪಟ್ಟರು.

ಚಿನ್ನದ ಸರ ಅಪಹರಣ, ಮನೆಗಳ್ಳತನ, ದರೋಡೆ, ಸುಲಿಗೆ, ಹಲ್ಲೆ, ಕೊಲೆ ಹಾಗೂ ವಂಚನೆಗಳಂತಹ ಸೈಬರ್ ಕ್ರೈಂಗಳನ್ನು ನಿಯಂತ್ರಿಸಿ, ಸಾರ್ವಜನಿಕರಲ್ಲಿ ಪೊಲೀಸರ ಮೇಲೆ ವಿಶ್ವಾಸಾರ್ಹತೆ ಮೂಡುವಂತೆ ಮಾಡಬೇಕು. ಠಾಣೆಗೆ ಬರುವಂತಹ ಸಾಮಾನ್ಯ ಪ್ರಜೆಯ ಅಹವಾಲನ್ನು ಸೌಜನ್ಯ ರೀತಿ ಆಲಿಸಿದರೆ ಅರ್ಧ ಸಮಸ್ಯೆ ಪರಿಹಾರವಾದಂತೆ. ಒಂದು ವೇಳೆ ಪ್ರಕರಣ ಗಂಭೀರ ಸ್ವರೂಪದ್ದಾಗಿದ್ದರೆ ಕಾನೂನಿನ ಪ್ರಕಾರ ಪ್ರಕರಣ ದಾಖಲಿಸಿ, ತನಿಖೆ ಕೈಗೊಳ್ಳಬೇಕು. ಆಗ ಮಾತ್ರ ದೂರುದಾರನಿಗೆ ನ್ಯಾಯದ ಭರವಸೆ ಮೂಡಲು ಸಾಧ್ಯ ಎಂದ ಅವರು, ಪ್ರತೀ ಠಾಣೆಯಲ್ಲಿ ದಾಖಲಾಗಿರುವ ಅಪರಾಧ ಪ್ರಕರಣಗಳು, ತನಿಖಾ ಹಂತ, ವಿಳಂಬವಾಗಿದ್ದರೆ ಕಾರಣ, ಇತ್ಯರ್ಥಗೊಳಿಸಲು ತೊಡಕಾಗಿರುವ ಅಂಶಗಳು, ಬಾಕೀ ಇರುವ ಅಪರಾಧ ಪ್ರಕರಣಗಳ ಸಂಖ್ಯೆ, ಇನ್ನಿತರ ವಿಷಯಗಳ ಬಗ್ಗೆಯೂ ಸಮಾಲೋಚನೆ ನಡೆಸಿ, ಮಾಹಿತಿ ಪಡೆದುಕೊಂಡರು.

ಕೋಬ್ರಾ, ಚೀತಾ, ಪೊಲೀಸ್ ಕಂಟ್ರೋಲ್ ರೂಂ, ಗರುಡಾ ವಾಹನಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿ, ಆಯಾಯ ಠಾಣಾ ವ್ಯಾಪ್ತಿಯಲ್ಲಿ ಗಸ್ತು ತಿರುಗಿ ಸಂಭವಿಸಬಹುದಾದ ಅಪರಾಧ ಪ್ರಕರಣಗಳನ್ನು ತಪ್ಪಿಸಬೇಕು. ಹಾಗೂ ರಾತ್ರಿ ವೇಳೆ ಗಸ್ತು ತೀವ್ರಗೊಳಿಸಿ ನಿಯಮಬಾಹಿರ ಚಟುವಟಿಕೆಗಳ ಮೇಲೆ ನಿಗಾ ವಹಿಸಿ ಕ್ರಮ ವಹಿಸಬೇಕು. ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ವಿಮಾನ ನಿಲ್ದಾಣಗಳಂತಹ ಸಾರ್ವಜನಿಕರ ಸ್ಥಳದಲ್ಲಿ ಹೆಚ್ಚು ಗಸ್ತು ನಡೆಸಿ, ಮಾಹಿತಿ ಸಂಗ್ರಹಿಸಬೇಕು. ಭಯೋತ್ಪಾದನಾ ಕೃತ್ಯಗಳ ಮೇಲೆ ಕಟ್ಟೆಚ್ಚರ ವಹಿಸಿ, ಮಫ್ತಿಯಲ್ಲಿ ಮಾಹಿತಿ ಸಂಗ್ರಹಿಸಿದಲ್ಲಿ ಸಂಭವಿಸಬಹುದಾದ ಅಪರಾಧ ಕೃತ್ಯಗಳ ತಡೆಯಬಹುದು. ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಹಣ ಸುಲಿಗೆ, ಬಡ್ಡಿ ವ್ಯವಹಾರ, ವಂಚನೆಗಳಂತಹ ಕೃತ್ಯಗಳು ಇತ್ತೀಚಿನ ದಿನಗಳಲ್ಲಿ ಸಾಮಾನ್ಯವಾಗಿವೆ. ಅವುಗಳನ್ನ ನಿಗ್ರಹಿಸುವಲ್ಲಿ ಸಮರ್ಪಕ ರೀತಿ ಕ್ರಮ ಕೈಗೊಳ್ಳುವಂತೆಯೂ ಸೂಚಿಸಿದರು.

ಕಾನೂನು–ಸುವ್ಯವಸ್ಥೆಯಷ್ಟೇ ಅಲ್ಲದೆ ಸಂಚಾರ ವಿಭಾಗದಲ್ಲೂ ಸಕ್ರಿಯವಾಗಿ ಕೆಲಸ ಮಾಡಿ ಸಂಚಾರ ನಿಯಮ ಉಲ್ಲಂಘಿಸುವುದನ್ನು ತಪ್ಪಿಸಬೇಕು. ನಮ್ಮ ಉದ್ದೇಶ ಕೇವಲ ಪ್ರಕರಣ ದಾಖಲಿಸಿ ದಂಡ ವಸೂಲಿ ಮಾಡುವುದೇ ಆಗಿರಬಾರದು. ಬದಲಾಗಿ ಸಂಚಾರ ನಿಯಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಅಪಘಾತಗಳನ್ನು ತಪ್ಪಿಸಬೇಕು. ಈ ಕಾರ್ಯ ಪರಿಣಾಮಕಾರಿಯಾಗಿ ಆದಲ್ಲಿ ರಸ್ತೆ ಅಪಘಾತಗಳು ಕಡಿಮೆಯಾಗಿ ಅಮೂಲ್ಯ ಜೀವಗಳು ಉಳಿಯುತ್ತವೆ. ಆ ನಿಟ್ಟಿನಲ್ಲಿ ಸಂಚಾರ ಪೊಲೀಸರು ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಕಳೆದ ಅಕ್ಟೋಬರ್‌ನಲ್ಲಿ ನಡೆದ ದಸರಾ ಮಹೋತ್ಸವಕ್ಕೆ ಲಕ್ಷಾಂತರ ಮಂದಿ ಆಗಮಿಸಿದ್ದರೂ ಯಾವುದೇ ಸಣ್ಣಪುಟ್ಟ ಅಹಿತಕರ ಘಟನೆಗಳು ನಡೆಯದಂತೆ ಕಾರ್ಯನಿರ್ವಹಿಸಿದ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳನ್ನು ಪ್ರಶಂಸಿಸಿದ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಇದೇ ವೇಳೆ ಪ್ರಶಂಸಾ ಪತ್ರವನ್ನು ವಿತರಿಸಿದರು.

ಮೈಸೂರು ಪೊಲೀಸರಿಗೆ ಇಡೀ ಕರ್ನಾಟಕದಲ್ಲಿ ಉತ್ತಮ ಹೆಸರಿದೆ. ಅದನ್ನು ಮುಂದುವರಿಸಿಕೊಂಡು ಹೋಗೋಣ. ಕರ್ತವ್ಯದ ಒತ್ತಡದಲ್ಲಿ ನಿಮ್ಮ ಹಾಗೂ ಕುಟುಂಬದ ಆರೋಗ್ಯವನ್ನು ಕಡೆಗಣಿಸದಿರಿ. ಕಾಲಾವಕಾಶ ಸಿಕ್ಕಾಗ ಯೋಗ, ಧ್ಯಾನ ಇತ್ಯಾದಿಗಳ ಮೂಲಕ ಮಾನಸಿಕ ಒತ್ತಡವನ್ನು ಕಡಿಮೆ ಮಾಡಿಕೊಂಡು ದೈಹಿಕ, ಮಾನಸಿಕ ಸದೃಢತೆ ಕಾಯ್ದುಕೊಂಡು ಪರಿಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸಿ ಎಂದರು.

ವಾರಸುದಾರರಿಗೆ ಪರ್ಸ್ ತಲುಪಿಸಿದ ಪತ್ರಿಕಾ ವಿತರಕ ಚಂದ್ರಶೇಖರ್



ತನಗೆ ಸಿಕ್ಕಿದ ಪರ್ಸ್ ಅನ್ನು ವಾರಸುದಾರರಾದ ಪ್ರಕಾಶ್ ಅವರಿಗೆ ಮಂಗಳವಾರ ರಾತ್ರಿ ಮೈಸೂರಿನ ವಿವಿ ಮೊಹಲ್ಲಾದಲ್ಲಿ ಪತ್ರಿಕಾ ವಿತರಕ ಚಂದ್ರಶೇಖರ್ ಹಸ್ತಾಂತರಿಸಿದರು. ಪ್ರಶಾಂತ್ ಹೆಗಡೆ ಹಾಗೂ ರವೀಂದ್ರ ಫೋರೆ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ನ.20(ಆರ್‌ಕೆ)– ಮನೆ–ಮನೆಗೆ ಪೇಪರ್ ಹಾಕುವ ವೇಳೆ ರಸ್ತೆಯಲ್ಲಿ ಸಿಕ್ಕಿದ ಪರ್ಸ್ ಅನ್ನು, ಅದರ ವಾರಸುದಾರರ ಪತ್ತೆ ಹಚ್ಚಿ ತಲುಪಿಸುವ ಮೂಲಕ ಪತ್ರಿಕಾ ವಿತರಕರೊಬ್ಬರು ಪ್ರಾಮಾಣಿಕತೆ ಮೆರೆದಿದ್ದಾರೆ.

ಮೈಸೂರಿನ ಪಡುವಾರಹಳ್ಳಿ 7ನೇ ಮೇನ್ ನಿವಾಸಿ ಪಿ.ಚಂದ್ರಶೇಖರ್, ತನ್ನ ಸ್ನೇಹಿತರ ಮೂಲಕ ವಾರಸುದಾರರನ್ನು ಪತ್ತೆ ಮಾಡಿ, ತಮಗೆ ಸಿಕ್ಕಿದ ಪರ್ಸ್ ಅನ್ನು ಹಿಂದಿರುಗಿಸಿದ್ದಾರೆ. ಮಂಗಳವಾರ ಸಂಜೆ ಜಯಲಕ್ಷ್ಮೀಪುರಂನ ಹ್ಯಾಬಿಟ್ಯಾಟ್ ಮಾಲ್ ಬಳಿ ಪತ್ರಿಕೆ ಹಂಚುವ ವೇಳೆ ರಸ್ತೆಯಲ್ಲಿ ಪರ್ಸ್ ಸಿಕ್ಕಿತ್ತು. ಅದರಲ್ಲಿ ಬ್ಯಾಂಕ್ ಎಟಿಎಂ ಕಾರ್ಡ್‌ಗಳು, ಕ್ರೆಡಿಟ್ ಕಾರ್ಡ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ಸೇರಿದಂತೆ 15 ಬಗೆಯ ಕಾರ್ಡ್‌ಗಳು, ಜೊತೆಗೆ ಹಣವೂ ಇತ್ತು. ಆದರೆ ಅದು ಯಾರದೆಂಬುದರ ಬಗ್ಗೆ ಯಾವುದೇ ಸುಳಿವು ಇರದ ಕಾರಣ, ಚಂದ್ರಶೇಖರ್, ತಮಗೆ ಪರಿಚಯವಿದ್ದ ಫೋರೆ ಅಸೋಸಿಯೇಟ್ಸ್‌ನ ರವೀಂದ್ರ ಫೋರೆ ಹಾಗೂ ವಿವಿ ಮೊಹಲ್ಲಾದ ಟೆಂಪಲ್ ರಸ್ತೆಯ ರೇಮಂಡ್ಸ್ ಶೋ ರೂಂನ ಪ್ರಶಾಂತ್ ಹೆಗಡೆ ಸಹಾಯ ಪಡೆದರು. ಪರ್ಸ್‌ನಲ್ಲಿದ್ದ ಯಾವುದೋ ಒಂದು ವಿಸಿಟಿಂಗ್ ಕಾರ್ಡ್ ಮೊಬೈಲ್ ನಂಬರ್ ಮೂಲಕ ಆ ಪರ್ಸ್ ಬಿ.ಎಂ.ಹ್ಯಾಬಿಟ್ಯಾಟ್ ಮಾಲ್‌ನಲ್ಲಿ ಐಟಿ ಪ್ರೊಫೆಷನಲ್ ಪ್ರಕಾಶ್ ಎಂಬುವರಿಗೆ ಸೇರಿದ್ದು ಎಂಬುದು ದೃಢಪಟ್ಟ ಹಿನ್ನೆಲೆಯಲ್ಲಿ ಅವರನ್ನು ಭೇಟಿಯಾಗಿ, ಪರ್ಸ್ ಅನ್ನು ಹಿಂದಿರುಗಿಸಿದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಭೇಟಿ



ಮೈಸೂರು, ನ.20(ಆರ್‌ಕೆ)– ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ನಾಳೆ (ನ.21) ಸಂಜೆ 5.30 ಗಂಟೆಗೆ ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಹೋಟೆಲ್ ಮಾಲೀಕರ ಸಂಘದ ಕಚೇರಿಗೆ ಭೇಟಿ ನೀಡುವರು. ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ವತಿಯಿಂದ ಸಹಕಾರ ಸಪ್ತಾಹದ ಅಂಗವಾಗಿ ಏರ್ಪಡಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ಗೃಹ ಸಚಿವರು, ಸನ್ಮಾನ ಸ್ವೀಕರಿಸಿದ ಬಳಿಕ ಹೋಟೆಲ್ ಮಾಲೀಕರೊಂದಿಗೆ ಕೆಲಕಾಲ ಸಂವಾದ ನಡೆಸುವರು ಎಂದು ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾರಾಯಣ ವಿ ಹೆಗಡೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

‘ವಿದ್ಯಾ ಮಂತ್ರಿಗೇ ಕನ್ನಡ ಬರಲ್ಲ’ ಎಂದ ವಿದ್ಯಾರ್ಥಿ!

ಸಚಿವ ಮಧು ಬಂಗಾರಪ್ಪಗೆ ಭಾರೀ ಮುಜುಗರ



ವಿದ್ಯಾರ್ಥಿಗಳೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ.

ಬೆಂಗಳೂರು, ನ20– ವಿದ್ಯಾರ್ಥಿಗಳ ಜೊತೆಗಿನ ವಿಡಿಯೋ ಕಾನ್ಫರೆನ್ಸ್ ವೇಳೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಭಾರೀ ಮುಜುಗರವಾಗಿದೆ.

ವಿಧಾನಸೌಧದಲ್ಲಿ ಇಂದು ಸರ್ಕಾರಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ನೀಟ್, ಜೆಇಇ, ಸಿಇಟಿ ಉಚಿತ ಕೋಚಿಂಗ್ ತರಬೇತಿಗೆ ಚಾಲನೆ ನೀಡುವ ಕಾರ್ಯಕ್ರಮ ಆಯೋಜನೆಗೊಂಡಿತ್ತು. ಈ ವೇಳೆ ವಿದ್ಯಾರ್ಥಿಗಳ ಜೊತೆ ಮಧು ಬಂಗಾರಪ್ಪ ವಿಡಿಯೋ ಕಾನ್ಫರೆನ್ಸ್ ಮೂಲಕ ಸಂವಾದ ನಡೆಸುತ್ತಿದ್ದರು. ಈ ವೇಳೆ ವಿದ್ಯಾರ್ಥಿಯೊಬ್ಬ ‘ವಿದ್ಯಾ ಮಂತ್ರಿಗೆ ಕನ್ನಡ ಬರಲ್ಲ’ ಎಂದು ನೇರವಾಗಿಯೇ ಹೇಳಿದ್ದಾನೆ. ಈ ಮಾತನ್ನು ಕೇಳಿಸಿಕೊಂಡ ಮಧು ಬಂಗಾರಪ್ಪ, ಯಾರೋ ಅದು ಹೇಳಿದ್ದು, ಏನಂತ ಹೇಳಿದ್ದು? ನಾನೇನು ಉರ್ದು ಮಾತಾಡಿದ್ನಾ? ಕನ್ನಡದಲ್ಲೇ ಮಾತನಾಡಿದ್ದು ಎಂದು ಗರಂ ಆದರು. ನಂತರ ಪಕ್ಕದಲ್ಲಿ ಕುಳಿತಿದ್ದ ಪದವಿ ಪೂರ್ವ ಕಾಲೇಜು ನಿರ್ದೇಶಕಿ ಸಿಂಧೂ ಬಿ ರೂಪೇಶ್ ಮತ್ತು ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಅವರಲ್ಲಿ, ಯಾರು ನೋಡಿ ರೆಕಾರ್ಡ್ ಮಾಡಿ. ಅವರ ಮೇಲೆ ಕ್ರಮ ಕೈಗೊಳ್ಳಿ ಎಂದು ಸೂಚಿಸಿದರು. ವಿಡಿಯೋ ಕಾನ್ಫರೆನ್ಸ್‌ನಲ್ಲಿ ಹಲವು ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದು ಸದ್ಯಕ್ಕೆ ಈ ರೀತಿ ಹೇಳಿದ ವಿದ್ಯಾರ್ಥಿ ಯಾರು ಎನ್ನುವುದು ತಿಳಿದುಬಂದಿಲ್ಲ.

ಪ್ರೀತಿಸಿದ ಹುಡುಗಿ ದಕ್ಕದ ಕಾರಣ ವಿಷ ಸೇವಿಸಿದ್ದ ಯುವಕ ಸಾವು

ಮೈಸೂರು,ನ.20(ಆರ್‌ಕೆ)–ಜೀವನದಲ್ಲಿ ಜಿಗುಪ್ಸೆಗೊಂಡು ವಿಷ ಸೇವಿಸಿ ಅಸ್ವಸ್ಥಗೊಂಡಿದ್ದ ಗಾಂಧಿನಗರದ ಯುವಕ ಸಾವನ್ನಪ್ಪಿದ್ದಾನೆ. ಮೈಸೂರಿನ ಗಾಂಧಿನಗರ ನಿವಾಸಿ ಆಲ್ಬರ್ಟ್ ಮನೋಹರ್ ಅವರ ಮಗ ಅಂಥೋಣಿ ರಾಜ್(34), ತಾನು ಪ್ರೀತಿಸುತ್ತಿದ್ದ ಹುಡುಗಿಯ ಮನೆಯವರು ಮದುವೆ ಮಾಡಿಕೊಡಲು ಒಪ್ಪಲಿಲ್ಲ ಎಂದು ಮನನೊಂದು ಕಳೆದ ಅಕ್ಟೋಬರ್ 28ರಂದು ವಿಷ ಸೇವಿಸಿ ಅಸ್ವಸ್ಥನಾಗಿದ್ದ. ಆತನನ್ನು ಕೆ.ಆರ್.ಆಸ್ಪತ್ರೆಗೆ ದಾಖಲಿಸಿ ನಂತರ ಪ್ರಜ್ವಲ್ ಆಸ್ಪತ್ರೆ ಹಾಗೂ ಜೆಎಸ್‌ಎಸ್ ಆಸ್ಪತೆಗಳಲ್ಲಿ ಚಿಕಿತ್ಸೆ ಕೊಡಿಸಿದರೂ ಪ್ರಯೋಜನವಾಗಿರಲಿಲ್ಲ. ಬಳಿಕ ಮತ್ತೆ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ಸಂಜೆ ಆತ ಕೊನೆಯುಸಿರೆಳೆದಿದ್ದಾನೆ ಎಂದು ಪ್ರಕರಣ ದಾಖಲಿಸಿಕೊಂಡಿರುವ ಎನ್.ಆರ್.ಠಾಣೆ ಪೊಲೀಸರು ತಿಳಿಸಿದ್ದಾರೆ. ಇಂದು ಬೆಳಗ್ಗೆ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ಬಳಿಕ ಅಂಥೋಣಿರಾಜ್ ದೇಹವನ್ನು ವಾರಸುದಾರರಿಗೆ ಒಪ್ಪಿಸಲಾಯಿತು.

ಮೈಸೂರು ವಿಜಯನಗರ ಮೊದಲ ಹಂತದ ಅಭಿವೃದ್ಧಿಗೆ ಬದ್ಧ

ಶಾಸಕ ಹರೀಶ್‌ಗೌಡ ಭರವಸೆ



69ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು.

ಮೈಸೂರು, ನ.20(ಎಸ್‌ಪಿಎನ್)– ಮೈಸೂರಿನ ವಿಜಯನಗರ ಒಂದರಿಂದ ನಾಲ್ಕನೇ ಹಂತದವರೆಗಿನ ಬಡಾವಣೆಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಬದ್ಧವಾಗಿದ್ದು, ನನ್ನ ವ್ಯಾಪ್ತಿಗೆ ಬರುವ ಒಂದನೇ ಹಂತದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಕೆ.ಹರೀಶ್‌ಗೌಡ ಅಭಯ ನೀಡಿದರು.

ಮೈಸೂರು ವಿಜಯನಗರದ ಯೋಗಾ ನರಸಿಂಹ ಸ್ವಾಮಿ ದೇವಸ್ಥಾನ ಎದುರಿನ ಉದ್ಯಾನವನದ ಯೋಗಾಮಂಟಪದಲ್ಲಿ ವಿಜಯನಗರ ಒಂದನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಏರ್ಪಡಿಸಿದ್ದ 69ನೇ ಕನ್ನಡ ರಾಜ್ಯೋತ್ಸವ ಹಾಗೂ ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಎದುರಿನ ಕ್ರೀಡಾಂಗಣ ಅಭಿ ವೃದ್ಧಿ, ಈಜುಕೋಳ ಹಾಗೂ ಒಂದನೇ ಹಂತದಲ್ಲಿರುವ ಪಾರ್ಕ್‌ಗಳ ಅಭಿವೃದ್ಧಿಗೆ ಪಾದಯಾತ್ರೆ ಸಂದರ್ಭದಲ್ಲಿ ಇಲ್ಲಿನ ನಿವಾಸಿಗಳು ಮನವಿ ಮಾಡಿದ್ದೀರಿ. ಈಗಾಗಲೇ ಈಜುಕೋಳ ನಿರ್ಮಾಣಕ್ಕೆ ನೀಲನಕ್ಷೆ ರೆಡಿಯಾಗಿದ್ದು, ಅಂತೆಯೇ ಪಾರ್ಕ್‌ಗಳ ಅಭಿವೃದ್ಧಿ ಆದ್ಯತೆ ಮೇರೆಗೆ ಕ್ರಮಕೈಗೊಳ್ಳಲಾಗುತ್ತಿದೆ ಎಂದರು.

ಮುಡಾದಲ್ಲಿ 50:50 ನಿವೇಶನ ಹಂಚಿಕೆ ಸಂಬಂಧ ತನಿಖೆ ನಡೆಯುತ್ತಿರುವುದರಿಂದ ಅಭಿವೃದ್ಧಿ ಕಾರ್ಯ ಹಮ್ಮಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಈ ತನಿಖೆ ಮುಗಿದ ತಕ್ಷಣ ಕೈಗೆತ್ತಿಕೊಳ್ಳಲಾಗುವುದು. ಕಳೆದ ಹಲವು ವರ್ಷಗಳಿಂದ ವಿಜಯನಗರ ಒಂದನೇ ಹಂತದ ನಿವಾಸಿಗಳು ಈ ಪಾರ್ಕ್‌ನಲ್ಲಿ ಅರ್ಥಪೂರ್ಣ ರಾಜ್ಯೋತ್ಸವ ಆಚರಿಸುವುದರ ಜೊತೆಗೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಬಡಾವಣೆಯ ಸಾಧಕರನ್ನು ಸನ್ಮಾನಿಸಲಾಗುತ್ತಿದೆ. ಇಂತಹ ಅರ್ಥಪೂರ್ಣ ಕಾರ್ಯಕ್ರಮ ಎಲ್ಲಾ ಬಡಾವಣೆಗಳಲ್ಲೂ ಆಯೋಜಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಸನ್ಮಾನ: ಈ ವೇಳೆ ಶಾಸಕ ಕೆ.ಹರೀಶ್ ಗೌಡ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ವಿಶ್ರಾಂತ ಕುಲಪತಿ ಪ್ರೊ.ಪದ್ಮಾಶೇಖರ್, ಸುವರ್ಣ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ನಿವೃತ್ತ ಯೋಧ ಗಜಾನನ ಭಟ್, ಕೀ ಬೋರ್ಡ್‌ನಲ್ಲಿ ವರ್ಲ್ಡ್ ರೆಕಾರ್ಡ್ ಮಾಡಿರುವ ತೋಷನ್ ಜಿ.ರಾವ್, ನಗರಪಾಲಿಕೆ ಮಾಜಿ ಸದಸ್ಯ ಸುಬ್ಬಯ್ಯ, ಹಿರಿಯ ಕ್ರೀಡಾಪಟು ರಾಜೇಶ್ವರಿ ಸೇರಿದಂತೆ ಇತರರನ್ನು ಸನ್ಮಾನಿಸಲಾಯಿತು. ಇದೇ ವೇಳೆ ನಾನಾ ಕ್ರೀಡಾಟಗಳಲ್ಲಿ ವಿಜೇತರಾದ ಬಡಾವಣೆ ನಿವಾಸಿಗಳಿಗೆ ಬಹುಮಾನ ವಿತರಿಸಲಾಯಿತು.

ರೋ.ರಾಜ್‌ಭಟ್ ಅವರಿಂದ ಮ್ಯಾಜಿಕ್ ಷೋ, ಬಡಾವಣೆಯ ವಿವಿಧ ಮಹಿಳೆಯರು, ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು. ವೇದಿಕೆಯಲ್ಲಿ ವಿಜಯನಗರ ಒಂದನೇ ಹಂತ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ಎಂ.ಕೆ.ನಂಜಯ್ಯ, ಉಪಾಧ್ಯಕ್ಷ ಜಿ.ಟಿ. ವೆಂಕಟೇಗೌಡ, ಜಂಟಿಕಾರ್ಯದರ್ಶಿ ಆಲುಮೇಲು ಪ್ರದೀಪ್, ಖಜಾಂಚಿ ಶ್ರೀನಿವಾಸ್, ನಿರ್ದೇಶಕರಾದ ಕೆ.ಕೃಷ್ಣ, ನರಸೇಗೌಡ, ಟಿ.ವಿ.ಹನುಮಪ್ಪ, ಎಂ.ಕೆ. ದೇವಯ್ಯ, ಡಿ.ಎನ್. ಚಂದ್ರಶೇಖರ್, ಪಿಎಂಎನ್ ಗೌಡ, ಎಸ್.ಸುಬ್ರಹ್ಮಣ್ಯ, ಸಿ. ನಾರಾಯಣಗೌಡ, ಶ್ರೇಯಸ್ ಕುಮಾರ್, ಎನ್.ಕೆ.ರಮೇಶ್, ಸಿ.ಜಿ.ಮೂರ್ತಿ, ಕೆ.ಹನುಮಂತೇಗೌಡ, ಜಿ.ಆರ್.ಚನ್ನಕೇಶವ್, ಕೆಕಾಳಿಂಗು, ವೈಟಿ.ಮಂಜುನಾಥ್, ರಘುರಾಜ್, ತಾರಾಚಂದ್ ಗುಪ್ತ ಎನ್.ಜಿ. ಚಂದ್ರಶೇಖರ್, ದೇವರಾಜ್, ಗೋಪಾಲಗೌಡ, ಜಿ.ಕೆ.ಸೀತಾರಾಮು, ಹೆಚ್.ಎಸ್. ಕಾರ್ತಿಕ್, ಜಯಲಕ್ಷ್ಮಿ ಉಪಸ್ಥಿತರಿದ್ದರು.

ನ.30, ಡಿ.1ರಂದು ಮದ್ಯ ಮಾರಾಟ ನಿಷೇಧ

ಮೈಸೂರು,ನ.20–ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆ ಶ್ರೀರಾಮ ದೇವಾಲಯದ ಆವರಣದಲ್ಲಿ ಜಲಪಾತೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿರುವುದರಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸಾಲಿಗ್ರಾಮ ತಾಲೂಕು ಚುಂಚನಕಟ್ಟೆ, ಹೊಸೂರು, ಹಳಿಯೂರು ಮದ್ಯದ ಅಂಗಡಿಗಳಲ್ಲಿ ನ.30ರಂದು ಬೆಳಿಗ್ಗೆ 6 ಗಂಟೆಯಿಂದ ಡಿ.1ರ ಮಧ್ಯರಾತ್ರಿ 12 ಗಂಟೆವರೆಗೆ ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದಿನಿಂದ ‘ಅಗ್ನಿ–ಮಳೆ’ ನಾಟಕ

ಮೈಸೂರು,ನ.20– ರಂಗಾಯಣದ ಭಾರತೀಯ ರಂಗಶಿಕ್ಷಣ ಕೇಂದ್ರದ 2024–25ನೇ ಸಾಲಿನ ವಿದ್ಯಾರ್ಥಿಗಳು ಗಿರೀಶ್ ಕಾರ್ನಾಡರ ರಚನೆ, ಸಾಲಿಯಾನ ಉಮೇಶ್ ನಾರಾಯಣ ಅವರ ನಿರ್ದೇಶನ ಹಾಗೂ ದಿಗ್ವಿಜಯ ಹೆಗ್ಗೋಡು ಅವರ ಸಂಗೀತ ನಿರ್ದೇಶನದ ‘ಅಗ್ನಿ ಮತ್ತು ಮಳೆ’ ನಾಟಕ ಪ್ರದರ್ಶನವನ್ನು ನ.21, 22 ಮತ್ತು 23ರಂದು ಸಂಜೆ 7 ಗಂಟೆಗೆ ರಂಗಾಯಣದ ವನರಂಗದಲ್ಲಿ ಪ್ರದರ್ಶಿಸಲಿದ್ದಾರೆ ಎಂದು ರಂಗಾಯಣದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇಶ - ವಿದೇಶ

ಪಾಕ್‌ನಲ್ಲಿ ಆತ್ಮಾಹುತಿ ಬಾಂಬ್ ದಾಳಿ: 20 ಯೋಧರು ಬಲಿ



ಪೇಶಾವರ್: ಪಾಕಿಸ್ತಾನದಲ್ಲಿ ನಡೆದ ಪ್ರತ್ಯೇಕ ಭಯೋತ್ಪಾದನಾ ದಾಳಿಯಲ್ಲಿ 20 ಯೋಧರು ಮೃತಪಟ್ಟಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಪಾಕಿಸ್ತಾನದ ವಾಯುವ್ಯ ಖೈಬರ್ ಪಖ್ತುಂಖ್ವಾ ಪ್ರಾಂತ್ಯದ ಚೆಕ್‌ಪೋಸ್ಟ್‌ಗೆ ಆತ್ಮಹತ್ಯಾ ಬಾಂಬರ್ ಸ್ಫೋಟಕ ತುಂಬಿದ ವಾಹನವನ್ನು ಡಿಕ್ಕಿ ಹೊಡೆಸಿದ್ದು, ಪರಿಣಾಮ 12 ಭದ್ರತಾ ಸಿಬ್ಬಂದಿ ಮೃತಪಟ್ಟಿದ್ದಾರೆ. ಮಂಗಳವಾರ ತಡರಾತ್ರಿ ಮಲಿಖೇಲ್ ಪ್ರದೇಶದ ಜಂಟಿ ಚೆಕ್‌ಪೋಸ್ಟ್ ಮೇಲೆ ಉಗ್ರರು ದಾಳಿ ನಡೆಸಲು ಯತ್ನಿಸಿದರು. ಆದರೆ ಭದ್ರತಾ ಪಡೆಗಳು ಪೋಸ್ಟ್ ಪ್ರವೇಶಿಸುವ ಅವರ ಪ್ರಯತ್ನವನ್ನು ಪರಿಣಾಮಕಾರಿಯಾಗಿ ವಿಫಲಗೊಳಿಸಿದವು ಎಂದು ಸೇನೆಯ ಮಾಧ್ಯಮ ವಿಭಾಗ ಇಂಟರ್ ಸರ್ವಿಸಸ್ ಪಬ್ಲಿಕ್ ರಿಲೇಶನ್ಸ್ ತಿಳಿಸಿದೆ. ಮತ್ತೊಂದೆಡೆ ತಿರಾಹ್ ಕಣಿವೆಯಲ್ಲಿ ಉಗ್ರರೊಂದಿಗೆ ನಡೆದ ಭೀಕರ ಗುಂಡಿನ ಕಾಳಗದಲ್ಲಿ 8 ಭದ್ರತಾ ಸಿಬ್ಬಂದಿ ಸಾವನ್ನಪ್ಪಿದ್ದು ಮೂವರು ಗಾಯಗೊಂಡಿದ್ದಾರೆ. ಪಾಕ್ ಸರ್ಕಾರ ಮತ್ತು ಸೇನಾ ನಾಯಕತ್ವವು ಬಲೂಚಿಸ್ತಾನದಲ್ಲಿ ಭಯೋತ್ಪಾದಕ ಸಂಘಟನೆಗಳ ವಿರುದ್ಧ ಬೃಹತ್ ಸೇನಾ ಕಾರ್ಯಾಚರಣೆ ಅನುಮೋದಿಸಿದ ಒಂದು ದಿನದ ನಂತರ ಈ ದಾಳಿ ನಡೆದಿದೆ.

ಅಗತ್ಯ ಸೇವೆಗಳ ಭಾರಿ ವಾಹನಕ್ಕೆ ಮಾತ್ರ ದೆಹಲಿ ಪ್ರವೇಶಾವಕಾಶ




ನವದೆಹಲಿ: ರಾಜಧಾನಿ ದೆಹಲಿಯಲ್ಲಿ ಬುಧವಾರ ವಿಷಕಾರಿ ಗಾಳಿಯ ಹೊದಿಕೆ ದಟ್ಟವಾಗಿ ಆವರಿಸಿ ಮಂಜು ಕವಿಯಿತು. 426ರ ವಾಯು ಗುಣಮಟ್ಟ ಸೂಚ್ಯಂಕವನ್ನು ದಾಖಲಿಸಿದ್ದು, ನಗರದಲ್ಲಿ ಈ ಋತುಮಾನದಲ್ಲಿ ಅತಿ ತಂಪಾದ ಹವಾಮಾನವನ್ನು ಹೊಂದಿತ್ತು. ಮಂಗಳವಾರ ರಾತ್ರಿ ನಗರದ ಕನಿಷ್ಠ ತಾಪಮಾನವು 11.1 ಡಿಗ್ರಿ ಸೆಲ್ಸಿಯಸ್‌ಗೆ ಇಳಿದಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ದಟ್ಟವಾದ ಮಂಜಿನ ಜೊತೆಗೆ ತಾಪಮಾನದಲ್ಲಿ ಕುಸಿತ ಕಂಡುಬಂತು. ಇಂದು ಬೆಳಗ್ಗೆ 8.30ರ ಹೊತ್ತಿಗೆ ಗೋಚರತೆ 500 ಮೀಟರ್‌ಗೆ ಇಳಿಕೆಯಾಗಿದೆ 400 ಅಥವಾ ಹೆಚ್ಚಿನ ವಾಯು ಗುಣಮಟ್ಟ ಸೂಚ್ಯಂಕವನ್ನು ತೀವ್ರ ಎಂದು ವರ್ಗೀಕರಿಸಲಾಗಿದೆ, ಇದು ಆರೋಗ್ಯದ ಅಪಾಯಗಳನ್ನು ಉಂಟುಮಾಡುತ್ತದೆ. ರಾಷ್ಟ್ರ ರಾಜಧಾನಿಯ 38 ಮೇಲ್ವಿಚಾರಣಾ ಕೇಂದ್ರಗಳಲ್ಲಿ ಒಂದನ್ನು ಹೊರತುಪಡಿಸಿ ಉಳಿದೆಲ್ಲವೂ ಕೆಂಪು ವಲಯದಲ್ಲಿವೆ. ವಾಯು ಗುಣಮಟ್ಟ ನಿರ್ವಹಣಾ ಆಯೋಗವು (CAQM) BS-VI ವಾಹನಗಳನ್ನು ಹೊರತುಪಡಿಸಿ ದೆಹಲಿ ಮತ್ತು ಎನ್‌ಸಿಆರ್ ಜಿಲ್ಲೆಗಳ ಗಡಿಯಲ್ಲಿ ಅಗತ್ಯ ಮತ್ತು ತುರ್ತು ಸೇವೆಗಳನ್ನು ಹೊರತುಪಡಿಸಿ ನಾಲ್ಕು ಚಕ್ರಗಳ ಡೀಸೆಲ್ ಲೈಟ್ ಮೋಟಾರು ವಾಹನಗಳ ಕಾರ್ಯಾಚರಣೆ ಮೇಲೆ ನಿಷೇಧ ಸೇರಿದಂತೆ ಹೆಚ್ಚುವರಿ ನಿರ್ಬಂಧಗಳನ್ನು ಜಾರಿಗೊಳಿಸಿದೆ.

ಭಿಕ್ಷುಕರ ಕುಟುಂಬದಿಂದ ಕೋಟಿಗಟ್ಟಲೆ ಹಣ ಖರ್ಚು ಮಾಡಿ ಔತಣಕೂಟ!



ಇಸ್ಲಾಮಾಬಾದ್: ಭಿಕ್ಷುಕ ಕುಟುಂಬವೊಂದು ಕೋಟಿಗೂ ಅಧಿಕ ಹಣ ಖರ್ಚು ಮಾಡಿ, 20 ಸಾವಿರ ಮಂದಿಗೆ ಔತಣಕೂಟ ಏರ್ಪಡಿಸಿರುವುದು ಪಾಕಿಸ್ತಾನದಲ್ಲಿ ವರದಿಯಾಗಿದೆ. ಅದೂ ಮದುವೆಗಲ್ಲ ಬದಲಾಗಿ ಅಜ್ಜಿ ತೀರಿಕೊಂಡು 40 ದಿನಗಳು ಕಳೆದಿದ್ದು, ಅವರ ಸ್ಮರಣಾರ್ಥ ಈ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಕುಟುಂಬವು ಕೇವಲ ಅತಿಥಿ ಮಾತ್ರವಲ್ಲ ಸುತ್ತಮುತ್ತಲಿನ ಎಲ್ಲಾ ಜನರನ್ನು ಔತಣಕೂಟಕ್ಕೆ ಕರೆದಿದ್ದರು. ಈ ಔತಣಕೂಟವು ಶ್ರೀಮಂತರ ಹುಬ್ಬೇರುವಂತೆ ಮಾಡಿತ್ತು. ಈ ಘಟನೆಯು ಗುಜ್ರಾನ್‌ವಾಲಾದ ರಾಹ್ವಾಲಿ ರೈಲು ನಿಲ್ದಾಣದ ಬಳಿ ನಡೆದಿದ್ದು, ಪಂಜಾಬ್‌ನ ವಿವಿಧ ಭಾಗಗಳಿಂದ ಸಾವಿರಾರು ಸಂಖ್ಯೆಯಲ್ಲಿ ಜನರು ಬಂದಿದ್ದರು. 250 ಕುರಿಗಳನ್ನು ಕತ್ತರಿಸಿ, ಮಾಂಸದ ವಿವಿಧ ಭಕ್ಷ್ಯಗಳನ್ನು ಸಿದ್ಧಪಡಿಸಲಾಗಿತ್ತು. ಕೆಲವರು ವ್ಯಂಗ್ಯ ಮಾಡಿದರೆ ಇನ್ನೂ ಕೆಲವರು ಸಂತೋಷ ವ್ಯಕ್ತಪಡಿಸಿದ್ದಾರೆ. ಪಾಕಿಸ್ತಾನದಲ್ಲಿ ಆಹಾರಕ್ಕಾಗಿ ಭಿಕ್ಷೆ ಬೇಡುವ ಕಲೆಯನ್ನು ಕಲಿತವರು ಎಂದಿಗೂ ಹಸಿವಿನಿಂದ ಇರಲು ಸಾಧ್ಯವಿಲ್ಲ ಎಂಬುದು ಸತ್ಯ ಎಂದು ಕೆಲವರು ಕಮೆಂಟ್ ಮಾಡಿದ್ದಾರೆ.

ಗೌರವ್ ಮೆಹ್ತಾ ಕಚೇರಿ, ನಿವಾಸದ ಮೇಲೆ ಇಡಿ ದಾಳಿ



ಮುಂಬೈ: ಮಹಾರಾಷ್ಟ್ರದಲ್ಲಿ ಬಿಟ್‌ಕಾಯಿನ್ ವಹಿವಾಟು ಪ್ರಕರಣಕ್ಕೆ ಸಂಬಂಧಿಸಿದಂತೆ ಗೌರವ್ ಮೆಹ್ತಾ ಅವರ ಛತ್ತೀಸ್‌ಗಢದ ನಿವಾಸ ಹಾಗೂ ಕಚೇರಿಯಲ್ಲಿ ಜಾರಿ ನಿರ್ದೇಶನಾಲಯ ಶೋಧ ನಡೆಸಿದೆ. ಛತ್ತೀಸ್‌ಗಢದ ರಾಜಧಾನಿ ರಾಯ್‌ಪುರದಲ್ಲಿರುವ ಮೆಹ್ತಾ ಅವರ ನಿವಾಸ ಹಾಗೂ ಕಚೇರಿಗಳ ಮೇಲೆ ಮನಿ ಲಾಂಡರಿಂಗ್ ತಡೆ ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಶೋಧ ನಡೆಸಲಾಗಿದೆ. ಎನ್‌ಸಿಪಿ ನಾಯಕಿ ಮತ್ತು ಬಾರಾಮತಿ ಸಂಸದೆ ಸುಪ್ರಿಯಾ ಸುಳೆ ಮತ್ತು ಕಾಂಗ್ರೆಸ್ ಮುಖಂಡ ನಾನಾ ಪಟೋಲೆ ಅವರು ಪ್ರಸಕ್ತ ಚುನಾವಣೆಗೆ ಹಣ ನೀಡಲು ಬಿಟ್‌ಕಾಯಿನ್‌ಗಳನ್ನು ಅಕ್ರಮವಾಗಿ ಬಳಸಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ಆದರೆ ಸುಳೆ ಆರೋಪವನ್ನು ನಿರಾಕರಿಸಿದ್ದಾರೆ. ಮೆಹ್ತಾ ಅವರು ಈ ಬಿಟ್ ಕಾಯಿನ್ ವಹಿವಾಟುಗಳೊಂದಿಗೆ ಸಂಬಂಧ ಹೊಂದಿದ್ದಾರೆ ಎಂದು ಆರೋಪಿಸಲಾಗಿದೆ. ತಿಂಗಳಿಗೆ 10 ಪರ್ಸೆಂಟ್ ರಿಟರ್ನ್ ನೀಡುವುದಾಗಿ ಸುಳ್ಳು ಭರವಸೆ ನೀಡಿ ಸಾರ್ವಜನಿಕರಿಂದ ಬಿಟ್ ಕಾಯಿನ್‌ಗಳ ರೂಪದಲ್ಲಿ (2017ರಲ್ಲಿ ರೂ 6,600 ಕೋಟಿ ಮೌಲ್ಯದ) ಬೃಹತ್ ಹಣವನ್ನು ಸಂಗ್ರಹಿಸಿರುವ ಆರೋಪದ ಮೇಲೆ ಮೆಹ್ತಾ ಮತ್ತು ಇತರ ಕೆಲವರ ವಿರುದ್ಧ ಇಡಿ ತನಿಖೆ ನಡೆಸುತ್ತಿದೆ.

ಅಮೆರಿಕ ಪೊಲೀಸರ ವಶದಲ್ಲಿ ಅನ್ಮೋಲ್ ಬಿಷ್ಣೋಯಿ



ವಾಷಿಂಗ್ಟನ್: ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯಿ ಸಹೋದರ ಅನ್ಮೋಲ್ ಬಿಷ್ಣೋಯಿಯನ್ನು ಅಮೆರಿಕ ಪೊಲೀಸರು ಕ್ಯಾಲಿಫೋರ್ನಿಯಾದಲ್ಲಿ ವಶಕ್ಕೆ ಪಡೆದಿದ್ದಾರೆ ಎಂದು ಗುಪ್ತಚರ ಮೂಲಗಳು ಹೇಳಿವೆ. ಅನ್ಮೋಲ್‌ನನ್ನು ಅಮೆರಿಕದಿಂದ ಭಾರತಕ್ಕೆ ಹಸ್ತಾಂತರಿಸುವ ಪ್ರಕ್ರಿಯೆಗೆ ಮುಂಬಯಿ ಪೊಲೀಸರು ಸಿದ್ಧತೆಗಳನ್ನು ಆರಂಭಿಸಿದ ಕೆಲವೇ ದಿನಗಳಲ್ಲಿ ಈ ಬೆಳವಣಿಗೆ ನಡೆದಿದೆ. ಎರಡು ವಾರಗಳ ಹಿಂದಷ್ಟೇ ಮಹಾರಾಷ್ಟ್ರ ಸಂಘಟಿತ ಅಪರಾಧಗಳ ನಿಯಂತ್ರಣ ಕಾಯಿದೆಗೆ ಸಂಬಂಧಿಸಿದ ಪ್ರಕರಣಗಳ ವಿಚಾರಣೆ ನಡೆಸುವ ವಿಶೇಷ ಕೋರ್ಟ್, ಅನ್ಮೋಲ್ ವಿರುದ್ಧ ಜಾಮೀನು ರಹಿತ ವಾರಂಟ್ ಜಾರಿ ಮಾಡಿತ್ತು.

ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಕೊಲೆ ಪ್ರಕರಣ, ನಟ ಸಲ್ಮಾನ್‌ಖಾನ್ ಅವರ ಮುಂಬಯಿ ನಿವಾಸದ ಮುಂಭಾಗದ ಶೂಟೌಟ್, ಪಂಜಾಬಿ ಗಾಯಕ ಸಿಧು ಮೂಸೆವಾಲ ಹತ್ಯೆ ಪ್ರಕರಣ ಸೇರಿದಂತೆ ಹಲವು ಕೇಸ್‌ಗಳಲ್ಲಿ ಅನ್ಮೋಲ್ ಬಿಷ್ಣೋಯಿ ಭಾರತಕ್ಕೆ ಬೇಕಾಗಿರುವ ಕ್ರಿಮಿನಲ್. ಎನ್‌ಐಎ ಈತನ ವಿರುದ್ಧ ಎರಡು ಪ್ರಕರಣಗಳನ್ನು ದಾಖಲಿಸಿದೆ. ಸಲ್ಮಾನ್ ಖಾನ್ ನಿವಾಸದ ಎದುರು ಗುಂಡು ಹಾರಿಸಿದ ಪ್ರಕರಣದಲ್ಲಿ ಅನ್ಮೋಲ್ ಪಾತ್ರವಿದೆ ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದರು.

ಕಾಡುಪ್ರಾಣಿಗಳ ಹಾವಳಿ ತಡೆಗೆ ಆಗ್ರಹಿಸಿ ಪ್ರತಿಭಟನೆ


ವಿರಾಜಪೇಟೆ ಅರಣ್ಯ ಇಲಾಖೆ ಕಚೇರಿ ಎದುರು ಕಾಡುಪ್ರಾಣಿಗಳ ಹಾವಳಿ ತಡೆಗೆ ಆಗ್ರಹಿಸಿ ವಿವಿಧ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ನ.20–ಕಾಡಾನೆಗಳ ಹಾವಳಿ ತಡೆಗಟ್ಟುವುದು ಹಾಗೂ ಜಾನುವಾರು ಭಕ್ಷಕ ಹುಲಿ ಸೆರೆಗೆ ಆಗ್ರಹಿಸಿ ವಿವಿಧ ಗ್ರಾಮಸ್ಥರು ವಿರಾಜಪೇಟೆ ಅರಣ್ಯ ಇಲಾಖೆ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿದರು.

ವಿರಾಜಪೇಟೆ ಬಳಿಯ ಚೆಂಬೆಬೆಳ್ಳೂರು, ದೇವಣಗೇರಿ, ಬೊಳ್ಳರಿಮಾಡು, ಕುಕ್ಲೂರು, ಮಗ್ಗುಲ, ಕಣ್ಣಂಗಾಲ ಗ್ರಾಮಗಳಲ್ಲಿ ಹಲವು ವರ್ಷಗಳಿಂದ ಕಾಡಾನೆಗಳ ಹಾವಳಿ ಹಾಗೂ ಹುಲಿ ಪ್ರತ್ಯಕ್ಷವಾಗುತ್ತಿದ್ದು, ಜನ ಭಯಭೀತರಾಗಿದ್ದಾರೆ ಆದರೆ, ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು.

ಕೆಲ ದಿನಗಳ ಹಿಂದೆ ಚೆಂಬೆಬೆಳ್ಳೂರು, ಮಗ್ಗುಲ ಗ್ರಾಮಗಳಲ್ಲಿ ಹುಲಿ ಪ್ರತ್ಯಕ್ಷವಾಗುವುದರೊಂದಿಗೆ ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದೆ. ಅರಣ್ಯ ಇಲಾಖೆಯ ಸುಮಾರು 70 ಸಿಬ್ಬಂದಿ ತಂಡ ಕಾರ್ಯಾಚರಣೆ ನಡೆಸಿದರೂ ಹುಲಿ ಪತ್ತೆ ಹಚ್ಚುವಲ್ಲಿ ಇಲಾಖೆ ವಿಫಲವಾಗಿದೆ. ಹುಲಿ ಸೆರೆಗೆ 20 ದಿನಗಳ ಗಡುವು ನೀಡಿದ ಪ್ರತಿಭಟನಾಕಾರರು, ತಪ್ಪಿದಲ್ಲಿ ಇಲಾಖೆ ಕಚೇರಿ ಎದುರು ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಗ್ರಾಮಸ್ಥ ಕುಳುವಂಡ ಮಾದಪ್ಪ ಮಾತನಾಡಿ, ಅರಣ್ಯ ಸಿಬ್ಬಂದಿ ಕಾಡುಪ್ರಾಣಿಗಳ ಹಾವಳಿಯಿಂದ ಮೃತಪಟ್ಟರೆ ಪರಿಹಾರ ಮತ್ತು ಅವರ ಅವಲಂಬಿತರಿಗೆ ಸರ್ಕಾರಿ ಉದ್ಯೋಗ ನೀಡಲಾಗುತ್ತದೆ. ರೈತ ಮೃತಪಟ್ಟಲ್ಲಿ 15 ಲಕ್ಷ ರೂ. ಪರಿಹಾರ ನೀಡಿ ಕೈ ತೊಳೆದುಕೊಳ್ಳುತ್ತಾರೆ. ಕಾಡಾನೆಗಳ ದಾಳಿಯಿಂದ ಕೃಷಿ ಫಸಲು ಕಳೆದುಕೊಳ್ಳುವ ರೈತನ ಕುಟುಂಬದ ಪರಿಸ್ಥಿತಿ ಬೀದಿ ಪಾಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಕಾರರ ಮನವಿ ಸ್ವೀಕರಿಸಿ ಮಾತನಾಡಿದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗೋಪಾಲ್, 5 ದಿನಗಳಲ್ಲಿ ಕಾಡಾನೆ ಹಾಗೂ ಹುಲಿ ಪತ್ತೆ ಕಾರ್ಯಾಚರಣೆ ನಡೆಸುದಾಗಿ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ಅರಣ್ಯ ಅಧಿಕಾರಿಗಳಾದ ಶಿವರಾಮ್, ದೇವಯ್ಯ, ಗ್ರಾಮಸ್ಥರಾದ ಶಶಿ, ಸಂತೋಷ್, ನಾಚ್ಚಪ್ಪ, ಡಾಲಿ ಹಾಗೂ ಹತ್ತಾರು ಗ್ರಾಮಸ್ಥರು ಹಾಜರಿದ್ದರು.

ಸಾಕು ನಾಯಿ ಮೇಲೆ ಮತ್ತೆ ಚಿರತೆ ದಾಳಿ


ಸಾಕು ನಾಯಿ ಮೇಲೆ ಚಿರತೆ ದಾಳಿ ನಡೆಸಿರುವ ಪಚ್ಚೆಪಿಲಾವ್ ಸ್ಥಳಕ್ಕೆ ಅರಣ್ಯಾಧಿಕಾರಿಗಳು ಭೇಟಿ ನೀಡಿ, ಪರಿಶೀಲಿಸಿದರು.

ಮಡಿಕೇರಿ, ನ.20–ಕೊಡಗಿನ ಗಡಿ ಭಾಗದ ಕರಿಕೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಚ್ಚೆಪಿಲಾವ್, ದೊಡ್ಡಚೇರಿ, ಪಳ್ಳಿಕಳ ಮತ್ತಿತರ ಕಡೆ ಕಳೆದ ಒಂದು ತಿಂಗಳಿನಿಂದ ಉಪಟಳ ನೀಡುತ್ತಿರುವ ಚಿರತೆ ಇನ್ನೂ ಸೆರೆಯಾಗಿಲ್ಲ. ಮಂಗಳವಾರ ಪಚ್ಚೆಪಿಲಾವ್ ಭಾಗದಲ್ಲಿ ಸಾಕು ನಾಯಿಯೊಂದರ ಮೇಲೆ ಚಿರತೆ ಮತ್ತೆ ದಾಳಿ ಮಾಡಿದ್ದು, ಈ ದೃಶ್ಯ ಅರಣ್ಯ ಇಲಾಖೆ ಅಳವಡಿಸಿದ್ದ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಘಟನೆ ನಡೆದ ಸ್ಥಳಕ್ಕೆ ಬುಧವಾರ ಅರಣ್ಯಾಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಇದೇ ವೇಳೆ ಚಿರತೆ ದಾಳಿ ಕುರಿತು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿ, ತಕ್ಷಣ ಸೆರೆ ಹಿಡಿಯಬೇಕೆಂದು ಒತ್ತಾಯಿಸಿದರು. ನಂತರ ಚಿರತೆ ಸೆರೆಗೆ ಬೋನು ಅಳವಡಿಸುವುದಾಗಿ ಅರಣ್ಯಾಧಿಕಾರಿಗಳು ಭರವಸೆ ನೀಡಿದರು.

ವೆಲ್ಡಿಂಗ್ ಕಾರ್ಮಿಕರಿಗೆ ಉಪಕರಣ ಕಿಟ್ ವಿತರಣೆ


ವೆಲ್ಡಿಂಗ್ ಕಾರ್ಮಿಕರಿಗೆ ಶಾಸಕ ಎ.ಎಸ್.ಪೊನ್ನಣ್ಣ ಉಪಕರಣ ಕಿಟ್ ವಿತರಿಸಿದರು.

ವಿರಾಜಪೇಟೆ: ಸರ್ಕಾರದ ಸೌಲಭ್ಯಗಳು ನೈಜ ಕಾರ್ಮಿಕರಿಗೆ ದೊರಕುವಂತಾಗಬೇಕು ಎಂದು ಶಾಸಕ ಎ.ಎಸ್.ಪೊನ್ನಣ್ಣ ಹೇಳಿದರು.

ಪಟ್ಟಣದ ಪಂಜರುಪೇಟೆಯಲ್ಲಿರುವ ಶಾಸಕರ ಗೃಹ ಕಚೇರಿ ಸಭಾಂಗಣದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕಾರ್ಮಿಕ ಇಲಾಖೆ ವತಿಯಿಂದ ವೆಲ್ಡಿಂಗ್ ಕಾರ್ಮಿಕರಿಗೆ ಉಪಕರಣ ಕಿಟ್ ವಿತರಿಸಿ ಮಾತನಾಡಿದ ಅವರು, ಬಡ ಕಾರ್ಮಿಕರ ಏಳಿಗೆಗಾಗಿ ಸರ್ಕಾರ ನೀಡುತ್ತಿರುವ ಸೌಲಭ್ಯಗಳನ್ನು ನೈಜ ಕಾರ್ಮಿಕರು ಪಡಿದುಕೊಳ್ಳಬೇಕು ಎಂದರು.

ಇದೇ ವೇಳೆ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಪಿ.ರಂಜಿ ಪೂಣಚ್ಚ ಇಸ್ಮಾಯಿಲ್ ಹಾಗೂ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಟಿ.ಕಾವೇರಿ, ಎಸ್.ಶಶಿಧರ್, ವಿರಾಜಪೇಟೆ ಹಿರಿಯ ಕಾರ್ಮಿಕ ನಿರೀಕ್ಷಕ ನಿಖಿಲ್ ಚಂದ್ರ, ಸಿಬ್ಬಂದಿ ದರ್ಶನ್, ಕಾವ್ಯ, ಕಟ್ಟಡ ಕಾರ್ಮಿಕ ಸಂಘದ ವರ್ಗೀಸ್ ಮತ್ತು ಎಂ.ಸೇದು ಮತ್ತಿತರರು ಉಪಸ್ಥಿತರಿದ್ದರು.

ಎಲ್ಲಾ ಕ್ಷೇತ್ರದಲ್ಲೂ ಜಾತಿ, ರಾಜಕಾರಣ ಇದ್ದೇ ಇದೆ

ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪದಲ್ಲಿ ಎ.ಕೆ.ಮನುಮುತ್ತಪ್ಪ ಹೇಳಿಕೆ


ಮಡಿಕೇರಿ ಬಾಲಭವನದಲ್ಲಿ ನಡೆದ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪವನ್ನು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಎ.ಕೆ.ಮನುಮುತ್ತಪ್ಪ ಉದ್ಘಾಟಿಸಿದರು.

ಮಡಿಕೇರಿ, ನ.20–ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಇರಬಾರದು ಎಂದು ಹೇಳುತ್ತಾರೆ. ಆದರೆ, ಸಹಕಾರ ಕ್ಷೇತ್ರ ಸೇರಿದಂತೆ ಪ್ರತಿಯೊಂದು ರಂಗದಲ್ಲೂ ಜಾತಿ, ಸಮಾಜ, ರಾಜಕಾರಣ ಇದ್ದೇ ಇದೆ. ಇದರ ನಡುವೆಯೂ ಹಿರಿಯರು ಕಟ್ಟಿ ಬೆಳೆಸಿದ ಸಹಕಾರ ಕ್ಷೇತ್ರವನ್ನು ಬಲಪಡಿಸುವುದು ಅತ್ಯವಶ್ಯಕ ಎಂದು ಕೊಡಗು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಎ.ಕೆ.ಮನುಮುತ್ತಪ್ಪ ಹೇಳಿದರು.

ನಗರದ ಬಾಲಭವನದಲ್ಲಿ ರಾಜ್ಯ ಸಹಕಾರ ಮಹಾಮಂಡಳ, ಕೊಡಗು ಜಿಲ್ಲಾ ಸಹಕಾರ ಯೂನಿಯನ್, ಸಹಕಾರ ಇಲಾಖೆ ಕರ್ನಾಟಕ ಇನ್ಸ್‌ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಹಾಗೂ ಸ್ಥಳೀಯ ಸಹಕಾರ ಸಂಘಗಳ ಸಂಯುಕ್ತಾಶ್ರಯದಲ್ಲಿ ಬುಧವಾರ ನಡೆದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಹಾಗೂ ಶ್ರೇಷ್ಠ ಸಹಕಾರಿಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಸಹಕಾರ ಕ್ಷೇತ್ರದಲ್ಲಿ ಯಾರೂ ಸಹ ಮೂಗು ತೂರಿಸಬಾರದು ಎಂದು ಹೇಳುತ್ತಾರೆ. ಆದರೆ, ಎಲ್ಲಾ ರಂಗದಲ್ಲೂ ಒಂದಲ್ಲೇ ಒಂದು ರೀತಿ ರಾಜಕಾರಣ ಇರುತ್ತದೆ. ಇದರಿಂದ ಯಾವುದೇ ರಂಗ ಹೊರತಾಗಿಲ್ಲ ಎಂದರು.

ಕೊಡಗು ಜಿಲ್ಲೆಯಲ್ಲಿ ಸಹಕಾರ ಕ್ಷೇತ್ರ ರಾಜ್ಯದಲ್ಲಿ ಬಲಿಷ್ಠವಾಗಿದೆ. ಹಲವು ಸಹಕಾರ ಸಂಘಗಳನ್ನು ಕಟ್ಟುವಲ್ಲಿ ಹಿರಿಯರು ತಮ್ಮದೆ ಕೊಡುಗೆ ನೀಡಿದ್ದಾರೆ. ಆದರೆ, ರಾಜ್ಯ ಮಟ್ಟದ ಸಹಕಾರ ರತ್ನ ಪ್ರಶಸ್ತಿ ನೀಡುವ ಸಂದರ್ಭದಲ್ಲಿ ಕೊಡಗು ಜಿಲ್ಲೆಗೆ ಮೀನಾಮೇಷ ಎಣಿಸಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಹಿರಿಯರು ಫಲಾಪೇಕ್ಷೆ ಇಲ್ಲದೆ ಸಹಕಾರ ಸಂಘಗಳನ್ನು ಉಳಿಸಿ–ಬೆಳೆಸಿಕೊಂಡು ಬಂದಿರುವುದಕ್ಕೆ ಕೃತಜ್ಞತೆ ಸಲ್ಲಿಸಬೇಕು. ಸಹಕಾರ ಸಂಘಗಳಲ್ಲಿ ದುಡಿಯುತ್ತಿರುವವರಲ್ಲಿ ಯಾವುದೇ ರೀತಿಯ ಸ್ವಾರ್ಥ ಇರಬಾರದು. ಸ್ವಾರ್ಥ ಇದ್ದಲ್ಲಿ ಸಹಕಾರ ಸಂಘಗಳನ್ನು ಅಭಿವೃದ್ಧಿ ಪಡಿಸಲು ಸಾಧ್ಯವಿಲ್ಲ. ಸಹಕಾರ ಯೂನಿಯನ್ ನೇತೃತ್ವದಲ್ಲಿ ಜಿಲ್ಲೆಯ ವಿವಿಧೆಡೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆ ನಿಟ್ಟಿನಲ್ಲಿ ಜಿಲ್ಲೆಯ ಸಹಕಾರಿಗಳನ್ನು ಗುರುತಿಸಿ ಗೌರವಿಸಲು ಮುಂದಾಗಲಾಗಿದೆ ಎಂದು ಹೇಳಿದರು.

ದೇಶ ಅಭಿವೃದ್ಧಿಯತ್ತ ಮುನ್ನಡೆಯುತ್ತಿದ್ದು, 'ವಿಕಸಿತ ಭಾರತ' ಪರಿಕಲ್ಪನೆಯೊಂದಿಗೆ ಮಾಹಿತಿ, ಕೈಗಾರಿಕೆ, ವಿದ್ಯುನ್ಮಾನ ಸೇರಿದಂತೆ ಆಧುನಿಕ ತಂತ್ರಜ್ಞಾನ ಒಳಗೊಂಡು ನಾಲ್ಕನೇ ಅಭಿವೃದ್ಧಿ ರಾಷ್ಟ್ರದತ್ತ ಮುನ್ನಡೆಯುತ್ತಿದೆ. ಅಭಿವೃದ್ಧಿಯಲ್ಲಿ ಇಡೀ ವಿಶ್ವದಲ್ಲಿ ಭಾರತ 11ನೇ ಸ್ಥಾನದಲ್ಲಿದ್ದು, 4ನೇ ಸ್ಥಾನಕ್ಕೆ ಕೊಂಡೊಯ್ಯುವಲ್ಲಿ ಪ್ರಧಾನಿ ಶ್ರಮಿಸುತ್ತಿದ್ದಾರೆ. 2047ರ ವೇಳೆಗೆ ಇಡೀ ವಿಶ್ವದಲ್ಲಿ ಭಾರತ ಅಭಿವೃದ್ಧಿ ಹೊಂದಿದ ರಾಷ್ಟವಾಗಿ ಮುನ್ನಡೆಯುವಂತಾಗಲು ಪ್ರಯತ್ನಿಸಲಾಗಿದೆ ಎಂದರು.

ಹಿರಿಯ ಸಹಕಾರಿ ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ರಾಣಿ ಮಾಚಯ್ಯ ಮಾತನಾಡಿ, ಕೊಡಗು ಜಿಲ್ಲೆಯಲ್ಲಿ ಸಹಕಾರ ಸಂಘಗಳನ್ನು ಹಿರಿಯರು ಉಳಿಸಿ, ಮಕ್ಕಳ ಭವಿಷ್ಯ ನಿರ್ಮಾಣಕ್ಕೆ ಶ್ರಮಿಸಿದ್ದಾರೆ. ಆ ನಿಟ್ಟಿನಲ್ಲಿ ಸಹಕಾರ ಸಂಘಗಳನ್ನು ಇನ್ನಷ್ಟು ಹೆಚ್ಚಿನ ಅಭಿವೃದ್ಧಿ ಸಾಧಿಸುವತ್ತ ಗಮನಹರಿಸಬೇಕು. ಜಿಲ್ಲೆಯಲ್ಲಿ ಸಹಕಾರ ಸೇರಿದಂತೆ ಕಲೆ, ಸಾಹಿತ್ಯ, ಜಾನಪದ ಹೀಗೆ ವಿವಿಧ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡು ಇಲ್ಲಿನ ಕಲೆ, ಸಂಸ್ಕೃತಿ, ಪರಂಪರೆಗೆ ಒತ್ತು ನೀಡಲು ಶ್ರಮಿಸಲಾಗಿದೆ ಎಂದು ತಿಳಿಸಿದರು.

ಕೊಡಗು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿರ್ದೇಶಕ ನಾಪಂಡ ಉಮೇಶ್ ಉತ್ತಪ್ಪ, ಸಹಕಾರ ಸಂಘಗಳ ಉಪ ನಿಬಂಧಕ ಜಿ.ಆರ್. ವಿಜಯ್ ಕುಮಾರ್, ಕೆಐಸಿಎಂನ ನಿವೃತ್ತ ಪ್ರಾಂಶುಪಾಲೆ ಎಂ.ಎಂ.ಶ್ಯಾಮಲಾ ಮಾತನಾಡಿದರು. ಇದೇ ವೇಳೆ ಕೊಡಗು ಜಿಲ್ಲೆಯ 'ಶ್ರೇಷ್ಠ ಸಹಕಾರಿ' ಪ್ರಶಸ್ತಿಯನ್ನು ನಂದಿನೆರವಂಡ ರವಿ ಬಸಪ್ಪ, ಕಾಯಪಂಡ ಟಾಟ ಚಂಗಪ್ಪ, ಪಾಸುರ ಎನ್.ಉತ್ತಪ್ಪ ಹಾಗೂ ಶ್ರೇಷ್ಠ ಮಹಿಳಾ ಸಹಕಾರಿ ಮೊಳ್ಳೆರ ಸರಸು ಪೊನ್ನಪ್ಪ ಅವರನ್ನು ಸನ್ಮಾನಿಸಲಾಯಿತು. ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ಪಟ್ಟಡ ಮನು ರಾಮಚಂದ್ರ, ನಿರ್ದೇಶಕರಾದ ಬಿದ್ದಾಟಂಡ ರಮೇಶ್ ಚಂಗಪ್ಪ ಪಿ.ಸಿ.ಅಚ್ಚಯ್ಯ, ಪ್ರೇಮ ಸೋಮಯ್ಯ, ಕೋಡಿರ ಎಂ.ತಮ್ಮಯ್ಯ, ವಿ.ಕೆ.ಅಜಯ್ ಕುಮಾರ್, ಪಿ.ಬಿ.ಯತೀಶ್, ಎ.ಎಸ್.ಶ್ಯಾಮ್ ಚಂದ್ರ, ಎನ್.ಎ.ರ್‍ಯಾಲಿ ಮಾದಯ್ಯ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಉಪನಿರ್ದೇಶಕ ಎಂ.ಎಸ್. ಹೇಮಾವತಿ, ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಶೈಲಜಾ, ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯೋಗೇಂದ್ರನಾಯಕ್, ಮಂಜುಳಾ ಇದ್ದರು.

ನಾಳೆ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ


ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ಕಾಳಪ್ಪ ಮಾತನಾಡಿದರು.

ಮಡಿಕೇರಿ, ನ.20–ಕೃಷಿ ಚಟುವಟಿಕೆ ಮೂಲಕ ಬದುಕು ಕಟ್ಟಿಕೊಂಡಿರುವ ರೈತ ಸಮುದಾಯದ ಬದುಕಿಗೆ ಆತಂಕ ಮೂಡಿಸಿರುವ ಕರಾಳ 'ವಕ್ಫ್ ಕಾಯ್ದೆ' ಹಿಂಪಡೆಯಬೇಕು ಮತ್ತು ಹಗರಣಗಳಲ್ಲಿ ಮುಳುಗಿರುವ ರಾಜ್ಯ ಸರ್ಕಾರವನ್ನು ವಜಾಗೊಳಿಸಬೇಕೆಂದು ಆಗ್ರಹಿಸಿ ನ.22 ರಂದು ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ಕಾಳಪ್ಪ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10 ಗಂಟೆಗೆ ನಗರದ ಶ್ರೀ ಚೌಡೇಶ್ವರಿ ದೇಗುಲ ಬಳಿಯಿಂದ ಪ್ರತಿಭಟನಾ ಮೆರವಣಿಗೆ ಆರಂಭಗೊಳ್ಳಲಿದೆ. ಬಳಿಕ ನಗರದ ಹಳೇ ಖಾಗಿ ಬಸ್ ನಿಲ್ದಾಣ, ಜನರಲ್ ತಿಮ್ಮಯ್ಯ ವೃತ್ತದ ಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಲಿ, ಸಂಜೆ 5 ಗಂಟೆವರೆಗೆ ಧರಣಿ ನಡೆಸಲಾಗುತ್ತದೆ ಎಂದರು.

ಒಂದು ಸಮುದಾಯದ ಓಲೈಕೆಗಾಗಿ ತುಷ್ಟೀಕರಣ ನೀತಿ ಅನುಸರಿಸುವ ಮೂಲಕ ಕಾಂಗ್ರೆಸ್ ಸರ್ಕಾರ ಓಟ್ ಬ್ಯಾಂಕ್ ರಾಜಕಾರಣ ಮಾಡುತ್ತಿದೆ. ವಕ್ಫ್ ಸಚಿವ ಜಮೀರ್ ಅಹಮ್ಮದ್ ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಿ, ಆ ವ್ಯಾಪ್ತಿಯಲ್ಲಿ ಹಿಂದಿನಿಂದಲೂ ಕೃಷಿ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿರುವ ಕೃಷಿಕರ ಜಮೀನು, ಮಠ–ಮಾನ್ಯಗಳ ಜಮೀನಿನ ಆರ್‌ಟಿಸಿಯನ್ನು 'ವಕ್ಫ್ ಆಸ್ತಿ' ಎಂದು ಬದಲಾಯಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ವಕ್ಫ್ ಗೊಂದಲ ಸೃಷ್ಟಿಯಲ್ಲಿ ಇಡೀ ರಾಜ್ಯಾಡಳಿತವೆ ಭಾಗಿಯಾಗಿದೆ ಎಂದು ಆರೋಪಿಸಿದರು.

ಪ್ರತಿಭಟನೆ ಸಂದರ್ಭ ಜಿಲ್ಲೆಯ ಸಿ ಮತ್ತು ಡಿ ದರ್ಜೆ ಜಾಗವನ್ನು ಅರಣ್ಯ ಎಂದು ಘೋಷಿಸುವ ಸರ್ಕಾರದ ಕ್ರಮ, 5 ಎಕರೆಗಿಂತ ಕಡಿಮೆ ಇರುವ ರೈತರ ಜಾಗವನ್ನು 11 ಇ–ಸ್ಕೆಚ್ ಮಾಡದಂತೆ ಹೊರಡಿಸಿರುವ ಆದೇಶ, ಹದಗೆಟ್ಟ ಜಿಲ್ಲೆಯ ರಸ್ತೆಗಳ ದುರಸ್ತಿ ಕಾರ್ಯ ನಡೆಸದಿರುವುದು, ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸುತ್ತಿರುವ ಧೋರಣೆ ಖಂಡಿಸಲಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮಹೇಶ್ ಜೈನಿ, ವಕ್ತಾರರಾದ ಬಿ.ಕೆ.ಅರುಣ್ ಕುಮಾರ್, ತಳೂರು ಕಿಶೋರ್ ಕುಮಾರ್ ಮತ್ತು ಕಾಂಗೀರ ಸತೀಶ್ ಉಪಸ್ಥಿತರಿದ್ದರು.

ಮಕ್ಕಳು ದೇಶದ ಬೆನ್ನೆಲುಬು: ನ್ಯಾಯಾಧೀಶ ಈಶ್ವರ್

ಸೇವಾ ಭಾರತಿ ಕಾಲೇಜಿನಲ್ಲಿ ಬಾಲ್ಯವಿವಾಹ ನಿಷೇಧ, ಪೋಕ್ಸೋ, ಬಾಲ ನ್ಯಾಯ ಕಾಯ್ದೆ ಅರಿವು


ಚಾ.ನಗರ ಸೇವಾ ಭಾರತಿ ಪದವಿಪೂರ್ವ ಕಾಲೇಜಿನಲ್ಲಿ ಏರ್ಪಡಿಸಿದ್ದ ಅರಿವು ಕಾರ್ಯಕ್ರಮವನ್ನು ನ್ಯಾಯಾಧೀಶ ಈಶ್ವರ್ ಉದ್ಘಾಟಿಸಿದರು.

ಚಾಮರಾಜನಗರ, ನ.20–ಮಕ್ಕಳು ದೇಶದ ಬೆನ್ನೆಲುಬು. ಮಕ್ಕಳ ಹಕ್ಕುಗಳ ಬಗ್ಗೆ ಅರಿವು ಮೂಡಿಸುವುದು ಬಹಳ ಮುಖ್ಯ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ್ ತಿಳಿಸಿದರು.

ನಗರದ ಸೇವಾ ಭಾರತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಬಾಲ್ಯ ವಿವಾಹ ನಿಷೇಧ ಕಾಯ್ದೆ–2016, ಪೋಕ್ಸೋ ಕಾಯ್ದೆ–2012, ಬಾಲ ನ್ಯಾಯ (ರಕ್ಷಣೆ ಮತ್ತು ಪೋಷಣೆ) ಕಾಯ್ದೆ–2015ರ ಕುರಿತ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ದೈಹಿಕ, ಮಾನಸಿಕವಾಗಿ ಸದೃಢಗೊಳ್ಳಲು ಹಾಗೂ ಉತ್ತಮ ಜೀವನಕ್ಕೆ ಅಗತ್ಯವುಳ್ಳ ಕೌಶಲಗಳನೊಳಗೊಂಡ ಬೆಳವಣಿಗೆಗೆ ಪೂರಕವಾದ ವಾತಾವರಣ ಕಲ್ಪಿಸಲಾಗಿದೆ. ಸಾಂಸ್ಕೃತಿಕ, ಕ್ರೀಡೆ ಚಟುವಟಿಕೆ ಹಾಗೂ ಶಾಲಾ–ಕಾಲೇಜು ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು ಎಂದರು.

ಮಕ್ಕಳ ಹಕ್ಕುಗಳನ್ನು ರಕ್ಷಿಸಬೇಕಾದದ್ದು ನಮ್ಮೆಲ್ಲರ ಕರ್ತವ್ಯ. ಮಕ್ಕಳು ಸಂಕೋಚ ಪಡೆದೆ ತಮ್ಮ ಸಮಸ್ಯೆಗಳನ್ನು ಹೇಳುವ ಧೈರ್ಯ ಬೆಳೆಸಿಕೊಳ್ಳಬೇಕು. 18 ವರ್ಷದೊಳಗಿನ ಮಕ್ಕಳನ್ನ ದುಡಿಮೆಗೆ ಕಳಿಸುವಂತಿಲ್ಲ. ಕಡ್ಡಾಯವಾಗಿ ಶಿಕ್ಷಣವನ್ನು ಪೋಷಕರು ನೀಡಬೇಕು. ವಿದ್ಯಾಭ್ಯಾಸದ ಸಂದರ್ಭದಲ್ಲಿ ದುಡಿಯುವುದರಿಂದ ಮಕ್ಕಳ ಭವಿಷ್ಯ ಮಸುಕಾಗುತ್ತದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ್, ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ ಎಂಬ ನಾಣ್ನುಡಿಯಂತೆ ಮಕ್ಕಳು ಬಾಲ್ಯದಲ್ಲಿ ಉತ್ತಮ ಗುಣಗಳನ್ನು ಮೈಗೂಡಿಸಿಕೊಂಡು ಗುರಿ ಮುಟ್ಟುವ ಕಡೆ ಹೆಜ್ಜೆಗಳನ್ನಾಗಬೇಕು. ಯಾವುದೇ ಆಕರ್ಷಣೆಗೆ ಒಳಗಾಗದೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ದೇಶದಲ್ಲಿ ಮಕ್ಕಳ ಸ್ನೇಹಿ ಕಾನೂನು ಇದೆ. ಇದರ ಪಾಲನೆ ಆಗಬೇಕು. ಸಾರ್ವಜನಿಕರಲ್ಲಿ ಮಕ್ಕಳ ಹಕ್ಕುಗಳ ಬಗ್ಗೆ ಅರಿವು ಮೂಡಿಸುವ ಉದ್ದೇಶವಾಗಿದೆ. ಮಕ್ಕಳು ದೇಶದ ಆಸ್ತಿ, ಪ್ರತಿ ಹಂತದಲ್ಲೂ ಅವರ ಬೆಳವಣಿಗೆಯನ್ನು ಸೂಕ್ಷ್ಮವಾಗಿ ಗಮನಿಸಿ ಪೋಷಿಸಬೇಕು ಎಂದು ತಿಳಿಸಿದರು.

ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಸರಸ್ವತಿ, ಸೇವಾ ಭಾರತಿ ಸಂಯುಕ್ತ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲೆ ಪಿ.ಬಿ.ಲೋಕೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ನಿರ್ದೇಶಕ ಎಂ.ಮಹೇಶ್, ಸಹಾಯಕ ಕಾರ್ಯಕ್ರಮ ಅಧಿಕಾರಿ ಮಹಮ್ಮದ್ ರಿಯಾಜ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿದ್ದಶೆಟ್ಟಿ, ಸಿದ್ದರಾಜು, ಮಹೇಶ್ ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಮಗು ಅಪಹರಿಸಿದ್ದ ಭಿಕ್ಷುಕಿ ಬಂಧನ


ಮಗು ಅಪಹರಿಸಿದ್ದ ಭಿಕ್ಷುಕಿ ರಾಧಾ.

ಚಾಮರಾಜನಗರ: ಮೂರ್‍ನಾಲ್ಕು ದಿನಗಳ ಹಿಂದೆ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಎರಡೂವರೆ ವರ್ಷದ ಹೆಣ್ಣು ಮಗುವನ್ನು ಅಪಹರಿಸಿದ್ದ ಭಿಕ್ಷುಕಿಯನ್ನು ಚಾಮರಾಜನಗರ ಪೊಲೀಸರು ಬಂಧಿಸಿ, ಮಗುವನ್ನು ರಕ್ಷಿಸಿದ್ದಾರೆ.

ಮಂಡ್ಯದ ಹೊಸಹಳ್ಳಿ ಕಾಲೋನಿಯ ರಾಧಾ(28) ಬಂಧಿತ ಭಿಕ್ಷುಕಿ. ಈಕೆ ಮಹದೇಶ್ವರಬೆಟ್ಟದಲ್ಲಿ ರಾಮನಗರ ಮೂಲದ ಅನಿತಾ ಅವರನ್ನು ಪರಿಚಯ ಮಾಡಿಕೊಂಡು ಹಣ ಕೊಟ್ಟು ಆಸೆ ತೋರಿಸಿದ್ದಳು. ನಂತರ ಅಲ್ಲಿಂದ ಅನಿತಾ ಮತ್ತು ಮಗುವನ್ನು ಕೊಳ್ಳೇಗಾಲ, ಮೈಸೂರು, ನಂಜನಗೂಡಿಗೆ ಕರೆದುಕೊಂಡು ಬಂದು ಭಿಕ್ಷೆ ಬೇಡಿದ್ದಳು. ನ.14ರಂದು ಚಾಮರಾಜನಗರಕ್ಕೆ ಬಂದು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಅನಿತಾಳಿಂದ ಮಗು ಪಡೆದು ಪರಾರಿಯಾಗಿದ್ದಳು. ಈ ಸಂಬಂಧ ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಯಶಸ್ವಿ ಕಾರ್ಯಾಚರಣೆ: ಪ್ರಕರಣ ಸಂಬಂಧಿಸಿದಂತೆ ಪೊಲೀಸರು ಬಸ್ ನಿಲ್ದಾಣದಲ್ಲಿ ಸಿಸಿ ಕ್ಯಾಮರಾ ಪರಿಶೀಲಿಸಿದರು. ಇದನ್ನು ಆಧರಿಸಿ ತನಿಖಾ ತಂಡ ರಚಿಸಿ, ವಿವಿಧ ಆಯಾಮಗಳಲ್ಲಿ ಮತ್ತೆ ಸಿಸಿ ಕ್ಯಾಮರಾ ವೀಕ್ಷಿಸಿದಾಗ ರಾಧಾ ನಗರದ ಹಲವು ಕಡೆ ಮಗುವನ್ನು ಎತ್ತಿಕೊಂಡು ಭಿಕ್ಷಾಟನೆ ಮಾಡಿ, ನಂತರ ಚಾಮರಾಜೇಶ್ವರ ದೇಗುಲದ ಮುಂಭಾಗ ಆಟೋದಲ್ಲಿ ಹೋಗಿರುವುದು ಗೊತ್ತಾಯಿತು. ನಂತರ ಈ ಆಟೋವನ್ನು ಪೊಲೀಸರು ಪತ್ತೆ ಮಾಡಿ, ಚಾಲಕನನ್ನು ವಿಚಾರಿಸಿದಾಗ ಆಕೆಯನ್ನು ರೈಲು ನಿಲ್ದಾಣಕ್ಕೆ ಬಿಟ್ಟಿರುವ ಮಾಹಿತಿ ನೀಡಿದ್ದನು.

ಮಾಹಿತಿ ಆಧರಿಸಿದ ಪೊಲೀಸರು ರಾಧಾ ಮತ್ತು ಮಗುವನ್ನು ದೇವಸ್ಥಾನಗಳು, ಪ್ರೇಕ್ಷಣೀಯ ಸ್ಥಳಗಳು, ಬಸ್ ನಿಲ್ದಾಣಗಳು, ಮೈಸೂರು, ಮಂಡ್ಯ, ರಾಮನಗರ, ಚನ್ನಪಟ್ಟಣ, ಕೆಂಗೇರಿ ರೈಲು ನಿಲ್ದಾಣಗಳಲ್ಲಿ ಹುಡುಕಿ ಮಾಹಿತಿ ಕಲೆಹಾಕಿದ್ದರು. ಕೊನೆಗೆ ಮಂಗಳವಾರ ಮೈಸೂರು ರೈಲ್ವೆ ಪೊಲೀಸರ ನೆರವಿನೊಂದಿಗೆ ಮಗುವನ್ನು ಅಪಹರಿಸಿದ್ದ ರಾಧಾಳನ್ನು ಮೈಸೂರಿನಲ್ಲಿ ವಶಕ್ಕೆ ಪಡೆದುಕೊಳ್ಳಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ರಾಧಾಳನ್ನು ವಿಚಾರಣೆಗೊಳಪಡಿಸಿದಾಗ ಮಗುವನ್ನು ಅಪಹರಿಸಿ 4 ದಿನಗಳಿಂದ ರೈಲಿನಲ್ಲಿ ಭಿಕ್ಷಾಟನೆ ಮಾಡಿದ್ದಾಗಿ ತಿಳಿಸಿದ್ದಾಳೆ. ಪೊಲೀಸರು ಈಕೆಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಜ್ಞಾನ ದೇಗುಲವೇ ಗ್ರಂಥಾಲಯ



ಚಾಮರಾಜನಗರ ಜಿಲ್ಲಾ ಗ್ರಂಥಾಲಯ ಸಭಾಂಗಣದಲ್ಲಿ ನಡೆದ ಗ್ರಂಥಾಲಯ ಸಪ್ತಾಹ ಸಮಾರೋಪದಲ್ಲಿ ವಾರ್ತಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ರಮೇಶ್ ಮಾತನಾಡಿದರು.

ಚಾಮರಾಜನಗರ, ನ.20–ಗ್ರಂಥಾಲಯ ಜ್ಞಾನದೀವಿಗೆ ಇದ್ದಂತೆ, ಅದನ್ನು ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಂಡು ತಮ್ಮ ಜ್ಞಾನಾರ್ಜನೆ ವೃದ್ಧಿಸಿಕೊಳ್ಳಬೇಕು ಎಂದು ನಗರಸಭಾ ಸದಸ್ಯ ಎಂ.ಮಹೇಶ್ ಸಲಹೆ ನೀಡಿದರು.

ನಗರದ ಜಿಲ್ಲಾ ಗ್ರಂಥಾಲಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಹಾಗೂ ಪುಸ್ತಕಗಳ ಪ್ರದರ್ಶನ ಸಮಾರೋಪದಲ್ಲಿ ಮಾತನಾಡಿದ ಅವರು, ಹಲವು ವಿಚಾರಗಳ ಸಂಪೂರ್ಣ ಮಾಹಿತಿ ದೊರೆಯಬೇಕಾದರೆ ಗ್ರಂಥಾಲಯಗಳಲ್ಲಿ ಓದಬೇಕು. ವಿದ್ಯಾರ್ಥಿಗಳು ಪಠ್ಯಪುಸ್ತಕ ಜೊತೆಗೆ ದಿನಪತ್ರಿಕೆಗಳ ಓದುವ ಮೂಲಕ ಸಾಮಾನ್ಯ ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದರು.

ಗ್ರಂಥಾಲಯ ಸೇವೆಯಿಂದ ಇಂದಿನ ಆಧುನಿಕ ತಂತ್ರಜ್ಞಾನ ಯುಗದಲ್ಲಿ ಗ್ರಂಥಾಲಯ ಮತ್ತು ಅಂತರ್ಜಾಲದ ಮೂಲಕ ಜ್ಞಾನವನ್ನು ಗಳಿಸಿಕೊಳ್ಳುತ್ತಿದ್ದೇವೆ. ಆದರೆ, ಮಾನವೀಯ ಮೌಲ್ಯ, ಮನುಷ್ಯನ ಸರ್ವತೋಮುಖ ಬೆಳವಣಿಗೆ ಆಗಬೇಕು ಎಂದರೆ ಪುಸ್ತಕಗಳಿಂದ ಮಾತ್ರ ಸಾಧ್ಯ ಎಂದು ತಿಳಿಸಿದರು.

ವಾರ್ತಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ರಮೇಶ್ ಮಾತನಾಡಿ, ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಿಂದಲ್ಲೇ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಪಠ್ಯಪುಸಕದೊಂದಿಗೆ ಗ್ರಂಥಾಲಯಗಳಲ್ಲಿ ಬೇರೆ ಬೇರೆ ಪುಸ್ತಕಗಳನ್ನು ಓದಿದರೆ. ಜ್ಞಾನ ಹೆಚ್ಚಾಗುತ್ತದೆ. ನಿರಂತರ ಓದುವಿನಿಂದ ಯಶಸ್ಸು ಸಾಧಿಸಬಹುದು ಎಂದರು.

ಜಿಲ್ಲಾ ಕೇಂದ್ರ ಗ್ರಂಥಾಲಯ ಅಧಿಕಾರಿ ಆರ್.ಶಿವಸ್ವಾಮಿ ಮಾತನಾಡಿ, ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಪುಸ್ತಕ ಪ್ರದರ್ಶನದ ಉದ್ದೇಶ ಸಮಾಜದಲ್ಲಿರುವ ಎಲ್ಲರೂ ಪರಿವರ್ತನೆ ಆಗಬೇಕು. ಶಿಕ್ಷಣ ಮತ್ತು ಗ್ರಂಥಾಲಯ ಒಂದು ನಾಣ್ಯದ ಎರಡು ಮುಖ ಇದ್ದಂತೆ ಎಂದರು.

ಪುಸ್ತಕ ದಾನಿ ರಜನಿ ತಿವಾರಿ ಮಾತನಾಡಿದರು. ಪುಸ್ತಕ ದಾನಿಗಳಾದ ಡಾ.ಕೆ.ಲಕ್ಷ್ಮೀ ಪ್ರೇಮ ಕುಮಾರ್ ಮತ್ತು ಕುಟುಂಬ 'ಚುಟುಕು ಚಿತ್ತಾರ' ಪುಸ್ತಕ ಹಾಗೂ ದಿವಂಗತ ಡಿ.ಪಿ.ತಿವಾರಿ ಮತ್ತು ಅನ್ನಪೂರ್ಣ ಅವರ ಸವಿನೆನಪಿಗಾಗಿ ಡಿ.ಶ್ರೀನಿವಾಸ್ ತಿವಾರಿ ಮತ್ತು ಕುಟುಂಬ 'ಜೀವ ಜಗತ್ತು' ಪುಸ್ತಕಗಳನ್ನು ಜಿಲ್ಲಾ ಗ್ರಂಥಾಲಯ ಕೇಂದ್ರಕ್ಕೆ ಕೊಡುಗೆ ನೀಡಿದರು.

ಕಾರ್ಯಕ್ರಮದಲ್ಲಿ ಪುಸ್ತಕ ದಾನಿಗಳಾದ ಎಸ್.ಕಾಳಿಂಗಸ್ವಾಮಿ, ರಬೇಲ್, ಶಿವಕುಮಾರ್, ಎ.ರಂಗಸ್ವಾಮಿ, ಜಿಲ್ಲಾ ಗ್ರಂಥಾಲಯ ಪಾಲಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಗಣಪತಿ ದೇವಸ್ಥಾನದಲ್ಲಿ ಹೋಮ


ಭ್ರಮರಾಂಬ ಬಡಾವಣೆಯ ಗಣಪತಿ ದೇವಸ್ಥಾನದಲ್ಲಿ ಹೋಮ ನಡೆಸಲಾಯಿತು.

ಚಾಮರಾಜನಗರ, 20–ನಗರದ ಭ್ರಮರಾಂಬ ಬಡಾವಣೆಯ 4ನೇ ಕ್ರಾಸ್‌ನಲ್ಲಿರುವ ಶ್ರೀ ಮಹಾಗಣಪತಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಲೋಕ ಕಲ್ಯಾಣಕ್ಕಾಗಿ ಗಣಪತಿ ಹೋಮ ಹಾಗೂ ವಿಶೇಷ ಪೂಜಾ ಕೈಂಕರ್ಯ ನಡೆಯಿತು. ದೇವಸ್ಥಾನದಲ್ಲಿ ಅರ್ಚಕ ಕಾರ್ತಿಕ್ ನೇತೃತ್ವದಲ್ಲಿ ಬೆಳಗ್ಗೆ 9 ರಿಂದ ಮಧ್ಯಾಹ್ನ 12 ಗಂಟೆಗೆ ಪೂಜಾ ಕಾರ್ಯಕ್ರಮ ಆರಂಭವಾಗಿ ಪೂರ್ಣಾಹುತಿ ನಡೆಯಿತು.

ಇದೇ ವೇಳೆ ಭಕ್ತರಿಗೆ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು.

ಚಾ.ನಗರದಲ್ಲಿ ಉರುಕಾತೇಶ್ವರಿ ಹಾಲರವೆ

ಚಾಮರಾಜನಗರ, ನ.20–ನಗರದ ಉರುಕಾತೇಶ್ವರಿ ಅಮ್ಮನವರ 4ನೇ ವರ್ಷದ ಹಾಲರುವೆ ಮಹೋತ್ಸವ ಬುಧವಾರ ವಿಜೃಂಭಣೆಯಿಂದ ನೆರವೇರಿತು.

ನಗರದ ಕೋಳದ ಬೀದಿಯಲ್ಲಿನ ದೊಡ್ಡರಸನಕೊಳದಲ್ಲಿ ಮೂಲ ವಿಗ್ರಹಕ್ಕೆ ಪೂಜೆ ಸಲ್ಲಿಸುವ ಮೂಲಕ ಬಾಲಕಿಯರ ಹಾಲರುವೆ ಉತ್ಸವಕ್ಕೆ ಚಾಲನೆ ನೀಡಲಾಯಿತು. ನಂತರ ದೊಡ್ಡಂಗಡಿ, ಚಿಕ್ಕ ಅಂಗಡಿ ಬೀದಿ ಮೂಲಕ ಮಂಗಳವಾದ್ಯದೊಂದಿಗೆ ಡಿವಿಯೇಷನ್ ರಸ್ತೆಯ ಉರುಕಾತೇಶ್ವರಿ ದೇವಾಲಯವರೆಗೆ ಉತ್ಸವ ನಡೆಸಲಾಯಿತು.

ಉರುಕಾತೇಶ್ವರಿ ಮೂಲ ವಿಗ್ರಹವನ್ನು ವಿವಿಧ ಹೂಗಳಿಂದ ಅಲಂಕರಿಸಲಾಗಿತ್ತು. ಭಕ್ತಾದಿಗಳು ಸರದಿ ಸಾಲಿನಲ್ಲಿ ನಿಂತು ಪೂಜೆ ಸಲ್ಲಿಸಿದರು. ನಂತರ ಅನ್ನಸಂತರ್ಪಣೆ ಜರುಗಿತು. ನಗರಸಭೆ ಸದಸ್ಯ ಬಸವಣ್ಣ, ಯಜಮಾನರಾದ ಸಿ.ಕೆ.ಮಹದೇವಶೆಟ್ಟಿ, ಮಸಣಶೆಟ್ಟಿ, ಮುತ್ತುರಾಜ್, ನಂಜಪ್ಪ, ರಾಜಣ್ಣ, ಚನ್ನಿಗಶೆಟ್ಟಿ, ಚಿಕ್ಕವೆಂಕಶೆಟ್ಟಿ, ಸೋಮು, ಮಹದೇವಶೆಟ್ಟಿ, ಸುಬ್ಬಶೆಟ್ಟಿ, ಮಹದೇವಸ್ವಾಮಿ, ಕುಮಾರ್, ಗೌರಿಪುಟ್ಟಶೆಟ್ಟಿ, ಮಂಟೇಸ್ವಾಮಿ, ಮಹದೇಶ್ವರಸ್ವಾಮಿ ನೀಲಗಾರರು, ಜಾನಪದ ಕಲಾವಿದರು ಹಾಜರಿದ್ದರು.


ಚಾಮರಾಜನಗರದಲ್ಲಿ ಉರುಕಾತೇಶ್ವರಿ ಅಮ್ಮನವರ ಹಾಲರುವೆ ಉತ್ಸವ ನಡೆಯಿತು.

ಮಹಾರಾಷ್ಟ್ರದಲ್ಲಿ ಶೇ. 58.43, ಜಾರ್ಖಂಡ್‌ನಲ್ಲಿ ಶೇ. 67.59 ಮತದಾನ

ಮುಂಬೈ : ಮಹಾರಾಷ್ಟ್ರ ಹಾಗೂ ಜಾರ್ಖಂಡ್‌ನ ವಿಧಾನ ಸಭೆ ಚುನಾವಣೆಯ ಮತದಾನ ಬುಧವಾರ ಶಾಂತಿಯುತವಾಗಿ ನಡೆಯಿತು. ಮಹಾರಾಷ್ಟ್ರದಲ್ಲಿ ಶೇ. 58.43 ಹಾಗೂ ಜಾರ್ಖಂಡ್ ನಲ್ಲಿ ಶೇ. 67.59 ಮತದಾನವಾಗಿದೆ.

ಮಹಾರಾಷ್ಟ್ರ ವಿಧಾನ ಸಭೆಯ ಎಲ್ಲಾ 288 ಕ್ಷೇತ್ರಗಳಿಗೆ ಇಂದು ಒಂದೇ ಹಂತದಲ್ಲಿ ಮತದಾನ ನಡೆಯಿತು. ಜಾರ್ಖಂಡ್‌ನಲ್ಲಿ 43 ವಿಧಾನ ಸಭಾ ಕ್ಷೇತ್ರಗಳಿಗೆ ನವೆಂಬರ್ 13ರಂದು ಮೊದಲ ಹಂತದ ಮತದಾನ ನಡೆದಿತ್ತು. ಇಂದು ಉಳಿದ 38 ಕ್ಷೇತ್ರಗಳಿಗೆ ಮತದಾನ ನಡೆಯಿತು.

ಮಹಾರಾಷ್ಟ್ರ ಹಾಗೂ ಜಾರ್ಖಂಡ್ ಎರಡೂ ರಾಜ್ಯಗಳು ಬಿಜೆಪಿ ನೇತೃತ್ವದ ಎನ್‌ಡಿಎ (ಮಹಾರಾಷ್ಟ್ರದಲ್ಲಿ ಮಹಾಯುತಿ) ಹಾಗೂ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟ (ಮಹಾರಾಷ್ಟ್ರದಲ್ಲಿ ಮಹಾ ವಿಕಾಸ ಅಘಾಡಿ)ದ ನಡುವಿನ ತೀವ್ರ ಹಣಾಹಣಿಗೆ ಸಾಕ್ಷಿಯಾಗಿವೆ. ಈ ಎರಡು ರಾಜ್ಯಗಳ ವಿಧಾಸಭೆ ಚುನಾವಣೆಗಳೊಂದಿಗೆ ಉತ್ತರಪ್ರದೇಶ, ಪಂಜಾಬ್, ಕೇರಳ ಹಾಗೂ ಉತ್ತರಾಖಂಡದ 15 ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ಕೂಡ ಬುಧವಾರ ನಡೆಯಿತು.

ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲಾ ವಿದ್ಯಾರ್ಥಿನಿಯರ ಆರೋಗ್ಯ ರಕ್ಷಣೆಗೆ ಯೋಜನೆ ರೂಪಿಸಬೇಕು

ಸರ್ಕಾರಕ್ಕೆ ವಿ–ಕೇರ್ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷೆ ಡಾ.ಕುಮುದಿನಿ ಅಚ್ಚಿ ಆಗ್ರಹ

ಮೈಸೂರು,ನ.20 (ಪಿಎಂ)– ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರ ಆರೋಗ್ಯ ರಕ್ಷಣೆಗೆ ಸರ್ಕಾರ ಮತ್ತಷ್ಟು ಯೋಜನೆ ರೂಪಿಸಬೇಕೆಂದು ವಿ–ಕೇರ್ (ಕಲೆ, ಸಂಸ್ಕೃತಿ ಹಾಗೂ ಸಾಮಾಜಿಕ ಅಧ್ಯಯನಗಳ ಅಭಿವೃದ್ಧಿ ಸಂಸ್ಥೆ) ಸಂಸ್ಥೆ ಸಂಸ್ಥಾಪಕ ಅಧ್ಯಕ್ಷೆ ಡಾ.ಕುಮುದಿನಿ ಅಚ್ಚಿ ಆಗ್ರಹಿಸಿದ್ದಾರೆ.

ಸರ್ಕಾರಿ ಶಾಲಾ ಕಾಲೇಜುಗಳ ಹೆಣ್ಣು ಮಕ್ಕಳಿಗಾಗಿ ಸರ್ಕಾರವು ಇನ್ನಷ್ಟು ರಕ್ಷಣಾತ್ಮಕ ಯೋಜನೆಗಳನ್ನು ಅನುಷ್ಠಾನಕ್ಕೆ ತರಬೇಕಿದೆ. ಗ್ರಾಮೀಣ ಮತ್ತು ಅರೆ ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲೆಗಳ ಹೆಣ್ಣು ಮಕ್ಕಳಿಗೆ ಸಮರ್ಪಕ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಇರುವುದು ಹಾಗೂ ಮಕ್ಕಳ ಮಾಸಿಕ ಋತುಸ್ರಾವ ಸಮಸ್ಯೆಗಳನ್ನು ಆರೋಗ್ಯಕರ ರೀತಿಯಲ್ಲಿ ನಿರ್ವಹಣೆ ಮಾಡದೇ ಇರುವುದು ಮಕ್ಕಳು ಅನೇಕ ರೀತಿ ಆರೋಗ್ಯ ಸಮಸ್ಯೆಗಳಿಗೆ ಗುರಿಯಾಗುತ್ತಿದ್ದಾರೆ. ಸಂಸ್ಥೆಯು ನಡೆಸಿದ ಶಾಲಾ ಸಮಾಜ ಕಾರ್ಯದಲ್ಲಿ ಈ ಅಂಶಗಳು ಕಂಡುಬಂದಿವೆ.

ಬಹಳ ಮುಖ್ಯವಾಗಿ ಋತುಸ್ರಾವಕ್ಕೆ ಒಳಪಡುವ ಮೊದಲೇ ಶಾಲೆಗಳಲ್ಲಿನ ಹೆಣ್ಣು ಮಕ್ಕಳಿಗೆ ವೈಜ್ಞಾನಿಕವಾದ ಮಾಹಿತಿ ಮತ್ತು ತರಬೇತಿಗಳನ್ನು ನಡೆಸಬೇಕು. ಜೊತೆಗೆ ಶಾಲೆಗಳಲ್ಲಿ ಆಪ್ತ ಸಮಾಲೋಚನಾ ವ್ಯವಸ್ಥೆ ಕಲ್ಪಿಸಬೇಕು. ಇದರೊಂದಿಗೆ ಉಚಿತವಾಗಿ ಸ್ಯಾನಿಟರಿ ಪ್ಯಾಡ್‌ಗಳನ್ನು ಪ್ರತಿ ಮಗುವಿನ ಋತುಸ್ರಾವಕ್ಕೂ ಮೊದಲೇ ನೀಡುವುದು ಹಾಗೂ ಅವುಗಳನ್ನು ವಿಲೇವಾರಿಗೆ ಸೂಕ್ತ ಕ್ರಮ ಅತ್ಯಗತ್ಯ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ.23ರಂದು ಬಿಸಿಎಂ ವಿದ್ಯಾರ್ಥಿನಿಲಯಗಳ ಹಿರಿಯ ವಿದ್ಯಾರ್ಥಿಗಳ ಸಂಘದಿಂದ ಕನ್ನಡ ರಾಜ್ಯೋತ್ಸವ

ಮೈಸೂರು,ನ.20(ಪಿಎಂ)– ಮೈಸೂರು ಜಿಲ್ಲಾ ಬಿಸಿಎಂ ವಿದ್ಯಾರ್ಥಿನಿಲಯಗಳ ಹಿರಿಯ ವಿದ್ಯಾರ್ಥಿಗಳ ಸಂಘದ ವತಿಯಿಂದ ನ.23ರಂದು ಕರ್ನಾಟಕ ಸುವರ್ಣ ಸಂಭ್ರಮ–2024 ಶೀರ್ಷಿಕೆಯಡಿ ಕನ್ನಡ ರಾಜ್ಯೋತ್ಸವ ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 11ಕ್ಕೆ ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಆಯೋಜಿಸಿರುವ ರಾಜ್ಯೋತ್ಸವವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಉದ್ಘಾಟಿಸಲಿದ್ದಾರೆ. ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿಗಳೂ ಆದ ಮೈಸೂರು ಜಿಲ್ಲಾ ಬಿಸಿಎಂ ವಿದ್ಯಾರ್ಥಿನಿಲಯಗಳ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಬಿ.ಶಿವಸ್ವಾಮಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಜಾನಪದ ವಿದ್ವಾಂಸ ಡಾ.ಪಿ.ಕೆ.ರಾಜಶೇಖರ, ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ ಡಾ.ವೆಂಕಟೇಶಯ್ಯ, ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಘವೇಂದ್ರ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಹುಟ್ಟೂರು ಕೂಡ್ಲುವಿನಲ್ಲಿ ನಕ್ಸಲ್ ನಾಯಕ ವಿಕ್ರಂಗೌಡ ಅಂತ್ಯಸಂಸ್ಕಾರ



ಉಡುಪಿ, ನ.20– ಪೀತಬೈಲ್‌ನಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಮೃತಪಟ್ಟಿದ್ದ ನಕ್ಸಲ್ ನಾಯಕ ವಿಕ್ರಂ ಗೌಡನ ಅಂತ್ಯ ಸಂಸ್ಕಾರ ಹುಟ್ಟೂರಾದ ಹೆಬ್ರಿ ತಾಲೂಕಿನ ಕೂಡ್ಲುವಿನಲ್ಲಿ ಬುಧವಾರ ನೆರವೇರಿತು. ಕೂಡ್ಲುವಿನಲ್ಲಿ ವಿಕ್ರಂಗೆ ಸೇರಿದ್ದ ಜಾಗದಲ್ಲಿ ಅಂತ್ಯಸಂಸ್ಕಾರ ನಡೆಯಿತು. ಸಮೀಪದ ಬಂಧುಗಳು, ಪೊಲೀಸರು, ಅಧಿಕಾರಿಗಳು ಈ ವೇಳೆ ಉಪಸ್ಥಿತರಿದ್ದರು.

ಹೆಬ್ರಿ ತಾಲ್ಲೂಕಿನ ಕಬ್ಬಿನಾಲೆಯ ಪೀತಬೈಲ್‌ನಲ್ಲಿ ಸೋಮವಾರ ರಾತ್ರಿ ನಕ್ಸಲರು ಮತ್ತು ನಕ್ಸಲ್ ನಿಗ್ರಹ ಪಡೆಯ (ಎಎನ್‌ಎಫ್) ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ನಕ್ಸಲ್ ನಾಯಕ ವಿಕ್ರಂ ಗೌಡ ಅಲಿಯಾಸ್ ಶ್ರೀಕಾಂತ್ (46) ಹತ್ಯೆಯಾಗಿದ್ದ. ಹೆಬ್ರಿ ತಾಲೂಕಿನ ಸೋಮೇಶ್ವರ ನಾಡ್ಪಾಲು ಗ್ರಾಮದ ಕೂಡ್ಲು ನಿವಾಸಿ ವಿಕ್ರಂ ಗೌಡ ಹಲವು ವರ್ಷಗಳಿಂದ ನಕ್ಸಲ್ ಚಟುವಟಿಕೆಗಳಲ್ಲಿ ಸಕ್ರಿಯನಾಗಿದ್ದ ಮತ್ತು ಹಲವು ಪ್ರಕರಣಗಳಲ್ಲಿ ಪೊಲೀಸರಿಗೆ ಬೇಕಾಗಿದ್ದ.

ಸೋಮವಾರ ರಾತ್ರಿ ಸುಮಾರು ಆರು ಮಂದಿ ನಕ್ಸಲರ ತಂಡ ಪೀತಬೈಲ್‌ನ ಮನೆಯೊಂದರ ಸಮೀಪ ಬಂದಿತ್ತು. ಈ ವೇಳೆ ಅವರು ಹಾಗೂ ಎಎನ್‌ಎಫ್ ತಂಡ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ವಿಕ್ರಂ ಮೃತಪಟ್ಟಿದ್ದು, ಉಳಿದವರು ಪರಾರಿಯಾಗಿದ್ದರು.

ಮನೆಗಳ್ಳನ ಬಂಧನ:18 ಕಳವು ಪ್ರಕರಣ ಪತ್ತೆ

ನಗದು ಸೇರಿದಂತೆ 5.5 ಲಕ್ಷ ಮೌಲ್ಯದ ಪದಾರ್ಥಗಳು ವಶ



ಕಳವು ಮಾಲುಗಳನ್ನು ವಶಪಡಿಸಿಕೊಂಡಿರುವ ಪೊಲೀಸರು.

ಹುಣಸೂರು, ನ.20– ಹುಣಸೂರು ಟೌನ್ ಪೊಲೀಸರು ಕಾರ್ಯಾಚರಣೆ ನಡೆಸಿ ಮನೆಗಳವು ಆರೋಪಿಯನ್ನು ಬಂಧಿಸಿ, ಬಂಧಿತನಿಂದ 1.72 ಲಕ್ಷ ನಗದು ಸೇರಿದಂತೆ 5.5 ಲಕ್ಷ ಮೌಲ್ಯದ ಪದಾರ್ಥಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮೈಸೂರಿನ ಬೆಲವತ್ತ ಗ್ರಾಮದ ಸೈಯದ್ ಉಸ್ಮಾನ್(35) ಬಂಧಿತ ಆರೋಪಿ. ಹುಣಸೂರಿನ ಬಜಾರ್ ರಸ್ತೆ, ಜೆಎಲ್‌ಬಿ ರಸ್ತೆ, ಹಳೇ ಸೇತುವೆ ರಸ್ತೆಯ ಮೆಡಿಕಲ್ ಶಾಪ್‌ಗಳಲ್ಲಿ ಕಳವು ಪ್ರಕರಣಗಳು ನಡೆದಿತ್ತು. ಈ ಸಂಬಂಧ ಖದೀಮನ ಬಂಧನಕ್ಕೆ ಹುಣಸೂರು ಠಾಣೆ ಇನ್ಸ್‌ಪೆಕ್ಟರ್ ಸಂತೋಷ್ ಕಶ್ಯಪ್ ಜಾಲ ಬೀಸಿದ್ದರು. ಖತರ್ನಾಕ್ ಕಳ್ಳ ಪೊಲೀಸರು ಹೆಣೆದ ಜಾಲಕ್ಕೆ ಸಿಕ್ಕಿಬಿದ್ದಿದ್ದಾನೆ.

ಹುಣಸೂರು, ಮೈಸೂರು, ಬೆಂಗಳೂರು, ರಾಮನಗರ, ಮಂಡ್ಯ, ನಂಜನಗೂಡು ಸೇರಿದಂತೆ ಇತರೆಡೆ ನಡೆದ 18 ಕಳವು ಪ್ರಕರಣಗಳು ಪತ್ತೆಯಾಗಿದೆ. ಬಂಧಿತನಿಂದ 1.72 ಲಕ್ಷ ನಗದು, 10 ಗ್ರಾಂ ಚಿನ್ನಾಭರಣ, 3 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನಾಗೇಶ್ ಅವರ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಗೋಪಾಲಕೃಷ್ಣ ಉಸ್ತುವಾರಿಯಲ್ಲಿ ಹುಣಸೂರು ಟೌನ್ ಪೊಲೀಸ್ ಠಾಣೆ ಆರಕ್ಷಕ ನಿರೀಕ್ಷಕ ಸಂತೋಷ್ ಕಶ್ಯಪ್, ಪಿಎಸ್ಐಗಳಾದ ನಾಗಯ್ಯ ಹಾಗೂ ಜಮೀರ್ ಅಹ್ಮದ್ ರವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಯೋಗೇಶ್, ಅರುಣ್, ರವೀಶ್, ಮಹೇಂದ್ರ ದಿಲೀಪ್, ರವಿಕುಮಾರ್ ಅವರು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಬದುಕು ಹಸನಾಗಿಸಲು ಸಹಕಾರ ಸಂಘಗಳು ಅಗತ್ಯ

ಹೆಚ್.ಡಿ.ಕೋಟೆಯಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ



ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಚಲುವರಾಜು, ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಸುರೇಶ್ ನಾಯಕ್ ಅವರನ್ನು ಶಾಸಕ ಅನಿಲ್ ಚಿಕ್ಕಮಾದು ಹಾಗೂ ಮೈಮುಲ್ ನಿರ್ದೇಶಕ ಹಿರೇಗೌಡ ಸನ್ಮಾನಿಸಿದರು.

ಹೆಚ್.ಡಿ.ಕೋಟೆ, ನ.20– ಜನಸಾಮಾನ್ಯರ ಬದುಕನ್ನು ಹಸನಾಗಿಸಲು ಸಹಕಾರ ಸಂಘಗಳು ಕೆಲಸ ನಿರ್ವಹಿಸುತ್ತಿವೆ ಎಂದು ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಚಲುವರಾಜು ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಂಡಳಿ, ಮೈಸೂರು ಜಿಲ್ಲಾ ಸಹಕಾರ ಒಕ್ಕೂಟ, ಮೈಸೂರು ಚಾ.ನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಸೇರಿದಂತೆ ಇತರೆ ಸಹಕಾರ ಸಂಘಗಳು ಮತ್ತು ಒಕ್ಕೂಟದ ವತಿಯಿಂದ ನಡೆದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, 120 ವರ್ಷ ಇತಿಹಾಸ ಇರತಕ್ಕ ಈ ಸಹಕಾರಿ ಕ್ಷೇತ್ರದಲ್ಲಿ, ರೈತರ ಬದುಕಿನಲ್ಲಿ ಜೀವನಾಡಿಯಾಗಿ, ಸಾಕಷ್ಟು ಬಡ ಕುಟುಂಬದ ರೈತರಿಗೆ ಕಾಮಧೇನು ರೀತಿಯಲ್ಲೆ ಸಹಕಾರವಾಗಿದೆ ಈ ಸಹಕಾರಿ ಕ್ಷೇತ್ರ ಎಂದರು.

ಕೆಲ ಸಾವಿರ ಲೀಟರ್ ಹಾಲು ಸಂಗ್ರಹಣೆ ಸಾಮರ್ಥ್ಯದಿಂದ 1976 ರಲ್ಲಿ ಆರಂಭವಾದ ಮೈಮುಲ್ ಇಂದು 9ಲಕ್ಷ ಲೀ ಹಾಲು ಸಂಗ್ರಹಣೆ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡಿದೆ. ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಲು ಜಿಲ್ಲೆಯಲ್ಲಿ 250 ಕ್ಕಿಂತ ಹೆಚ್ಚಿನ ಮಳಿಗೆಗಳು ತೆರೆದಿವೆ ಅಲ್ಲದೇ ನಮ್ಮ ನಂದಿನಿ ಉತ್ಪನ್ನಗಳು ದೇಶವಲ್ಲದೇ ವಿದೇಶಗಳಲ್ಲೂ ಸಹ ಮಾರಾಟವಾಗುತ್ತಿವೆ ಎಂದರು.

ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ಅವಿಭಜಿತ ಹೆಚ್.ಡಿ. ಕೋಟೆ ತಾಲೂಕಿನಲ್ಲಿ ಕಳೆದ 20 ವರ್ಷದ ಹಿಂದೆ ಕೇವಲ 16 ಹಾಲು ಉತ್ಪಾದಕರ ಸಹಕಾರ ಸಂಘಗಳಿದ್ದವು, ಈಗ 180 ಕ್ಕೆ ಏರಿದೆ. ರಾಷ್ಟ್ರದಲ್ಲಿ ಎಂಟು ಕೋಟಿ ಸಹಕಾರ ಸಂಘಗಳಿದ್ದು, 30 ಸಾವಿರ ಕೋಟಿಯ ವಹಿವಾಟು ನಡೆಯುತ್ತಿದೆ ಎಂದರು.

ನಮ್ಮ ಜೆಎಲ್‌ಆರ್ ಜೊತೆ ಮೈಮುಲ್ ಒಪ್ಪಂದ ಮಾಡಿಕೊಂಡದ್ದೇ ಆದಲ್ಲಿ ನಂದಿನಿ ಉತ್ಪನ್ನಗಳನ್ನು ನಮ್ಮ ಜಂಗಲ್ ಲಾಡ್ಜ್ ಮತ್ತು ರೆಸಾರ್ಟ್‌ಗಳಲ್ಲಿ ಬಳಸಬಹುದು. ನಮ್ಮ ಜೆಎಲ್‌ಆರ್‌ನ ಎಲ್ಲಾ ಬ್ರಾಂಚ್‌ಗಳಿಂದ ಸುಮಾರು 1000 ಲೀಗೂ ಹೆಚ್ಚಿನ ಹಾಲು ಅವಶ್ಯಕತೆ ಇರುವುದರಿಂದ ಒಪ್ಪಂದದಿಂದ ಮೈಮುಲ್‌ಗೂ ಸಹ ಲಾಭದಾಯಕವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಚ್.ವಿ. ರಾಜೀವ್, ಸಹಕಾರ ಯೂನಿಯನ್ ಉಪಾಧ್ಯಕ್ಷ ಸದಾನಂದ, ಸಹಕಾರ ಯೂನಿಯನ್ ನಿರ್ದೇಶಕ ಭೈರಪ್ಪ, ಮೈಮುಲ್ ನಿರ್ದೇಶಕರಾದ ಈರೇಗೌಡ, ಶಿವಗಾಮಿ, ವಿಸ್ತರಣಾಧಿಕಾರಿ ಆರಿಫ್ ಇಕ್ಬಾಲ್, ರಾಮಪ್ಪ ಬಾರ್ಕಿ, ನೀಲಾಂಬಿಕಾ ಮಹೇಶ್, ಲೀಲಾನಾಗರಾಜು, ಮಲ್ಲಿಕಾ ರವಿಕುಮಾರ್, ಸಹಕಾರ ಅಭಿವೃದ್ಧಿ ಅಧಿಕಾರಿ ರೇಣುಕಾ, ಪಿ.ರವಿ, ಪಿಎಲ್‌ಡಿ ಬ್ಯಾಂಕ್‌ನ ವ್ಯವಸ್ಥಾಪಕಿ ಜಯಮ್ಮ ಮಹದೇವಪ್ಪ, ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಸುರೇಶ್ ನಾಯಕ್, ಸಕಲೇಶ್, ಮೊತ್ತ ಬಸವರಾಜು, ಎಂಡಿಸಿಸಿ ಬ್ಯಾಂಕ್ ವಿಸ್ತರಣಾಧಿಕಾರಿ ಚಂದ್ರಶೇಖರ್, ವಿವಿ ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜು, ಜಿನ್ನಹಳ್ಳಿ ರಾಜನಾಯಕ, ಮಾನಸ ಗಂಗೋತ್ರಿ ಡಾ. ರಾಮಕೃಷ್ಣ, ಮರಳೂರನಾಯಕ, ಕೆಂಡಗಣ್ಣೇಗೌಡ, ವಿವಿಧ ಸಹಕಾರ ಸಂಘಗಳ ಅಧ್ಯಕ್ಷರು ನಿರ್ದೇಶಕರುಗಳು ಹಾಜರಿದ್ದರು.

> ಹೆಚ್.ಡಿ.ಕೋಟೆ ತಾಲೂಕಿನಲ್ಲಿ ರೈತರು ಕೃಷಿಯಲ್ಲಿ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇದನ್ನು ಮನಗಂಡು, ಶಾಸಕ ಅನಿಲ್ ಚಿಕ್ಕಮಾದು ಅವರ ನೇತೃತ್ವದಲ್ಲಿ ಹೈನುಗಾರಿಕೆಗೆ ಹೆಚ್ಚು ಒತ್ತು ನೀಡಿದ ಪರಿಣಾಮ ಸಾಕಷ್ಟು ಬಡ ಕುಟುಂಬಗಳ ಜೀವನ ಸುಧಾರಿಸಿದೆ.
>
> – **ಈರೇಗೌಡ,** ಮೈಮುಲ್ ನಿರ್ದೇಶಕ.

ದೊಡ್ಡೇಬಾಗಿಲು ಗ್ರಾಪಂ ಗಾದಿ ಕಾಂಗ್ರೆಸ್ ಪಾಲು

ಅಧ್ಯಕ್ಷರಾಗಿ ಐಷಾ ಸಿದ್ದಿಖಾ, ಶಿವಣ್ಣ ಉಪಾಧ್ಯಕ್ಷರಾಗಿ ಆಯ್ಕೆ



ತಿ.ನರಸೀಪುರ ತಾಲೂಕು ದೊಡ್ಡೇಬಾಗಿಲು ಗ್ರಾಮ ಪಂಚಾಯ್ತಿಯ ನೂತನ ಅಧ್ಯಕ್ಷ–ಉಪಾಧ್ಯಕ್ಷರಾಗಿ ಆಯ್ಕೆಯಾದ ಐಷಾ ಸಿದ್ದಿಖಾ, ಎಸ್.ಶಿವಣ್ಣರನ್ನು ಕಾಂಗ್ರೆಸ್ ಮುಖಂಡ ದೊಡ್ಡೇಬಾಗಿಲು ಮಲ್ಲಿಕಾರ್ಜುನ ಸ್ವಾಮಿ ಅಭಿನಂದಿಸಿದರು.

ತಿ.ನರಸೀಪುರ, ನ.20– ತಾಲೂಕಿನ ದೊಡ್ಡೇಬಾಗಿಲು ಗ್ರಾಮ ಪಂಚಾಯ್ತಿ ಆಡಳಿತ ಕಾಂಗ್ರೆಸ್ ಪಾಲಾಗಿದ್ದು, ನೂತನ ಅಧ್ಯಕ್ಷರಾಗಿ ಹಳೇ ನರಿಪುರ ಗ್ರಾಮದ ಐಷಾ ಸಿದ್ದಿಖಾ, ಉಪಾಧ್ಯಕ್ಷರಾಗಿ ಕಾರ್ಗಳ್ಳಿ ಗ್ರಾಮದ ಎಸ್.ಶಿವಣ್ಣ ಅವಿರೋಧವಾಗಿ ಆಯ್ಕೆಯಾದರು.

ಆಂತರಿಕ ಒಪ್ಪಂದದಂತೆ ತಮ್ಮ ಅಧಿಕಾರಾವಧಿ ಮುಗಿಸಿ ಭಾಗ್ಯಲಕ್ಷ್ಮಿ ಅಧ್ಯಕ್ಷ ಸ್ಥಾನಕ್ಕೆ, ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸಾಕಮ್ಮ ರಾಜೀನಾಮೆ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ತೆರವಾದ ಸ್ಥಾನಗಳಿಗೆ ಪಂಚಾಯ್ತಿ ಸಭಾಂಗಣದಲ್ಲಿ ಬುಧವಾರ ಚುನಾವಣೆ ನಡೆಯಿತು.

ಅಧ್ಯಕ್ಷ ಸ್ಥಾನದ ಆಯ್ಕೆ ಬಯಸಿ ಐಷಾ ಸಿದ್ದಿಖಾ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಎಸ್.ಶಿವಣ್ಣ ಅವರಿಬ್ಬರೇ ನಾಮಪತ್ರ ಸಲ್ಲಿಸಿ ಅವಿರೋಧವಾಗಿ ಆಯ್ಕೆಯಾದರು. ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಗೋವಿಂದರಾಜು ಪ್ರಕಟಿಸಿದರು. ಅಧ್ಯಕ್ಷ–ಉಪಾಧ್ಯಕ್ಷರ ಅವಿರೋಧ ಆಯ್ಕೆ ಪ್ರಕಟವಾಗುತ್ತಿದ್ದಂತೆ ಪಂಚಾಯ್ತಿ ಮುಂದೆ ನೆರೆದಿದ್ದ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಚುನಾವಣೆ ವಿಶೇಷ ಸಭೆಗೆ ನಿಕಟಪೂರ್ವ ಅಧ್ಯಕ್ಷೆ ಭಾಗ್ಯಲಕ್ಷ್ಮಿ, ಉಪಾಧ್ಯಕ್ಷೆ ಸಾಕಮ್ಮ, ಸದಸ್ಯರಾದ ತೇಜುಮೂರ್ತಿ, ಕಾಂತಮ್ಮ ರಫೀಕ್, ಸಲೀಂ ಪಾಷ, ಪಿ.ರವಿ, ಪಾರ್ವತಿ, ಕೆ.ಯಶೋಧ, ಸರ್ದಾರ್ ಪಾಷ, ಡಿ.ಮಹದೇವಸ್ವಾಮಿ, ಚನ್ನಮ್ಮ, ನಾಗೇಂದ್ರ ಹಾಜರಾಗಿ ನೂತನ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆಗೆ ಅನುಮೋದನೆ ನೀಡಿದರೇ ಸದಸ್ಯೆ ಶಿಲ್ಪ, ದ್ರಾಕ್ಷಾಯಿಣಿ, ರುದ್ರಸ್ವಾಮಿ, ಕೆ.ಕುಮಾರಸ್ವಾಮಿ, ಭಾಗ್ಯ, ಜ್ಯೋತಿ ಗೈರಾಗಿದ್ದರು.

ನೂತನ ಅಧ್ಯಕ್ಷ–ಉಪಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ತಾಪಂ ಮಾಜಿ ಅಧ್ಯಕ್ಷ ದೊಡ್ಡೇಬಾಗಿಲು ಮಲ್ಲಿಕಾರ್ಜುನಸ್ವಾಮಿ, ಗ್ರಾಮ ಪಂಚಾಯ್ತಿಗೆ ಸರ್ಕಾರದಿಂದ ಬರಬಹುದಾದ ಎಲ್ಲಾ ಅನುದಾನಗಳನ್ನು ತಂದು ಪಂಚಾಯ್ತಿ ವ್ಯಾಪ್ತಿಯ ಗ್ರಾಮಗಳ ಮೂಲ ಸೌಕರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವುದರ ಜೊತೆಗೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ಹಾಗೂ ಸಂಸದ ಸುನೀಲ್ ಬೋಸ್ ರವರಿಂದ ಹೆಚ್ಚಿನ ಅನುದಾನ ಹಾಗೂ ಪಂಚಾಯ್ತಿಯ ಅಭಿವೃದ್ಧಿಗಾಗಿ ಸರ್ಕಾರದಿಂದ ಬರಬೇಕಾದ ಎಲ್ಲಾ ಅನುದಾನಕ್ಕೆ ಬೇಡಿಕೆ ಸಲ್ಲಿಸಿ ಪಂಚಾಯ್ತಿಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ದೊಡ್ಡೇಬಾಗಿಲು ಪಂಚಾಯ್ತಿಯನ್ನು ಮಾದರಿ ಗ್ರಾಮ ಪಂಚಾಯ್ತಿ ಮಾಡಲು ಸದಸ್ಯರೆಲ್ಲರೂ ಅಧ್ಯಕ್ಷ –ಉಪಾಧ್ಯಕ್ಷರಿಗೆ ಸಹಕಾರ ನೀಡುವಂತೆ ಕಿವಿಮಾತು ಹೇಳಿದರು.

ಈ ವೇಳೆ ಮುಖಂಡರಾದ ಅಬ್ದುಲ್ ಸಲಾಂ, ಮುಬಾರಕ್ ಪಾಷ, ಇದಾಯತ್ ಪಾಷ, ನಯಾಜ್ ಅಹಮದ್, ಮಕ್ಬೂಲ್, ಷಡಕ್ಷರಿ, ಕಾರ್ಗಳ್ಳಿ ಗಣೇಶ್, ರುದ್ರಸ್ವಾಮಿ(ಸೂರಿ), ಮಹದೇವಯ್ಯ(ಮಿನಿ), ಗಿರೀಶ್, ಬಿ.ಮಹೇಶ್, ಪಂಚಾಯ್ತಿ ಪಿಡಿಓ ಬಿ.ಎಸ್.ಲಿಂಗರಾಜು ಸೇರಿದಂತೆ ಗ್ರಾಮದ ಮುಖಂಡರು ಹಾಜರಿದ್ದರು.

ರೈತರಿಗೆ ಅವಾಚ್ಯ ಶಬ್ದಗಳಿಂದ ನಿಂದನೆ

ಬನ್ನೂರು ಚೆಸ್ಕಾಂ ಅಧಿಕಾರಿ ವಿರುದ್ಧ ಪ್ರತಿಭಟನೆಗೆ ಎಚ್ಚರಿಕೆ



ಬನ್ನೂರಿನ ಅತಿಥಿ ಗೃಹದಲ್ಲಿ ಬುಧವಾರ ಕರ್ನಾಟಕ ರಾಜ್ಯ ರೈತ ಸಂಘದ ಹೋಬಳಿ ಅಧ್ಯಕ್ಷ ಹುಚ್ಚೇಗೌಡ ಪತ್ರಿಕಾಗೋಷ್ಠಿ ನಡೆಸಿದರು.

ಬನ್ನೂರು, ನ.20– ಕಂಬದ ವಿದ್ಯುತ್ ವೈರುಗಳು ಕೆಳಮಟ್ಟದಲ್ಲಿ ನೇತಾಡುತ್ತಿದ್ದು, ಇದರಿಂದ ಅಪಾಯವಾಗುವ ಸಂಭವ ಇದೆ ಎಂದು ದೂರು ನೀಡಲು ಹೋದ ರೈತ ಮುಖಂಡನಿಗೆ ಚೆಸ್ಕಾಂನ ಸಹಾಯಕ ಅಭಿಯಂತರ ಶ್ರೀನಿವಾಸ್ ಅವಾಚ್ಯ ಶಬ್ದಗಳಿಂದ ನಿಂದಿಸುವ ಮೂಲಕ ರೈತರ ಸಹನೆಯನ್ನು ಕೆಣಕಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಹೋಬಳಿ ಅಧ್ಯಕ್ಷ ಹುಚ್ಚೇಗೌಡ ತಿಳಿಸಿದರು.

ಪಟ್ಟಣದ ಅತಿಥಿ ಗೃಹದಲ್ಲಿ ಬುಧವಾರ ಚೆಸ್ಕಾಂ ಅಧಿಕಾರಿಯ ಬೇಜಾವಾಬ್ದಾರಿ ಮಾತಿನಿಂದ ರೈತರೆಲ್ಲ ಬೇಸರಗೊಂಡು ಇಂತಹ ಅಧಿಕಾರಿ ವಿರುದ್ಧ ಪ್ರತಿಭಟನೆ ನಡೆಸಬೇಕು. ಇದಕ್ಕಾಗಿ ಚರ್ಚೆ ನಡೆಸಿ ನಿರ್ಧಾರ ಕೈಗೊಳ್ಳಬೇಕು ಎಂದರು.

ಕಾಡುಕೊತ್ತನಹಳ್ಳಿ, ಮೆಣಸಿನಕ್ಯಾತನಹಳ್ಳಿ, ಕೆಂಪೇಗೌಡನಕೊಪ್ಪಲು ಗ್ರಾಮದಲ್ಲಿ ವಿದ್ಯುತ್‌ವೈರ್‌ಗಳು ಕೆಳಮಟ್ಟದಲ್ಲಿ ತೂಗಾಡುತ್ತಿದ್ದು, ಪಾದಚಾರಿಗಳು, ವಾಹನ ಸವಾರರಿಗೆ ತುಂಬಾ ತೊಂದರೆಯಾಗಿದೆ. ಇದನ್ನು ಸರಿಪಡಿಸುವಂತೆ ಹೇಳಿದರೂ ಇದುವರೆಗೂ ಯಾವುದೇ ರೀತಿಯ ಕ್ರಮ ತೆಗೆದುಕೊಂಡಿಲ್ಲ. ಬದಲಾಗಿ ಇಲ್ಲಿ ಕರ್ತವ್ಯ ನಿರ್ವಹಿಸುವಂತ ಅಧಿಕಾರಿಗಳಿಗೆ ಹಣ ನೀಡಿದರೆ ಮಾತ್ರ ಕೆಲಸ ಮಾಡುವುದು ಎನ್ನುವಂತ ಧೋರಣೆಯಲ್ಲಿ ಈ ಗ್ರಾಮದ ಕೆಲಸವನ್ನು ನಿರ್ಲಕ್ಷಿಸಿದ್ದಾರೆ ಎಂದರು.

ಕೇಳಲು ಹೋಗುವ ರೈತರಿಗೆ ಹೀನಾಮಾನವಾಗಿ, ಅಧಿಕಾರಿಗಳು ಎನ್ನುವುದನ್ನು ಮರೆತು ರೌಡಿಗಳಂತೆ ವರ್ತಿಸಿ ಧಮ್ಕಿ ಹಾಕುತ್ತಾರೆ. ಹೀಗಾದರೆ, ಸಾಮಾನ್ಯ ಜನರ ಪಾಡೇನು ಎಂದು ಪ್ರಶ್ನಿಸಿದರು. ಇಂತಹ ರೈತ ವಿರೋಧಿ ಸಹಾಯಕ ಅಭಿಯಂತರ ಶ್ರೀನಿವಾಸ ವಿರುದ್ಧವಾಗಿ, ಚೆಸ್ಕಾಂ ಮುಂಭಾಗ ರೈತರೆಲ್ಲರೂ ಸೇರಿ ಧರಣಿ ಮಾಡುತ್ತಿದ್ದು, ಎಲ್ಲಾ ರೈತರು ಸಹಕರಿಸಿ ಎಂದರು. ಭ್ರಷ್ಟ ಅಧಿಕಾರಿಯನ್ನು ಕೆಲಸದಿಂದ ಅಮಾನತು ಮಾಡುವವರೆಗೂ ಉಪವಾಸ ಮಾಡುವುದಾಗಿ ಎಚ್ಚರಿಕೆ ನೀಡಿದರು. ರೈತ ಮುಖಂಡರಾದ ಸೀಹಳ್ಳಿ ಸಿ.ಎಂ.ರಾಜು, ರಾಮಚಂದ್ರ, ರಾಮಾಚಾರಿ, ಬೇವಿನಹಳ್ಳಿ ರವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರೈತ ವಿರೋಧಿ ನೀತಿಗಳನ್ನು ಖಂಡಿಸಿ ನ.26ರಂದು ಮೈಸೂರಲ್ಲಿ ರ‍್ಯಾಲಿ



ಹೆಚ್.ಡಿ.ಕೋಟೆ ಪಟ್ಟಣದಲ್ಲಿ ಪ್ರಗತಿಪರ ಸಂಘಟನೆಗಳ ಮುಖಂಡರು ನ.26 ರಂದು ಹಮ್ಮಿಕೊಂಡಿರುವ ಜಿಲ್ಲಾ ಮಟ್ಟದ ಜನಜಾಗೃತಿ ರ‍್ಯಾಲಿಯ ಕರಪತ್ರ ಬಿಡುಗಡೆ ಮಾಡಿದರು.

ಹೆಚ್.ಡಿ.ಕೋಟೆ, ನ.20– ರೈತ ವಿರೋಧಿ ನೀತಿಗಳನ್ನು ವಾಪಸ್ಸು ಪಡೆಯುತ್ತೇನೆ ಎಂದು ಹೇಳಿ ಇನ್ನೂ ವಾಪಸ್ಸು ಪಡೆಯದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ಧ ರಾಜ್ಯದ ವಿವಿಧ ಸಂಘಟನೆಗಳಿಂದ ಪ್ರತಿಭಟನಾ ರ‍್ಯಾಲಿಯನ್ನು ನ.26 ಮೈಸೂರಿನಲ್ಲಿ ಟೌನ್‌ಹಾಲ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಿಪಿಐಎಂಎಲ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚೌಡಳ್ಳಿ ಜವರಯ್ಯ ತಿಳಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಆಡಳಿತಕ್ಕೆ ಬಂದ ನಂತರ ನಮ್ಮ ಭೂಮಿ, ಬೆಳೆ, ಶ್ರಮ ಮತ್ತು ಬದುಕನ್ನು ಬಂಡವಾಳಗಾರರಿಗೆ ಒಪ್ಪಿಸಲು ಹೊರಟಿದೆ. ರಾಜ್ಯ ಸರ್ಕಾರ ನಾವು ಈ ನೀತಿಗಳನ್ನು ವಿರೋಧಿಸುತ್ತೇವೆ ಎಂದು ಬಾಯಿ ಮಾತಿಗೆ ಹೇಳುತ್ತಿದೆ.

ತನ್ನ ಪ್ರಣಾಳಿಕೆಯಲ್ಲಿ ಬರೆದುಕೊಂಡಿದೆ. ಆದರೆ ಬಿಜೆಪಿ ಸರ್ಕಾರ ತೆಗೆದುಕೊಂಡ ತೀರ್ಮಾನಗಳನ್ನೇ ತಾನು ಮುಂದುವರಿಸಿಕೊಂಡು ಹೋಗುತ್ತಿದೆ ಎಂದು ದೂರಿದರು.

ಕೇಂದ್ರ ಸರ್ಕಾರ ರೈತರು, ಕಾರ್ಮಿಕರು, ಕೃಷಿಕರ ಮೇಲೆ ಹಲವಾರು ರೀತಿಯ ಸರ್ವಾಧಿಕಾರ ಧೋರಣೆಯನ್ನು ನಡೆಸುತ್ತಾ ಬಂದಿದೆ. ಅದರ ಅಂಗವಾಗಿ ನೊಂದ ರೈತರ ವಿರುದ್ಧ ಕಾಯ್ದೆಗಳನ್ನು ವಾಪಸ್ಸು ತೆಗೆದುಕೊಳ್ಳದೆ ರೈತರ ಮೇಲೆ ದೌರ್ಜನ್ಯ ಎಸಗುತ್ತಿದೆ. ಇಂತಹ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ನ.26ರಂದು ಬೃಹತ್ ರ‍್ಯಾಲಿಯನ್ನು ಮೈಸೂರಿನ ಟೌನ್‌ಹಾಲ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಹೆಚ್.ಡಿ.ಕೋಟೆ, ಸರಗೂರು ತಾಲೂಕಿನಿಂದ ಎಲ್ಲಾ ಸಂಘಟನೆಗಳು ಈ ಬೃಹತ್ ರ‍್ಯಾಲಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ದಸಂಸ ಜಿಲ್ಲಾ ಸಂಚಾಲಕ ಆನಗಟ್ಟಿ ದೇವರಾಜ್, ಜಿಲ್ಲಾ ರೈತ ಸಂಘದ ಅಧ್ಯಕ್ಷ ಹೊಸೂರು ಕುಮಾರ್, ರೈತ ಸಂಘದ ತಾಲೂಕು ಅಧ್ಯಕ್ಷ ಮಾದೇವ ನಾಯಕ, ಆರ್‌ಪಿಐ ಮಹಿಳಾ ಜಿಲ್ಲಾ ಅಧ್ಯಕ್ಷೆ ಅನುಶ, ಪುಟ್ಟಮಾದು, ಮಾಹದೇವಯ್ಯ, ಸಿಪಿಎಂ ಶಿವಣ್ಣ, ಅಕ್ಬರ್ ಪಾಷಾ, ಪಳನಿ ಸ್ವಾಮಿ ಇನ್ನು ಮುಂತಾದವರು ಹಾಜರಿದ್ದರು.

ವಕ್ಫ್‌ನಿಂದ ನಮ್ಮ ಭೂಮಿ ರಕ್ಷಿಸಿಕೊಳ್ಳಲು

ನಾಳೆ ಮೈಸೂರಲ್ಲಿ 'ನಮ್ಮ ಭೂಮಿ ನಮ್ಮ ಹಕ್ಕು' ಬಿಜೆಪಿ ಪ್ರತಿಭಟನೆ



ವಕ್ಫ್ ಬೋರ್ಡ್ ಜಮೀನು ಕಬಳಿಕೆ ವಿರುದ್ಧ ಹಮ್ಮಿಕೊಂಡಿರುವ ನಮ್ಮ ಭೂಮಿ ನಮ್ಮ ಹಕ್ಕು ಪ್ರತಿಭಟನೆಯ ಪೂರ್ವಭಾವಿ ಸಭೆಯಲ್ಲಿ ಕ್ಷೇತ್ರಾಧ್ಯಕ್ಷ ಶಿವಕುಮಾರ್(ಸತ್ಯಪ್ಪ) ಮಾತನಾಡಿದರು.

ತಿ.ನರಸೀಪುರ, ನ.20– ರಾಜ್ಯದಲ್ಲಿ ಆಡಳಿತರೂಢ ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾತರ ಓಲೈಸುವುದಕ್ಕಾಗಿ ವಕ್ಫ್ ಬೋರ್ಡ್ ನಾಡಿನ ಅನ್ನದಾತರಾದ ರೈತರ ಕೃಷಿ ಜಮೀನು ಹಾಗೂ ಸರ್ಕಾರಿ ಭೂಮಿಯನ್ನು ಕಬಳಿಸಲು ಕುಮ್ಮಕ್ಕು ನೀಡುತ್ತಿರುವುದರಿಂದ ನಮ್ಮಗಳ ಭೂಮಿಯನ್ನು ಉಳಿಸಿಕೊಳ್ಳಲು ಬಿಜೆಪಿಯ ವತಿಯಿಂದ 'ನಮ್ಮ ಭೂಮಿ ನಮ್ಮ ಹಕ್ಕು' ಘೋಷಣೆಯೊಂದಿಗೆ ನ.22ರ ಶುಕ್ರವಾರ ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕ್ಷೇತ್ರಾಧ್ಯಕ್ಷ ಶಿವಕುಮಾರ್(ಸತ್ಯಪ್ಪ) ಹೇಳಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಹೋರಾಟದ ಪೂರ್ವಭಾವಿಯಾಗಿ ಬುಧವಾರ ಕರೆಯಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ನರಸೀಪುರ ತಾಲೂಕಿನ ಮಾವಿನಹಳ್ಳಿ ಹಾಗೂ ರಂಗಸಮುದ್ರ ಸರ್ಕಾರಿ ಜಮೀನನ್ನು ವಕ್ಫ್ ಬೋರ್ಡ್ ತಮ್ಮದೆಂದು ಪಹಣಿಯಲ್ಲಿ ಘೋಷಣೆ ಮಾಡಿರುತ್ತಾರೆ. 1918 ರಿಂದ 2020ರವರೆಗೆ ಆರ್‌ಟಿಸಿಯಲ್ಲಿ ಸರ್ಕಾರಿ ಜಮೀನು ಆಗಿದ್ದ ಭೂಮಿ 2021ರಿಂದ ವಕ್ಫ್ ಬೋರ್ಡ್ ಸಮಿತಿಯದ್ದು ಎಂದು ನಮೂದಾಗಿದೆ ಎಂದು ಆರೋಪಿಸಿದರು.

ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾತರ ಮತ ಬ್ಯಾಂಕ್ ಮಾಡಿಕೊಳ್ಳಲು ವಕ್ಫ್ ಬೋರ್ಡ್‌ನ ಕಾನೂನುಬಾಹಿರ ಚಟುವಟಿಕೆಗಳಿಗೆ ಕುಮ್ಮಕ್ಕು ನೀಡುತ್ತಿರುವುದನ್ನು ಖಂಡಿಸಿ, ವಕ್ಫ್ ಬೋರ್ಡ್ ಕಾಯ್ದೆಗೆ ತಿದ್ದುಪಡಿ ಮಾಡಬೇಕು ಎಂದು ಒತ್ತಾಯಿಸಿ ನ.22 ರಂದು ಮೈಸೂರಿನ ಡಿಸಿ ಕಚೇರಿ ಮುಂದೆ ಬೃಹತ್ ಪ್ರತಿಭಟನೆಯನ್ನು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಹಾಗೂ ಸಂಸದೆ ಶೋಭಾ ಕರಂದ್ಲಾಜೆ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ. ಪ್ರತಿಭಟನೆಗೆ ಪಕ್ಷದ ಪದಾಧಿಕಾರಿಗಳು, ಸಮಾಜದ ಹಿತ ಚಿಂತಕರು, ರೈತಪರ ಸಂಘಟನೆಗಳು, ವಿವಿಧ ಸಮಾಜದ ಸಂಘಟನೆಗಳು ಮತ್ತು ಅನ್ಯಾಯಕ್ಕೆ ಒಳಗಾದ ರೈತರು ಕೂಡ ಭಾಗವಹಿಸಿ ಚಳುವಳಿಯನ್ನು ಯಶಸ್ವಿಗೊಳಿಸಬೇಕೆಂದು ಶಿವಕುಮಾರ್ ಅಲಿಯಾಸ್ ಸತ್ಯಪ್ಪ ಮನವಿ ಮಾಡಿದರು.

ಬಿಜೆಪಿಯ ಪರಾಜಿತ ಅಭ್ಯರ್ಥಿ ಡಾ.ರೇವಣ್ಣ ಮಾತನಾಡಿ, ರೈತರ ಜಮೀನು ಹಾಗೂ ಸರ್ಕಾರಿ ಭೂಮಿಯನ್ನ ಕಬಳಿಸುವ ವಕ್ಫ್ ಬೋರ್ಡ್ ಆಕ್ರಮಣಕಾರಿ ಪ್ರವೃತ್ತಿ ನಿಜಕ್ಕೂ ಅಪಾಯಕಾರಿ. ಆದ್ದರಿಂದ ನರಸೀಪುರ ತಾಲೂಕಿನ ರೈತರು ತಮ್ಮ ತಮ್ಮ ಜಮೀನುಗಳು ಅವರವರ ಹೆಸರಲ್ಲಿಯೇ ಆರ್‌ಟಿಸಿ ಇವೆಯೇ ಎಂಬುದನ್ನು ಒಮ್ಮೆ ಪರಿಶೀಲಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಸಭೆಯಲ್ಲಿ ಡಾ.ಮಲ್ಲಿಕಾರ್ಜುನ ಸ್ವಾಮಿ, ಎಂ.ದಾಸಯ್ಯ, ಎಸ್‌ಎಂಆರ್ ಪ್ರಕಾಶ್, ಸೋಮಶೇಖರಪ್ಪ ಕುಮಾರ್, ಕೆ.ನಂಜುಂಡಸ್ವಾಮಿ, ಲಕ್ಷ್ಮಣ್, ಮುಖಂಡರಾದ ಹೊಸೂರುಹುಂಡಿ ತೋಂಟೇಶ್, ಲೋಕೇಶ್ ಇದ್ದರು.

ಸರಳ, ಸುಸಂಸ್ಕೃತ ಭಾಷೆ ಕನ್ನಡ; ಸಾಹಿತಿ ರವಿಕುಮಾರ್



ನಂಜನಗೂಡಿನ ಕೈಗಾರಿಕಾ ಪ್ರದೇಶದ ಜೂಬಿಲಿಯೆಂಟ್ ಕಾರ್ಖಾನೆಯ ಕಾರ್ಮಿಕ ಸಂಘ ಬುಧವಾರ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಸಾಹಿತಿ ಆರ್.ರವಿಕುಮಾರ್ ಉದ್ಘಾಟಿಸಿದರು.

ನಂಜನಗೂಡು, ನ.20– ಕನಕದಾಸ, ಪುರಂದರದಾಸ, ಬಸವಣ್ಣ, ಅಕ್ಕ ಮಹಾದೇವಿ ಮುಂತಾದ ಮಹನೀಯರು ಸೇರಿದಂತೆ ನಮ್ಮ ಜನಪದರ ಕಾವ್ಯಗುಣಗಳಿಂದ ಸಂವೃದ್ಧವಾದ ಭಾಷೆ ಕನ್ನಡ, ಮಾತನಾಡಿದಂತೆ ಬರೆಯುವ, ಓದಿಸಿಕೊಳ್ಳುವ ಭಾಷೆ ಕನ್ನಡ ಮಾತ್ರ ಎಂಬುಂದು ಕನ್ನಡ ಭಾಷೆಯ ಹೆಗ್ಗಳಿಕೆ ಎಂದು ಸಾಹಿತಿ ಆರ್.ರವಿಕುಮಾರ್ ಹೇಳಿದರು.

ನಗರದ ಕೈಗಾರಿಕಾ ಪ್ರದೇಶದ ಜೂಬಿಲಿಯೆಂಟ್ ಕಾರ್ಖಾನೆಯ ಕಾರ್ಮಿಕ ಸಂಘ ಬುಧವಾರ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ರಾಜಧಾನಿ ಬೆಂಗಳೂರಿನಲ್ಲಿ ಅನ್ಯ ಭಾಷೆಯ ಆಕ್ರಮಣದ ನಡುವೆ, ಕನ್ನಡ ಭಾಷೆಗೆ ಕುಂದು ಉಂಟಾದಾಗ ಅ.ನ ಕೃಷ್ಣರಾಯರು, ಡಾ.ರಾಜ್‌ಕುಮಾರ್ ಅವರಂತಹ ಮಹಾನುಭಾವರು ಚಳುವಳಿಯ ಮೂಲಕ ರಾಜಧಾನಿಯಲ್ಲಿ ಕನ್ನಡಿಗರು ತಲೆ ಎತ್ತಿ ಬಾಳುವಂತೆ ಮಾಡಿದ್ದಾರೆ, ದೇಶದ ಎಲ್ಲಾ ಭಾಷೆ, ಸಂಸ್ಕೃತಿಯ ಜನರನ್ನು ನಮ್ಮವರಂತೆ ಒಪ್ಪಿಕೊಳ್ಳುವ, ಒಳಗೊಳ್ಳುವ ವಿಶಾಲ ಹೃದಯಿಗಳು ಕನ್ನಡಿಗರು, ಕನ್ನಡ ಭಾಷೆ, ಸಾಹಿತ್ಯ ಕ್ಷೇತ್ರಕ್ಕೆ ಇತರ ಸಹೋದರ ಭಾಷೆಯ ಜನರ ಕೊಡುಗೆಯು ಅಪಾರವಾಗಿದೆ. ಪ್ರಸಿದ್ಧ ಚಲನಚಿತ್ರ ಹಿನ್ನೆಲೆ ಗಾಯಕ ಎಸ್.ಪಿ.ಬಾಲಸುಬ್ರಹ್ಮಣ್ಯಂ ನಾನು ಬರೆದ ಹಾಡನ್ನು ಕನ್ನಡದಲ್ಲಿ ಬರೆದುಕೊಂಡು, ಸಾಹಿತ್ಯ ತಪ್ಪಾಗಿದ್ದರೆ ತಿದ್ದುವಷ್ಟು ಕನ್ನಡ ಭಾಷೆಯಲ್ಲಿ ಪ್ರಾವೀಣ್ಯತೆ ಹೊಂದಿದ್ದರು. ಮುಂದಿನ ಜನ್ಮದಲ್ಲಿ ಕನ್ನಡ ನಾಡಿನಲ್ಲಿ ಕನ್ನಡಿಗನಾಗಿ ಹುಟ್ಟುವ ತಮ್ಮ ಅಭಿಲಾಷೆಯನ್ನು ಹೇಳಿಕೊಂಡಿದ್ದರು ಎಂದು ಹೇಳಿದರು.

ಕಾರ್ಖಾನೆಯ ಮಾನವ ಸಂಪನ್ಮೂಲ ಅಧಿಕಾರಿ ಸುಬ್ರಹ್ಮಣ್ಯ ಮಾತನಾಡಿ, ಹರಿದು ಹಂಚಿ ಹೋಗಿದ್ದ ಕನ್ನಡ ನಾಡು, ಏಕೀಕರಣ ಚಳುವಳಿಯಲ್ಲಿ ನಮ್ಮ ಹಿರಿಯರು ನಡೆಸಿದ ಹೋರಾಟದಿಂದ ದೇವರಾಜ ಅರಸು ಅವರ ಕಾಲದಲ್ಲಿ ಕರ್ನಾಟಕವಾಗಿ ರೂಪುಗೊಂಡಿತು. ಕನ್ನಡ ಭಾಷೆಗೆ, ನಾಡಿನ ನೆಲ, ಜಲ, ಸ್ವಾಭಿಮಾನಕ್ಕೆ ಧಕ್ಕೆಯಾದಾಗಲೆಲ್ಲ ಕನ್ನಡಿಗರು ಹೋರಾಟದ ಮೂಲಕ ಕನ್ನಡದ ಹಿರಿಮೆಯನ್ನು ಬೆಳೆಗಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹೆಚ್ಚು ಅಂಕ ಗಳಿಸಿದ ಸರ್ಕಾರಿ ಶಾಲೆಯ ಮಕ್ಕಳಿಗೆ ನಗದು ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕಾರ್ಖಾನೆಯ ವ್ಯವಸ್ಥಾಪಕ ಪ್ರಣೇಶ್, ಪ್ರಭಾಕರ್ ಹೊನ್ನವಾಡ್, ರಂಗನಾಥ್, ಹಿರಿಯ ಅಧಿಕಾರಿ ಪ್ರದೀಪ್, ವಿನೋದ್ ಜೈನ್, ದೀಪಕ್, ಕಾರ್ಮಿಕ ಸಂಘದ ಅಧ್ಯಕ್ಷ ಬಸವರಾಜು, ಲೋಕೇಶ್ ಉಪಸ್ಥಿತರಿದ್ದರು.

ಲೂಟಿ ಮಾಡಿದವರಿಗೆ ಸಹಕಾರ ಕ್ಷೇತ್ರದಲ್ಲಿ ಆಯಕಟ್ಟಿನ ಸ್ಥಳ

ಶಾಸಕ ಜಿ.ಡಿ. ಹರೀಶ್‌ಗೌಡ ಕಳವಳ



ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಶಾಸಕ ಜಿ.ಡಿ.ಹರೀಶ್‌ಗೌಡ ಉದ್ಘಾಟಿಸಿದರು.

ಹುಣಸೂರು, ನ.20– ಕಳೆದ ಒಂದೂವರೆ ವರ್ಷದಿಂದ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ವಿಲವಿಲ ಒದ್ದಾಡಿಕೊಂಡೇ ಆಡಳಿತ ನಡೆಸುತ್ತಿದ್ದು, ಹಣ ಲೂಟಿ ಮಾಡಿದವರಿಗೆ ಆಯಕಟ್ಟಿನ ಸ್ಥಳ ನೀಡುವುದರೊಂದಿಗೆ ಸಹಕಾರ ಕ್ಷೇತ್ರದಲಿ ರಾಜಕೀಯ ಬೇರೆಸುತ್ತಿದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಕಳವಳ ವ್ಯಕ್ತಪಡಿಸಿದ್ದಾರೆ.

ನಗರದ ಕನಕಭವನದಲ್ಲಿ ಮಂಗಳವಾರ ಆಯೋಜಿಸಿದ್ದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರಿ ಸಂಘದ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದ ಪರಿಣಾಮ ಕಾನೂನು ಉಲ್ಲಂಘಿಸಿ ಹಲವು ಕೆಲಸ ನಡೆಯುತ್ತಿದೆ. ಈ ಬಗ್ಗೆ ಕ್ಷೇತ್ರದಲ್ಲಿ ತೀವ್ರ ಪ್ರತಿಭಟನೆ ನಡೆಯಲಿದೆ. ಸಹಕಾರಿ ಕ್ಷೇತ್ರದಲ್ಲಿ ರಾಜಕೀಯ ಬೆರೆಸದೆ ಆಡಳಿತ ನಡೆಸಿ ಎಂದರು.

ಹಣ ಲೂಟಿ ಮಾಡಿದವರಿಗೆ ಆಯಕಟ್ಟಿನ ಜಾಗ: ಡಿಸಿಸಿ ಬ್ಯಾಂಕ್ ಹಗರಣ ಎಲ್ಲರಿಗೂ ತಿಳಿದ ವಿಷಯ. ಈ ಪ್ರಕರಣದಲ್ಲಿ ಹಣ ಲೂಟಿ ಮಾಡಿದವರನ್ನು ಮತ್ತೆ ಅದೇ ಸ್ಥಳಕ್ಕೆ ನಿಯೋಜಿಸಿದ್ದು, ಇದನ್ನು ಯಾರೂ ಪ್ರಶ್ನಿಸುವಂತಿಲ್ಲ. ಹಗರಣದಲ್ಲಿ ಕೊಳ್ಳೆ ಹೊಡೆದವರನ್ನು ತನಿಖೆಯಿಂದ ಬಿಟ್ಟು ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದವರಿಗೆ ನೋಟಿಸ್ ಜಾರಿಗೊಳಿಸಿ ತನಿಖೆ ನಡೆಸುತ್ತಿರುವುದು ದುರಂತ. ಇಂತಹವರಿಂದ ಸಹಕಾರ ಕ್ಷೇತ್ರ ಉಳಿಯಲು ಸಾಧ್ಯವೇ ಎಂದು ರಾಜ್ಯ ಸರ್ಕಾರವನ್ನು ಶಾಸಕ ಹರೀಶ್‌ಗೌಡ ತರಾಟೆಗೆ ತೆಗೆದುಕೊಂಡರು.


ಸಹಕಾರ ಸಂಘ ನಿಯಮಾನುಸಾರ ಎಲ್ಲಾ ದಾಖಲೆ ಇದ್ದರೂ ಸ್ಥಳೀಯ ಸಹಕಾರಿ ಸಂಘಗಳ ನೋಂದಣಿ ಅಧಿಕಾರಿ ನೋಂದಣಿ ಪ್ರಕ್ರಿಯೆಗೆ ಕೊಕ್ಕೆ ಹಾಕಿ ಪೆಂಡಿಂಗ್ ಇಡುವ ವಾತಾವರಣ ನಿರ್ಮಿಸಿದ್ದಾರೆ. ಈ ಎಲ್ಲವೂ ರಾಜಕಾರಣಿಯ ಒತ್ತಡದಿಂದ ನಡೆದಿದೆ ಎನ್ನುವ ಮಾಹಿತಿ ಇದ್ದು, ರಾಜಕೀಯ ಪಕ್ಷ 5 ವರ್ಷ ಅಧಿಕಾರದಲ್ಲಿದ್ದು ಹೋಗುತ್ತವೆ. ಆದರೆ ಸಹಕಾರ ಸಂಘ ಶಾಶ್ವತ, ಭವಿಷ್ಯದಲ್ಲಿ ಯಾವ ಸರ್ಕಾರ ಅಧಿಕಾರದಲ್ಲಿ ಇರುತ್ತದೋ ತಿಳಿಯದು, ಎಚ್ಚರಿಕೆಯಿಂದ ಕೆಲಸ ನಿರ್ವಹಿಸಿ ಎಂದು ಎಚ್ಚರಿಸಿದರು.

ಡಿಸಿಸಿಗೆ ಮರುಜೀವ: ಡಿಸಿಸಿ ಬ್ಯಾಂಕ್ ಬಾಗಿಲು ಮುಚ್ಚುವ ಹಂತದಲ್ಲಿ ಅದರ ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿ ದಾಖಲೆ ಪ್ರಮಾಣದಲ್ಲಿ ಅಭಿವೃದ್ಧಿ ಮಾಡಿದ್ದೇನೆ. ಸುಮಾರು 370 ಕೋಟಿ ಠೇವಣಿಯಿಂದ 1 ಸಾವಿರ ಕೋಟಿ ರೂ. ಠೇವಣಿ ಹಾಗೂ 600 ಕೋಟಿ ರೂ.ನಿಂದ 1600 ಕೋಟಿ ರೂ. ಸಾಲ ನೀಡಿ ರೈತರಿಗೆ ಅನುಕೂಲ ಕಲ್ಪಿಸಿದ್ದೇನೆ. ಈಗ ಪರಿಸ್ಥಿತಿ ಮತ್ತೊಮ್ಮೆ ಅಧಃಪತನದತ್ತ ಸಾಗುತ್ತಿರುವುದು ವಿಷಾದನೀಯ ಸಂಗತಿಯಾಗಿದೆ ಎಂದರು.

ಇದೇ ವೇಳೆ ಸಹಕಾರಿ ಸಂಘದಲ್ಲಿ ಸೇವೆ ಸಲ್ಲಿಸಿ ದಾಖಲೆ ಪ್ರಮಾಣದ ಹಾಲು ಉತ್ಪತ್ತಿ ಮತ್ತು ಸಾಲ ವಸೂಲಿ ಮಾಡಿದ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕೆ.ಎಂ.ಎಫ್. ನಿರ್ದೇಶಕ ಕೆ.ಎಸ್.ಕುಮಾರ್, ತೆಂಗು ನಾರಿನ ಸಹಕಾರಿ ಸಂಘದ ನಿರ್ದೇಶಕ ಮಹದೇವಸ್ವಾಮಿ ಮಾತನಾಡಿದರು. ವೇದಿಕೆಯಲ್ಲಿ ನಗರಸಭೆ ಅಧ್ಯಕ್ಷ ಶರವಣ, ಹಾಪ್‌ಕಾಮ್ಸ್ ನಿರ್ದೇಶಕ ಸೂರ್ಯಕುಮಾರ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಹೇಮಂತ್ ಕುಮಾರ್.ಉಪಾಧ್ಯಕ್ಷ ರೇವಣ್ಣ, ಟಿಎಪಿಸಿಎಂಎಸ್ ಅಧ್ಯಕ್ಷ ಬಾಬು ಇತರರು ಉಪಸ್ಥಿತರಿದ್ದರು.

ಮೈಸೂರಲ್ಲಿ ಮಿಂಚಿದ ವಿಂಟೇಜ್ ಕಾರುಗಳು

ಮೈಸೂರು ಅರಮನೆ, ಲಲಿತ ಮಹಲ್ ಅರಮನೆ ಆವರಣದಲ್ಲಿ ಮೇಳೈಸಿದ ವಿಂಟೇಜ್ ವಾಹನಗಳ ಗತವೈಭವ


ಮೈಸೂರು ಅರಮನೆ ಎದುರು ವಿಂಟೇಜ್ ಕಾರುಗಳೊಂದಿಗೆ ಸಮಾವೇಶಗೊಂಡಿರುವ ಸವಾರರು.


ಲಲಿತ ಮಹಲ್ ಅರಮನೆ ಆವರಣದಿಂದ ತಮ್ಮ ವಿಂಟೇಜ್ ಕಾರುಗಳಲ್ಲಿ ನಿರ್ಗಮಿಸುತ್ತಿರುವ ವಿದೇಶಿ ಸವಾರರು.

ಮೈಸೂರು, ನ.20(ಪಿಎಂ)– ಮೈಸೂರಿನ ಹಲವು ರಸ್ತೆಗಳು ಬುಧವಾರ ವಿಂಟೇಜ್ ಕಾರುಗಳ ಕಲರವಕ್ಕೆ ಸಾಕ್ಷಿಯಾದವು. ಇವುಗಳ ಸಂಚಾರ ಕಂಡು ಮೈಸೂರಿಗರು ಪುಳಕಗೊಂಡರು. ಮೈಸೂರು ರಸ್ತೆಗಳಲ್ಲಿ ಒಟ್ಟು 45 ವಿಂಟೇಜ್ ಕಾರುಗಳದ್ದೇ ಕಾರುಬಾರಾಗಿತ್ತು.

1920ರಿಂದ 1980ರವರೆಗೆ ರಸ್ತೆಗಳಲ್ಲಿ ಧೂಳೆಬ್ಬಿಸಿದ ವಿವಿಧ ಮಾಡೆಲ್‌ಗಳ ಕಾರುಗಳು ಇವಾಗಿದ್ದು, ಬುಧವಾರ ಇವುಗಳ ಸಂಚಾರವು ಸಾಂಸ್ಕೃತಿಕ ಹಾಗೂ ಪಾರಂಪರಿಕ ನಗರಿಯಲ್ಲಿ ಅಂದಿನ ಕಾರುಗಳ ವಿನ್ಯಾಸ–ವಿಶಿಷ್ಟತೆಯ ಲೋಕವನ್ನು ಅನಾವರಣಗೊಳಿಸಿತು. ಭಾರತದ ವಿವಿಧ ಭಾಗಗಳಿಂದ ಮಾತ್ರವಲ್ಲದೆ, ವಿವಿಧ ದೇಶಗಳಿಂದ ಬಂದಿದ್ದ ಕಾರುಗಳು ಮೈಸೂರಲ್ಲಿ ಮಿಂಚಿದವು. ಭಾರತೀಯರು ಹಾಗೂ ವಿದೇಶಿಗರು ವಿಂಟೇಜ್ ಕಾರುಗಳಲ್ಲಿ ಮಿಂಚಿದರು.

ಫೆಡರೇಷನ್ ಆಫ್ ಹಿಸ್ಟಾರಿಕ್ ವೆಹಿಕಲ್ಸ್ ಆಫ್ ಇಂಡಿಯಾ (ಎಫ್‌ಹೆಚ್‌ವಿಐ) ವತಿಯಿಂದ ಕರ್ನಾಟಕ ಪ್ರವಾಸೋದ್ಯಮ ಇಲಾಖೆ ಮತ್ತು ಡೆಸ್ಟಿನೇಷನ್ ರ್‍ಯಾಲಿ ಸಹಯೋಗದಲ್ಲಿ ಹಮ್ಮಿಕೊಂಡಿರುವ ಒಟ್ಟು 1,100 ಕಿ.ಮೀ. ರ್‍ಯಾಲಿಯ ಭಾಗವಾಗಿ ಮೈಸೂರಲ್ಲಿ ವಿಂಟೇಜ್ ಕಾರುಗಳು ಸಾಗಿದವು. 'ಎಫ್‌ಹೆಚ್‌ವಿಐ ಎಕ್ಸ್‌ಪ್ಲೋರ್ ಕರ್ನಾಟಕ ಹಿಸ್ಟಾರಿಕ್ ಡ್ರೈವ್ 2024' ಶೀರ್ಷಿಕೆಯಡಿ ಬೆಂಗಳೂರು, ಹಂಪಿ, ಚಿಕ್ಕಮಗಳೂರು, ಕೊಡಗು ವ್ಯಾಪ್ತಿಯಲ್ಲಿ ರ್‍ಯಾಲಿ ನಡೆಸಿ, ಅಂತಿಮವಾಗಿ ಮೈಸೂರಲ್ಲಿ ಸಾಗಿದವು.

> ಭಾರತೀಯರ 24 ಕಾರುಗಳು, ವಿದೇಶಿಗರ 21 ಕಾರುಗಳು ಸೇರಿದಂತೆ ಒಟ್ಟು 45 ಕಾರುಗಳು ರ್‍ಯಾಲಿಯಲ್ಲಿವೆ. ವಿದೇಶಗಳಿಂದ ಕಾರುಗಳನ್ನು ಹಡಗಿನ ಮೂಲಕ ಕೆಲವರು ತಂದಿದ್ದಾರೆ. ಹಲವರು ಈ ಕಾರುಗಳನ್ನು ತಮ್ಮ ಮಕ್ಕಳಂತೆ ನೋಡಿಕೊಳ್ಳುತ್ತಿದ್ದಾರೆ. ಹಳೆ ಕಾರುಗಳ ಪರಂಪರೆಯನ್ನು ಪರಿಚಯಿಸುವ ಜೊತೆಗೆ ಕರ್ನಾಟಕ ರಾಜ್ಯದ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಈ ರ್‍ಯಾಲಿ ಆಯೋಜಿಸಲಾಗಿದೆ. ನಮ್ಮ ರ್‍ಯಾಲಿಯು ನ.15ರಂದು ಬೆಂಗಳೂರಿನಲ್ಲಿ ಚಾಲನೆ ಪಡೆಯಿತು. ಕೊಡಗು ಜಿಲ್ಲೆಯ ಮೂಲಕ ಮೈಸೂರಿಗೆ ಇಂದು ಆಗಮಿಸಿದ್ದು, ನಾಳೆ ಮರಳಿ ಬೆಂಗಳೂರಿಗೆ ತೆರಳುತ್ತಿದ್ದೇವೆ. ವಿದೇಶಿಗರು ತಮ್ಮ ಕಾರುಗಳಲ್ಲಿ ಪ್ರವಾಸ ಮುಂದುರೆಸಲಿದ್ದಾರೆ.
>
> -ಡಾ.ರವಿಪ್ರಕಾಶ್, ಅಧ್ಯಕ್ಷರು, ಎಫ್‌ಹೆಚ್‌ವಿಐ.

ಕರ್ನಾಟಕದ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದು ಹಾಗೂ ಹಳೇ ಕಾರುಗಳ ಗತಕಾಲದ ವೈಭವ ಪರಿಚಯಿಸುವ ಉದ್ದೇಶದಿಂದ ಈ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ. ಇಟಲಿ, ದಕ್ಷಿಣ ಆಫ್ರಿಕಾ, ಲಿಥುವೇನಿಯಾ, ಪೋರ್ಚುಗಲ್, ಐರ್ಲೆಂಡ್, ಜರ್ಮನಿ, ಬೆಲ್ಜಿಯಂ, ಫಿನ್‌ಲ್ಯಾಂಡ್, ಯುಎಸ್‌ಎ, ನೆದರ್‌ಲ್ಯಾಂಡ್ಸ್, ಆಸ್ಟ್ರೇಲಿಯಾ ಮತ್ತು ಯುಕೆಯಿಂದ ಆಗಮಿಸಿರುವ ವಿದೇಶಿಗರು ತಮ್ಮ ಗತಕಾಲದ ಕಾರುಗಳಲ್ಲಿ ಸುತ್ತಾಡಿದರು. ಅಹಮದಾಬಾದ್‌ನಿಂದ ಬಂದಿದ್ದ 1950 ಎಂಜಿ ವೈಟಿ 'ಲಾಲ್ ಪ್ಯಾರಿ' ವಾಹನವು ವಿಶೇಷ ಗಮನ ಸೆಳೆಯಿತು. ದಮನ್ ಠಾಕೋರ್ ಮಾಲೀಕತ್ವದ ಈ ಕಾರು 2023ರಲ್ಲಿ ಭಾರತದಿಂದ ಲಂಡನ್‌ಗೆ 73 ದಿನಗಳಲ್ಲಿ 12 ಸಾವಿರ ಕಿ.ಮೀ. ಪ್ರಯಾಣವನ್ನು 12 ದೇಶಗಳ ಮೂಲಕ ಕ್ರಮಿಸಿ ಗಮನ ಸೆಳೆದಿದೆ. ಈ ಕಾರು ಸಹ ಇಂದು ಮೈಸೂರಲ್ಲಿ ಸಂಚಾರ ಮಾಡಿತು.

1926 ಬೆಂಟ್ಲಿ ಟೂರರ್, 1933 ಅಲ್ವಿಸ್ ಸ್ಪೀಡ್, 1939 ಷೆವರ್ಲೆ ಮಾಸ್ಟರ್ ಡಿಲಕ್ಸ್ ಲಿಮೋಸಿನ್, 1947 ಸಿಟ್ರೊಯೆನ್ ಟ್ರಾಕ್ಷನ್ ಸೇರಿದಂತೆ ಮೊದಲಾದ ಕಾರುಗಳು ರ್‍ಯಾಲಿಯಲ್ಲಿದ್ದವು. ಭಾರತೀಯರು ಹಾಗೂ ವಿದೇಶಿಗರು ಸೇರಿದಂತೆ ರ್‍ಯಾಲಿಯಲ್ಲಿ ಪಾಲ್ಗೊಂಡವರು ತಮ್ಮ ಕಾರುಗಳೊಂದಿಗೆ ಬುಧವಾರ ಮೈಸೂರಿಗೆ ಆಗಮಿಸಿ, ಇಲ್ಲಿನ ಸದರನ್ ಸ್ಟಾರ್ ಹೋಟೆಲ್ ಆವರಣದಲ್ಲಿ ಸಮಾವೇಶಗೊಂಡರು. ಬಳಿಕ ಕಾರುಗಳಲ್ಲಿ ಮೈಸೂರಿನ ವಿವಿಧ ರಸ್ತೆಗಳಲ್ಲಿ ಸಾಗುವ ಮೂಲಕ ಲಲಿತ ಮಹಲ್ ಹೋಟೆಲ್ ಆವರಣ ತಲುಪಿದವು. ಕೆಲಕಾಲ ಕಾಲದ ಬಳಿಕ ಮೈಸೂರು ಅರಮನೆ ಆವರಣಕ್ಕೆ ಬಂದವು.

ಅರಮನೆ ಎದುರು ಸಾಲಾಗಿ ವಿಟೇಂಜ್ ಕಾರುಗಳನ್ನು ನಿಲ್ಲಿಸುತ್ತಿದ್ದಂತೆ ಅರಮನೆಯ ವಿದ್ಯುತ್ ದೀಪಾಲಂಕಾರ ಆರಂಭವಾಯ್ತು. ಇದರಿಂದ ವಿಟೇಂಜ್ ಕಾರುಗಳಲ್ಲಿ ಬಂದಿದ್ದ ಎಲ್ಲರೂ ಸಂಭ್ರಮದಲ್ಲಿ ತೇಲಿದರು. ಮೈಸೂರು ಅರಮನೆ ಮಂಡಲಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ವಿಶೇಷ ಅತಿಥಿಗಳ ಅರಮನೆ ಅಂಗಳಕ್ಕೆ ಸ್ವಾಗತಿಸಿದರು. ಎಫ್‌ಹೆಚ್‌ವಿಐ ಅಧ್ಯಕ್ಷ ಡಾ.ರವಿಪ್ರಕಾಶ್ ನೇತೃತ್ವದಲ್ಲಿ ವಿಂಟೇಜ್ ಕಾರುಗಳ ರ್‍ಯಾಲಿ ನಡೆಯಿತು. ಬುಧವಾರ ಮೈಸೂರಲ್ಲಿ ವಾಸ್ತವ್ಯ ಹೂಡಲಿರುವ ವಿಶೇಷ ಪ್ರತಿನಿಧಿಗಳು, ನಾಳೆ ಬೆಂಗಳೂರಿಗೆ ಮರಳಲಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಕಂಗುವಾ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಂಗುವಾ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಂಗುವಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಅಮರನ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ತಾರಕೇಶ್ವರ(ಕ)+ ಯಲಾಕುನ್ನಿ (ಕ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಅಮರನ್ (ತ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕುಂಬಾಭಿಷೇಕ ಮಹೋತ್ಸವ...


ಮೈಸೂರಿನ ಕೆ.ಜಿ.ಕೊಪ್ಪಲಿನ ಶ್ರೀ ಸಿದ್ದಪ್ಪಾಜಿ ದೇವಸ್ಥಾನದ 14ನೇ ವರ್ಷದ ಕುಂಬಾಭಿಷೇಕ ಮಹೋತ್ಸವವು ಜರುಗಿತು. ಈ ಸಂದರ್ಭ ದೇವಸ್ಥಾನದ ಸೇವಾ ಸಮಿತಿ ಸದಸ್ಯರನ್ನು ಕಾಣಬಹುದು.

ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸಾ ಶುಲ್ಕ ಹೆಚ್ಚಳಕ್ಕೆ ಪ್ರೇಮಾ ಶಂಕರೇಗೌಡ ಖಂಡನೆ

ಮೈಸೂರು, ನ.20–ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ವೆಚ್ಚ ಹೆಚ್ಚಳ ಮಾಡಿರುವ ರಾಜ್ಯ ಸರ್ಕಾರದ ಕ್ರಮವನ್ನು ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ಪ್ರೇಮಾ ಶಂಕರೇಗೌಡ ಖಂಡಿಸಿದ್ದಾರೆ. ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಶೇ.25 ರಷ್ಟು ಜನರು ಸರ್ಕಾರಿ ಆಸ್ಪತ್ರೆಗಳನ್ನೇ ಆಶ್ರಯಿಸಿದ್ದು, ಅಲ್ಲಿನ ಚಿಕಿತ್ಸಾ ಶುಲ್ಕ ಹೆಚ್ಚಳ ಮಾಡಿರುವುದರಿಂದ ತೊಂದರೆ ಅನುಭವಿಸುವಂತಾಗಿದೆ. ಈ ಸರ್ಕಾರಕ್ಕೆ ಬಡವರ ಆರೋಗ್ಯದ ವಿಚಾರದಲ್ಲೂ ಕೂಡ ಕಾಳಜಿ ಇಲ್ಲ ಎಂದಿರುವ ಅವರು, ರದ್ದಾಗಿರುವ ಬಡವರ ಬಿಪಿಎಲ್ ಕಾರ್ಡ್‌ಗಳನ್ನು ಮತ್ತೆ ನೀಡಬೇಕೆಂದು ಆಗ್ರಹಿಸಿದ್ದಾರೆ.

ಗ್ರಂಥಾಲಯ ಸದ್ಬಳಕೆಗೆ ವಿದ್ಯಾರ್ಥಿಗಳಿಗೆ ಸಲಹೆ


ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಅಂಗವಾಗಿ ಏರ್ಪಡಿಸಿದ್ದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಮೈಸೂರು, ನ.20(ಎಸ್‌ಪಿಎನ್)– ವಿದ್ಯಾರ್ಥಿಗಳು, ವಿವಿಧ ಹುದ್ದೆ ಆಕಾಂಕ್ಷಿಗಳು ಮತ್ತು ಬಡಾವಣೆ ನಿವಾಸಿಗಳು ತಮ್ಮ ವ್ಯಾಪ್ತಿಯ ಗ್ರಂಥಾಲಯಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಯುವ ಸಾಹಿತಿ, ರಂಗಕರ್ಮಿ ಟಿ.ಸತೀಶ್ ಜವರೇಗೌಡ ಸಲಹೆ ನೀಡಿದರು.

ಮೈಸೂರು ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ಕುವೆಂಪುನಗರ ಶಾಖಾ ಗ್ರಂಥಾಲಯದ ಆವರಣದಲ್ಲಿ ಮೈಸೂರು ನಗರ ಕೇಂದ್ರ ಗ್ರಂಥಾಲಯ, ಕುವೆಂಪುನಗರ ಶಾಖಾ ಗ್ರಂಥಾಲಯ ಸಹಯೋಗದೊಂದಿಗೆ ಆಯೋಜಿಸಿದ್ದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ–2024ರ ಸಮಾರೋಪದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳ ಹೆಚ್ಚು ಹೆಚ್ಚು ಗ್ರಂಥಾಲಯ ಬಳಕೆಯಿಂದ ಜ್ಞಾನವೃದ್ಧಿ ಆಗುತ್ತದೆ. ಅವರ ಮುಂದಿನ ಬದುಕು ಹಸನಾಗುತ್ತದೆ. ಒಂದು ಬಡಾವಣೆಯಲ್ಲಿ ಕ್ರೀಡಾಂಗಣ, ಗ್ರಂಥಾಲಯ ಹಾಗೂ ಉದ್ಯಾನವನಗಳು ಉತ್ತಮವಾಗಿದ್ದರೆ ಬಡಾವಣೆಯ ಗೌರವ ಹೆಚ್ಚಾಗುತ್ತದೆ. ಅಲ್ಲದೆ, ಹೊಸದಾಗಿ ನಿರ್ಮಾಣವಾಗುವ ಮನೆಗಳಲ್ಲಿ ಗ್ರಂಥಾಲಯಕ್ಕೆ ಪ್ರತ್ಯೇಕ ಕೊಠಡಿ ಮೀಸಲಿಟ್ಟು, ಅಮೂಲ್ಯ ಜ್ಞಾನ ಭಂಡಾರ ತಮ್ಮದಾಗಿಸಿಕೊಳ್ಳುವಂತೆ ಸಲಹೆ ನೀಡಿದರು.

ಮೈಸೂರು ವಿವಿ ನಿವೃತ್ತ ಕುಲಸಚಿವ ಬಸವಾರಾಧ್ಯ ಮಾತನಾಡಿ, ಮೈಸೂರಿನ ಬಹುತೇಕ ಗ್ರಂಥಾಲಯಗಳು ಮೂಲ ಸೌಕರ್ಯ ಕೊರತೆ ಎದುರಿಸುತ್ತಿವೆ. ಇದನ್ನು ನಿವಾರಿಸುವ ನಿಟ್ಟಿನಲ್ಲಿ ಓದುಗರು ಪ್ರಯತ್ನಿಸಬೇಕು. ಇರುವುದರಲ್ಲಿ ಕುವೆಂಪುನಗರ ಶಾಖಾ ಗ್ರಂಥಾಲಯ ಅಚ್ಚುಕಟ್ಟಾಗಿ ನಿರ್ವಹಣೆಯಾಗುತ್ತಿದೆ. ಈ ಗ್ರಂಥಾಲಯದಂತೆ ಮೈಸೂರಿನ ಇತರೆ ಗ್ರಂಥಾಲಯಗಳಿಗೂ ಮೂಲಸೌಕರ್ಯ ಒದಗಿಸಲು ಸರ್ಕಾರದ ಮಟ್ಟದಲ್ಲಿ ಒತ್ತಡ ತರಲು ಯುವಕರು ಪ್ರಯತ್ನಿಸಬೇಕು ಎಂದು ಮನವಿ ಮಾಡಿದರು. ಟಿಟಿಎಲ್ ಕಾಲೇಜು ಉಪನ್ಯಾಸಕ ಶಿವಶಂಕರ್, ಕುವೆಂಪುನಗರ ಶಾಖಾ ಸಮಿತಿ ಸದಸ್ಯ ಎ.ಜಿ.ದೇವರಾಜ್, ಕುವೆಂಪುನಗರ ಗ್ರಂಥಾಲಯದ ಅಧಿಕಾರಿ ಹೆಚ್.ವಿ.ರಮೇಶ್ ಉಪಸ್ಥಿತರಿದ್ದರು.

ಈ ವೇಳೆ ಮೈಸೂರು ವಿವಿ ನಿವೃತ್ತ ಉಪ ಕುಲಸಚಿವ ಬಸವಾರಾಧ್ಯ, ನಿವೃತ್ತ ಪ್ರಾಂಶುಪಾಲ ಮಲ್ಲಿಕಾರ್ಜುನ, ಲೆಕ್ಕಪರಿಶೋಧಕ ಶಿವಾನಂದ್ ಅವರಿಗೆ ಉತ್ತಮ ಗ್ರಂಥಾಲಯ ಪೋಷಕರು ಹಾಗೂ ಓದುಗರಾಗಿ ಗುರುತಿಸಿ ಅಭಿನಂದಿಸಲಾಯಿತು. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಅಂಗವಾಗಿ ಏರ್ಪಡಿಸಿದ್ದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳಾದ ಕೆ.ಎಂ.ಉಮೇಶ್(ಪ್ರ), ಎಂ.ಬಿ.ರವಿ(ದ್ವಿ), ಎನ್.ಲಿಖಿತ್‌ರಾಜ್ (ತೃ)ಗೆ ಬಹುಮಾನ ವಿತರಿಸಲಾಯಿತು.

ವಸ್ತು ಪ್ರದರ್ಶನದಲ್ಲಿ ಚಿತ್ರಕಲೆ–ಕಲಾಕೃತಿಗಳ ಪ್ರದರ್ಶನ ಉದ್ಘಾಟನೆ


ಮೈಸೂರಿನ ದಸರಾ ವಸ್ತುಪ್ರದರ್ಶನದಲ್ಲಿ ಕರಕುಶಲ, ಚಿತ್ರಕಲಾ ಪ್ರದರ್ಶನಕ್ಕೆ ಬುಧವಾರ ಚಾಲನೆ ನೀಡಲಾಯಿತು.









ಮೈಸೂರು,ನ.20(ಪಿಎಂ)– ಗಾಜಿನ ಬಾಟಲಿಯೊಳಗೆ ಅರಳಿದ ಮೈಸೂರಿನ ದೊಡ್ಡ ಗಡಿಯಾರ, ಬೆಟ್ಟದ ಮಹಿಷಾಸುರ...! ಹೀಗೆ ಹತ್ತು ಹಲವು ಕಲಾಕೃತಿಗಳು ಗಾಜಿನ ಬಾಟಲಿಯೊಳಗೆ ಮೂಡಿಬಂದು ಆಕರ್ಷಿಸಿದರೆ, ಮೈಸೂರು ಸಾಂಪ್ರದಾಯಿಕ ಚಿತ್ರಕಲೆ ಸೇರಿದಂತೆ ಬಗೆಬಗೆಯ ಕಲಾಕೃತಿಗಳು ಕಣ್ಮನ ಸೆಳೆದವು.

ಹೀಗೆ ವೈವಿಧ್ಯಮಯ ಕಲಾಲೋಕವು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ದಸರಾ ವಸ್ತುಪ್ರದರ್ಶನದ ಕನ್ನಡ ಕಾರಂಜಿ ಕಟ್ಟಡದ ಗ್ಯಾಲರಿಯಲ್ಲಿ ಕಣ್ಮನ ಸೆಳೆಯುತ್ತಿದೆ. ಇಲ್ಲಿ ವೃತ್ತಿಪರ ಕಲಾವಿದರು, ಹವ್ಯಾಸಿ ಕಲಾವಿದರು ಹಾಗೂ ವಿದ್ಯಾರ್ಥಿ ಕಲಾವಿದರ ಕೈಚಳಕದಲ್ಲಿ ಕಳೆಗಟ್ಟಿರುವ ಕಲಾಲೋಕ ಅನಾವರಣಗೊಂಡಿದೆ.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ 2024ರ ದಸರಾ ಮಹೋತ್ಸವದ ಲಲಿತಕಲೆ ಮತ್ತು ಕರಕುಶಲ ಉಪಸಮಿತಿ ವತಿಯಿಂದ ಹಮ್ಮಿಕೊಂಡಿರುವ ಪ್ರದರ್ಶನ ಇದಾಗಿದ್ದು, ಇಲ್ಲಿ ಬಗೆಬಗೆಯ ಚಿತ್ರಕಲೆ, ಕಲಾಕೃತಿ ಮೂಡಿಬಂದು ಮನಸೂರೆಗೊಂಡಿವೆ. ಬುಧವಾರ ಪ್ರದರ್ಶನಕ್ಕೆ ಚಾಲನೆ ನೀಡುವ ಜೊತೆಗೆ ಸದರಿ ಉಪಸಮಿತಿಯನ್ನೂ ಉದ್ಘಾಟಿಸಲಾಯಿತು.

ಒಟ್ಟಾರೆ 95 ಕಲಾವಿದರಿಂದ ಚಿತ್ರಕಲೆ, ಮೈಸೂರು ಸಾಂಪ್ರದಾಯಿಕ ಚಿತ್ರಕಲೆ, ವಿವಿಧ ಕಲಾಕೃತಿಗಳು ಸೇರಿದಂತೆ ಒಟ್ಟು 150 ವಿಷಯಗಳಲ್ಲಿ ಕಲಾತ್ಮಕತೆ ಮೂಡಿಬಂದಿದೆ. ರಾಜ್ಯದ ವಿವಿಧ ಭಾಗಗಳ ಕಲಾವಿದರು ತಮ್ಮ ಕಲೆಯನ್ನು ಇಲ್ಲಿ ಅನಾವರಣಗೊಳಿಸಿದ್ದಾರೆ. ಬುದ್ಧನ ಕಲಾಕೃತಿ ಮಾತ್ರವಲ್ಲದೆ, ಚಿತ್ರಕಲೆಯೂ ಮೂಡಿ ಶಾಂತಿ ಸಂದೇಶ ಹೊಮ್ಮುತ್ತಿದೆ. ಸಾಲಿಗ್ರಾಮದ ವೆಂಕಟೇಶ್ ಅವರ ಕೈಚಳಕದಲ್ಲಿ ಮೂಡಿರುವ ಬಾಟಲಿಯೊಳಗಿನ ಕಲಾಕೃತಿಗಳು ಇಲ್ಲಿ ವಿಶೇಷ ಗಮನ ಸೆಳೆಯುತ್ತಿವೆ. 80 ವರ್ಷ ವಯೋಮಾನದ ಹಿರಿಯ ಕಲಾವಿದ ಆರ್.ವೆಂಕಟೇಶ್ ಅವರ ಕಲಾತ್ಮಕ ಕುಂಚದಲ್ಲಿ ಅರಳಿಸಿರುವ ತೈಲ ವರ್ಣದ ಚಿತ್ರಕಲೆ ಗಮನ ಸೆಳೆಯುತ್ತಿದೆ.

ಇಲ್ಲಿನ ಕನ್ನಡ ಕಾರಂಜಿ ಕಟ್ಟಡದ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಕಲಾಪ್ರದರ್ಶನ ಮತ್ತು ಉಪ ಸಮಿತಿಯನ್ನು ಉದ್ಘಾಟಿಸಿದರು. ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಮಾತನಾಡಿ, ದಸರಾ ವಸ್ತುಪ್ರದರ್ಶನ ಆವರಣವು ಕಲೆ ಮತ್ತು ಸಂಸ್ಕೃತಿ ತಾಣವಾಗಿ ಕಂಗೊಳಿಸುತ್ತಿದೆ. ಕಲೆಗಳಿಗೆ ಪ್ರಾಧಿಕಾರ ಪ್ರೋತ್ಸಾಹ ನೀಡುತ್ತಿರುವುದು ಮೆಚ್ಚುಗೆಯ ವಿಚಾರ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಲಲಿತಕಲೆ ಮತ್ತು ಕರಕುಶಲ ಉಪಸಮಿತಿ ಅಧ್ಯಕ್ಷ ಶೌಕತ್ ಅಲಿ ಖಾನ್, ಉಪಾಧ್ಯಕ್ಷ ದಂಡಿಕೆರೆ ನಾಗರಾಜ್ ಮತ್ತಿತರರು ಹಾಜರಿದ್ದರು.

ಮೈಸೂರು ಮೂಲಕ ಹಾದು ಹೋದ ಮದ್ರಾಸ್ ಇಂಜಿನಿಯರಿಂಗ್ ಗ್ರೂಪ್‌ನ ಇ–ಬೈಕ್ ರ್‍ಯಾಲಿ


ಇ–ಬೈಕ್ ಸವಾರರೊಂದಿಗೆ ಮೈಸೂರು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಹಾಗೂ ಮಾಜಿ ಸೈನಿಕ ಪಿ.ಕೆ.ಬಿದ್ದಪ್ಪ ಹಾಗೂ ಮೇಜರ್ ಜನರಲ್ (ನಿವೃತ್ತ) ಎಸ್.ಜಿ.ಒಂಭತ್ಕೆರೆ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ನ.20 (ಆರ್‌ಕೆ)– ಕೇರಳದ ತ್ರಿವೇಂಡ್ರಮ್‌ನಿಂದ ಹೊರಟ ಮದ್ರಾಸ್ ಇಂಜಿನಿಯರಿಂಗ್ ಗ್ರೂಪ್‌ನ ಇ–ಬೈಕ್ ರ್‍ಯಾಲಿಯು ಮೈಸೂರು ಮೂಲಕ ಬೆಂಗಳೂರಿಗೆ ತೆರಳಿತು.

ಮೈಸೂರು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ಸಂಘದ ಸಹಯೋಗದಲ್ಲಿ ಮದ್ರಾಸ್ ಇಂಜಿನಿಯರಿಂಗ್ ಗ್ರೂಪ್ ಅಂಡ್ (ಎಂಇಜಿ ಅಂಡ್ ಸೆಂಟರ್) ಗ್ರೂಪ್‌ನ 224ನೇ ವಾರ್ಷಿಕೋತ್ಸವ ಹಾಗೂ 25ನೇ ಆಪರೇಷನ್ ವಿಜಯ್ ದಿವಸ್ ಅಂಗವಾಗಿ ನಿನ್ನೆ ಮಧ್ಯಾಹ್ನ ಕೇರಳದ ತ್ರಿವೇಂಡ್ರಮ್‌ನಿಂದ ಐದು ಬೈಕ್‌ಗಳಲ್ಲಿ ಪ್ರಯಾಣ ಬೆಳೆಸಿದ ಸೈನಿಕರ ತಂಡವು ಮಂಗಳವಾರ ರಾತ್ರಿ ಮೈಸೂರು ತಲುಪಿ, ವಾಸ್ತವ್ಯ ಹೂಡಿತ್ತು. ಇಂದು ಬೆಳಗ್ಗೆ 8 ಗಂಟೆಗೆ ಮೈಸೂರಿನ ಜಯಲಕ್ಷ್ಮೀಪುರಂನಲ್ಲಿರುವ ಕೊಡಗು ಸಹಕಾರ ಸಂಘದ ಕಚೇರಿ ಬಳಿ ಮೈಸೂರು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಹಾಗೂ ಮಾಜಿ ಸೈನಿಕ ಪಿ.ಕೆ.ಬಿದ್ದಪ್ಪ ಹಾಗೂ ಉಪಾಧ್ಯಕ್ಷ ನರಸೇಗೌಡ ಬೈಕ್ ರ್‍ಯಾಲಿಯಲ್ಲಿ ಪಾಲ್ಗೊಂಡವರನ್ನು ಆತ್ಮೀಯವಾಗಿ ಬರಮಾಡಿಕೊಂಡು ಸನ್ಮಾನಿಸಿ, ಮುಂದಿನ ಪ್ರಯಾಣದ ಬಗ್ಗೆ ಹಾರೈಸಿದರು.

ಇದೇ ವೇಳೆ ಸುಮಾರು 150 ಎನ್‌ಸಿಸಿ ಕೆಡೆಟ್‌ಗಳು, ಸುಮಾರು 100ಕ್ಕೂ ಹೆಚ್ಚು ಮಾಜಿ ಸೈನಿಕರು ಹಾಜರಿದ್ದು, ಪಥಸಂಚಲನ ನಡೆಸಿದರು. ನಂತರ ಸಂಘದ ಕಚೇರಿ ಸಭಾಂಗಣದಲ್ಲಿ ಮೇಜರ್ ಜನರಲ್ (ನಿವೃತ್ತ) ಎಸ್.ಜಿ.ಒಂಭತ್ಕೆರೆ ಅವರು ಸೈನಿಕರು, ಮಾಜಿ ಸೈನಿಕರು, ಎನ್‌ಸಿಸಿ ಕೆಡೆಟ್‌ಗಳಿಗೆ ಆಪರೇಷನ್ ವಿಜಯ್ ದಿವಸ್‌ನ ಹಿನ್ನೆಲೆ, ಪ್ರಾಮುಖ್ಯತೆ, ಯುದ್ಧಗಳ ಸ್ವರೂಪವನ್ನು ವಿವರಿಸಿ, ಸೈನ್ಯದಲ್ಲಿ ಯಾವ ರೀತಿ ಕೆಲಸ ಮಾಡಬೇಕೆಂಬುದರ ಬಗ್ಗೆ ಪ್ರೇರೇಪಣಾ ಮಾತುಗಳನ್ನಾಡಿದರು. ಈ ವೇಳೆ ಮೇಜರ್ ಸೀತಾ ಸಿಖಾ, ಲೆಫ್ಟಿನೆಂಟ್ ಕರ್ನಲ್ ರಾಜೇಂದ್ರ, ಮಾಜಿ ಸೈನಿಕರು, ಎನ್‌ಸಿಸಿ ಕೆಡೆಟ್‌ಗಳು, ಮೈಸೂರು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ಸಂಘದ ಸದಸ್ಯರು ಉಪಸ್ಥಿತರಿದ್ದು, ಬೈಕ್ ರ್‍ಯಾಲಿಯನ್ನು ಬೀಳ್ಕೊಟ್ಟರು. ರ್‍ಯಾಲಿಯು ಇಂದು ಸಂಜೆ ಬಿಡದಿ ತಲುಪಲಿದ್ದು, ಶುಕ್ರವಾರ ಬೆಂಗಳೂರಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ತಮ್ಮ ಪ್ರವಾಸ ಅಂತ್ಯಗೊಳಿಸಲಿದೆ.

ಲೋಕಾಯುಕ್ತ ಕಚೇರಿಗೆ ಸಿದ್ದರಾಮಯ್ಯ ಭಾವಮೈದ ಮಲ್ಲಿಕಾರ್ಜುನಸ್ವಾಮಿ ಭೇಟಿ; ಹಲವು ದಾಖಲಾತಿ ಸಲ್ಲಿಕೆ

ಮೈಸೂರು, ನ.20(ಬಿಎಲ್‌ಯು)– ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ಸಿದ್ದರಾಮಯ್ಯ ಭಾವಮೈದ ಮಲ್ಲಿಕಾರ್ಜುನ ಸ್ವಾಮಿ ಇಂದು ಲೋಕಾಯುಕ್ತ ಕಚೇರಿಗೆ ಭೇಟಿ ನೀಡಿ, ಹಲವು ದಾಖಲಾತಿ ಸಲ್ಲಿಸಿದರು.

ಮೈಸೂರಿನ ದಿವಾನ್ಸ್ ರಸ್ತೆಯ ಲೋಕಾಯುಕ್ತ ಕಚೇರಿಗೆ ಇಂದು ಮಧ್ಯಾಹ್ನ 12.30 ಗಂಟೆಗೆ ಆಗಮಿಸಿದ ಮಲ್ಲಿಕಾರ್ಜುನ ಸ್ವಾಮಿ, 15 ನಿಮಿಷ ಅಲ್ಲಿದ್ದರು. ಈ ವೇಳೆ ತಾವು ತಂದಿದ್ದ ಹಲವು ದಾಖಲಾತಿಗಳನ್ನು ಲೋಕಾಯುಕ್ತರಿಗೆ ಸಲ್ಲಿಸಿ, ಕೆಲವು ಮಾಹಿತಿ ನೀಡಿದರು. ನಿನ್ನೆ ರಾತ್ರಿ 8 ಗಂಟೆ ಸಮಯದಲ್ಲಿಯೂ ಮಲ್ಲಿಕಾರ್ಜುನ ಸ್ವಾಮಿ ತರಾತುರಿಯಲ್ಲಿ ಲೋಕಾಯುಕ್ತ ಕಚೇರಿಗೆ ಭೇಟಿ ನೀಡಿದ್ದರು.

ಮುಡಾ ಆಯುಕ್ತರಾಗಿದ್ದ ಡಾ.ಡಿ.ಬಿ.ನಟೇಶ್ ವಿಚಾರಣೆ ಮುಗಿಸಿ ನಿರ್ಗಮಿಸಿದ ಅರ್ಧ ಗಂಟೆ ನಂತರ ಲೋಕಾಯುಕ್ತ ಕಚೇರಿಗೆ ಆಗಮಿಸಿದ ಮಲ್ಲಿಕಾರ್ಜುನ ಸ್ವಾಮಿ, ಲೋಕಾಯುಕ್ತ ಎಸ್ಪಿ ಟಿ.ಜೆ.ಉದೇಶ್ ಅವರನ್ನು ಭೇಟಿ ಮಾಡಿದರು. ಈ ವೇಳೆ ಕೆಲವು ದಾಖಲಾತಿಗಳನ್ನು ಅವರಿಗೆ ಸಲ್ಲಿಸಿದರು.

ಮಲ್ಲಿಕಾರ್ಜುನಸ್ವಾಮಿ ಲೋಕಾಯುಕ್ತ ಕಚೇರಿಗೆ ಪದೇ ಪದೆ ಆಗಮಿಸಿ, ದಾಖಲಾತಿ ಸಲ್ಲಿಸುತ್ತಿರುವುದು ತೀವ್ರ ಕುತೂಹಲ ಮೂಡಿಸಿದೆ.

ಲೋಕಾಯುಕ್ತ ಕಚೇರಿಗೆ ರಾತ್ರಿ ವೇಳೆ ಮಲ್ಲಿಕಾರ್ಜುನಸ್ವಾಮಿ ಭೇಟಿ; ಸ್ನೇಹಮಯಿ ಕೃಷ್ಣರಿಗೆ ನಾನಾ ಡೌಟ್!


ಲೋಕಾಯುಕ್ತ ಕಚೇರಿಗೆ ಹೋಗುತ್ತಿರುವ ಮಲ್ಲಿಕಾರ್ಜುನಸ್ವಾಮಿ

ಮೈಸೂರು, ನ.20(ಬಿಎಲ್‌ಯು)– ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ಸಿದ್ದರಾಮಯ್ಯ ಭಾವಮೈದ ಮಲ್ಲಿಕಾರ್ಜುನ ಸ್ವಾಮಿಯವರು ರಾತ್ರಿ ವೇಳೆ ಲೋಕಾಯುಕ್ತ ಕಚೇರಿಗೆ ಭೇಟಿ ನೀಡಿರುವ ಬಗ್ಗೆ ನಾನಾ ಅನುಮಾನ ವ್ಯಕ್ತಪಡಿಸಿ ದೂರುದಾರ ಸ್ನೇಹಮಯಿ ಕೃಷ್ಣ ಲೋಕಾಯುಕ್ತ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರಿಗೆ (ಎಡಿಜಿಪಿ) ದೂರು ನೀಡಿದ್ದಾರೆ.

ರಾತ್ರಿ ವೇಳೆ ಮಲ್ಲಿಕಾರ್ಜುನ ಸ್ವಾಮಿ ಲೋಕಾಯುಕ್ತ ಕಚೇರಿಗೆ ಬಂದಿದ್ದೇಕೆ? ಅಂತಹ ತುರ್ತು ಏನಿತ್ತು? ಕಚೇರಿಗೆ ಬರುವಂತೆ ತನಿಖಾಧಿಕಾರಿಗಳು ನೋಟಿಸ್ ನೀಡಿದ್ದರೆ? ಇಲ್ಲವೇ ಮಲ್ಲಿಕಾರ್ಜುನಸ್ವಾಮಿ ಸ್ವಯಂಪ್ರೇರಣೆಯಿಂದ ಭೇಟಿ ನೀಡಿದ್ದರೆ? ಅಲ್ಲಿ ತನಿಖಾಧಿಕಾರಿ ಇರುವುದು ಮಲ್ಲಿಕಾರ್ಜುನಸ್ವಾಮಿಗೆ ಹೇಗೆ ತಿಳಿಯಿತು? ಎಂದು ಪ್ರಶ್ನಿಸಿದ್ದಾರೆ. ಈ ಸಂಬಂಧ ವಿಚಾರಣೆ ನಡೆಸುವಂತೆಯೂ ಎಡಿಜಿಪಿಯವರಲ್ಲಿ ಮನವಿ ಮಾಡಿದ್ದಾರೆ.

ತನಿಖಾ ಸಂಸ್ಥೆಗಳಿಗೆ ಸಿಸಿಟಿವಿ ಕ್ಯಾಮರಾ ಅಳವಡಿಸುವುದು ಕಡ್ಡಾಯ ಎಂದು ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ. ಈ ಸಂಬಂಧ ತನಿಖಾಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಈ ತನಕ ಸಿಸಿಟಿವಿ ಕ್ಯಾಮರಾ ಅಳವಡಿಸಿಲ್ಲ. ಇದರಿಂದ ಲೋಕಾಯುಕ್ತ ಕಚೇರಿಯಲ್ಲಿ ಅನುಮಾನಾಸ್ಪದ ಚಟುವಟಿಕೆಗಳು ನಡೆಯುತ್ತಿವೆ ಎಂಬ ಶಂಕೆ ನನ್ನನ್ನು ಕಾಡುತ್ತಿದೆ ಎಂದು ತಿಳಿಸಿದ್ದಾರೆ.

ಸಿಸಿಟಿವಿ ಕ್ಯಾಮರಾ ಅಳವಡಿಸದೇ ಇರುವುದು ಸೇರಿದಂತೆ ಹಲವು ರೀತಿಯಲ್ಲಿ ಲೋಕಾಯುಕ್ತ ಎಸ್ಪಿ ಉದೇಶ್ ಕರ್ತವ್ಯ ಲೋಪ ಎಸಗಿದ್ದಾರೆ. ಆ ಹಿನ್ನೆಲೆಯಲ್ಲಿ ನಿಮ್ಮ ನೇರ ಮಾರ್ಗದರ್ಶನದಲ್ಲಿ ತನಿಖೆ ನಡೆಸಬೇಕು ಎಂದು ಸ್ನೇಹಮಯಿ ಕೃಷ್ಣ ಕೋರಿದ್ದಾರೆ.

6ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಪುಟ್ಟಮ್ಮನವರು

ನೀವು ನಮ್ಮನ್ನಗಲಿ 6 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ನಿಮ್ಮ ಮಕ್ಕಳು: ಕೆ.ಮಹದೇವ್ (KEB), ಪೈಲ್ವಾನ್ ಚಿಕ್ಕಪುಟ್ಟಿ, ಮಾಜಿ ಉಪಾಧ್ಯಕ್ಷರು ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್, ಗಾಂಧಿಚೌಕ, ಮೈಸೂರು ವಿಷಕಂಠು, ಹೆಣ್ಣುಮಕ್ಕಳು: ಮಾದಮ್ಮ, ಪ್ರೇಮ, ಪದ್ಮ, ಪಾರ್ವತಿ ಹಾಗೂ ಮೊಮ್ಮಕ್ಕಳು ಕೆ.ಮಾದೇಶ್, ಮಾಜಿ ಮುಡಾ ಸದಸ್ಯರು, ಮಾಜಿ ಉಪಾಧ್ಯಕ್ಷರು, ಮೈಸೂರು–ಚಾಮರಾಜನಗರ ಒಕ್ಕಲಿಗರ ಸಂಘ, ವಿದ್ಯಾರಣ್ಯಪುರಂ, ಮೈಸೂರು ಜಿಲ್ಲಾ ಅಧ್ಯಕ್ಷರು, ಕರ್ನಾಟಕ ರಕ್ಷಣಾ ವೇದಿಕೆ, ಮೈಸೂರು (ಮೊ: 9886119556)


6ನೇ ವರ್ಷದ ಸವಿನೆನಪು



ಎಂ.ಪಿ. ಪ್ರಸನ್ನಕುಮಾರ್

ನೀವು ನಮ್ಮನ್ನಗಲಿ ಇಂದಿಗೆ 6 ವರ್ಷ ಕಳೆದರೂ ಸದಾ ನಿಮ್ಮನ್ನು ಸ್ಮರಿಸುತ್ತಾ ನಿಮ್ಮ ನೆನಪಿನಲ್ಲಿರುವ ತಂದೆ, ತಾಯಿ, ತಮ್ಮಂದಿರು ಹಾಗೂ ಕುಟುಂಬವರ್ಗ

Heartfelt Tribute on 5th Death Anniversary



Those we love don't go away, they walk beside us every day, unseen, unheard, but always near, still missed and very dear

PETER
15.2.1957 - 21.11.2019

Wife - Maria Peter

13ನೇ ವರ್ಷದ ಪುಣ್ಯಸ್ಮರಣೆ



ಡಾ॥ ದೊಡ್ಡನಾರಣಪ್ಪ

"ಮಧುಮೇಹಿಗಳ ಆಪ್ತಮಿತ್ರ"

ನೀವು ನಮ್ಮನ್ನಗಲಿ ಇಂದಿಗೆ 13 ವರ್ಷಗಳು ಕಳೆದರೂ ನಿಮ್ಮ ಪ್ರೀತಿ ಆಶೀರ್ವಾದ ನಮಗೆ ದಾರಿದೀಪವಾಗಿದೆ

ಸದಾ ನಿಮ್ಮ ನೆನಪಿನಲ್ಲಿರುವ ಪತ್ನಿ ಹಾಗೂ ಮಕ್ಕಳು

ಜನ್ಮದಾತೆಯ ಪ್ರಥಮ ಪುಣ್ಯಸ್ಮರಣೆ



ಸುಶೀಲ.ಎಸ್

ನಿಧನ: 21.11.2023 (ದಿ.ಶ್ರೀನಿವಾಸರವರ ಧರ್ಮಪತ್ನಿ)

ಅಮ್ಮ ನಿಮ್ಮ ಆದರ್ಶಮಯ ಜೀವನ, ಪ್ರೀತಿ, ವಾತ್ಸಲ್ಯ ನಮ್ಮ ಮನಸ್ಸಿನಲ್ಲಿ ಸದಾ ಹಸಿರಾಗಿ ಉಳಿದಿದೆ. ನಿಮ್ಮ ಪವಿತ್ರ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಪ್ರಾರ್ಥಿಸುವ

ದುಃಖತಪ್ತರು: ಕುಟುಂಬವರ್ಗದವರು

ನಂಜನಗೂಡು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ

ಅಸಲು ದಾವಾ ಸಂಖ್ಯೆ 107/2020

ವಾದಿ: ಸರೋಜಮ್ಮ

ವಿರುದ್ಧ

ಪ್ರತಿವಾದಿಗಳು: ಮಹಂತಸ್ವಾಮಿ ಮತ್ತು ಇತರರು D3 - ದಾಕ್ಷಾಯಿಣಿ D/o ಲೇಟ್ ಪುಟ್ಟಸ್ವಾಮಪ್ಪ, 60 ವರ್ಷ ; D4 - ವಸಂತ D/o ಲೇಟ್ ಪುಟ್ಟಸ್ವಾಮಪ್ಪ, 54 ವರ್ಷ ; D6 - ಮಹದೇವ ಸ್ವಾಮಿ S/o ಲೇಟ್ ಪಾರ್ವತಮ್ಮ, 68 ವರ್ಷ ; D7 - ಸರ್ವಮಂಗಳ D/o ಲೇಟ್ ದೊರೆ ಸ್ವಾಮಪ್ಪ, 52 ವರ್ಷ ; D8 - ಕಲಾವತಿ D/o ಲೇಟ್ ದೊರೆಸ್ವಾಮಪ್ಪ, 50 ವರ್ಷ ; D9 - ಅನ್ನಪೂರ್ಣ D/o ಲೇಟ್ ದೊರೆಸ್ವಾಮಪ್ಪ, 46 ವರ್ಷ ; D10 - ಪರಶಿವಮೂರ್ತಿ S/o ಲೇಟ್ ದೊರೆಸ್ವಾಮಪ್ಪ, 46 ವರ್ಷ.

ಎಲ್ಲರ ವಾಸ ಚಿಕ್ಕಹೊಮ್ಮ ಗ್ರಾಮ, ದೊಡ್ಡ ಕವಲಂದೆ ಹೋಬಳಿ, ನಂಜನಗೂಡು ತಾಲ್ಲೂಕು.

ಪತ್ರಿಕಾ ಪ್ರಕಟಣೆ

ಮೇಲ್ಕಂಡ ವಾದಿ ಸರೋಜಮ್ಮನವರು ಅವರ ಕುಟುಂಬದಲ್ಲಿನ ಸ್ವತ್ತುಗಳಲ್ಲಿ ಅದರ ಬಾಬ್ತು ಹಿಸ್ಸಾ ಹಕ್ಕು ಹಾಗೂ ಸ್ವಾಧೀನ ಕೋರಿ ಮೇಲ್ಕಂಡ ನೀವುಗಳಾದ ದಾಕ್ಷಾಯಿಣಿ ಮತ್ತು ಇತರರ ಮೇಲೆ ಮೇಲ್ಕಂಡ ಅಸಲು ದಾವಾ ಸಂಖ್ಯೆ 107/2020 ಹೂಡಿದ್ದು, ಸದರಿ ದಾವಾದಲ್ಲಿ ಘನ ನ್ಯಾಯಾಲಯವು ಸಮನ್ಸ್ – ನೋಟಿಸನ್ನು ನಿಮ್ಮಗಳಿಗೆ ಕಳುಹಿಸಿದ್ದರು. ನೀವುಗಳು ವಿಳಾಸದಲ್ಲಿ ವಾಸವಾಗಿಲ್ಲವೆಂದು ವಾಪಸ್ಸು ಆಗಿರುತ್ತದೆ, ಆದ್ದರಿಂದ ಈ ಮೂಲಕ ನಿಮ್ಮಗಳಿಗೆ ತಿಳಿಸುವುದೆ ನೆಂದರೆ, ಮೇಲ್ಕಂಡ ಅಸಲು ದಾವಾ 107/2020 ದಿನಾಂಕ 10–12–2024 ರಂದು 11 ಗಂಟೆಗೆ ವಿಚಾರಣೆಗೆ ಇರುತ್ತದೆ. ಸದರಿ ದಿನಾಂಕದಂದು ತಾವು ಖುದ್ದಾಗಿ ಅಥವಾ ವಕೀಲರ ಮುಖಾಂತರ ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸತಕ್ಕದ್ದು, ತಪ್ಪಿದರೆ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುತ್ತದೆ ಎಂದು ಹೇಳಿ ನಿಮಗೆ ಈ ನೋಟಿಸು ಕೊಟ್ಟಿರುತ್ತದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ
ಸಹಿ/– ಶಿರಸ್ತೇದಾರರು, ನಂಜನಗೂಡು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ನಂಜನಗೂಡು

ವಾದಿ ಪರ ವಕೀಲರು
ಸಹಿ/– ಆರ್.ಎನ್. ನಂಜುಂಡಸ್ವಾಮಿ
ದಿನಾಂಕ: 19–11–2024.

ಸಾರ್ವಜನಿಕ ಪ್ರಕಟಣೆ

ಸಂಬಂಧಪಟ್ಟವರ ಗಮನಕ್ಕೆ, ಮೈಸೂರು ತಾಲ್ಲೂಕಿನ ಕುರುಬರಹಳ್ಳಿ ಗ್ರಾಮದಲ್ಲಿರುವ, ಸರ್ವೇ ಸಂಖ್ಯೆ 4 ರ ಅಡಿಯಲ್ಲಿ ನೋಂದಾಯಿತವಾಗಿರುವ, 26 ಎಕರೆ 16 ಗುಂಟೆ ವಿಸ್ತೀರ್ಣದ ಆಸ್ತಿಯು, ಶ್ರೀ ಬಿ. ಮೋಟಿಲಾಲ್ ರಂಕಾ (ಅರ್ಜಿದಾರರು) ಹಾಗೂ ಶ್ರೀ ಎಂ. ಮನ್ಮೋಹನ್ ಮತ್ತು ಇತರರು (ಮೃತರು, ಅವರ ಕಾನೂನುಬದ್ಧ ಪ್ರತಿನಿಧಿಗಳ ಮೂಲಕ) ಇವರುಗಳ ನಡುವಿನ ಹಕ್ಕುದಾರಿ ವಿವಾದವು ಪ್ರಸ್ತುತ ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯದ ವಿಶೇಷ ಅನುಮತಿ ಅರ್ಜಿ(ಎಸ್‌ಎಲ್‌ಪಿ) ಸಂಖ್ಯೆ 19991 / 2023 ರ ಅಡಿಯಲ್ಲಿ ವಿಚಾರಣೆಯಲ್ಲಿದೆ. ದಿನಾಂಕ 28ನೇ ಆಗಸ್ಟ್ 2023 ರ ಆದೇಶದ ಪ್ರಕಾರ, ಮಾನ್ಯ ಸರ್ವೋಚ್ಚ ನ್ಯಾಯಾಲ–ಯವು ಅಂತಿಮ ನಿರ್ಣಯ ನೀಡುವವರೆಗೆ ಎರಡೂ ಪಕ್ಷಗಳು ಯಥಾಸ್ಥಿತಿಯನ್ನು ಕಾಯ್ದುಕೊಳ್ಳಬೇಕೆಂದು ನಿರ್ದೇಶಿಸಿದೆ. ಈ ಆಸ್ತಿಯ ನ್ಯಾಯಸಮ್ಮತ ಹಕ್ಕುದಾರರು ಶ್ರೀ ಬಿ. ಮೋಟಿಲಾಲ್ ರಂಕಾ (ಅಥವಾ ಅವರ ಕಾನೂನುಬದ್ಧ ವಾರಸುದಾರರು) ಮತ್ತು ಶ್ರೀ ಎಂ.ಮನ್ಮೋಹನ್ (ಅಥವಾ ಅವರ ಕಾನೂನುಬದ್ಧವಾರಸುದಾರರು) ಇವರುಗಳ ನಡುವೆ ಮಾತ್ರ ನಿರ್ಧರಿಸಲ್ಪಡುವುದು ಎಂದು ಸ್ಪಷ್ಟಪಡಿಸಲಾಗಿದೆ. ಯಾವುದೇ ಮೂರನೇ ವ್ಯಕ್ತಿಯ ಹಕ್ಕುದಾರಿ ಕ್ಲೇಮುಗಳನ್ನು ಪರಿಗಣಿಸಲಾಗುವುದಿಲ್ಲ. ಮೂರನೇ ವ್ಯಕ್ತಿಗಳ ಯಾವುದೇ ಮಾಲೀಕತ್ವದ ಹಕ್ಕು ಕ್ಲೇಮುಗಳು ಆಧಾರ ರಹಿತ, ನಿರರ್ಥಕ ಮತ್ತು ಕಾನೂನುಬಾಹಿರವಾಗಿರುತ್ತವೆ. ಪಕ್ಷಗಳ ನಡುವೆ ಹಕ್ಕುದಾರಿಗೆ ಸಂಬಂಧಿಸಿದ ಯಾವುದೇ ಹೆಚ್ಚುವರಿ ಕ್ರಿಯಾಶೀಲ ವ್ಯವಹರಣೆಗಳು ಇರುವುದಿಲ್ಲ, ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪು ಬರುವವರೆಗೆ ಈ ಆಸ್ತಿಗೆ ಸಂಬಂಧಿಸಿದ ಯಾವುದೇ ಮೂರನೇ ವ್ಯಕ್ತಿಯ ಕಾನೂನು ಕ್ರಮವು ಮುಂದುವರೆಯಲು ಸಾಧ್ಯವಿಲ್ಲ. ಈ ಪ್ರಕಟಣೆಯು ಮಾಲೀಕತ್ವದ ಸ್ಥಿತಿಯನ್ನು ಸ್ಪಷ್ಟಪಡಿಸಲು ಮತ್ತು ಸುಳ್ಳು ಅಥವಾ ದಿಕ್ಕುತಪ್ಪಿಸುವ ಕ್ಲೇಮುಗಳ ವಿರುದ್ಧ ಎಚ್ಚರಿಕೆ ನೀಡಲು ಉದ್ದೇಶಿಸಿದೆ.

ಜಾರಿಗೊಳಿಸಿದವರು : ಶ್ರೀ ಭರತ್‌ರಂಕಾ (ಅರ್ಜಿದಾರರ ಪ್ರತಿನಿಧಿ)

ನಗರಸಭಾ ಕಾರ್ಯಾಲಯ, ಹುಣಸೂರು ಮೈಸೂರು ಜಿಲ್ಲೆ – 571105

ಈ–ಮೇಲ್: itstaff_ulb_hunsur@yahoo.co.in ಫ್ಯಾಕ್ಸ್: 08222–252250 ಕಛೇರಿ ಫೋನ್: 252048

ಸಂಖ್ಯೆ: ಹುನಕಾ/ಜೆ.ಇ/ಸಿಆರ್/ನೀ.ಸ.ವಿ.ಹೊ.ಗು/ಟೆಂಡರ್–12/2024–25 ದಿನಾಂಕ: 19.11.2024

ಟೆಂಡರ್ ಪ್ರಕಟಣೆ (https://kppp.karnataka.gov.in ಪೋರ್ಟಲ್ ಮೂಲಕ)

ಹುಣಸೂರು ನಗರಸಭೆ ವ್ಯಾಪ್ತಿಯಲ್ಲಿ 2024–25ನೇ ಸಾಲಿನ ನಗರಸಭಾ ಸಾಮಾನ್ಯ ಅನುದಾನದಲ್ಲಿ ಕುಡಿಯುವ ನೀರು ಸರಬರಾಜು ವಿಭಾಗಕ್ಕೆ ಅವಶ್ಯ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ವಾರ್ಷಿಕವಾಗಿ ನೇಮಿಸಿಕೊಳ್ಳಲು ಅರ್ಹ ನೋಂದಾಯಿತ ಮಾನವ ಸಂಪನ್ಮೂಲ ಸರಬರಾಜುದಾರರಿಂದ/ಏಜೆನ್ಸಿಗಳಿಂದ 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಟೆಂಡರನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು https://kppp.karnataka.gov.in ಪೋರ್ಟಲ್‌ನಿಂದ ಟೆಂಡರ್ ಷರತ್ತು ಹಾಗೂ ದಾಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. ಟೆಂಡರ್ ಸಂಖ್ಯೆ: 1) DMA/2024-25/SE4083, ವಾರ್ಷಿಕ ಅಂದಾಜು ಮೊತ್ತ ರೂ.49.95 ಲಕ್ಷಗಳು. ಟೆಂಡರ್ ಸಂಖ್ಯೆ: 2) DMA/2024-25/SE4084 ವಾರ್ಷಿಕ ಅಂದಾಜು ಮೊತ್ತ ರೂ.49.95 ಲಕ್ಷಗಳು. 1) ಟೆಂಡರ್‌ಗಳನ್ನು ಸಲ್ಲಿಸಲು ಕಡೆಯ ದಿ: 4.12.2024 ಸಂಜೆ 5.00 ಗಂಟೆಯವರೆಗೆ. 2) ತಾಂತ್ರಿಕ ಬಿಡ್ಡುಗಳನ್ನು ತೆರೆಯುವ ದಿ: 5.12.2024 ಮತ್ತು ಆರ್ಥಿಕ ಬಿಡ್ಡುಗಳನ್ನು ತೆರೆಯುವ ದಿ: 07.12.2024 ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

ಸೂಚನೆ: ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು https://kppp.karnataka.gov.in ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/– ಉಪಾಧ್ಯಕ್ಷರು (ಶ್ರೀಮತಿ ಹೆಚ್.ಡಿ.ಆಶಾ) ನಗರಸಭೆ, ಹುಣಸೂರು	ಸಹಿ/– ಅಧ್ಯಕ್ಷರು, (ಶ್ರೀ ಎಸ್.ಶರವಣ) ನಗರಸಭೆ, ಹುಣಸೂರು	ಸಹಿ/– ಪೌರಾಯುಕ್ತರು, ನಗರಸಭೆ, ಹುಣಸೂರು

DIPR/DDMYS-826/KSMCA-560/2024-25

ಪುರಸಭೆ ಕಾರ್ಯಾಲಯ, ವಿರಾಜಪೇಟೆ

ಕೊಡಗು ಜಿಲ್ಲೆ–571218.

ದೂರವಾಣಿ ಸಂಖ್ಯೆ: 08274–257332
ಇ–ಮೇಲ್–itstaff_ulb_virajpet@yahoo.com
ವೆಬ್ ಸೈಟ್: www.virajpettown.mrc.gov.in

ಕ್ರ.ಸಂ.ನಂ.ಪು.ವಿ/ಬೀದಿದೀಪಗಳ ನಿರ್ವಹಣೆ/ಟಿ-01/2024-25 ದಿನಾಂಕ: 19/11/2024

''ಟೆಂಡರ್ ಪ್ರಕಟಣೆ'' (ಇ–ಪ್ರೋಕ್ಯೂರಮೆಂಟ್ ಪೋರ್ಟಲ್ ಮುಖಾಂತರ)

ವಿರಾಜಪೇಟೆ ಪುರಸಭೆ ವ್ಯಾಪ್ತಿಯ 2024–25ನೇ ಸಾಲಿನ ಪುರಸಭೆ ನಿಧಿ ಅನುದಾನದಡಿಯಲ್ಲಿ ಎಲೆಕ್ಟ್ರಿಕಲ್ಸ್ ಕಾಮಗಾರಿಗಳನ್ನು ನಿರ್ವಹಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ನಿಯಮ 2000, ಹಾಗೂ ತಿದ್ದುಪಡಿ ನಿಯಮ 2001ಕ್ಕೆ ಒಳಪಟ್ಟು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಗುತ್ತಿಗೆದಾರರಿಂದ ಕೆ.ಡಬ್ಲ್ಯೂ 1ರ ನಿಯಮಗಳಿಗನುಸಾರ ಟೆಂಡರ್ ಇ–ಪ್ರೋಕ್ಯೂರಮೆಂಟ್ ಪೋರ್ಟಲ್ ಮೂಲಕ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಗುತ್ತಿಗೆದಾರರು ತಮಗೆ ಬೇಕಾದ ಟೆಂಡರ್ ವಿವರಗಳನ್ನು www.kppp.karnataka.gov.in ವೆಬ್ ಸೈಟ್ ಮೂಲಕ ಪಡೆದು ಕೊಂಡು ನಂತರ ಭರ್ತಿ ಮಾಡಿದ ಟೆಂಡರ್‌ಗಳನ್ನು ಇ–ಟ್ರೋಕ್ಯೂರಮೆಂಟ್ ಪೋರ್ಟಲ್ ಮುಖಾಂತರ ಸಲ್ಲಿಸ ಬಹುದು.

1. ಟೆಂಡರ್ ಫಾರಂಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ : 19/11/2024 ರಿಂದ 05/12/2024 ಸಂಜೆ 17:30 ಗಂಟೆಗೆ
2. ಟೆಂಡರ್ ಸ್ವೀಕರಿಸಲು ಕೊನೆಯ ದಿನಾಂಕ : 05/12/2024 ಸಂಜೆ 17:30 ಗಂಟೆ ವರೆಗೆ
3. ಟೆಂಡರ್ ತೆರೆಯುವ ದಿನಾಂಕ : 06/12/2024 ಬೆಳಿಗ್ಗೆ 11.00 ಗಂಟೆಗೆ
4. ಟೆಂಡರುಗಳನ್ನು ತೆರೆಯುವ ಸ್ಥಳ : ಪುರಸಭೆ ವಿರಾಜಪೇಟೆ

ಕಾಮಗಾರಿಗಳ ವಿವರ, ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ವೆಬ್ ಸೈಟ್:– www.virajpettown.mrc.gov.in ನಲ್ಲಿ ಮತ್ತು ಕಛೇರಿಯ ಸೂಚನಾ ಫಲಕವನ್ನು ನೋಡ ಬಹುದಾಗಿದೆ.

ಸಹಿ/– (ಶ್ರೀಮತಿ, ಎಂ.ಕೆ ದೇಚಮ್ಮನವರ) ಅಧ್ಯಕ್ಷರು, ಪುರಸಭೆ, ವಿರಾಜಪೇಟೆ.	ಸಹಿ/– (ಶ್ರೀಮತಿ, ಫಸಿಹಾ ತಬಸಮ್) ಉಪಾಧ್ಯಕ್ಷರು, ಪುರಸಭೆ, ವಿರಾಜಪೇಟೆ.	ಸಹಿ/– (ಶ್ರೀ ಚಂದ್ರ ಕುಮಾರ್ ಎ) ಮುಖ್ಯಾಧಿಕಾರಿ, ಪುರಸಭೆ, ವಿರಾಜಪೇಟೆ.

ಕರ್ನಾಟಕ ಸರ್ಕಾರ

ಕಾರ್ಯದರ್ಶಿಗಳ ಕಾರ್ಯಾಲಯ, ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಮಹದೇಶ್ವರಬೆಟ್ಟ, ಹನೂರು ತಾಲ್ಲೂಕು, ಚಾಮರಾಜನಗರ ಜಿಲ್ಲೆ

ದೂರವಾಣಿ ಸಂಖ್ಯೆ : 08225–272124 । Email: sec.mmtemple@gmail.com

ನಂ.ಶ್ರೀ ಮ.ಮ.ಕ್ಷೇ.ಅ.ಪ್ರಾ/3/ಪಿಆರ್/26/2024–25 ಜಾತ್ರೆ ದಿನಾಂಕ: 14–11–2024

ಅಲ್ಪಾವಧಿ ಮರು ಇ–ಟೆಂಡರ್ ಪ್ರಕಟಣೆ (2ನೇ ಕರೆ)

ಕರ್ನಾಟಕ ಸರ್ಕಾರದ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ.

ಕ್ರ.ಸಂ	ಟೆಂಡರ್ ಹೆಸರು	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ ರೂ.ಗಳಲ್ಲಿ
1.	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಶ್ರೀ ಕ್ಷೇತ್ರದಲ್ಲಿ ಜರುಗಲಿರುವ ವಾರ್ಷಿಕ ಜಾತ್ರೆಗಳು. ವಿಶೇಷ ದಿನಗಳು, ಸರ್ಕಾರಿ ರಜೆ ದಿನಗಳು ಹಾಗೂ ಇನ್ನಿತರೆ ವಿವಿಧ ಕಾರ್ಯಕ್ರಮಗಳಿಗೆ ವಿದ್ಯುತ್ ದೀಪಾಲಂಕಾರ ಮಾಡಲು ಎಲ್ಲಾ ವೆಚ್ಚಗಳು ಶಾಸನಬದ್ಧ ತೆರಿಗೆಗಳು ಒಳಗೊಂಡಂತೆ ಒಂದು ವರ್ಷದ ಅವಧಿಗೆ ಮಾತ್ರ.	39.50	99,000–00

ವಿವರಗಳನ್ನು https://kppp.karnataka.gov.in/ ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಬಹುದು ಮತ್ತು ಹೆಚ್ಚಿನ ವಿವರಗಳಿಗೆ ಕಛೇರಿಯ ಅವಧಿಯಲ್ಲಿ ದಿನಾಂಕ:28–11–2024ರಂದು ಸಂಜೆ 4–00 ಗಂಟೆಯೊಳಗೆ ಶ್ರೀ ಜಿ.ಎಲ್. ಚಂದ್ರಶೇಖರ್, ಉಪ ಕಾರ್ಯದರ್ಶಿರವರ ಮೊಬೈಲ್ ನಂ.9902593369 ರವರಿಂದ ಹಾಗೂ ಪ್ರಾಧಿಕಾರದ ವಿಷಯ ನಿರ್ವಾಹಕರ ಮೊಬೈಲ್ ಸಂಖ್ಯೆ 9449038414 ನ್ನು ಸಂಪರ್ಕಿಸಬಹುದು.

ಇ–ಪ್ರಕ್ಯೂರ್‌ಮೆಂಟ್ ವ್ಯವಸ್ಥೆಯಡಿ ಟೆಂಡರ್ ವೇಳಾಪಟ್ಟಿ ಈ ಕೆಳಕಂಡಂತಿದೆ

1. ಇ–ಪೋರ್ಟಲ್‌ನಲ್ಲಿ ಟೆಂಡರ್ ದಾಖಲೆಗಳು ಬರುವ ದಿನಾಂಕ ಚಾಲ್ತಿಗೆ ಬರುವ ದಿನಾಂಕ 15–11–2024ರ ನಂತರ
2. ಇ–ಟೆಂಡರ್ ಡೌನ್‌ಲೋಡ್ ಮಾಡಲು ಮತ್ತು ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ವೇಳೆ 29–11–2024 ಸಂಜೆ 4.00 ಗಂಟೆಯವರೆಗೆ
3. ಇ–ಟೆಂಡರನ್ನು ತೆರೆಯುವ ದಿನಾಂಕ ಮತ್ತು ವೇಳೆ 30–11–2024 ಸಂಜೆ 5.00 ಗಂಟೆವರೆಗೆ

ಸಹಿ/– ಕಾರ್ಯದರ್ಶಿ, ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಮಹದೇಶ್ವರ ಬೆಟ್ಟ

ಸಂ.ವಾಸಾಸಂಇ:ಚಾನಗರ:413:2024–25